ಡಾ|| ರಾಜ್‌ಕುಮಾರ್ ಅಕಾಡೆಮಿ
ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು



**ಡಿಸೆಂಬರ್ ೨ನೇ ವಾರ**

08-12-2025 TO 13-12-2025

## ‘ಬೆಳಕಿನ ಹಬ್ಬ’ಕ್ಕೆ ಯುನೆಸ್ಕೊ ಮಾನ್ಯತೆ

- ಫಸಲ್ ಬಿಮಾ: 74 ಲಕ್ಷ ರೈತರು ನೋಂದಣಿ
- ಸೌರ ಕೃಷಿ ಪಂಪ್ ಸೆಟ್
- ಆಧಾರ್: ಗುರುತು ತಾಳೆಗೆ ಹೊಸ ನಿಯಮ
- ದೇಶದಲ್ಲಿ 2 ಲಕ್ಷ ನವೋದ್ಯಮ

## ❖ 'ಉತ್ತರ' ಕ್ಕೆ ವೆಚ್ಚ ₹31,198 ಕೋಟಿ: ಎಸ್‌ಡಿಪಿಯಿಂದ ₹17,710 ಕೋಟಿ, ಕೆಕೆಆರ್‌ಡಿಬಿ: ₹13,488 ಕೋಟಿ ವೆಚ್ಚ

**ಸಂದರ್ಭ: ಪ್ರಾದೇಶಿಕ ಅಸಮತೋಲನಕ್ಕೆ ಸಂಬಂಧಿಸಿದಂತೆ ಎಲ್ಲ ವಿಭಾಗ, ಜಿಲ್ಲೆಗಳಲ್ಲಿ ಸಭೆ ನಡೆಸಿದ್ದು, ಈ ತಿಂಗಳಲ್ಲಿ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಪ್ರೊ. ಎಂ. ಗೋವಿಂದ ರಾವ್, ಅಧ್ಯಕ್ಷರು, ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ.**

- ಉತ್ತರ ಕರ್ನಾಟಕ ಭಾಗದಲ್ಲಿ ಅಸಮತೋಲನ ನಿವಾರಣೆ, ಶಿಕ್ಷಣ, ಆರೋಗ್ಯ, ಕೈಗಾರಿಕೆ, ಮೂಲಸೌಕರ್ಯ ಸೇರಿದಂತೆ ವಿವಿಧ ವಲಯಗಳಲ್ಲಿ ಸಮಗ್ರ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು 'ವಿಶೇಷ ಅಭಿವೃದ್ಧಿ ಯೋಜನೆ' (ಎಸ್‌ಡಿಪಿ) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್ ಡಿಬಿ) ಮೂಲಕ ರಾಜ್ಯ ಸರ್ಕಾರ ₹31,198 ಕೋಟಿ ಸುರಿದಿದೆ.
- ಇಷ್ಟು ಹಣ ಸುರಿದರೂ ಈ ಭಾಗದಲ್ಲಿನ ಜ್ವಲಂತ ಸಮಸ್ಯೆಗಳಿಗೆ ನಿರೀಕ್ಷಿತ ಪರಿಹಾರ ಸಿಕ್ಕಿಲ್ಲ ಎನ್ನುವುದು ಈ ಭಾಗದ ಜನಪ್ರತಿನಿಧಿಗಳ ಒಕ್ಕೊರಲ ಕೊರಗು. ಪ್ರತಿ ಬಾರಿಯಂತೆ ಈ ಬಾರಿಯೂ ಬೆಳಗಾವಿ ಅಧಿವೇಶನ ದಲ್ಲಿ ಈ ವಿಚಾರವನ್ನು ಪ್ರಸ್ತಾಪಿಸಿ, ಬೇಡಿಕೆಗಳ ಪಟ್ಟಿ ಮುಂದಿಡಲು ನಿರ್ಧರಿಸಿದ್ದಾರೆ.
- ನೀರಾವರಿ ಯೋಜನೆಗಳು, ಕೈಗಾರಿಕೆಗಳ ಸ್ಥಾಪನೆ, ಉದ್ಯೋಗ ಸೃಷ್ಟಿ, ಕನ್ನಡ ಶಾಲೆಗಳ ಶಿಥಿಲಾವಸ್ಥೆ, ವಿವಿಧ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳು, ಮೂಲಸೌಕರ್ಯ, ಪ್ರವಾಸೋದ್ಯಮ ಹೀಗೆ ವಿವಿಧ ವಿಚಾರಗಳಲ್ಲಿ ಈ ಭಾಗ ಹಿಂದುಳಿದಿ ರುವುದನ್ನು ಪ್ರಸ್ತಾಪಿಸಿ, ಅನುದಾನ- ಅಭಿವೃದ್ಧಿಗೆ ಒತ್ತು ನೀಡುವಂತೆ ಪಕ್ಷಾತೀತವಾಗಿ ಪಟ್ಟು ಹಿಡಿಯಲು ಮುಂದಾಗಿದ್ದಾರೆ.

### ಇಂದಿನಿಂದ ಬೆಳಗಾವಿ ಅಧಿವೇಶನ

ಬೆಂಗಳೂರು: ಆಡಳಿತಾರೂಢ ಕಾಂಗ್ರೆಸ್ ಪಕ್ಷದಲ್ಲಿ ಅಧಿಕಾರ ಹಂಚಿಕೆ ಕುರಿತು ಉಂಟಾಗಿರುವ ಗೊಂದಲದ ಮಧ್ಯೆಯೇ ಬೆಳಗಾವಿಯ ಸುವರ್ಣ ವಿಧಾನಸೌಧ ದಲ್ಲಿ ಸೋಮವಾರದಿಂದ ವಿಧಾನಮಂಡಲ ಅಧಿವೇಶನದ ಆರಂಭವಾಗಲಿದ್ದು, ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳು, ರೈತರ ಸಂಕಷ್ಟ ಮತ್ತು ಬೆಲೆ ಏರಿಕೆ ವಿಷಯವನ್ನು ಮುಂದಿಟ್ಟುಕೊಂಡು ಸರ್ಕಾರವನ್ನು ಕಟ್ಟಿ ಹಾಕಲು ವಿರೋಧ ಪಕ್ಷಗಳು ತೋಳೇರಿಸಿ ನಿಂತಿವೆ.

ಅಧಿಕಾರ ಹಂಚಿಕೆಯ ವಿಚಾರದಿಂದ ಉಂಟಾಗಬಹುದಾದ ಮುಜುಗರವನ್ನು ತಪ್ಪಿಸಿಕೊಳ್ಳಲು ಉಪಾಹಾರ ಕೂಟದ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಗೊಂದಲವನ್ನು ಬದಿಗೆ ಸರಿಸಿ ಒಗ್ಗಟಿನ ಮಂತ್ರ ಜಪಿಸಿದ್ದಾರೆ. ಈ ಮೂಲಕ ಕಲಾಪವನ್ನು ಸುಗಮವಾಗಿ ನಡೆಸಿಕೊಂಡು ಹೋಗಲು ಇಬ್ಬರು ನಾಯಕರೂ ಸಿದ್ಧರಾಗಿದ್ದಾರೆ. ▶6



ಬೆಳಗಾವಿಯ ಸುವರ್ಣ ವಿಧಾನಸೌಧದ ಮುಂಭಾಗ ಮಹಿಳಾ ಕಾರ್ಮಿಕರು ಕಳೆ ತೆಗೆಯುತ್ತಿರುವ ದೃಶ್ಯ ಭಾನುವಾರ ಕಂಡುಬಂತು ಚಿತ್ರ: ರಂಜು ಪಿ

**₹48,866.52 ಕೋಟಿ** ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ಎಸ್‌ಡಿಪಿ ಅಡಿ 2007–08ರಿಂದ 2024–25ರವರೆಗೆ (ಮಾರ್ಚ್) ನಿಗದಿಯಾಗಿದ್ದ ಒಟ್ಟು ಅನುದಾನ

| | |
|---|---|
| **₹40,159.42 ಕೋಟಿ** ಬಿಡುಗಡೆಯಾದ ಮೊತ್ತ | **₹36,866.56 ಕೋಟಿ** ವೆಚ್ಚವಾದ ಒಟ್ಟು ಮೊತ್ತ |
| **₹17,710.28 ಕೋಟಿ** ಉತ್ತರ ಕರ್ನಾಟಕ ಭಾಗಕ್ಕೆ ಎಸ್‌ಡಿಪಿಯಿಂದ ವೆಚ್ಚವಾದ ಮೊತ್ತ | **₹13,488.95 ಕೋಟಿ** ಕೆಕೆಆರ್‌ಡಿಬಿಯಿಂದ ವೆಚ್ಚವಾದ ಅನುದಾನ |

### ಕೆಕೆಆರ್‌ಡಿಬಿ: ವೆಚ್ಚದಲ್ಲಿ ಹಿಂದೆ

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ (ಕೆಕೆಆರ್‌ಡಿಬಿ) ಪ್ರತಿ ವರ್ಷ ಸರ್ಕಾರ ಕೋಟ್ಯಂತರ ರೂಪಾಯಿ ಅನುದಾನ ನೀಡುತ್ತಿದ್ದರೂ, ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನೆ, ಅಂದಾಜು ಪಟ್ಟಿ ತಯಾರಿ ಮತ್ತು ಟೆಂಡರ್ ಪ್ರಕ್ರಿಯೆ ವಿಳಂಬವೂ ಸೇರಿದಂತೆ ನಾನಾ ಕಾರಣಗಳಿಂದ ನಿರೀಕ್ಷೆಯಂತೆ ವೆಚ್ಚ ಆಗಿಲ್ಲ.

ರಾಜ್ಯ ಸರ್ಕಾರ 2013–14ನೇ ಸಾಲಿನಿಂದ ಈವರೆಗೆ ಕೆಕೆಆರ್‌ಡಿಬಿಗೆ ₹26 ಸಾವಿರ ಕೋಟಿ ಅನುದಾನ ನಿಗದಿಪಡಿಸಿದೆ. 2024–25 ಮತ್ತು 2025–26ನೇ ಸಾಲಿನಲ್ಲಿ ಮಂಡಳಿಗೆ ತಲಾ ₹5 ಸಾವಿರ ಕೋಟಿ ನಿಗದಿಪಡಿಸಿದ್ದು, ಆ ಮೊತ್ತಕ್ಕೆ ಕ್ರಿಯಾಯೋಜನೆ ರೂಪಿಸಿ, ₹3 ಸಾವಿರ ಕೋಟಿಗೆ ಸೀಮಿತಗೊಳಿಸಿ ವೆಚ್ಚ ಭರಿಸಲು ಮತ್ತು ಉಳಿದ ಕಾಮಗಾರಿ ಗಳನ್ನು ಮುಂದುವರಿದ ಕಾಮಗಾರಿಯಾಗಿ ಮುಂದಿನ ವರ್ಷದಲ್ಲಿ ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆ ಸೂಚಿಸಿದೆ. ಈ ಮಧ್ಯೆ, ಕೆಕೆಆರ್‌ಡಿಬಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ತೀರಾ ಕಳಪೆಯಾಗಿದ್ದು, ಸರ್ಕಾರದ ಹಣ ಲೂಟಿ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಇತ್ತೀಚೆಗೆ ವಿವಿಧ ಸಂಘಟನೆಗಳು ಕಲಬುರಗಿಯ-ಲ್ಲಿರುವ ಕೆಕೆಆರ್‌ಡಿಬಿ ಕಚೇರಿ ಎದುರು ಧರಣಿಯನ್ನೂ ನಡೆಸಿವೆ.

- 'ಉತ್ತರ ಕರ್ನಾಟಕ ಭಾಗಕ್ಕೆ ಡಿ.ಎಂ. ನಂಜುಂಡಪ್ಪ ವರದಿಯ ಅನ್ವಯ 2008–09ರಿಂದ 2024–25ರ ಅವಧಿಯಲ್ಲಿ 'ವಿಶೇಷ ಅಭಿವೃದ್ಧಿ ಯೋಜನೆ' ಯಡಿ (ಎಸ್‌ಡಿಪಿ) ₹17,710.28 ಕೋಟಿ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಮೂಲಕ 2013–14ರಿಂದ ಈವರೆಗೆ ₹13,488.45 ಕೋಟಿ ಸೇರಿ ಒಟ್ಟು ₹31,198 ಕೋಟಿ ವೆಚ್ಚ ಮಾಡಲಾಗಿದೆ' ಎಂದು ಆರ್ಥಿಕ ಇಲಾಖೆಯ ಮೂಲಗಳು ಮಾಹಿತಿ ನೀಡಿವೆ.

Dr. Rajkumar

- ಉತ್ತರ ಮತ್ತು ದಕ್ಷಿಣ ಕರ್ನಾಟಕ ನಡುವಿನ ಅಸಮಾನತೆ ಯನ್ನು ಅಧ್ಯಯನ ಮಾಡಿ, ಆ ಅಸಮಾನತೆ ಯನ್ನು ತಗ್ಗಿಸಲು ಸೂಕ್ತ ಅಭಿವೃದ್ಧಿ ವಿಧಾನಗಳನ್ನು ಶಿಫಾರಸು ಮಾಡಲು 2000ದ ಅಕ್ಟೋಬರ್ ನಲ್ಲಿ ಡಿ.ಎಂ. ನಂಜುಂಡಪ್ಪ ಅವರ ಅಧ್ಯಕ್ಷತೆಯಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣಾ ಉನ್ನತಾಧಿಕಾರ ಸಮಿತಿಯನ್ನು ಅಂದಿನ ಸರ್ಕಾರ ರಚಿಸಿತ್ತು.

## ❖ ಮೆಕ್ಕೆಜೋಳ ಖರೀದಿ ಮಿತಿ 50 ಕ್ವಿಂಟಲ್

**ಸಂದರ್ಭ: ಪ್ರತಿ ರೈತರಿಂದ ಮೆಕ್ಕೆಜೋಳ ಖರೀದಿಸಲು ವಿಧಿಸಿದ್ದ ಗರಿಷ್ಠ 20 ಕ್ವಿಂಟಲ್ ಮಿತಿಯನ್ನು ರಾಜ್ಯ ಸರ್ಕಾರವು 50 ಕ್ವಿಂಟಲ್‌ಗೆ ಹೆಚ್ಚಿಸಿದೆ.**

- ಪ್ರತಿ ಕ್ವಿಂಟಲ್‌ಗೆ ₹2,400 ಬೆಂಬಲ ಬೆಲೆಯಲ್ಲಿ, ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಾಯಿಸಿರುವ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಲ್ ಮೆಕ್ಕೆಜೋಳ ಖರೀದಿಸಿ ಎಂದು ಸಹಕಾರ ಇಲಾಖೆಯು ಇದೇ 2ರಂದು ಆದೇಶ ಹೊರಡಿಸಿತ್ತು.
- ಇಲಾಖೆಯು ಹೇರಿದ್ದ ಈ ಮಿತಿಗೆ ರೈತರಿಂದ ವ್ಯಾಪಕ ವಿರೋಧ ವ್ಯಕ್ತವಾಗಿತ್ತು. ಇದರ ಬೆನ್ನಲ್ಲೇ ಇಲಾಖೆಯು ಆದೇಶ ಹೊರಡಿಸಿದ್ದು, ಮಿತಿಯನ್ನು 50 ಕ್ವಿಂಟಲ್‌ಗೆ ಹೆಚ್ಚಿಸಿದೆ.

## ❖ ‘ಉತ್ತರ’ ದ ಸಮಸ್ಯೆಗಳಿಗೆ ಕಿವಿಯಾಗುವುದೇ ಸರ್ಕಾರ?



## ❖ ಆಧಾರ್: ಗುರುತು ತಾಳೆಗೆ ಹೊಸ ನಿಯಮ

**ಸಂದರ್ಭ: ಹೋಟೆಲ್‌ಗಳು, ಕಾರ್ಯಕ್ರಮ ಸಂಘಟಕರು ತಮ್ಮ ಗ್ರಾಹಕರಿಂದ ಆಧಾರ್ ಕಾರ್ಡ್‌ನ ನೆರಳಚ್ಚು ಪ್ರತಿ ಪಡೆದು, ಅವುಗಳನ್ನು ತಮ್ಮಲ್ಲಿ ಇರಿಸಿಕೊಳ್ಳುವುದನ್ನು ಕಡಿಮೆ ಮಾಡಲು ಹೊಸ ನಿಯಮಗಳನ್ನು ಶೀಘ್ರವೇ ಪ್ರಕಟಿಸಲಾಗುತ್ತದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.**

- ಹೀಗೆ ಆಧಾರ್ ಕಾರ್ಡ್ ಪ್ರತಿ ಪಡೆದುಕೊಳ್ಳುವುದು ಆಧಾರ್ ಕಾಯ್ದೆಗೆ ವಿರುದ್ಧ.
- ಹೋಟೆಲ್ ಪ್ರತಿನಿಧಿಗಳು, ಕಾರ್ಯಕ್ರಮ ಸಂಘಟಕರು ಮುಂತಾದವರು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ವ್ಯಕ್ತಿಯ ಗುರುತನ್ನು ತಾಳೆ ಮಾಡುವ ತಂತ್ರಜ್ಞಾನವನ್ನು ಪಡೆಯಬೇಕು ಎಂದಾದರೆ ತಮ್ಮ ಸಂಸ್ಥೆಯನ್ನು ನೋಂದಣಿ ಮಾಡಿಸುವುದು ಕಡ್ಡಾಯ ಎನ್ನುವ ನಿಯಮಕ್ಕೆ ವಿಶಿಷ್ಟ ಗುರುತಿನ ಚೀಟಿ ಪ್ರಾಧಿಕಾರವು (ಯುಐಡಿಎಐ) ಒಪ್ಪಿಗೆ ನೀಡಿದೆ ಎಂದು ಅದರ ಸಿಇಒ ಭುವನೇಶ್ ಕುಮಾರ್ ಹೇಳಿದ್ದಾರೆ.
- 'ಹೊಸ ನಿಯಮವನ್ನು ಶೀಘ್ರದಲ್ಲಿಯೇ ಅಧಿಸೂಚನೆಯಲ್ಲಿ ಪ್ರಕಟಿಸಲಾಗುತ್ತದೆ. ಆಧಾರ್ ಸಂಖ್ಯೆಯನ್ನು ಆಧರಿಸಿ ವ್ಯಕ್ತಿಯ ಗುರುತು ತಾಳೆ ಮಾಡುವ ಸಂಸ್ಥೆಗಳು ತಮ್ಮ ಹೆಸರನ್ನು ನೋಂದಣಿ ಮಾಡುವುದನ್ನು ಈ ನಿಯಮವು ಕಡ್ಡಾಯಗೊಳಿಸುತ್ತದೆ' ಎಂದು ಕುಮಾರ್ ತಿಳಿಸಿದ್ದಾರೆ.
- ಆಧಾರ್‌ನ ಕೇಂದ್ರ ದತ್ತಾಂಶ ಕೋಶದ ಜೊತೆ ಸಂಪರ್ಕ ಹೊಂದದೆಯೂ ವ್ಯಕ್ತಿಯ ಗುರುತು ತಾಳೆ ನೋಡುವ ಹೊಸ ಆ್ಯಪ್ ಒಂದನ್ನು ಯುಐಡಿಎಐ ಪರೀಕ್ಷಿಸುತ್ತಿದೆ. ಈ ಹೊಸ ಆ್ಯಪ್‌ಅನ್ನು ವಿಮಾನ ನಿಲ್ದಾಣಗಳಲ್ಲಿ, ಗ್ರಾಹಕರ ವಯಸ್ಸಿನ ಆಧಾರದಲ್ಲಿ ಉತ್ಪನ್ನ ಗಳನ್ನು ಮಾರಾಟ ಮಾಡಬೇಕಿರುವ ಅಂಗಡಿಗಳಲ್ಲಿ ಬಳಕೆ ಮಾಡಬಹುದು.

## ❖ ಸೌರ ಕೃಷಿ ಪಂಪ್ ಸೆಟ್: ಮಹಾರಾಷ್ಟ್ರಕ್ಕೆ ಅಗ್ರ ಸ್ಥಾನ

**ಸಂದರ್ಭ: ಮಹಾರಾಷ್ಟ್ರ ರಾಜ್ಯ ವಿದ್ಯುತ್ ವಿತರಣಾ ಕಂಪನಿ ನಿಯಮಿತವು (ಎಂಎಸ್‌ಇಡಿಸಿಎಲ್) 'ಪಿಎಂ-ಕುಸುಮ್ ಬಿ' ಯೋಜನೆಯಡಿ ಕೇವಲ 30 ದಿನಗಳಲ್ಲಿ ರಾಜ್ಯದಾದ್ಯಂತ 45,911 ಸೌರ ಕೃಷಿ ಪಂಪ್‌ಸೆಟ್‌ಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ. ಈ ಸಾಧನೆಯ ಮೈಲಿಗಲ್ಲು ಗಿನ್ನೆಸ್ ವಿಶ್ವ ದಾಖಲೆಗೆ ಸೇರ್ಪಡೆಯಾಗಿದೆ.**

- ಈ ಸಾಧನೆಯ ಮೂಲಕ ಭಾರತದಲ್ಲಿ ವೇಗವಾಗಿ ಸೌರಶಕ್ತಿ ಆಧಾರಿತ ಚಟುವಟಿಕೆಗಳನ್ನು ಅಳವಡಿಸುತ್ತಿರುವ ರಾಜ್ಯಗಳಲ್ಲಿ ಮಹಾರಾಷ್ಟ್ರವು ಅಗ್ರಸ್ಥಾನ ದಲ್ಲಿದೆ. ಮಾತ್ರವಲ್ಲ, ಜಾಗತಿಕ ಮಟ್ಟದಲ್ಲಿ ಸರ್ಕಾರವೊಂದು ವೇಗವಾಗಿ ಹಾಗೂ ಹೆಚ್ಚಿನ ಪ್ರಮಾಣದಲ್ಲಿ ಸೌರ ಕೃಷಿ ಪಂಪ್‌ಗಳನ್ನು ಅಳವಡಿಸುತ್ತಿರುವುದರಲ್ಲಿ ಮಹಾರಾಷ್ಟ್ರ ಎರಡನೇ ಸ್ಥಾನದಲ್ಲಿದೆ. ಚೀನಾ ಮೊದಲ ಸ್ಥಾನದಲ್ಲಿದೆ.
- ಈ ಸಾಧನೆಯು, ಕೇಂದ್ರ ಸರ್ಕಾರದ ಪಿಎಂ-ಕುಸಮ್ ಬಿ ಮತ್ತು ಮಗೇಲ್ ತ್ಯಾಲಾ ಸೌರ್ ಕೃಷಿ ಪಂಪ್ ಯೋಜನೆಗಳ (ಎಂಟಿಎಸ್‌ಕೆಪಿವೈ) ಪರಿಣಾಮಕಾರಿ ಅನುಷ್ಠಾನದ ಮೂಲಕ ಭಾರತದಲ್ಲಿ ಶುದ್ಧ ಇಂಧನದ ಪರಿವರ್ತನೆ, ರೈತರ ಜೀವನೋಪಾಯ ಸುಧಾರಣೆ ಮತ್ತು ಸುಸ್ಥಿರ ನೀರಾವರಿಯನ್ನು ಪ್ರೋತ್ಸಾಹಿಸುವ ರಾಜ್ಯ ಸರ್ಕಾರದ ಬದ್ಧತೆಯ ಪ್ರತಿಬಿಂಬವಾಗಿದೆ.
- 'ರಾಜ್ಯದಾದ್ಯಂತ ಒಂದು ತಿಂಗಳಲ್ಲಿ 45,911ಕ್ಕೂ ಹೆಚ್ಚು ಸೌರಶಕ್ತಿ ಆಧಾರಿತ ಕೃಷಿ ಪಂಪ್‌ಗಳನ್ನು ಅನುಷ್ಠಾನಗೊಳಿ ಸಲಾಗಿದೆ. ಈ ಮೂಲಕ ಸೌರ ಕೃಷಿ ಚಟುವಟಿಕೆಗಳ ಅನುಷ್ಠಾನದಲ್ಲಿ ಮಹಾರಾಷ್ಟ್ರವನ್ನು, ದೇಶದ ಪ್ರಥಮ ರಾಜ್ಯವನ್ನಾಗಿ ಮಾಡಿದ್ದೇವೆ. ಈ ಸಾಧನೆಯು ಸುಸ್ಥಿರ ನೀರಾವರಿಯನ್ನು ಖಚಿತಪಡಿಸುತ್ತ_ದೆ. ಅಷ್ಟೇ ಅಲ್ಲದೇ, ಕೃಷಿಯಲ್ಲಿ ಉತ್ಪಾದಕತೆ ಮತ್ತು ರೈತರ ಆದಾಯವನ್ನು ಸುಧಾರಿಸುತ್ತದೆ, ಸಾಂಪ್ರದಾಯಿಕ ಇಂಧನಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುತ್ತದೆ' ಎಂದು ಮಹಾರಾಷ್ಟ್ರ ಸರ್ಕಾರದ ಇಂಧನ ಸಚಿವರೂ ಆಗಿರುವ ಮುಖ್ಯಮಂತ್ರಿ ದೇವೇಂದ್ರ ಫಡಣವೀಸ್ ತಿಳಿಸಿದ್ದಾರೆ.
- ಎಂಎಸ್‌ಇಡಿಸಿಎಲ್, ರಾಜ್ಯ ದಾದ್ಯಂತ ಈವರೆಗೆ 7.47 ಲಕ್ಷಕ್ಕೂ ಹೆಚ್ಚು ಸೌರ ಕೃಷಿ ಪಂಪ್‌ಗಳನ್ನು ಸ್ಥಾಪಿಸಲಾಗಿದೆ. 10.45 ಲಕ್ಷ ಕೃಷಿ ಪಂಪ್‌ಗಳ ಸ್ಥಾಪನೆಯ ಗುರಿ ಹೊಂದಿದೆ. ಇದು ರಾಜ್ಯ, ದೇಶ ವಲ್ಲದೇ,

ಅಂತರರಾಷ್ಟ್ರೀಯ ಮಟ್ಟದಲ್ಲಿ ಅನುಷ್ಠಾನಗೊಳಿಸಬಹುದಾದ ಮಾದರಿಯನ್ನು ಸೃಷ್ಟಿಸಲಿದೆ ಎಂದು ಅಧಿಕಾರಿಗಳು ವಿಶ್ವಾಸ ವ್ಯಕ್ತಪಡಿಸುತ್ತಾರೆ.

## ❖ ಹೈದರಾಬಾದ್: ರಸ್ತೆಗೆ ಟ್ರಂಪ್ ಹೆಸರು

**ಸಂದರ್ಭ: ತೆಲಂಗಾಣದ ರಂಗಾರೆಡ್ಡಿ ಜಿಲ್ಲೆಯ ರಾವಿರ್ಯಾಲ್‌ದಲ್ಲಿರುವ ನೆಹರೂ ಹೊರವರ್ತುಲ ರಸ್ತೆಗೆ ಸಂಪರ್ಕ ಕಲ್ಪಿಸುವ ಪ್ರಸ್ತಾವಿತ ರೇಡಿಯಲ್ ಹೊರವರ್ತುಲ ರಸ್ತೆ (ಆರ್‌ಆರ್‌ಆರ್)ಗೆ ಪದ್ಮಭೂಷಣ ರತನ್ ಟಾಟಾ ಹೆಸರಿಡಲು ತೆಲಂಗಾಣ ಸರ್ಕಾರ ನಿರ್ಧರಿಸಿದೆ. ರಾವಿರ್ಯಾಲ್ ದಲ್ಲಿರುವ ಇಂಟರ್‌ಚೇಂಜ್‌ಗೆ 'ಟಾಟಾ ಇಂಟರ್‌ಚೇಂಜ್' ಎಂದು ಈಗಾಗಲೇ ನಾಮಕರಣ ಮಾಡಲಾಗಿದೆ.**

- ಹೈದರಾಬಾದ್‌ನ (ಫೈನಾನ್ಸಿಯಲ್ ಡಿಸ್ಟ್ರಿಕ್ಟ್) ನಾನಕ್‌ರಾಮಗೂಡದಲ್ಲಿರುವ ಅಮೆರಿಕ ಕಾನ್ಸುಲೇಟ್ ಜನರಲ್ ಕಟ್ಟಡವಿರುವ ರಸ್ತೆಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೆಸರಿಡಲು ಪ್ರಸ್ತಾಪ ಸಿದ್ಧಪಡಿಸಿದೆ. ಈ ಸಂಬಂಧ ಕೇಂದ್ರ ವಿದೇಶಾಂಗ ಸಚಿವಾಲಯ ಹಾಗೂ ಅಮೆರಿಕ ರಾಯಭಾರ ಕಚೇರಿಗೆ ತೆಲಂಗಾಣ ಸರ್ಕಾರ ಪತ್ರ ಬರೆದಿದೆ.
- ನವದೆಹಲಿಯಲ್ಲಿ ಭಾರತ-ಅಮೆರಿಕ ಕಾರ್ಯತಂತ್ರದ ಪಾಲುದಾರಿಗೆ ವಾರ್ಷಿಕ ಸಭೆ ಉದ್ದೇಶಿಸಿ ಮಾತನಾಡಿದ್ದ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಹೈದರಾಬಾದ್ ನಗರದ ಪ್ರಮುಖ ರಸ್ತೆಗಳಿಗೆ ಗಣ್ಯವಕ್ತಿ, ಪ್ರಮುಖ ಕಂಪನಿಗಳ ಹೆಸರಿಡುವ ಪ್ರಸ್ತಾಪವಿದೆ ಎಂದು ತಿಳಿಸಿದ್ದರು.


## ❖ ಸಿಮ್ರನ್‌ಪ್ರೀತ್ ಕೌರ್‌ಗೆ ಪಿಸ್ತೂಲ್ ಚಿನ್ನ

**ಸಂದರ್ಭ: ವಿಶ್ವಕಪ್ ಶೂಟಿಂಗ್ 50 ಮೀ. ರೈಫಲ್ ತ್ರೀ ಪೊಸಿಷನ್: ಐಶ್ವರಿ ಪ್ರಸಾದ್‌ಗೆ ಬೆಳ್ಳಿ.**

- ಯುವ ಪ್ರತಿಭೆ ಸಿಮ್ರನ್‌ಪ್ರೀತ್ ಕೌರ್ ಬ್ರಾರ್ ಅವರು ಐಎಸ್‌ಎಸ್‌ಎಫ್ ವಿಶ್ವಕಪ್ ಟೂರ್ನಿಯ ಮಹಿಳೆಯರ 25 ಮೀ. ಪಿಸ್ತೂಲ್ ಸ್ಪರ್ಧೆಯಲ್ಲಿ ಭಾನುವಾರ ಪ್ರಬಲ ಕಣದ ಸವಾಲನ್ನು ಎದುರಿಸಿ ಚಿನ್ನದ ಪದಕ ಗೆದ್ದುಕೊಂಡರು. ಪುರುಷರ 50 ಮೀ. ರೈಫಲ್ ತ್ರೀ ಪೊಸಿಷನ್ಸ್ ಸ್ಪರ್ಧೆಯಲ್ಲಿ ಐಶ್ವರಿ ಪ್ರಸಾದ್ ಸಿಂಗ್ ತೋಮಾರ್ ಅವರು ಪದಾರ್ಪಣೆಯಲ್ಲೇ ಬೆಳ್ಳಿ ಪದಕ ಕೊರಳಿಗೇರಿಸಿಕೊಂಡರು.
- 21 ವರ್ಷ ವಯಸ್ಸಿನ ಸಿಮ್ರನ್‌ಪ್ರೀತ್ ಅವರು ಫೈನಲ್‌ನಲ್ಲಿ ಅಮೋಘ 41 ಸ್ಕೋರ್ ಶೂಟ್ ಮಾಡಿ ತಮ್ಮ ವೃತ್ತಿ ಬದುಕಿನ ಅತಿ ದೊಡ್ಡ ಸಾಧನೆ ದಾಖಲಿಸಿದರು. ಆ ಹಾದಿಯಲ್ಲಿ, ಒಲಿಂಪಿಕ್ ಚಾಂಪಿಯನ್, ಕೊರಿಯಾದ ಯಾಂಗ್ ಜಿ ಇನ್ ಹೆಸರಿನಲ್ಲಿದ್ದ ವಿಶ್ವ ಜೂನಿಯರ್ ದಾಖಲೆ ಸರಿಗಟ್ಟಿ ಪೋಷಕರಿಗೆ ಹೆಮ್ಮೆ ಮೂಡಿಸಿದರು. ಸಿಮ್ರನ್ ಅವರಿಗೆ ಬೆಂಬಲ ನೀಡಲು ತಂದೆ ಸರ್ಕಾರಿ ನೌಕರಿಯನ್ನು ತ್ಯಜಿಸಿದ್ದರು.
- ಚೀನಾದ ಯಾವೊ ಕ್ಸಿಯಾನ್‌ಕ್ಸುನ್ (36 ಸ್ಕೋರ್) ಬೆಳ್ಳಿ ಮತ್ತು ಜರ್ಮನಿಯ ದೊರೀನ್ ವೆನ್ನೆಕಾಂಪ್ (30) ಅವರು ಕಂಚಿನ ಪದಕ ಪಡೆದರು. ಅನುಭವಿ ಯಾವೊ ಅವರು 10 ಮೀ. ಏರ್ ಪಿಸ್ತೂಲ್‌ನಲ್ಲಿ ಹಾಲಿ ವಿಶ್ವ ಚಾಂಪಿಯನ್ ಆಗಿದ್ದಾರೆ.
- ಫೈನಲ್‌ಗೆ ಅರ್ಹತೆ ಪಡೆದ ಭಾರತದ ಮತ್ತೋರ್ವ ಶೂಟರ್ ಇಶಾ ಸಿಂಗ್ ಅವರು ಏಳನೇ ಸ್ಥಾನ ಪಡೆದರು. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಅವಳಿ ಪದಕ ಪಡೆದಿದ್ದ ಮನು ಭಾಕರ್ (581 ಪಾಯಿಂಟ್) ಅವರು ಅರ್ಹತಾ ಸುತ್ತಿನಲ್ಲಿ ಒಂಬತ್ತನೇ ಸ್ಥಾನ ಗಳಿಸಿದ್ದರು.
- ಈ ವರ್ಷದ ಏಪ್ರಿಲ್‌ನಲ್ಲಿ ಲಿಮಾದಲ್ಲಿ (ಪೆರು) ನಡೆದಿದ್ದ ವಿಶ್ವಕಪ್‌ನಲ್ಲಿ ಬೆಳ್ಳಿ ಗೆದ್ದಿದ್ದ ಸಿಮ್ರನ್‌ಪ್ರೀತ್ ಭಾನುವಾರ ಕ್ವಾಲಿಫಿಕೇಷನ್‌ನಲ್ಲಿ 584 ಪಾಯಿಂಟ್ಸ್ ಸ್ಕೋರ್ ಮಾಡಿ ಐದನೇ ಹಾಗೂ ಇಶಾ 585 ಸ್ಕೋರ್ ನೊಡನೆ ನಾಲ್ಕನೇ ಸ್ಥಾನ ಗಳಿಸಿ ಫೈನಲ್‌ಗೇರಿದ್ದರು.
- **ಐಶ್ವರಿಗೆ ಬೆಳ್ಳಿ:** ಇದಕ್ಕೆ ಮೊದಲು, ಪುರು ಷರ ರೈಫಲ್ ತ್ರೀ ಪೊಸಿಷನ್ ಸ್ಪರ್ಧೆಯ ಫೈನಲ್‌ನಲ್ಲಿ ಝೆಕ್ ಗಣರಾಜ್ಯದ ಜಿರಿ ಪ್ರಿವ್ರಾಟ್‌ಸ್ಕಿ 414.2 ಪಾಯಿಂಟ್ಸ್ ಸ್ಕೋರ್ ಮಾಡಿ ಚಿನ್ನ ಗೆದ್ದುಕೊಂಡಿದ್ದರು. ಐಶ್ವರಿ

ಅವರಿಗಿಂತ ಕೇವಲ 09.9 ಪಾಯಿಂಟ್ ಅಂತರದಿಂದ ಹಿಂದೆಬಿದ್ದು ಎರಡನೇ ಸ್ಥಾನಕ್ಕೆ ಸರಿದರು. ಒಲಿಂಪಿಕ್ ಚಾಂಪಿಯನ್, ಚೀನಾದ ಲಿಯು ಯುಕುನ್ ಕಂಚಿನ ಪದಕ ಗಳಿಸಿದರು.

- ಆ ಮೂಲಕ ಐಶ್ವರಿ ವಿಶ್ವ ಮತ್ತು ಏಷ್ಯಾ ಮಟ್ಟದ ಎಲ್ಲಾ ಸ್ಪರ್ಧೆಗಳಲ್ಲಿ ಐಶ್ವರಿ ಪ್ರಸಾದ್ ಪದಕ ಗೆದ್ದಂತಾಯಿತು. ಎರಡು ಬಾರಿಯ ಒಲಿಂಪಿಯನ್ ಆಗಿರುವ ಐಶ್ವರಿ ಮಾಜಿ ವಿಶ್ವ ಜೂನಿಯರ್ ಚಾಂಪಿಯನ್ ಆಗಿದ್ದಾರೆ. ಹಾಲಿ ಏಷ್ಯನ್ ಚಾಂಪಿಯನ್ ಆಗಿರುವ ಅವರು ಅಕ್ಟೋಬರ್‌ನಲ್ಲಿ ನಡೆದ ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಬೆಳ್ಳಿ ಪದಕ ಗೆದ್ದುಕೊಂಡಿದ್ದರು.
- ಅರ್ಹತಾ ಸುತ್ತಿನಲ್ಲಿ ಅವರು 595 ಪಾಯಿಂಟ್ ಸ್ಕೋರ್ ಮಾಡಿ ಎರಡನೇ ಸ್ಥಾನ ಗಳಿಸಿದ್ದರು. ಈ ಸುತ್ತಿನಲ್ಲಿ ಅಮೋಘ ಪ್ರದರ್ಶನ ನೀಡಿದ ಚೀನಾದ ಟಿಯಾನ್ ಜಿಯಾಮಿಂಗ್ ಅವರು ವಿಶ್ವದಾಖಲೆಯ 598 ಸ್ಕೋರ್‌ನೊಡನೆ ಅಗ್ರಸ್ಥಾನ ಪಡೆದಿದ್ದರು. ಅಂತಿಮ ಎಂಟರಲ್ಲಿ ಚೀನಾದ ಮೂವರ ಜೊತೆ, ವರ್ಷದ ಅಥ್ಲೀಟ್ ಜಾನ್-ಹೆರ್ಮನ್ ಹೆಗ್ (ನಾರ್ವೆ) ಮತ್ತು ಇಸ್ತವಾನ್ ಪೆನಿ (ಹಂಗೆರಿ) ಅವರೂ ಸ್ಥಾನ ಪಡೆದಿದ್ದರು.
- ಮಂಡಿಯೂರಿ ಶೂಟ್ ಮಾಡುವ ಸ್ಪರ್ಧೆಯ 10 ಶಾಟ್‌ಗಳ ನಂತರ ಐಶ್ವರಿ 102.8 ಸ್ಕೋರ್‌ನೊಡನೆ ನಾಲ್ಕನೇ ಸ್ಥಾನ ದಲ್ಲಿದ್ದರು. ಪ್ರೋನ್ (ಅಂಗಾತ ಸ್ಥಿತಿಯಲ್ಲಿ ಶೂಟ್ ಮಾಡುವ) ಪೊಸಿಷನ್ ನಂತರ ಅವರು ಎರಡನೇ ಸ್ಥಾನಕ್ಕೇರಿದರು. ಜಿರಿ ಪ್ರಿವ್ರಾಟ್‌ಸ್ಕಿ ಆಗ ಐಶ್ವರಿ ಅವರಿಗಿಂತ 3.3 ಪಾಯಿಂಟ್ ಮುಂದಿದ್ದರು. ಲಿಯು ಮೂರನೇ ಸ್ಥಾನದಲ್ಲಿದ್ದರು.
- ಮಹಿಳೆಯರ ರೈಫಲ್ ತ್ರೀ ಪೊಸಿಷನ್ ನಲ್ಲಿ ಸಿಫ್ಟ್ ಕೌರ್ ಸಮ್ರಾ, ಮಹಿಳೆಯರ 25 ಮೀ.ಪಿಸ್ತೂಲ್ ಫೈನಲ್ ನಲ್ಲಿ ಮನು ಭಾಕರ್ ಅವರು ಅವರು ಅರ್ಹತಾ ಸುತ್ತಿಗಿಂತ ಮೇಲೇರಲು ವಿಫಲರಾದರು.
- ಅರ್ಹತಾ ಸುತ್ತಿನಲ್ಲಿ ಸಿಫ್ಟ್ 584 ಸ್ಕೋರ್‌ನೊಡನೆ ಹತ್ತನೇ ಸ್ಥಾನ ಪಡೆದರೆ, ಮನು 581 ಸ್ಕೋರ್‌ನೊಡನೆ 9ನೇ ಸ್ಥಾನ ಪಡೆದರು.



## ❖ ₹6 ಲಕ್ಷ ಕೋಟಿ ಸಾಲ ರೈಟ್‌ಆಫ್

**ಸಂದರ್ಭ: ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳು ಕಳೆದ ಐದೂವರೆ ವರ್ಷಗಳಲ್ಲಿ ಒಟ್ಟು ₹6.15 ಲಕ್ಷ ಕೋಟಿ ಮೊತ್ತದ ಸಾಲವನ್ನು ರೈಟ್‌ಆಫ್ ಮಾಡಿವೆ ಎಂದು ಕೇಂದ್ರ ಸರ್ಕಾರವು ಸಂಸತ್ತಿಗೆ ತಿಳಿಸಿದೆ.**

- ‘ಆರ್‌ಬಿಐ ನೀಡಿರುವ ಮಾಹಿತಿ ಪ್ರಕಾರ ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳು ರೈಟ್‌ಆಫ್ ಮಾಡಿರುವ ಮೊತ್ತವು ಕಳೆದ ಐದು ಹಣಕಾಸು ವರ್ಷಗಳಲ್ಲಿ ಹಾಗೂ ಪ್ರಸಕ್ತ ಹಣಕಾಸು ವರ್ಷದ ಸೆಪ್ಟೆಂಬರ್ 30ರವರೆಗೆ ₹6.15 ಲಕ್ಷ ಕೋಟಿಯಷ್ಟಾಗಿದೆ’ ಎಂದು ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಅವರು ಲೋಕಸಭೆಗೆ ನೀಡಿರುವ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.
- ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳಿಗೆ ಕೇಂದ್ರ ಸರ್ಕಾರವು 2022–23ರ ನಂತರದಲ್ಲಿ ಬಂಡವಾಳದ ನೆರವು ಒದಗಿಸಿಲ್ಲ. ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳು ತಮ್ಮ ಹಣಕಾಸಿನ ಸ್ಥಿತಿಯನ್ನು ಗಮನಾರ್ಹವಾಗಿ ಸುಧಾರಿಸಿಕೊಂಡಿವೆ. ಅವು ಲಾಭದಾಯಕವಾಗಿ ನಡೆಯುತ್ತಿವೆ, ಬಂಡವಾಳದ ಸ್ಥಿತಿಯನ್ನು ಸುಧಾರಿಸಿಕೊಂಡಿವೆ ಎಂದು ಚೌಧರಿ ಹೇಳಿದ್ದಾರೆ.
- ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳು ಈಗ ಬಂಡವಾಳದ ಅಗತ್ಯಗಳಿಗಾಗಿ ಮಾರುಕಟ್ಟೆ ಮೂಲಗಳನ್ನು ನೆಚ್ಚಿಕೊಳ್ಳುತ್ತಿವೆ, ಆಂತರಿಕ ನಿಧಿಯನ್ನು ಬಳಸಿಕೊಳ್ಳುತ್ತಿವೆ. ಅವು 2022ರ ಏಪ್ರಿಲ್ 1ರ ನಂತರದಲ್ಲಿ ಈಕ್ವಿಟಿ ಮತ್ತು ಸಾಲಪತ್ರಗಳ ಮೂಲಕ ಬಂಡವಾಳ ಮಾರುಕಟ್ಟೆ ಗಳಿಂದ ಒಟ್ಟು ₹1.79 ಲಕ್ಷ ಕೋಟಿ ಸಂಗ್ರಹಿಸಿವೆ ಎಂದು ಅವರು ಮಾಹಿತಿ ನೀಡಿದ್ದಾರೆ.
- ಬ್ಯಾಂಕ್‌ಗಳು ತಮ್ಮ ಆಡಳಿತ ಮಂಡಳಿ ಅನುಮೋದನೆ ನೀಡಿದ ನಿಯಮ ಹಾಗೂ ಆರ್‌ಬಿಐ ಮಾರ್ಗಸೂಚಿಗಳಿಗೆ ಅನುಗುಣವಾಗಿ ರೈಟ್‌ಆಫ್ ತೀರ್ಮಾನ ತೆಗೆದುಕೊಳ್ಳುತ್ತಿವೆ ಎಂದು ಸಚಿವರು ಹೇಳಿದ್ದಾರೆ. ಆದರೆ ರೈಟ್‌ಆಫ್ ಎಂದರೆ ಸಾಲ ಮನ್ನಾ ಅಲ್ಲ, ಸಾಲ ಮನ್ನಾ ಆಗುವುದಿಲ್ಲ, ಸಾಲ ವಸೂಲಿ ಪ್ರಕ್ರಿಯೆ ಮುಂದುವರಿಯುತ್ತದೆ. ಆದರೆ ಬ್ಯಾಂಕ್‌ನ ಲೆಕ್ಕಪತ್ರಗಳಲ್ಲಿ ಎನ್‌ಪಿಎ ಪ್ರಮಾಣ ಕಡಿಮೆಯಾಗಿ ಕಾಣಿಸುತ್ತದೆ.
- ರೈಟ್‌ಆಫ್ ಆದ ಸಾಲಗಳ ವಸೂಲಿಯು ನಿರಂತರ ಪ್ರಕ್ರಿಯೆ. ಬ್ಯಾಂಕ್‌ಗಳು ತಮಗೆ ಲಭ್ಯವಿರುವ ವಿವಿಧ ಮಾರ್ಗಗಳ ಮೂಲಕ ವಸೂಲಾತಿ ಪ್ರಕ್ರಿಯೆಯನ್ನು ಮುಂದುವರಿಸುತ್ತವೆ. ‘ಸರ್ಫೇಸಿ ಕಾಯ್ದೆ’ ಅಡಿ ಕ್ರಮ ಜರುಗಿಸುವುದು, ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಮಂಡಳಿ (ಎನ್‌ಎಲ್‌ಟಿ) ಮೊರೆ ಹೋಗುವುದು, ಸಿವಿಲ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸುವ ಕೆಲಸವನ್ನು ಅವು ಮಾಡುತ್ತವೆ ಎಂದು ವಿವರಿಸಿದ್ದಾರೆ.
- ವಸೂಲಾಗದ ಸಾಲಗಳಿಗೆ ಹಣ ತೆಗೆದಿರಿಸುವ ಕೆಲಸ ಆಗಿರುತ್ತದೆ. ಹೀಗಾಗಿ ರೈಟ್‌ಆಫ್ ಪ್ರಕ್ರಿಯೆಯ ಕಾರಣದಿಂದಾಗಿ ನಗದು ಹೊರಹರಿಯುವಿಕೆ ಇರುವುದಿಲ್ಲ. ಬ್ಯಾಂಕ್‌ನಲ್ಲಿ ನಗದು ಲಭ್ಯತೆ ಮೇಲೆ ಕೆಟ್ಟ ಪರಿಣಾಮ ಇರುವುದಿಲ್ಲ ಎಂದು ಕೂಡ ಅವರು ಮಾಹಿತಿ ನೀಡಿದ್ದಾರೆ.

Dr. Rajkumar IAS/KAS Academy

## ❖ ಪಾಳುಬಿದ್ದಿದ್ದ ಭೂಮಿಯಲ್ಲಿ ಕಾಂಡ್ಲಾ ವನ

**ಸಂದರ್ಭ: ಇಂಗಾಲ ಪ್ರಮಾಣ ಕುಗ್ಗಿಸಿದ್ದಕ್ಕೆ ರೈತರ ಖಾತೆಗೆ ‘ಕಾರ್ಬನ್ ಕ್ರೆಡಿಟ್’ ರೂಪದಲ್ಲಿ ನಗದು ಜಮೆ ಕಾಂಡ್ಲಾ ಕೃಷಿ ಪ್ರದೇಶವು ಮೀನು, ಸಿಗಡಿ, ಏಡಿ ಸೇರಿ ಜಲಚರಗಳ ಸಂತತಿ ಬೆಳೆಯಲು ಅನುಕೂಲಕರ.**

- ರೈತರಿಗೆ ಉತ್ತಮ ಆದಾಯ ಸಿಗುತ್ತದೆ, ಕಾರ್ಯದರ್ಶಿ, ಸ್ನೇಹ ಕುಂಜ ಸಂಸ್ಥೆ
- ಹಲವು ದಶಕಗಳ ಹಿಂದೆ ಸಿಗಡಿ ಮೀನಿನ ಕೃಷಿಗೆ ಬಳಕೆಯಾಗಿ, ಪಾಳುಬಿದ್ದಿದ್ದ 600 ಎಕರೆ ವಿಸ್ತೀರ್ಣದ ಗಜನಿ ಭೂಮಿಯಲ್ಲಿ ಕಾಂಡ್ಲಾವನ ರೂಪುಗೊಂಡಿದೆ.
- ಹೊನ್ನಾವರದ ‘ಸ್ನೇಹ ಕುಂಜ’ ಸಂಸ್ಥೆಯು ಗಜನಿ ಭೂಮಿಯ ಒಡೆತನವುಳ್ಳ 250 ರೈತರನ್ನು ಬಳಸಿ ಕಾಂಡ್ಲಾ ಗಿಡಗಳನ್ನು ಬೆಳೆಸುವಂತೆ ಮಾಡಿದೆ. ಹೀಗೆ ಬೆಳೆಸಿದ ಗಿಡಗಳಿಂದ ಸಂಗ್ರಹವಾಗುವ ‘ಕಾರ್ಬನ್ ಕ್ರೆಡಿಟ್’ ಆದಾಯವನ್ನೂ ರೈತರಿಗೆ ನೀಡಲಾಗುತ್ತದೆ.

- ‘ಹಿಂದೆ ಕಗ್ಗ ತಳಿಯ ಭತ್ತ ಬೆಳೆಯುತ್ತಿದ್ದ ಪ್ರದೇಶದಲ್ಲಿ ಅಘನಾಶಿನಿ ನದಿಯ ಹಿನ್ನೀರು ಬಳಸಿ ಗಜನಿಗಳಲ್ಲಿ ಸಿಗಡಿ ಕೃಷಿ ನಡೆಸಲು ಉದ್ಯಮಿಗಳಿಗೆ ರೈತರು ಜಮೀನು ನೀಡಿದ್ದರು. ಬಿಳಿ ಚುಕ್ಕಿ ರೋಗ ಬಂದು ಸಿಗಡಿ ಕೃಷಿ ನಷ್ಟವಾಗಿತ್ತು. ಹೊಂಡಗಳಲ್ಲಿ ಮುಂದೆ ಕೃಷಿ ಸಾಧ್ಯವಾಗದೆ, ಹಲವು ದಶಕಗಳಿಂದ ಹಾಗೇ ಇದ್ದವು. ಇದೇ ಜಾಗವನ್ನು ಈಗ ಕಾಂಡ್ಲಾ ವನವಾಗಿ ರೂಪಿಸಲಾಗಿದೆ’ ಎಂದು ಸ್ನೇಹಕುಂಜ ಸಂಸ್ಥೆಯ ಕಾರ್ಯದರ್ಶಿ ನರಸಿಂಹ ಹೆಗಡೆ ತಿಳಿಸಿದರು.
- ‘ಕಾಂಡ್ಲಾ ಗಿಡಗಳು ವಾತಾವರಣದಲ್ಲಿನ ಇಂಗಾಲದ ಡೈ ಆಕ್ಸೈಡ್ ಹೀರಿ ವಾತಾವರಣ ಶುದ್ಧಗೊಳಿಸುತ್ತವೆ. ಕಾಂಡ್ಲಾ ವನ ಪ್ರಮಾಣ ಹೆಚ್ಚಿದಷ್ಟು ಪರಿಸರದಲ್ಲಿ ಇಂಗಾಲದ ಪ್ರಮಾಣ ಕಡಿಮೆಯಾಗುತ್ತದೆ. ಈ ಕಾರ್ಯಕ್ಕೆ ಹಿಮಾಲಯ ವೆಲ್‌ನೆಸ್ ಕಂಪನಿ ಮತ್ತು ವ್ಯಾಲ್ಯು ನೆಟ್ವರ್ಕ್ ವೆಂಚರ್ಸ್ ಎಂಬ ಏಜೆನ್ಸಿ ಮೂಲಕ ಪರಿಸರ ರಕ್ಷಣೆಗೆ ಕಾಂಡ್ಲಾ ಕೃಷಿ ಕೈಕೊಳ್ಳಲಾಗಿದೆ’ ಎಂದು ಹೇಳಿದರು.
- ‘ಪ್ರತಿ ವರ್ಷ 12 ಸಾವಿರ ಮೆಟ್ರಿಕ್ ಟನ್ ಇಂಗಾಲವನ್ನು ನೆಲದಡಿ ಹುದು ಗಿಸಿ ಪರಿಸರ ಶುದ್ಧ ಮಾಡಲು ರೈತರ ಜಮೀನು ಬಳಕೆ ಆಗುತ್ತದೆ. ಇದರಿಂದ ರೈತರಿಗೆ ಕಾರ್ಬನ್ ಕ್ರೆಡಿಟ್ ಹೆಸರಿನಲ್ಲಿ ಪ್ರತಿ ಎಕರೆಗೆ ₹6 ರಿಂದ ₹ 8 ಸಾವಿರ ಆದಾಯ ಸಿಗುತ್ತದೆ’ ಎಂದು ಅವರು ತಿಳಿಸಿದರು.

### ರೈತರ 5 ಗುಂಪು ರಚನೆ

- ‘ಕುಮಟಾದ ಧಾರೇಶ್ವರದಿಂದ ಮಾದನಗೇರಿವರೆಗೆ 2020-21ರಿಂದ ರೈತರ ಪಾಳುಬಿದ್ದ ಗಜನಿ ಭೂಮಿಯಲ್ಲಿ ಕಾಂಡ್ಲಾ ಗಿಡ ನೆಡುವ ಯೋಜನೆ ಕೈಗೆತ್ತಿಕೊಂಡಿದ್ದೇವೆ. 250 ರೈತರ ಜೊತೆ ಈ ಬಗ್ಗೆ ಒಪ್ಪಂದ ಮಾಡಿಕೊಂಡು ತಲಾ 50 ಜನರ ರೈತರ 5 ಗುಂಪು ರಚಿಸಲಾಗಿದೆ’ ಎಂದು ಸ್ನೇಹ ಕುಂಜ ಸಂಸ್ಥೆಯ ಕಾರ್ಯದರ್ಶಿ ನರಸಿಂಹ ಹೆಗಡೆ ತಿಳಿಸಿದರು.
- ‘ಕಾರ್ಬನ್ ಕ್ರೆಡಿಟ್ ಆದಾಯ ಎಲ್ಲ ರೈತರ ಬ್ಯಾಂಕ್ ಖಾತೆಗಳಿಗೆ ಸಮನಾಗಿ ಜಮೆ ಆಗುವಂತೆ ವ್ಯವಸ್ಥೆ ರೂಪಿಸಲಾಗಿದೆ. 2026ರ ಮಾರ್ಚ್‌ನಲ್ಲಿ ಮೊದಲ ಹಂತದ ಕಾರ್ಬನ್ ಕ್ರೆಡಿಟ್ ಮೊತ್ತ ರೈತರ ಬ್ಯಾಂಕ್ ಖಾತೆಗೆ ಜಮೆ ಆಗಲಿದೆ’ ಎಂದರು.

## ❖ ‘ರೇರಾ ಆದೇಶ: ‘ಡಿಕ್ರಿ’ ಅಲ್ಲ’

**ಸಂದರ್ಭ: ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ ಆದೇಶಗಳು: ರೇರಾ ಆದೇಶಗಳು ಕಾನೂನು ವಿಶ್ಲೇಷಣಾ ವ್ಯಾಪ್ತಿಗೆ ಒಳಪಡುವುದಿಲ್ಲ. ರೇರಾ ಆದೇಶಗಳನ್ನು ಜಾರಿಗೊಳಿಸಲು ತಹಶೀಲ್ದಾರ್ ಸಂಪೂರ್ಣ ವಿಫಲವಾದಾಗ ಮಾತ್ರ ಸಕ್ಷಮ ಕೋರ್ಟ್ ಮೊರೆ ಹೋಗಬಹುದು ನ್ಯಾ.ಎಂ.ನಾಗಪ್ರಸನ್ನ.**

- ‘ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ಕೆ-ರೇರಾ) ಮತ್ತು ಅದರ ಮೇಲ್ಮನವಿ ಪ್ರಾಧಿಕಾರ ಹೊರಡಿಸಿರುವ ಆದೇಶಗಳನ್ನು ಸಿವಿಲ್ ನ್ಯಾಯಾಲಯ ಗಳಲ್ಲಿ, ಅನುಷ್ಠಾನ ಕೋರಿಕೆ ಅರ್ಜಿ (ಎಕ್ಸಿಕ್ಯೂಷನ್ ಪಿಟಿಷನ್) ಸಲ್ಲಿಸುವ ಮೂಲಕ ಜಾರಿಗೆ ತರಲು ಆಗದು’ ಎಂದು ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.
- ಸಿವಿಲ್ ನ್ಯಾಯಾಲಯದ ಆದೇಶ ಪ್ರಶ್ನಿಸಿ ‘ಮಂತ್ರಿ ಡೆವಲಪರ್ಸ್ ಪ್ರೈವೇಟ್ ಲಿಮಿಟೆಡ್’ ಸಲ್ಲಿಸಿದ್ದ ಮೂರು ರಿಟ್ ಅರ್ಜಿಗಳನ್ನು ಮಾನ್ಯ ಮಾಡಿರುವ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ, ‘ರಿಯಲ್ ಎಸ್ಟೇಟ್ ವ್ಯಾಜ್ಯಗಳಿಗೆ ಸಂಬಂಧಿಸಿದಂತೆ ರೇರಾ ಆದೇಶಗಳು ನಾಗರಿಕ ಸಂಹಿತೆ ಪ್ರಕ್ರಿಯೆಯಲ್ಲಿನ (ಸಿಪಿಸಿ) ‘ಡಿಕ್ರಿ’ ಅರ್ಥದ ವ್ಯಾಪ್ತಿಗೆ ಒಳಪಡುವುದಿಲ್ಲ’ ಎಂಬ ವಿಶೇಷ ಉಲ್ಲೇಖವನ್ನು ನಮೂದಿಸಿದೆ.
- ‘ಕಲಂ 40(1)ರ ಅಡಿ ರೇರಾ ವಿಧಿಸುವ ಪರಿಹಾರದ ಮೊತ್ತ ಅಥವಾ ದಂಡವನ್ನು ಬಡ್ಡಿ ಸಹಿತ ವಸೂಲು ಮಾಡಬಹುದು. ಅದನ್ನು ಭೂ ಕಂದಾಯ ಎಂದು ಪರಿಗಣಿಸಬಹುದು ಎಂದು ತಿಳಿಸಲಾಗಿದೆ. ಅಂತೆಯೇ,

Dr. Rajkumar IAS/KAS Academy

ಕಲಂ 79ರ ಅಡಿ ರೇರಾದ ಆದೇಶ ಮತ್ತು ದಾವೆಗಳನ್ನು ಪುರಸ್ಕರಿಸಲು ಸಿವಿಲ್ ಕೋರ್ಟ್‌ಗೆ ನಿರ್ಬಂಧವಿದೆ' ಎಂಬುದನ್ನು ನ್ಯಾಯಪೀಠ ಸ್ಪಷ್ಟಪಡಿಸಿದೆ.

- ಬಿಲ್ಡರ್‌ಗಳ ಮನವಿ ತಿರಸ್ಕರಿಸಿದ್ದ ಸಿವಿಲ್ ಕೋರ್ಟ್‌ನ ಆದೇಶವನ್ನು ರದ್ದುಗೊಳಿಸಿರುವ ನ್ಯಾಯಪೀಠ, 'ಪ್ರತಿವಾದಿ ರೇರಾ ಕಂದಾಯ ಅಧಿಕಾರಿಗಳ ಮೂಲಕ ಆದೇಶ ಜಾರಿಗೆ ಇತರೆ ಪರ್ಯಾಯ ಮಾರ್ಗಗಳನ್ನು ಕಂಡುಕೊಳ್ಳಲು ಸ್ವತಂತ್ರವಾಗಿದೆ' ಎಂದು ಸ್ಪಷ್ಟಪಡಿಸಿದೆ.
- **<u>ಪ್ರಕರಣವೇನು?:</u>** ಮನೆ ಖರೀದಿದಾರರ ಪರ 'ಕೆ-ರೇರಾ' 2023ರಲ್ಲಿ ಹಲವು ಆದೇಶಗಳನ್ನು ನೀಡಿತ್ತು. ಈ ಆದೇಶಗಳನ್ನು ಜಾರಿಗೊಳಿಸುವಂತೆ ಕೋರಿ ಮನೆ ಖರೀದಿದಾರರು ಸಿವಿಲ್ ಕೋರ್ಟ್‌ನಲ್ಲಿ ಆದೇಶಗಳ ಅನುಷ್ಠಾನ ಕೋರಿಕೆ ಅರ್ಜಿಗಳನ್ನು (ಎಕ್ಸಿಕ್ಯೂಷನ್ ಪಿಟಿಷನ್) ಸಲ್ಲಿಸಿದ್ದರು.
- ಈ ಅರ್ಜಿಗಳಿಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದ ಬಿಲ್ಡರ್‌ಗಳು, 'ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ ಮತ್ತು ಅದರ ಮೇಲ್ಮನವಿ ಪ್ರಾಧಿಕಾರ ಹೊರಡಿಸಿರುವ ಆದೇಶಗಳನ್ನು ಸಿವಿಲ್ ನ್ಯಾಯಾಲಯಗಳಲ್ಲಿ ಪ್ರಶ್ನಿಸಲಾಗದು. ಸಿವಿಲ್ ಕೋರ್ಟ್‌ಗಳಿಗೆ ಕಲಂ 79ರ ಅಡಿ ಅಂತಹ ಅರ್ಜಿಗಳನ್ನು ಪುರಸ್ಕರಿಸುವ ಅಧಿಕಾರವಿಲ್ಲ. ಕರ್ನಾಟಕ ರೇರಾ ನಿಯಮ 26ರ ಅಡಿ ಹೇಗೆ ಆದೇಶಗಳನ್ನು ಜಾರಿಗೊಳಿಸಬಹುದು ಎಂಬುದು ಈಗಾಗಲೇ ವಿದಿತವಾಗಿದೆ' ಎಂಬ ವಾದ ಮಂಡಿಸಿದ್ದರು.
- ಇದಕ್ಕೆ ಪ್ರತಿಯಾಗಿ ಮನೆ ಖರೀದಿದಾರರು, 'ರೇರಾ ಆದೇಶಗಳು ಡಿಕ್ರಿ ಇದ್ದಂತೆ. ಹಾಗಾಗಿ, ಎಕ್ಸಿಕ್ಯೂಷನ್ ಅರ್ಜಿಗಳು ಸ್ವೀಕಾರಾರ್ಹ ಮತ್ತು ಸಿವಿಲ್ ಕೋರ್ಟ್‌ಗಳು ಅವುಗಳನ್ನು ಜಾರಿಗೊಳಿಸುವ ಅಧಿಕಾರ ಹೊಂದಿವೆ' ಎಂದು ಪ್ರತಿವಾದ ಮಂಡಿಸಿದ್ದರು.

**ಡಿಕ್ರಿ ವ್ಯಾಖ್ಯಾನ**

ಸಿವಿಲ್ ಪ್ರೊಸೀಜರ್ ಕೋಡ್ (ಸಿಪಿಸಿ) ಕಲಂ 2(2)ರಲ್ಲಿ ಡಿಕ್ರಿ ಎಂದು ವ್ಯಾಖ್ಯಾನಿಸಲು ಮೂರು ಅಗತ್ಯ ಷರತ್ತುಗಳನ್ನು ಪೂರೈಸಬೇಕಾಗುತ್ತದೆ.

।ತೀರ್ಪು ಮೂಲ ದಾವೆಯಿಂದ ಬಂದಿರಬೇಕು

।ವ್ಯಾಜ್ಯ ದೂರಿನೊಂದಿಗೆ ಆರಂಭವಾಗಿರಬೇಕು ಮತ್ತು ಡಿಕ್ರಿಯೊಂದಿಗೆ ಕೊನೆಯಾಗಬೇಕು

।ನ್ಯಾಯಾಲಯ ತೀರ್ಪನ್ನು ಅಂತಿಮಗೊಳಿಸಿರಬೇಕು

।ರೇರಾ ಮುಂದಿರುವ ಪ್ರಕ್ರಿಯೆಗಳು ದೂರುಗಳಷ್ಟೇ. ಅವು ಮೂಲ ದಾವೆಗಳಲ್ಲ. ಹಾಗಾಗಿ, ಅವುಗಳನ್ನು ದಾವೆಗಳೆಂದು ಪರಿಗಣಿಸಲಾಗದು.

## ❖ 'ಎಐ ಆಧಾರಿತ ಬೆಳೆ ವಿಶ್ಲೇಷಣೆ ಮಹತ್ವದ ಪರಿಹಾರ'

**ಸಂದರ್ಭ: ಹವಾಮಾನ ಬದಲಾವಣೆ, ಕೀಟ-ರೋಗಗಳ ನಿರ್ವಹಣೆ, ಜಲ ಸಂಪನ್ಮೂಲಗಳ ಕಡಿಮೆ ಲಭ್ಯತೆಯನ್ನು ಯಶಸ್ವಿಯಾಗಿ ನಿರ್ವಹಿಸಲು ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಬೆಳೆ ವಿಶ್ಲೇಷಣೆ ಮಹತ್ವದ ಪರಿಹಾರ ವಾಗಿದೆ ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಎಸ್.ವಿ. ಸುರೇಶ ತಿಳಿಸಿದರು.**

- ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶನಾಲಯ ಸೋಮವಾರ ಆಯೋಜಿಸಿದ್ದ ಕೃಷಿ ವಿಜ್ಞಾನ ಕೇಂದ್ರಗಳ (ಕೆವಿಕೆ) ಕೃಷಿ ವಿಜ್ಞಾನಿಗಳಿಗೆ ಸ್ಮಾರ್ಟ್ ಕೃಷಿಯ ಬಗ್ಗೆ ಸಲಹೆ, ಎಐ ತಂತ್ರಜ್ಞಾನ ಆಧಾರಿತ ಬೆಳೆ ವಿಶ್ಲೇಷಣೆ ನಡೆಸುವ ತರಬೇತಿಗೆ ಚಾಲನೆ ನೀಡಿ ಅವರು ಮಾತನಾಡಿದರು.
- 'ನಮ್ಮ ಕೆವಿಕೆ ವಿಜ್ಞಾನಿಗಳು ಗ್ರಾಮೀಣ ಭಾಗದ ರೈತರು ಹಾಗೂ ವಿಶ್ವವಿದ್ಯಾಲಯಗಳ ನಡುವೆ ಜ್ಞಾನದ ಸೇತುವೆಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅದರ ಜೊತೆಗೆ ರೈತರ ಹೊಲ, ಗದ್ದೆಗಳಿಗೆ ಭೇಟಿ ನೀಡಿ ವೈಜ್ಞಾನಿಕ ಸಲಹೆಗಳನ್ನು ನೀಡುತ್ತಿದ್ದಾರೆ. ಆದ್ದರಿಂದ ವಿಜ್ಞಾನಿಗಳಿಗೆ ಹೊಸ-ಹೊಸ ತಂತ್ರಜ್ಞಾನದ ತರಬೇತಿ ಗಳನ್ನು ನೀಡಲಾಗುತ್ತಿದೆ' ಎಂದು ಹೇಳಿದರು.

Rajkumar IAS/KAS Academy

- 'ವಿಸ್ತರಣಾ ನಿರ್ದೇಶಕ ವೈ.ಎನ್. ಶಿವಲಿಂಗಯ್ಯ ಮಾತನಾಡಿ, 'ಹೊಸ ತಂತ್ರಜ್ಞಾನಗಳು ರೈತರ ಬದುಕಿಗೆ ಹೊಸ ಭರವಸೆ ನೀಡುತ್ತವೆ. ರೈತರಿಗೆ ತಲುಪುವ ಪ್ರತಿಯೊಂದು ಸಲಹೆಯೂ ಹೆಚ್ಚು ನಿಖರ, ವೈಜ್ಞಾನಿಕ ಮತ್ತು ಫಲಪ್ರದವಾಗಬೇಕು' ಎಂದು ಹೇಳಿದರು.


## ❖ ರಷ್ಯಾ ಅಧ್ಯಕ್ಷರ ಭಾರತ ಭೇಟಿ ಹಳೆಯ ಸ್ನೇಹಕ್ಕೆ ಹೊಸ ಭಾಷ್ಯ

**ಸಂದರ್ಭ: ಪ್ರಧಾನಿ ನರೇಂದ್ರ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ನಡುವಿನ ಮಾತುಕತೆಯ ಸಂದರ್ಭದಲ್ಲಿ ವಿಶ್ವದೆದುರು ತೋರಿಸಲಿಕ್ಕೆ ಉಭಯ ದೇಶಗಳು ನಡೆಸಿದ ಕೆಲವು ಯತ್ನಗಳು ಆ ಮಾತುಕತೆಗಳಿಗೆ ಇರುವ ಮಹತ್ವವನ್ನಾಗಲಿ, ಸಭೆಗಳ ಫಲಿತವನ್ನಾಗಲಿ ಕಡಿಮೆ ಮಾಡಲಿಲ್ಲ.**

- ಜಗತ್ತಿನ ಎದುರು ತೋರಿಸಲಿಕ್ಕಾಗಿ ನಡೆಸಿದ ಯತ್ನಗಳು ಬಹುಶಃ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಗಮನದಲ್ಲಿ ಇರಿಸಿಕೊಂಡಿದ್ದವು.
- ತಮ್ಮ ಸ್ನೇಹಿತ ಯಾರು ಎಂಬುದನ್ನು ತೀರ್ಮಾನಿಸುವ ವಿಚಾರದಲ್ಲಿ ಸ್ವತಂತ್ರವಾಗಿಯೇ ನಿರ್ಣಯ ತೆಗೆದುಕೊಳ್ಳಲಾಗುತ್ತದೆ ಎಂಬ ಸಂದೇಶವನ್ನು ಟ್ರಂಪ್ ಅವರಿಗೆ ರವಾನಿಸಲು ಭಾರತ ಮತ್ತು ರಷ್ಯಾ ಹೀಗೆ ಮಾಡಿರಬಹುದು. ಉಕ್ರೇನ್ ಜೊತೆಗಿನ ಯುದ್ಧ ಆರಂಭವಾದ ನಂತರದಲ್ಲಿ ಪುಟಿನ್ ಅವರು ಭಾರತಕ್ಕೆ ಭೇಟಿ ನೀಡಿರುವುದು ಇದೇ ಮೊದಲು.
- ತಮ್ಮನ್ನು ಏಕಾಂಗಿಯಾಗಿಸುವಲ್ಲಿ ಅಮೆರಿಕ ಯಶಸ್ಸು ಕಂಡಿಲ್ಲ ಎಂದು ಪುಟಿನ್ ಹೇಳಿದ್ದಾರೆ. 23ನೇ ಭಾರತ-ರಷ್ಯಾ ವಾರ್ಷಿಕ ಶೃಂಗಸಭೆಯ ವೇದಿಕೆಯನ್ನು ಬಳಸಿಕೊಂಡ ಮೋದಿ ಅವರು, ಟ್ರಂಪ್ ಅವರ ನಿರ್ಬಂಧಗಳು ಭಾರತ ಮತ್ತು ರಷ್ಯಾ ನಡುವಿನ ದಶಕಗಳಷ್ಟು ಹಳೆಯದಾದ ಸ್ನೇಹಕ್ಕೆ ಧಕ್ಕೆ ಉಂಟುಮಾಡಿಲ್ಲ ಎಂಬ ಸಂದೇಶ ರವಾನಿಸಿದರು.
- ಎರಡು ದೇಶಗಳ ನಡುವಿನ ವಿಶೇಷವಾದ ಪಾಲುದಾರಿಕೆಯಿಂದ ಸಿಗುವ ಅನುಕೂಲಗಳು ಜಾಗತಿಕ ಮಟ್ಟದಲ್ಲಿ ಸೃಷ್ಟಿಯಾಗುತ್ತಿರುವ ಹೊಸ ಸವಾಲುಗಳನ್ನು ಎದುರಿಸಲು ಇಬ್ಬರಿಗೂ ನೆರವಾಗಬಹುದು ಎಂಬುದನ್ನು ಈ ಶೃಂಗಸಭೆಯು ತೋರಿಸಿದೆ.
- ರಷ್ಯಾದಿಂದ ಕಚ್ಚಾ ತೈಲ ಆಮದು ಮಾಡಿಕೊಳ್ಳುವುದನ್ನು ತಗ್ಗಿಸಬೇಕು ಎಂದು ಭಾರತದ ಮೇಲೆ ಪಾಶ್ಚಾತ್ಯ ಜಗತ್ತು ಒತ್ತಡ ಹೇರುತ್ತಿದೆ. ಅದರಲ್ಲೂ ಮುಖ್ಯವಾಗಿ ಅಮೆರಿಕವು ತೀವ್ರ ಪ್ರಮಾಣದಲ್ಲಿ ಒತ್ತಡ ತರುತ್ತಿದೆ. ಆದರೆ, ಈ ಒತ್ತಡಗಳ ನಡುವೆಯೂ ಭಾರತಕ್ಕೆ 'ಇಂಧನ ಪೂರೈಕೆಯಲ್ಲಿ ವ್ಯತ್ಯಯ ಆಗದಂತೆ ನೋಡಿಕೊಳ್ಳಲಾಗುತ್ತದೆ' ಎಂಬ ಭರವಸೆಯನ್ನು ರಷ್ಯಾ ನೀಡಿರುವುದು ಗಮನಾರ್ಹ. ಸ್ವಾಯತ್ತೆಯ ವಿಚಾರದಲ್ಲಿ ನುಡಿದಂತೆ ನಡೆಯುವ ಶಕ್ತಿ ತನಗೆ ಇದೆ ಎಂಬುದನ್ನು ಈ ಮೂಲಕ ಭಾರತ ಕೂಡ ತೋರಿಸಿದೆ. ಕಾಜನ್‌ನಲ್ಲಿ 2024ರ ಅಕ್ಟೋಬರ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗದಲ್ಲಿ ಮಾಡಿಕೊಂಡ ಒಪ್ಪಂದದ ಆಧಾರದಲ್ಲಿ, ಎರಡೂ ದೇಶಗಳ ನಡುವಿನ ವ್ಯಾಪಾರ ವಹಿವಾಟುಗಳಲ್ಲಿ ಸ್ಥಳೀಯ ಕರೆನ್ಸಿಗಳನ್ನು ಬಳಕೆ ಮಾಡಲು ಒಟ್ಟಾಗಿ ಮುಂದಡಿ ಇರಿಸುವುದಕ್ಕೆ ಆದ್ಯತೆ ನೀಡಲಾಗುತ್ತದೆ ಎನ್ನುವುದು ಕೂಡ ವ್ಯಾಪಾರ ಸಂಬಂಧವನ್ನು ಸುಧಾರಿಸಿಕೊಳ್ಳುವ ಬದ್ಧತೆ ಎರಡೂ ದೇಶಗಳಿಗೆ ಇದೆ ಎಂಬುದನ್ನು ತೋರಿಸುತ್ತದೆ.
- ರಕ್ಷಣಾ ವಹಿವಾಟುಗಳು ಮಾತ್ರವಲ್ಲದೆ, ಔಷಧ ಮತ್ತು ರಸಗೊಬ್ಬರ ದಂತಹ ವಲಯಗಳಿಗೆ ಆದ್ಯತೆ ನೀಡಿರುವುದು ವ್ಯಾಪಾರ ವಹಿವಾಟಿನ ಮೊತ್ತವನ್ನು ಹೆಚ್ಚಿಸುವ ಬದ್ಧತೆಯನ್ನು ತೋರಿಸುತ್ತಿದೆ. ರಫ್ತು ಪ್ರಮಾಣವನ್ನು ಹೆಚ್ಚು ಮಾಡಿ ರಷ್ಯಾ ಜೊತೆಗಿನ ವ್ಯಾಪಾರ ಕೊರತೆ ಅಂತರವನ್ನು ತಗ್ಗಿಸುವ ಬಯಕೆಯನ್ನು ಭಾರತ ಹೊಂದಿದೆ.
- ರಷ್ಯಾದ ಜೊತೆ ಭಾರತ ಹೊಂದಿರುವ ಸ್ನೇಹ ಇಂದು-ನಿನ್ನೆಯದಲ್ಲ. ದಶಕಗಳ ಹಿಂದಿನ ಈ ನಂಟು 'ಎಸ್-400'ನಂತಹ ಅತ್ಯಂತ ಮಹತ್ವದ ರಕ್ಷಣಾ ಉಪಕರಣದ ಖರೀದಿಯ ಮೂಲಕ ಇನ್ನಷ್ಟು ಗಾಢವಾಗಿದೆ. ಆದರೆ, ಭಾರತವು ರಷ್ಯಾ ಜೊತೆಗಿನ ಐತಿಹಾಸಿಕ ಸಂಬಂಧವನ್ನು ಬಲಪಡಿಸುತ್ತ, ಅಮೆರಿಕ ಹಾಗೂ ಐರೋಪ್ಯ ಒಕ್ಕೂಟದ ಜೊತೆಗಿನ ಸಂಬಂಧವನ್ನೂ ತೂಗಿಸಿಕೊಂಡು ಮುನ್ನಡೆಯಬೇಕಿದೆ.

- ರಷ್ಯಾ-ಉಕ್ರೇನ್ ಯುದ್ಧದ ವಿಚಾರದಲ್ಲಿ ತಾನು ಶಾಂತಿಯ ಪರವಾಗಿ ಇದ್ದೇನೆ ಎಂಬುದನ್ನು ಸ್ಪಷ್ಟಪಡಿಸುವ ಮೂಲಕ ಭಾರತವು ಪಾಶ್ಚಿಮಾತ್ಯ ದೇಶಗಳ ಕಳವಳಗಳಿಗೆ ಸ್ಪಂದಿಸುವ ಕೆಲಸ ಮಾಡಿದೆ.
- ಭಾರತವು ಈಗ ರಷ್ಯಾ-ಚೀನಾ ಸಂಬಂಧದಲ್ಲಿನ ಆತ್ಮೀಯತೆಯನ್ನು ಸೂಕ್ಷ್ಮವಾಗಿ ಅವಲೋಕಿಸಬೇಕಿದೆ. ಹಾಗೆಯೇ, ಚೀನಾ ಜೊತೆಗಿನ ಸಂಬಂಧದಲ್ಲಿ ಈಚೆಗೆ ಆಗಿರುವ ಸುಧಾರಣೆಗಳನ್ನು ಉಳಿಸಿಕೊಳ್ಳಬೇಕಿದೆ.
- ಐದು ವರ್ಷಗಳಿಗೂ ಹೆಚ್ಚಿನ ಅವಧಿಯ ನಂತರ ಭಾರತ ಮತ್ತು ಚೀನಾ, ಉನ್ನತ ಮಟ್ಟದ ಅಧಿಕಾರಿಗಳ ನಡುವಿನ ಮಾತುಕತೆಗಳನ್ನು ಈಚೆಗೆ ಪುನರಾರಂಭಿಸಿವೆ. ಎರಡೂ ದೇಶಗಳು, ಪರಸ್ಪರರಿಗೆ ಇರುವ ಪ್ರಯೋಜನವನ್ನು ಅರಿತು ಸಂಬಂಧ ಸುಧಾರಣೆಗೆ ಮುಂದಾಗಿವೆ.
- ಚೀನಾ ಜೊತೆಗಿನ ಸಂಬಂಧದ ವಿಚಾರವಾಗಿ ಎಚ್ಚರಿಕೆಯೊಂದಿಗೆ ಹೆಜ್ಜೆ ಹಾಕುತ್ತ, ಚೀನಾ-ರಷ್ಯಾ ಸಂಬಂಧವನ್ನು ಎಚ್ಚರಿಕೆಯಿಂದ ಗಮನಿಸುತ್ತ ಭಾರತವು- ಚೀನಾ, ಅಮೆರಿಕ ಮತ್ತು ರಷ್ಯಾ ಜೊತೆಗಿನ ತನ್ನ ಸಂಬಂಧವನ್ನು ಸರಿದೂಗಿಸಿಕೊಂಡು ಮುನ್ನಡೆಯಬೇಕಿದೆ.
- ಪುಟಿನ್ ಅವರಿಗೆ ರತ್ನಗಂಬಳಿ ಹಾಸಿ ಸ್ವಾಗತ ಕೋರುವ ಮೂಲಕ ಭಾರತವು ತನ್ನ ಹಿತಾಸಕ್ತಿಗಳ ರಕ್ಷಣೆಗಾಗಿ, ಅದರಲ್ಲೂ ಮುಖ್ಯವಾಗಿ ಇಂಧನಕ್ಕೆ ಸಂಬಂಧಿಸಿದ ಹಿತಾಸಕ್ತಿಗಳನ್ನು ಕಾಯ್ದುಕೊಳ್ಳಲು ರಷ್ಯಾ ಜೊತೆ ಬಲವಾದ ಸಂಬಂಧವನ್ನು ಉಳಿಸಿಕೊಳ್ಳುವ ಬದ್ಧತೆಯನ್ನು ತೋರಿಸಿದೆ.

## ❖ ಪೋಷಕರ ಆಯ್ಕೆ ಈಗಲೂ ಸರ್ಕಾರಿ ಶಾಲೆ, ಆದರೆ..



ಹೆಚ್ಚು ಆದಾಯ ಹೊಂದಿರುವ ಪೋಷಕರ ಒಲವು ಖಾಸಗಿ ಶಾಲೆ, ಇಂಗ್ಲಿಷ್ ಮಾಧ್ಯಮ

# ಪೋಷಕರ ಆಯ್ಕೆ ಈಗಲೂ ಸರ್ಕಾರಿ ಶಾಲೆ, ಆದರೆ..

ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳ ಬದಲಾಗಿ ಖಾಸಗಿ ಶಾಲೆಗಳಿಗೆ ಸೇರಿಸಲು ಇಚ್ಛಿಸುತ್ತಾರೆ ಎಂಬ ಮಾತು ಕೇಳಿಬರುತ್ತಿರುವ ಹೊತ್ತಿನಲ್ಲಿ ರಾಜ್ಯದ ಎಲ್ಲ ಶೈಕ್ಷಣಿಕ ಜಿಲ್ಲೆಗಳಲ್ಲಿ 14,149 ಪೋಷಕರನ್ನು ಸಂಪರ್ಕಿಸಿ ನಡೆಸಲಾದ ಅಧ್ಯಯನವು ಇದಕ್ಕೆ ಭಿನ್ನವಾದ ಅಭಿಪ್ರಾಯವನ್ನು ವ್ಯಕ್ತಪಡಿಸಿದೆ

• ಪ್ರಮೋದ್ ಶ್ರೀಧರಮೂರ್ತಿ, ಸುಧೀರ ಎಚ್.ಎಸ್.

### ಯಾರು, ಯಾವ ಶಾಲೆ ಆಯ್ಕೆ ಮಾಡಿಕೊಳ್ಳುತ್ತಾರೆ?

ತಿಂಗಳ ಆದಾಯ ₹10 ಸಾವಿರಕ್ಕಿಂತ ಕಡಿಮೆ ಇರುವ ಮತ್ತು ಶಿಕ್ಷಣ ಪಡೆಯದ ಪೋಷಕರು ಉಚಿತ ಶಿಕ್ಷಣದ ಪರವಾದ ಅಭಿಪ್ರಾಯ ಹೊಂದಿದ್ದು, ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರಿಸಲು ಬಯಸುತ್ತಾರೆ

98.4% ಈ ಪೋಷಕರು ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವ ಸಾಧ್ಯತೆಯ ಪ್ರಮಾಣ

ಮಾಸಿಕ ಆದಾಯವು ₹10 ಸಾವಿರದಿಂದ ₹50 ಸಾವಿರದವರೆಗೆ ಇರುವ ಮತ್ತು ಪಿಯುಸಿ ಅಥವಾ ಡಿಪ್ಲೊಮಾದವರೆಗೆ ಶಿಕ್ಷಣ ಪಡೆದಿರುವ ಪೋಷಕರು ಕೂಡ ಸರ್ಕಾರಿ ಶಾಲೆಗಳ ಪರವಾದ ನಿಲುವು ಹೊಂದಿದ್ದಾರೆ

77.7% ಈ ಆದಾಯದ ವ್ಯಾಪ್ತಿಗೆ ಬರುವ ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಸೇರಿಸುವಾಗ ಸರ್ಕಾರಿ ಶಾಲೆಯನ್ನು ಆಯ್ಕೆ ಮಾಡುವ ಸಾಧ್ಯತೆಯ ಪ್ರಮಾಣ

ತಿಂಗಳಿಗೆ ₹50 ಸಾವಿರಕ್ಕಿಂತ ಹೆಚ್ಚು ಆದಾಯ ಹೊಂದಿರುವ ಹಾಗೂ ಪದವಿ ಮತ್ತು ಅದಕ್ಕಿಂತ ಹೆಚ್ಚಿನ ಶಿಕ್ಷಣ ಪಡೆದಿರುವ ಪೋಷಕರು ಖಾಸಗಿ ಶಾಲೆಗಳ ಪರವಾದ ನಿಲುವುದು ಹೊಂದಿದ್ದಾರೆ. ಮತ್ತು ಇಂಗ್ಲಿಷ್ ಮಾಧ್ಯಮ ಶಿಕ್ಷಣಕ್ಕೆ ಹೆಚ್ಚು ನೀಡುತ್ತಾರೆ

99.4% ಇಂತಹ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗೆ ಸೇರಿಸುವ ಸಾಧ್ಯತೆಯ ಪ್ರಮಾಣ

### ಸರ್ಕಾರಿ ಶಾಲೆಗಳ ಸುಧಾರಣೆ ಹೇಗೆ?

### ಸರ್ಕಾರಿ ಶಾಲೆಗಳಿಂದ ಪೋಷಕರು ನಿರೀಕ್ಷಿಸುವುದೇನು?

| | |
|---|---|
| ಇಂಗ್ಲಿಷ್ ಮಾಧ್ಯಮ | 83.63% |
| ಅರ್ಹತೆ ಪಡೆದಿರುವ ಶಿಕ್ಷಕರು | 65.24% |
| ಅಗತ್ಯವಿರುವಷ್ಟು ಶಿಕ್ಷಕರು | 62.92% |
| ಪಾಠ ಪೂರ್ಣಗೊಳಿಸುವುದು | 58.70% |
| ಇತರೆ ಪಠ್ಯಕ್ರಮಗಳು | 53.41% |
| ಪಠ್ಯೇತರ ಚಟುವಟಿಕೆಗಳು | 51.19% |
| ಅಗತ್ಯದ ಮೂಲಸೌಕರ್ಯ | 49.25% |
| ಪ್ರತ್ಯೇಕ ಶೌಚಾಲಯಗಳು | 47.15% |
| ಶೌಚಾಲಯಗಳು | 42.16% |
| ಕ್ರೀಡೆಯಲ್ಲಿ ಅವಕಾಶ | 39.17% |
| ಮಧ್ಯಾಹ್ನದ ಬಿಸಿಯೂಟ | 35.71% |
| ಶಾಲೆ ಸಾರಿಗೆ ವ್ಯವಸ್ಥೆ | 30.41% |
| ಇತರ | 10.27% |

ಲೇಖಕರು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವ ದಿಸೆಯಲ್ಲಿ ಕೆಲಸ ಮಾಡುತ್ತಿರುವ ಇಂಡಿಯಾ ಲಿಟರೆಸಿ ಪ್ರಾಜೆಕ್ಟ್‌ನ ಭಾಗವಾಗಿದ್ದಾರೆ

### ಖಾಸಗಿ ಶಾಲೆಗಳಿಗೆ ದಾಖಲಾತಿ: ಪೋಷಕರು ಹೇಳಿದ್ದೇನು?

| | |
|---|---|
| ಗುಣಮಟ್ಟದ ಬೋಧನೆ | 86.58% |
| ಇಂಗ್ಲಿಷ್ ಮಾಧ್ಯಮ | 85.46% |
| ಶಾಲೆಯ ಜನಪ್ರಿಯತೆ | 64.37% |
| ಶಿಕ್ಷಕರ ಲಭ್ಯತೆ | 64.37% |
| ಮೂಲಸೌಕರ್ಯ | 63.65% |
| ಶಾಲೆ ಸಮೀಪದಲ್ಲಿರುವುದು | 51.68% |
| ಪಠ್ಯೇತರ ಚಟುವಟಿಕೆಗಳು | 49.54% |
| ಭವಿಷ್ಯದಲ್ಲಿನ ಅವಕಾಶಗಳು | 40.45% |
| ಶಾಲೆಯ ಸಾರಿಗೆ ವ್ಯವಸ್ಥೆ | 40.11% |
| ಇತರ ಪಠ್ಯಕ್ರಮಗಳು | 35.39% |
| ಶಾಲಾ ಶುಲ್ಕ | 33.98% |

ಪದಬಂಧ 6248 — ವಿದ್ಯಾ ವಿನಯ್

## ❖ 2027–28ಕ್ಕೆ ಮೊದಲು ಹೊಸ ನಮೂನೆ: ಲೋಕಸಭೆಗೆ ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಮಾಹಿತಿ

**ಸಂದರ್ಭ: ಆದಾಯ ತೆರಿಗೆ ಕಾಯ್ದೆ – 2025ಕ್ಕೆ ಅನುಗುಣವಾಗಿರುವ ಹೊಸ ಆದಾಯ ತೆರಿಗೆ ವಿವರ (ಐಟಿಆರ್) ನಮೂನೆಗಳನ್ನು 2027–28ನೇ ಹಣಕಾಸು ವರ್ಷಕ್ಕೆ ಮೊದಲೇ ಪ್ರಕಟಿಸಲಾಗುತ್ತದೆ ಎಂದು ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಹೇಳಿದ್ದಾರೆ.**

- ಐಟಿಆರ್ ನಮೂನೆಗಳ ಸರಳೀಕರಣ ಕ್ಕೆ ಸಂಬಂಧಿಸಿದ ಸಿಬಿಡಿಟಿ ಸಮಿತಿಯು ತೆರಿಗೆ ತಜ್ಞರ ಜೊತೆ, ಸಂಸ್ಥೆಗಳ ಜೊತೆ ಹಾಗೂ ಆದಾಯ ತೆರಿಗೆ ಇಲಾಖೆಯ ಕೆಲವು ಅಧಿಕಾರಿಗಳ ಜೊತೆ ವ್ಯಾಪಕ ಸಮಾಲೋಚನೆ ನಡೆಸುತ್ತಿದೆ ಎಂದು ಅವರು ಲೋಕಸಭೆಗೆ ನೀಡಿರುವ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.
- ಆಗಸ್ಟ್ 21ರಂದು ರಾಷ್ಟ್ರಪತಿ ಯವರ ಅಂಕಿತ ಪಡೆದಿರುವ ಆದಾಯ ತೆರಿಗೆ ಕಾಯ್ದೆ – 2025 ಮುಂದಿನ ಹಣಕಾಸು ವರ್ಷದ ಮೊದಲ ದಿನದಿಂದ (2026ರ ಏಪ್ರಿಲ್ 1) ಜಾರಿಗೆ ಬರಲಿದೆ. ಇದು ಈಗ ಚಾಲ್ತಿಯಲ್ಲಿ ಇರುವ ಆದಾಯ ತೆರಿಗೆ ಕಾಯ್ದೆ – 1961ರ ಬದಲಿಗೆ ಜಾರಿಗೊಳ್ಳುತ್ತದೆ.
- ತ್ರೈಮಾಸಿಕ ಟಿಡಿಎಸ್ ನಮೂನೆ, ಐಟಿಆರ್ ನಮೂನೆ ಸೇರಿದಂತೆ ಹೊಸ ಕಾಯ್ದೆಯ ಅಡಿಯಲ್ಲಿ ಅಗತ್ಯವಿರುವ ಎಲ್ಲ ನಮೂನೆಗಳನ್ನು ಸಿದ್ಧಪಡಿಸಲಾ ಗುತ್ತಿದೆ. ಹೊಸ ಕಾಯ್ದೆ ಜಾರಿಗೆ ಬಂದ ನಂತರದ ಮೊದಲ ತೆರಿಗೆ ವರ್ಷವಾದ 2026–27ಕ್ಕೆ ಸಂಬಂಧಿಸಿದ ಐಟಿಆರ್ ನಮೂನೆಗಳನ್ನು ಸಿದ್ಧಪಡಿಸಲಾಗುತ್ತಿದ್ದು, ಅವುಗಳನ್ನು 2027–28ಕ್ಕೆ ಮೊದಲು ಅಧಿಸೂಚನೆಯಲ್ಲಿ ಪ್ರಕಟಿಸ ಲಾಗುತ್ತದೆ ಎಂದು ಚೌಧರಿ ಹೇಳಿದ್ದಾರೆ.
- ಪ್ರಸಕ್ತ ಹಣಕಾಸು ವರ್ಷದ ಆದಾಯಕ್ಕೆ ಸಂಬಂಧಿಸಿದ ಐಟಿಆರ್ ನಮೂನೆಗಳನ್ನು ಸರಳೀಕರಿಸುವ ಕೆಲಸ ನಡೆಯುತ್ತಿದೆ, ಅವುಗಳನ್ನು 1961ರ ಕಾಯ್ದೆಗೆ ಅನುಗುಣವಾಗಿ ಅಧಿಸೂಚನೆ ಯಲ್ಲಿ ಪ್ರಕಟಿಸಲಾಗುತ್ತದೆ ಎಂದು ಸಚಿವರು ಹೇಳಿದ್ದಾರೆ.

## ❖ ಶೇ 30 ಸ್ಥಾನ ಮಹಿಳೆಯರಿಗೆ ನಿಗದಿ: ರಾಜ್ಯ ವಕೀಲರ ಪರಿಷತ್ತು ಚುನಾವಣೆ: ಸುಪ್ರೀಂ ಕೋರ್ಟ್ ನಿರ್ದೇಶನ

**ಸಂದರ್ಭ: ಚುನಾವಣಾ ಪ್ರಕ್ರಿಯೆಗೆ ಇನ್ನೂ ಚಾಲನೆ ಸಿಗದ ರಾಜ್ಯ ವಕೀಲರ ಪರಿಷತ್ತುಗಳಲ್ಲಿ ಶೇ 30ರಷ್ಟು ಸ್ಥಾನಗಳನ್ನು ಮಹಿಳಾ ವಕೀಲರಿಗೆ ನಿಗದಿಪಡಿಸುವಂತೆ ಸುಪ್ರೀಂ ಕೋರ್ಟ್ ಸೋಮವಾರ ನಿರ್ದೇಶನ ನೀಡಿದೆ.**

- ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜಾಯ್‌ಮಾಲ್ಯ ಬಾಗ್ಚಿ ಅವರ ಪೀಠವು, 'ರಾಜ್ಯ ವಕೀಲರ ಪರಿಷತ್ತುಗಳಲ್ಲಿ ಶೇ 30ರಷ್ಟು ಸ್ಥಾನಗಳನ್ನು ಮಹಿಳಾ ವಕೀಲರು ಪ್ರತಿನಿಧಿಸಬೇಕು. ಅದರಲ್ಲಿ ಶೇ 20ರಷ್ಟು ಸ್ಥಾನಗಳನ್ನು ಚುನಾವಣೆ ಮೂಲಕ ಮತ್ತು ಶೇ 10ರಷ್ಟು ಸ್ಥಾನಗಳನ್ನು ನಾಮ ನಿರ್ದೇಶನದ ಮೂಲಕ ಭರ್ತಿ ಮಾಡಬೇಕು' ಎಂದು ಹೇಳಿತು.
- ಚುನಾವಣೆಯಲ್ಲಿ ಸ್ಪರ್ಧಿಸುವ ಮಹಿಳಾ ವಕೀಲರ ಸಂಖ್ಯೆ ಕಡಿಮೆ ಯಿದ್ದರೆ, ಅಂತರ ರಾಜ್ಯಗಳ ವಕೀಲರ ಪರಿಷತ್ತುಗಳಲ್ಲಿ ನಾಮ ನಿರ್ದೇಶನಕ್ಕೆ ಸಂಬಂಧಿಸಿದ ಪ್ರಸ್ತಾಪವನ್ನು ನ್ಯಾಯಾಲಯದ ಮುಂದೆ ಇಡಬೇಕು ಎಂದೂ ನಿರ್ದೇಶಿಸಿದೆ.
- ಸುಪ್ರೀಂ ಕೋರ್ಟ್ ಈ ಹಿಂದೆ ನೀಡಿರುವ ನಿರ್ದೇಶನದಂತೆ ಆರು ರಾಜ್ಯಗಳ ವಕೀಲರ ಪರಿಷತ್ತುಗಳ ಚುನಾವಣೆಗೆ ಅಧಿಸೂಚನೆ ಹೊರಡಿಸ ಲಾಗಿದೆ ಎಂದು ಭಾರತೀಯ ವಕೀಲರ ಪರಿಷತ್ತಿನ (ಬಿಸಿಐ) ಅಧ್ಯಕ್ಷರೂ ಆಗಿರುವ ಹಿರಿಯ ವಕೀಲ ಮನನ್ ಕುಮಾರ್ ಮಿಶ್ರಾ ಅವರು ಪೀಠಕ್ಕೆ ತಿಳಿಸಿದರು.
- 'ಶೇ 15ರಷ್ಟು ಸ್ಥಾನಗಳನ್ನು ಮಹಿಳಾ ಸದಸ್ಯರ ನಾಮ ನಿರ್ದೇಶನದ ಮೂಲಕ ಭರ್ತಿ ಮಾಡಿಕೊಳ್ಳಲು ಅವಕಾಶ ನೀಡಬೇಕು' ಎಂದು ಅವರು ಪೀಠಕ್ಕೆ ಮನವಿ ಮಾಡಿದರು. ಆದರೆ, 'ನಾಮ ನಿರ್ದೇಶನವನ್ನು ಶೇ 10ರಷ್ಟು ಸೀಟುಗಳಿಗೆ ಸೀಮಿತಗೊಳಿಸಿದರೆ ಸೂಕ್ತ' ಎಂದು ಪೀಠ ತಿಳಿಸಿತು.

Dr. Rajkumar IAS/KAS Academy

- ಈಗಾಗಲೇ ಚುನಾವಣಾ ಪ್ರಕ್ರಿಯೆ ಆರಂಭವಾಗಿರುವ ಪರಿಷತ್ತುಗಳಲ್ಲಿ ಮಹಿಳೆಯರಿಗೆ ಸ್ಥಾನಗಳನ್ನು ಮೀಸಲಿಡುವುದು ವಿವೇಕಯುತ ನಿರ್ಧಾರವಲ್ಲ ಎಂದೂ ಪೀಠ ಹೇಳಿತು.
- ಆಂಧ್ರ ಪ್ರದೇಶ, ಪಂಜಾಬ್ ಮತ್ತು ಹರಿಯಾಣ, ಉತ್ತರ ಪ್ರದೇಶ, ತೆಲಂಗಾಣ, ಬಿಹಾರ ಹಾಗೂ ಛತ್ತೀಸಗಢ ರಾಜ್ಯಗಳ ವಕೀಲರ ಪರಿಷತ್ತುಗಳ ಚುನಾವಣೆಗೆ ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದೆ ಎಂದಿತು.
- ‘ಮಹಿಳೆಯರು ಸ್ಪರ್ಧಿಸಲು ಹಿಂಜರಿಯುವಂತಹ ಪರಿಷತ್ತುಗಳಲ್ಲಿ ನಾಮ ನಿರ್ದೇಶನ ಪ್ರಕ್ರಿಯೆ ಕೈಗೊಳ್ಳಲಾಗುವುದು. ಅಂತಿಮವಾಗಿ ಕಾರ್ಯಕಾರಿ ಮಂಡಳಿಯಲ್ಲಿ ಮಹಿಳೆಯರಿಗೆ ಶೇ 30ರಷ್ಟು ಪ್ರಾತಿನಿಧ್ಯ ಸಿಗುವುದನ್ನು ಖಾತರಿಪಡಿಸಬೇಕು’ ಎಂದು ಹೇಳಿತು.
- ಎಲ್ಲಾ ರಾಜ್ಯಗಳ ವಕೀಲರ ಪರಿಷತ್ತುಗಳಲ್ಲಿ ಮೂರನೇ ಒಂದರಷ್ಟು ಸ್ಥಾನಗಳನ್ನು ಹಿಳೆಯರಿಗೆ ಮೀಸಲಿಡಬೇಕೆಂದು ಕೋರಿ ವಕೀಲರಾದ ಯೋಗಮಾಯಾ ಎಂ.ಜಿ ಮತ್ತು ಶೆಹ್ಲಾ ಚೌಧರಿ ಅವರು ಸಲ್ಲಿಸಿರುವ ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸುತ್ತಿದೆ.

## ❖ ಶೂಟಿಂಗ್: 6 ಪದಕಗಳೊಂದಿಗೆ ಭಾರತದ ಅಭಿಯಾನಕ್ಕೆ ತೆರೆ

**ಸಂದರ್ಭ: ಭಾರತದ ಶೂಟರ್ ಗಳು ಇಲ್ಲಿ ನಡೆದ ಐಎಸ್‌ಎಸ್‌ಎಫ್ ವಿಶ್ವಕಪ್ ಫೈನಲ್‌ನಲ್ಲಿ ಎರಡು ಚಿನ್ನ ಸೇರಿ 6 ಪದಕಗಳೊಂದಿಗೆ ಅಭಿಯಾನವನ್ನು ಅತ್ಯುತ್ತಮ ರೀತಿಯಲ್ಲಿ ಮುಗಿಸಿದರು.**

- ಪುರುಷರ ಟ್ರ್ಯಾಪ್ ಫೈನಲ್‌ನಲ್ಲಿ ವಿಶ್ವ ಚಾಂಪಿಯನ್‌ಷಿಪ್ ಕಂಚು ವಿಜೇತ ಝೋರಾವರ್ ಸಿಂಗ್ ಸಂಧು ಏಳನೇ ಸ್ಥಾನ ಪಡೆದರು. ಅಂತಿಮ ದಿನದ ಶಾಟ್‌ಗನ್ ಸ್ಪರ್ಧೆಯಲ್ಲಿದ್ದ ಭಾರತದ ಏಕೈಕ ಶೂಟರ್ ಅವರಾಗಿದ್ದರು.
- ಅರ್ಹತಾ ಸುತ್ತಿನಲ್ಲಿ 125ರಲ್ಲಿ 119 ಅಂಕ ಪಡೆದಿದ್ದ ಝೋರಾವರ್ ಅವರು ಆರನೇ ಸ್ಥಾನದೊಂದಿಗೆ ಫೈನಲ್ ಪ್ರವೇಶಿಸಿದ್ದರು. ಐಎಸ್‌ಎಸ್‌ಎಫ್ ಹೊಸ ನಿಯಮಗಳ ಪ್ರಕಾರ ಆರು ಶೂಟರ್‌ಗಳ ಬದಲಿಗೆ ಈ ಬಾರಿ ಎಂಟು ಮಂದಿ ಪ್ರಶಸ್ತಿ ಸುತ್ತಿಗೆ ಅರ್ಹತೆ ಪಡೆದಿದ್ದರು.
- 30 ಶಾಟ್‌ಗಳ ಫೈನಲ್‌ನಲ್ಲಿ ಲಯ ತಪ್ಪಿದ ಝೋರಾವರ್ 7 ಅಂಕ ಸಂಪಾದಿಸಲಷ್ಟೇ ಶಕ್ತವಾದರು. ಅಮೆರಿಕದ ಹಿಂಟನ್ ವಿಲಿಯಂ (29) ಚಿನ್ನ ಗೆದ್ದರೆ, ಗ್ವಾಟೆಮಾಲಾದ ಬ್ರೋಲ್ ಕಾರ್ಡೆನಾಸ್ ಜೀನ್ ಪಿಯರ್ (28) ಬೆಳ್ಳಿ ಜಯಿಸಿದರು. ಅಮೆರಿಕದ ಮತ್ತೊಬ್ಬ ಶೂಟರ್ ಎಲರ್ ವಾಲ್ಟನ್ (23) ಕಂಚು ತಮ್ಮದಾಗಿಸಿಕೊಂಡರು.
- 4 ಚಿನ್ನ, 2 ಬೆಳ್ಳಿ, 3 ಕಂಚಿನ ಪದಕ ಗೆದ್ದ ಚೀನಾ ಪದಕ ಪಟ್ಟಿಯಲ್ಲಿ ಅಗ್ರಸ್ಥಾನ ಪಡೆಯಿತು. 2 ಚಿನ್ನ, 3 ಬೆಳ್ಳಿ, ಒಂದು ಕಂಚಿನ ಪದಕಗಳೊಂದಿಗೆ ಭಾರತ ಎರಡನೇ ಸ್ಥಾನ ಗಳಿಸಿತು. ಅಮೆರಿಕ (6 ಪದಕ) ಮೂರನೇ ಸ್ಥಾನ ಪಡೆಯಿತು.

Dr. Rajkumar IAS/KAS Academy

## ❖ ಮುಟ್ಟಿನ ರಜೆ ನಿರಾಕರಿಸಿದರೆ ದಂಡ: ಮಸೂದೆ ಸಿದ್ಧ । ಮೇ 28ಕ್ಕೆ 'ಮುಟ್ಟಿನ ನೈರ್ಮಲ್ಯ ದಿನ' ಆಚರಣೆಗೆ ನಿರ್ಧಾರ

**ಸಂದರ್ಭ: ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳ ಮಹಿಳಾ ನೌಕರರಿಗೆ ಪ್ರತಿ ತಿಂಗಳು ಒಂದು ದಿನದ ವೇತನಸಹಿತ ಮುಟ್ಟಿನ ರಜೆ ನೀಡುವುದನ್ನು ಉದ್ದೇಶಪೂರ್ವಕವಾಗಿ ನಿರಾಕರಿಸುವ, ಮುಟ್ಟು ಆದವರನ್ನು ಕೆಟ್ಟದಾಗಿ ನಡೆಸಿಕೊಳ್ಳುವ, ತಾರತಮ್ಯ ಮಾಡುವ ಅಥವಾ ಅಸ್ಪೃಶ್ಯ ಎಂದು ಪರಿಗಣಿಸುವವರಿಗೆ ₹5 ಸಾವಿರದವರೆಗೆ ದಂಡ ವಿಧಿಸಲು ಅವಕಾಶ ಕಲ್ಪಿಸುವ ಕಾಯ್ದೆ ಜಾರಿಗೊಳಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.**

- ಈ ಉದ್ದೇಶದಿಂದ 'ಕರ್ನಾಟಕ ಮಹಿಳಾ ಯೋಗಕ್ಷೇಮ ರಜೆ ಕಾಯ್ದೆ-2025'ರ ಕರಡು ಮಸೂದೆಯನ್ನು ಸರ್ಕಾರ ಸಿದ್ಧಪಡಿಸಿದೆ. ಇಲ್ಲಿ ನಡೆಯುತ್ತಿರುವ ವಿಧಾನ ಮಂಡಲ ಅಧಿವೇಶನದಲ್ಲಿ ಈ ಮಸೂದೆ ಮಂಡನೆಯಾಗುವ ಸಾಧ್ಯತೆಯಿದೆ.
- 'ರಾಜ್ಯ ಸರ್ಕಾರದ ಅಧೀನದ ಶಿಕ್ಷಣ ಸಂಸ್ಥೆಗಳು, ಖಾಸಗಿ ಸಂಸ್ಥೆಗಳು ಮತ್ತು ಸೇವೆಗಳಲ್ಲಿ ತೊಡಗಿರುವ ಮಹಿಳೆಯರು ಮುಟ್ಟಾದರೆ, ಆ ಅವಧಿಯಲ್ಲಿ ಪ್ರಯೋಜನಗಳನ್ನು ಒದಗಿಸುವ ಉದ್ದೇಶದಿಂದ ಈ ಮಸೂದೆಯನ್ನು ರೂಪಿಸಲಾಗಿದೆ. ಮಸೂದೆಯ ಅನ್ವಯ ಹುಡುಗಿಯರು, ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಮುಟ್ಟಿನ ರಜೆ ಪಡೆಯಲು ಅರ್ಹರು' ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವಾಲಯದ ಮೂಲಗಳು ತಿಳಿಸಿವೆ.
- ಮಹಿಳಾ ನೌಕರರಿಗೆ ತಿಂಗಳಿಗೆ ಒಂದು ಮುಟ್ಟಿನ ರಜೆಯನ್ನು ಮಂಜೂರು ಮಾಡಿ ಈಗಾಗಲೇ ಸರ್ಕಾರ ಆದೇಶ ಹೊರಡಿಸಿದೆ.


ಪ್ರಯೋಜನಗಳೇನು?

- ಸರ್ಕಾರಿ ಅಥವಾ ಯಾವುದೇ ಖಾಸಗಿ ಸಂಸ್ಥೆಯಲ್ಲಿ ಮುಟ್ಟಿನ ಸಮಯದಲ್ಲಿ ತಿಂಗಳಿಗೆ ಒಂದು ದಿನ ವೇತನ ಸಹಿತ ರಜೆ ಪಡೆಯಬಹುದು ಮತ್ತು ಕೆಲಸಕ್ಕೆ ಗೈರಾಗಬಹುದು
- ಭಾನುವಾರ ಅಥವಾ ಯಾವುದೇ ಇತರ ಸಾಮಾನ್ಯ ರಜಾ ದಿನಗಳಿದ್ದಲ್ಲಿ ಮರುದಿನ ಒಂದು ದಿನದ ಮುಟ್ಟಿನ ರಜೆ ಪಡೆಯಬಹುದು
- ಇತರ ರಜೆಗಳಲ್ಲಿ (ಸಿಎಲ್, ಇಎಲ್, ಆರ್‌ಎಸ್ ಇತ್ಯಾದಿ) ದಿನಗಳಲ್ಲಿ ಮುಟ್ಟಾದರೆ, ಯಾವುದೇ ಮುಟ್ಟಿನ ರಜೆ ಪಡೆಯಲು ಅರ್ಹತೆ ಇಲ್ಲ
- ಮುಟ್ಟಿನ ರಜೆ ಪಡೆಯಲು ಬಯಸದಿದ್ದರೆ ಮನೆಯಿಂದ ಕೆಲಸ ಮಾಡಬಹುದು. ವರ್ಷದಲ್ಲಿ ಮುಟ್ಟಿನ ರಜೆ ದಿನಗಳ ಸಂಖ್ಯೆ 12 ಮೀರಬಾರದು
- ಮುಟ್ಟಿನ ರಜೆ ಪಡೆಯುವ ಅರ್ಹತೆಯು ಋತುಬಂಧವಾದಾಗ ಅಥವಾ ಉದ್ಯೋಗಿ 52 ವರ್ಷ ವಯಸ್ಸಿನವರಾದಾಗ ಯಾವುದು ಮೊದಲೋ ಆ ದಿನ ಕೊನೆಗೊಳ್ಳಲಿದೆ
- ಬಳಕೆಯಾಗದ ಮಾಸಿಕ ಮುಟ್ಟಿನ ರಜೆ ಸಂಗ್ರಹ ಆಗುವುದಿಲ್ಲ. ನಂತರದ ತಿಂಗಳುಗಳಿಗೆ ಸೇರಿಸಲು ಕೂಡಾ ಅವಕಾಶ ಇಲ್ಲ
- ವಿದ್ಯಾರ್ಥಿನಿಯರು ಮುಟ್ಟಾದರೆ ಪ್ರತಿ ತಿಂಗಳು ಎರಡು ದಿನ ರಜೆ ಮತ್ತು ಮುಟ್ಟಿನ ಸಮಸ್ಯೆಗಳಿಗೆ ಹಾಜರಾತಿಯಲ್ಲಿ ಶೇ 2ರಷ್ಟು ವಿನಾಯಿತಿ ನೀಡಬೇಕು
- ಪ್ರತ್ಯೇಕ ವಿಶ್ರಾಂತಿ ಕೊಠಡಿಗಳಲ್ಲಿ ಜೈವಿಕವಾಗಿ ಕೊಳೆಯುವ ಸ್ಯಾನಿಟರಿ ಪ್ಯಾಡ್‌ಗಳು, ಮುಟ್ಟಿನ ಕಪ್‌ಗಳು, ಸ್ಯಾನಿಟರಿ ನ್ಯಾಪ್‌ಕಿನ್‌ಗಳನ್ನು ಒದಗಿಸಬೇಕು

## ❖ ಎರಡನೇ ದೊಡ್ಡ ಧ್ವಜ ಅನಾವರಣ

**ಸಂದರ್ಭ: 'ತ್ರಿವರ್ಣ ಧ್ವಜ ಕೇವಲ ಖಾದಿ ವಸ್ತ್ರವಲ್ಲ. ಅದು ಸ್ವಾತಂತ್ರ್ಯ ಹೋರಾಟದ ಪ್ರತೀಕ, ಭಾರತದ ಹೆಮ್ಮೆ, ಸ್ವಾಭಿಮಾನದ ಸಂಕೇತ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.**

- ಬೆಳಗಾವಿಯ ಸುವರ್ಣ ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿ ಇರುವ ಮೆಟ್ಟಿಲುಗಳ ಮೇಲೆ ಜಗತ್ತಿನಲ್ಲಿಯೇ ಎರಡನೇ ಅತಿ ದೊಡ್ಡದಾದ ತ್ರಿವರ್ಣ ಧ್ವಜವನ್ನು ಮಂಗಳವಾರ ಅನಾವರಣ ಮಾಡಿ ಅವರು ಮಾತನಾಡಿದರು. 'ನಮ್ಮ ತ್ರಿವರ್ಣ ಧ್ವಜದಲ್ಲಿರುವ ಕೇಸರಿ, ಬಿಳಿ, ಹಸಿರು ಬಣ್ಣಗಳು ಶೌರ್ಯ, ಸ್ವಾಭಿಮಾನ, ಶಾಂತಿ, ಸಮೃದ್ಧಿಯನ್ನು ಪ್ರತಿಬಿಂಬಿಸುತ್ತವೆ. ರಾಷ್ಟ್ರ ಧ್ವಜವನ್ನು ಪ್ರತಿಯೊಬ್ಬರೂ ಗೌರವಿಸಬೇಕು' ಎಂದು ಹೇಳಿದರು.
- ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, 'ಸುವರ್ಣ ವಿಧಾನಸೌಧದ ಮೆಟ್ಟಿಲುಗಳ ಮೇಲೆ ಬೃಹತ್ ತ್ರಿವರ್ಣ ಧ್ವಜವನ್ನು ಅನಾವರಣ ಮಾಡಿರುವುದು, ದೇಶ ಪ್ರೇಮವನ್ನು ಮುಂದಿನ ಪೀಳಿಗೆಗೆ ದಾಟಿಸುವ ಕ್ರಮವಾಗಿದೆ' ಎಂದರು.

## ❖ ಭದ್ರಾ ಮೇಲ್ದಂಡೆ: ವೆಚ್ಚ ₹24 ಸಾವಿರ ಕೋಟಿಗೆ

**ಸಂದರ್ಭ: ಭದ್ರಾ ಮೇಲ್ದಂಡೆ ಯೋಜನೆಯ ವೆಚ್ಚ ₹24 ಸಾವಿರ ಕೋಟಿಗೆ ತಲುಪಿದೆ. ಕೇಂದ್ರ ಸರ್ಕಾರ ತನ್ನ ಬಜೆಟ್‌ನಲ್ಲಿ ಘೋಷಣೆ ಮಾಡಿದಂತೆ ₹5,400 ಕೋಟಿ ಯನ್ನು ನೀಡಿಲ್ಲ ಎಂದು ಜಲ ಸಂಪನ್ಮೂಲ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.**

- ಕಾಂಗ್ರೆಸ್‌ನ ಟಿ.ಬಿ. ಜಯಚಂದ್ರ ಅವರ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಅವರು, 'ಚಿತ್ರದುರ್ಗ ನಾಲೆಗೆ ನೀರು ಹರಿಸುವ ವಿಚಾರಕ್ಕೆ ಸರ್ಕಾರ ಬದ್ಧವಿದೆ. ಕೇಂದ್ರ ಸರ್ಕಾರ ಈ ಯೋಜನೆಗೆ ನೀಡುವುದಾಗಿ ಘೋಷಣೆ ಮಾಡಿದ ಹಣವನ್ನು ಪಡೆಯಲು ಸರ್ವ ಪಕ್ಷಗಳ ನಿಯೋಗವೊಂದನ್ನು ಆದಷ್ಟು ಬೇಗನೆ ಕರೆದೊಯ್ಯುತ್ತೇವೆ' ಎಂದು ಭರವಸೆ ನೀಡಿದರು.

## ❖ ಜಪಾನ್ ಪುರಸ್ಕಾರಕ್ಕೆ ಶ್ರೀಹರಿ ಆಯ್ಕೆ

**ಸಂದರ್ಭ: ಉತ್ತರ ಕನ್ನಡ ಜಿಲ್ಲೆ ಸಿದ್ದಾಪುರ ತಾಲ್ಲೂಕಿನ ವಿಜ್ಞಾನಿ ಮತ್ತು ಉದ್ಯಮಿ ಶ್ರೀಹರಿ ಚಂದ್ರಘಾಟಗಿ ಅವರು ಜಪಾನ್‌ನ ಉದ್ಯಮ ತಂತ್ರಜ್ಞಾನದ 'ಸೂಪರ್ ಮ್ಯಾನುಫ್ಯಾಕ್ಚರ್ಸ್ (ಚೋ ಮೊನೊಡುಜುಕುರಿ)' ಅತ್ಯುನ್ನತ ಪ್ರಶಸ್ತಿಗೆ ಪಾತ್ರರಾಗಿದ್ದಾರೆ.**


ಶ್ರೀಹರಿ

- ಪರಿಸರ ಸಂರಕ್ಷಣೆ ಮತ್ತು ಜೈವಿಕ ತಂತ್ರಜ್ಞಾನದಲ್ಲಿ ಶ್ರೀಹರಿ ಅವರು ಮಾಡಿದ ಉನ್ನತ ಸಾಧನೆಯನ್ನು ಪರಿಗಣಿಸಲಾಗಿದೆ. ಎರಡೂವರೆ ದಶಕಗಳಿಂದ ಟೋಕಿಯೋದಲ್ಲಿ ನೆಲೆಸಿರುವ ಅವರು, 'ಎಕೋಸೈಕಲ್ ಕಾರ್ಪೊರೇಷನ್' ಎಂಬ ಸಂಸ್ಥೆ ಸ್ಥಾಪಿಸಿ ಮುನ್ನಡೆಸುತ್ತಿದ್ದಾರೆ.
- ಜಪಾನ್ ಸರ್ಕಾರದ ಆರ್ಥಿಕ, ವ್ಯಾಪಾರ, ಕೈಗಾರಿಕಾ ಸಚಿವಾಲಯ ಸೇರಿ ವಿವಿಧ ಸಂಘಸಂಸ್ಥೆಗಳ ಸಹಯೋಗದಲ್ಲಿ ಈ ಪ್ರಶಸ್ತಿ ಪ್ರದಾನ ಮಾಡಲಾಗುವುದು.


## ❖ ಅನಂತ್ ಅಂಬಾನಿಗೆ ಗ್ಲೋಬಲ್ ಹ್ಯೂಮನ್ ಸೊಸೈಟಿ ಪ್ರಶಸ್ತಿ

**ಸಂದರ್ಭ: ರಿಲಯನ್ಸ್ ಫೌಂಡೇಷನ್ ವನ್ಯಜೀವಿ ಸಂರಕ್ಷಣೆ ಮತ್ತು ಪುನರ್ವಸತಿ ಕೇಂದ್ರ ವಂತಾರದ ಸ್ಥಾಪಕ ಅನಂತ್ ಅಂಬಾನಿ ಅವರಿಗೆ ಅಮೆರಿಕದ ಗ್ಲೋಬಲ್ ಹ್ಯೂಮನ್ ಸೊಸೈಟಿಯು ವಿಶ್ವ ಮಾನವೀಯ ಪ್ರಶಸ್ತಿ ಪ್ರದಾನ ಮಾಡಿದೆ.**


ಅನಂತ್ ಅಂಬಾನಿ ಅವರು ಅಮೆರಿಕದ ಗ್ಲೋಬಲ್ ಹ್ಯೂಮನ್ ಸೊಸೈಟಿಯ ಸಿಇಒ ಡಾ. ರಾಬಿನ್ ಗ್ಯಾನ್ಜೆರ್ಟ್ ಅವರಿಂದ ವಿಶ್ವ ಮಾನವೀಯ ಪ್ರಶಸ್ತಿ ಸ್ವೀಕರಿಸಿದರು

- ವನ್ಯಜೀವಿ ಸಂರಕ್ಷಣೆಯಲ್ಲಿ ಅನಂತ್ ಅಂಬಾನಿ ಅವರ ದೂರದೃಷ್ಟಿಯ ನಾಯಕತ್ವ, ವೈಜ್ಞಾನಿಕ ಕ್ರಮಗಳನ್ನು ಸಂಸ್ಥೆಯು ಶ್ಲಾಘಿಸಿದೆ. ಅಂತರ ರಾಷ್ಟ್ರೀಯ ಮಟ್ಟದ ಈ ಪುರಸ್ಕಾರ ಪಡೆದ ಏಷ್ಯಾದ ಮೊದಲಿಗ ಹಾಗೂ ಕಿರಿಯ ವ್ಯಕ್ತಿ ಎಂಬ ಹೆಗ್ಗಳಿಕೆಗೂ ಅನಂತ್ ಪಾತ್ರರಾಗಿದ್ದಾರೆ.
- ಅಳಿವಿನಂಚಿನಲ್ಲಿರುವ ವನ್ಯಜೀವಿ ತಳಿಗಳನ್ನು ಸಂರಕ್ಷಿಸುವಲ್ಲಿ ಅಂಬಾನಿ ಅವರ ಸುಸ್ಥಿರ ಕ್ರಮಗಳು ನೆರವಾಗಿವೆ. ವನ್ಯಜೀವಿಗಳು ಮತ್ತು ಮನುಷ್ಯರ ಬದುಕಿನಲ್ಲಿ ಗಮನಾರ್ಹ ಬದಲಾವಣೆ ತರಲು ಅಜೀವ ಬದ್ಧತೆ ಪ್ರದರ್ಶಿಸುವ ವ್ಯಕ್ತಿಗಳಿಗೆ ಈ ಪ್ರಶಸ್ತಿಯನ್ನು ಮೀಸಲಿಡ ಲಾಗಿದೆ' ಎಂದು ಗ್ಲೋಬಲ್ ಹ್ಯೂಮನ್ ಸೊಸೈಟಿಯ ಪ್ರಕಟಣೆ ತಿಳಿಸಿದೆ.
- 'ಅತ್ಯುತ್ಕೃಷ್ಟ ಕಾಳಜಿ ಮೂಲಕ ಪ್ರತಿಯೊಂದು ಪ್ರಾಣಿಯ ಘನತೆಯನ್ನು ವಂತಾರ ಎತ್ತಿ ಹಿಡಿದಿದೆ' ಎಂದು ಗ್ಲೋಬಲ್ ಹ್ಯೂಮನ್ ಸೊಸೈಟಿಯ ಅಧ್ಯಕ್ಷೆ ಮತ್ತು ಸಿಇಒ ಡಾ. ರಾಬಿನ್ ಗ್ಯಾನ್ಜೆರ್ಟ್ ಹೇಳಿದ್ದಾರೆ.
- ' ಪ್ರಾಣಿಗಳು ನಮಗೆ ಮಾನವೀಯತೆ, ವಿಶ್ವಾಸ ಮತ್ತು ಬದುಕಿನ ಸಮತೋಲನವನ್ನು ಕಲಿಸುತ್ತವೆ. ಸೇವೆಯ ಮೂಲಕ ಪ್ರತಿಯೊಂದು ಪ್ರಾಣಿಯ ಘನತೆಯನ್ನು ಎತ್ತಿ ಹಿಡಿಯುವ ಕೆಲಸವನ್ನು ವಂತಾರ ಮಾಡುತ್ತಿದೆ' ಎಂದು ಅನಂತ್ ಅಂಬಾನಿ ಹೇಳಿದ್ದಾರೆ.

## ❖ ವಂದೇ ಮಾತರಂ ಸ್ಫೂರ್ತಿಗೀತೆಯ ಸುತ್ತ ವಿವಾದದ ಜ್ವಾಲೆ



# ವಂದೇ ಮಾತರಂ ಸ್ಫೂರ್ತಿಗೀತೆಯ ಸುತ್ತ ವಿವಾದದ ಜ್ವಾಲೆ

ಬಂಗಾಳಿ ಸಾಹಿತಿ ಬಂಕಿಮಚಂದ್ರ ಚಟರ್ಜಿ ಅವರು 'ವಂದೇ ಮಾತರಂ' ಅನ್ನು ಮೊದಲು ಬರೆದಾಗ ಇದ್ದದ್ದು ಎರಡೇ ಪ್ಯಾರಾ. ಹಲವು ವರ್ಷಗಳ ನಂತರ ಅದು 'ಆನಂದಮಠ' ಕಾದಂಬರಿಯ ಭಾಗವಾಗಿ ಪ್ರಕಟವಾದಾಗ ಅದರ ಸ್ವರೂಪ ಬದಲಾಗಿತ್ತು; ಮತ್ತಷ್ಟು ಪ್ಯಾರಾಗಳು ಅದಕ್ಕೆ ಸೇರ್ಪಡೆಯಾಗಿದ್ದವು. ತಾಯ್ನೆಲವನ್ನು ದೇವಿ ದುರ್ಗೆಯೊಂದಿಗೆ ಮೂರ್ತೀಕರಿಸಲಾಗಿತ್ತು. ಕಾದಂಬರಿಯ ಸ್ತುತಿಗೀತೆಯು ಸ್ವಾತಂತ್ರ್ಯ ಹೋರಾಟದ ಘೋಷಣೆಯಾಯಿತು; ಹೋರಾಟದ ಹಾಡಾಗಿ ಜನಪ್ರಿಯವಾಯಿತು. ಪಶ್ಚಿಮ ಬಂಗಾಳದ ರಾಜಕಾರಣ ಮತ್ತು ದೇಶದ ರಾಜಕಾರಣ ಬದಲಾದಂತೆ ವಿವಿಧ ಅರ್ಥಗಳನ್ನು, ನಿರ್ದಿಷ್ಟ ಸಾಂಸ್ಕೃತಿಕ ಸ್ವರೂಪವನ್ನು ಪಡೆಯುತ್ತಾ ಸಾಗಿತು. ಚರಿತ್ರೆಯ ವಸ್ತುವೊಂದು ರಾಜಕಾರಣದ ಹುದಲಿನಲ್ಲಿ ಸಿಲುಕಿ ವರ್ತಮಾನದಲ್ಲಿಯೂ ವಿವಾದದ ಜ್ವಾಲೆ ಹೊಮ್ಮಿಸುತ್ತಲೇ ಇದೆ

• ಸೂರ್ಯನಾರಾಯಣ ವಿ., ಬಿ.ವಿ.ಶ್ರೀನಾಥ್

**ಖ್ಯಾತ ಬಂಗಾಳಿ** ಲೇಖಕರಾಗಿದ್ದ ಬಂಕಿಮಚಂದ್ರ ಚಟರ್ಜಿ ಅವರು 1874ರಲ್ಲಿ 'ಬಂಗದರ್ಶನ್' ಎನ್ನುವ ಸಾಹಿತ್ಯ ಪತ್ರಿಕೆಯಲ್ಲಿ ವಿಗ್ರಹಾರಾಧನೆಯ ಬಗ್ಗೆ ಲೇಖನವೊಂದನ್ನು ಬರೆದಿದ್ದರು. ವಿಗ್ರಹಾರಾಧನೆಯು ಜ್ಞಾನ–ವಿಜ್ಞಾನದ ವಿರೋಧಿ ಎಂದು ಪ್ರತಿಪಾದಿಸಿದ್ದ ಅವರು, ಜ್ಞಾನದ ಬೆಳವಣಿಗೆಯನ್ನು ಉತ್ತೇಜಿಸಿದ ಗ್ರೀಕ್ ತತ್ವಜ್ಞಾನಿಗಳಾಗಲಿ, ವಿಜ್ಞಾನಿಗಳಾಗಲಿ, ಆರ್ಯನ್ ಸಾಧುಗಳಾಗಲಿ ವಿಗ್ರಹಾರಾಧನೆಯ ಪರವಾಗಿರಲಿಲ್ಲ ಎಂದು ಲೇಖನದಲ್ಲಿ ಉಲ್ಲೇಖಿಸಿದ್ದರು. ಸುಮಾರು ಅದೇ ಅವಧಿಯಲ್ಲಿಯೇ (1875) ಅವರು 'ವಂದೇ ಮಾತರಂ' (ನಮಿಸುವೆ ಮಾತೆಗೆ) ಗೀತೆಯ ಮೊದಲ ಎರಡು ಪ್ಯಾರಾಗಳನ್ನು ಬರೆದರು. ಅವುಗಳಲ್ಲಿ ಮೂರ್ತಿಪೂಜೆಯ ಉಲ್ಲೇಖ ಇರಲಿಲ್ಲ. ಅದನ್ನು ಅವರು ಎಲ್ಲಿಯೂ ಪ್ರಕಟಿಸಲಿಲ್ಲ.

ಬಂಕಿಮಚಂದ್ರರ 'ಆನಂದಮಠ' ಕಾದಂಬರಿಯು 1881ರಲ್ಲಿ 'ಬಂಗದರ್ಶನ್' ಪತ್ರಿಕೆಯಲ್ಲಿ ಧಾರಾವಾಹಿಯಾಗಿ ಪ್ರಕಟವಾಗಿ, ಅಪಾರ ಜನಪ್ರಿಯತೆ ಪಡೆಯಿತು. ಬಂಗಾಳದಲ್ಲಿ ತೀವ್ರ ಬರಗಾಲ, ರೈತರ ಸಂಕಷ್ಟ ಇದ್ದ ಕಾಲದ (1770) ಕಥಾವಸ್ತುವನ್ನು ಹೊಂದಿದ್ದ ಕಾದಂಬರಿಯು, ಫಕೀರರು–ಸನ್ಯಾಸಿಗಳು ಈಸ್ಟ್ ಇಂಡಿಯಾ ಕಂಪನಿಯ ಗುಲಾಮನಂತಿದ್ದ ನವಾಬನ ವಿರುದ್ಧ ಹೋರಾಡುವುದರ ಕಥನವಾಗಿತ್ತು. ವಿಶೇಷ ಏನೆಂದರೆ, ಅವರು ಈ ಹಿಂದೆ ಬರೆದಿದ್ದ 'ವಂದೇ ಮಾತರಂ' ಹಾಡು ಕಾದಂಬರಿಯಲ್ಲಿ ಸ್ಥಾನ ಪಡೆದಿತ್ತು. ಅವರ ಗೀತೆಯಲ್ಲಿ ಮೂಲದ ಎರಡು ಪ್ಯಾರಾಗಳ ಜತೆಗೆ ಹೊಸದಾಗಿ ಎರಡು ಪ್ಯಾರಾ ಸೇರಿದ್ದವು ಮತ್ತು ಮುಖ್ಯವಾಗಿ, ವಿಗ್ರಹಾರಾಧನೆಯ ಉಲ್ಲೇಖವಿತ್ತು. ಕಾದಂಬರಿಯ ಕೊನೆಯಲ್ಲಿ ಸನ್ಯಾಸಿಗಳು ಗೀತೆಯನ್ನು ಹಾಡುತ್ತಾರೆ. ಗದ್ಯ–ಪದ್ಯ ಮಿಶ್ರಿತ ಶೈಲಿಯಲ್ಲಿ, ದೇವಿ ದುರ್ಗೆಯನ್ನು ತಾಯಿಯೊಂದಿಗೆ (ದೇಶ) ಸಮೀಕರಿಸಿ, ಆ ತಾಯಿಯ ಪ್ರಾಕೃತಿಕ ವೈಭವ ಮತ್ತು ಶಕ್ತಿ ಸಾಮರ್ಥ್ಯಗಳನ್ನು ಅವರು ಚಿತ್ರಿಸಿದ್ದರು. ತಾಯಿಯ ಉಗ್ರರೂಪವನ್ನೂ ಗೀತೆಯಲ್ಲಿ ವರ್ಣಿಸಿದ್ದರು. ಬಂಕಿಮಚಂದ್ರರು ತಮ್ಮ ಸ್ವಾತಂತ್ರ್ಯ ಹೋರಾಟದ ಕಥಾವಸ್ತುವಿನ ಕೃತಿಯಲ್ಲಿ ಹಿಂದೂ ಧಾರ್ಮಿಕ ಪ್ರತಿಮೆಗಳಿರುವ ಗೀತೆಯನ್ನು ಬಳಸಿದ್ದರು.

ಬ್ರಿಟಿಷರ ವಿರುದ್ಧ ಜನಾಭಿಪ್ರಾಯ ರೂಪುಗೊಳ್ಳುತ್ತಿದ್ದ, ಸ್ವಾತಂತ್ರ್ಯ ಹೋರಾಟವು ಹಬ್ಬುತ್ತಿದ್ದ ಕಾಲ ಅದು. ಈ ಚಾರಿತ್ರಿಕ ಸಂದರ್ಭದಲ್ಲಿ ಸಹಜವಾಗಿಯೇ 'ವಂದೇ ಮಾತರಂ' ಗೀತೆಯೂ ನಿಧಾನಕ್ಕೆ ಜನಪ್ರಿಯವಾಗತೊಡಗಿತ್ತು. 1896ರ ಕಾಂಗ್ರೆಸ್ ಸಮಾವೇಶದಲ್ಲಿ ಗೀತೆಯನ್ನು ಮೊದಲ ಬಾರಿಗೆ ಹಾಡಲಾಯಿತು. ಬ್ರಿಟಿಷರು 1905ರಲ್ಲಿ ಹಿಂದೂ–ಮುಸ್ಲಿಂ ಜನಸಂಖ್ಯಾ ಬಾಹುಳ್ಯದ ಆಧಾರದಲ್ಲಿ ಬಂಗಾಳವನ್ನು ವಿಭಜಿಸಲು ಮುಂದಾದರು. ಈ ಸಂದರ್ಭದಲ್ಲಿ 'ವಂದೇ ಮಾತರಂ' ಮತ್ತಷ್ಟು ಜನಪ್ರಿಯತೆ ಪಡೆಯಿತು. ಜನ ಅದನ್ನು ವ್ಯಾಪಕವಾಗಿ ಹಾಡತೊಡಗಿದರು. 1920ರ ಹೊತ್ತಿಗೆ ಬಹುತೇಕ ಭಾಷೆಗಳಿಗೆ ಅನುವಾದಗೊಂಡಿದ್ದ ಅದು, ರಾಷ್ಟ್ರೀಯವಾದಿಗಳ ನೆಚ್ಚಿನ ಹಾಡಾಗಿ ಬದಲಾಗಿತ್ತು.

**ಮುಸ್ಲಿಂ ವಿರೋಧ:** ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ 'ವಂದೇ ಮಾತರಂ' ಅನ್ನು ಸ್ವಾತಂತ್ರ್ಯ ಹೋರಾಟದ ಸ್ಫೂರ್ತಿಗೀತೆಯಾಗಿ ಬಳಸುತ್ತಿತ್ತು. ಹಿಂದೂಗಳು ಕೋಮು ಹಿಂಸಾಚಾರದ ಸಂದರ್ಭದಲ್ಲಿ ಈ ಹಾಡನ್ನು ಬಳಸುತ್ತಿದ್ದರು. ಈ ದಿಸೆಯಲ್ಲಿ ಬಂಕಿಮಚಂದ್ರರ ಜೀವಿತಾವಧಿಯಲ್ಲಿಯೇ ಗೀತೆಗೆ ಮುಸ್ಲಿಂ ಸಮುದಾಯದ ಕೆಲವರಿಂದ ವಿರೋಧ ವ್ಯಕ್ತವಾಗಿತ್ತು. ಮುಸ್ಲಿಂ ಅರಸರ ವಿರುದ್ಧ ಹಿಂದೂಗಳ ಹೋರಾಟವನ್ನು 'ಆನಂದಮಠ' ಕಾದಂಬರಿಯಲ್ಲಿ ವೈಭವೀಕರಿಸಲಾಗಿದೆ ಎನ್ನುವ ವಿಶ್ಲೇಷಣೆಯೂ ಕೇಳಿಬಂದಿತ್ತು. ಜತೆಗೆ, ಹಿಂದೂ ದೇವತೆಯ ಪ್ರಸ್ತಾಪ, ವರ್ಣನೆ ಇರುವ ಗೀತೆಯಲ್ಲಿ ತಾಯ್ನಾಡನ್ನು ದೈವೀಕರಿಸಿರುವುದರ ಬಗ್ಗೆ ಮುಸ್ಲಿಮರಿಂದ ವಿರೋಧದ ಧ್ವನಿಗಳು ಕೇಳಿಬಂದವು. ಸ್ವಾತಂತ್ರ್ಯ ಹೋರಾಟವು ಎಲ್ಲ ಸಮುದಾಯಗಳ ಹೋರಾಟವಾಗಿದ್ದು, ಅಂಥ ಹೋರಾಟದಲ್ಲಿ ಈ ಗೀತೆ ಹಾಡುವುದು ಮುಸ್ಲಿಮರಿಗೆ ಇರಿಸುಮುರುಸು ಉಂಟುಮಾಡುತ್ತದೆ, ಅವರನ್ನು ಹೋರಾಟದಿಂದ ಹೊರಗಿಡುತ್ತದೆ ಎನ್ನುವ ಅಭಿಪ್ರಾಯಗಳು ವ್ಯಕ್ತವಾದವು. ಆದರೆ, ಶಾಲೆಗಳಲ್ಲಿ ಎಲ್ಲ ಧರ್ಮದ ಮಕ್ಕಳೂ 'ವಂದೇ ಮಾತರಂ' ಹಾಡುವುದನ್ನು ಕಾಂಗ್ರೆಸ್ ಕಡ್ಡಾಯ ಮಾಡಿತು. ಇದರಿಂದ ಮುಸ್ಲಿಮರ ಅಸಮಾಧಾನ ಹೆಚ್ಚಾಗುತ್ತಾ ಸಾಗಿ, ಮುಸ್ಲಿಂ ಲೀಗ್ ಪ್ರವೇಶದೊಂದಿಗೆ ಅದು ಮತ್ತಷ್ಟು ಸಂಕೀರ್ಣ ಸ್ವರೂಪ ಪಡೆಯಿತು.

**ರಾಜಕೀಯ ಲೇಪ:** 'ವಂದೇ ಮಾತರಂ' ಗೀತೆಯು 'ಆನಂದಮಠ' ಕಾದಂಬರಿಯಲ್ಲಿ ಸ್ಥಾನ ಪಡೆದ ದಿನದಿಂದಲೂ ಆಯಾ ಕಾಲಮಾನದ ರಾಜಕೀಯ, ಆಡಳಿತ ವ್ಯವಸ್ಥೆಗೆ ತಕ್ಕಂತೆ ಹಲವು ಸ್ವರೂಪಗಳನ್ನು ಪಡೆಯುತ್ತಲೇ ಬಂದಿದೆ. ಬಂಕಿಮಚಂದ್ರರು ತಮ್ಮ ಹಿಂದೂ ಧಾರ್ಮಿಕ ಹಿನ್ನೆಲೆಗನುಗುಣವಾಗಿ ಬರೆದ ಸ್ತುತಿಗೀತೆಯು ತನ್ನ ಗೇಯಗುಣ, ಭಾವತೀವ್ರತೆ, ಆಕರ್ಷಕ ಶೈಲಿಯಿಂದ ಸ್ವಾತಂತ್ರ್ಯ ಹೋರಾಟದಲ್ಲಿ ಜನರನ್ನು ಸೆಳೆಯಲು ಬಳಕೆಯಾಯಿತು. ಹಿಂದೂ ಮಹಾಸಭಾ ಮತ್ತು ಮುಸ್ಲಿಂ ಲೀಗ್ ಹುಟ್ಟು ಪಡೆದ ನಂತರ ಅದರ ಕೋಮು ಆಯಾಮಕ್ಕೆ ಹೆಚ್ಚು ಒತ್ತು ಸಿಕ್ಕಿತು.

ಸ್ವಾತಂತ್ರ್ಯಪೂರ್ವದಲ್ಲಿ ಅದನ್ನು ರಾಷ್ಟ್ರಗೀತೆಯನ್ನಾಗಿ ಮಾಡುವ ಚಿಂತನೆ ಕೆಲವರಲ್ಲಿತ್ತು. ಐದು ಪ್ಯಾರಾಗಳ ಹಾಡನ್ನು ಎರಡು ಪ್ಯಾರಾಗಳಿಗೆ ಇಳಿಸುವ ನಿರ್ಧಾರವನ್ನು ನೆಹರೂ ಅವರನ್ನೊಳಗೊಂಡತೆ ಅಂದಿನ ನಾಯಕರು ಕೈಗೊಂಡಿದ್ದರು. ಅದರ ಜನಪ್ರಿಯತೆ, ಸ್ಫೂರ್ತಿಗುಣವನ್ನು ಅರಿತಿದ್ದ ನೆಹರೂ ಅವರು, ಸ್ವಾತಂತ್ರ್ಯಾನಂತರ ಅದನ್ನು ರಾಷ್ಟ್ರೀಯ ಹಾಡನ್ನಾಗಿ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದರು.

ಮುಂದೆ, ಹಾಡಿನ ಸುತ್ತ ಚರ್ಚೆಗಳು ಚಾಲ್ತಿಯಲ್ಲಿದ್ದರೂ, ಅದು ತೀವ್ರಗೊಂಡದ್ದು ರಾಷ್ಟ್ರೀಯವಾದಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರ. 2026ರ ಮಾರ್ಚ್–ಏಪ್ರಿಲ್‌ನಲ್ಲಿ ಪಶ್ಚಿಮ ಬಂಗಾಳದ ವಿಧಾನಸಭೆಗೆ ಚುನಾವಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಬಿಜೆಪಿ ಈಗಿನಿಂದಲೇ ನೆಲ ಹದಗೊಳಿಸುವ ಪ್ರಯತ್ನವಾಗಿ ಬಂಕಿಮಚಂದ್ರ ಮತ್ತು 'ವಂದೇ ಮಾತರಂ' ಮೂಲಕ ಹಿಂದೂ ಕಾರ್ಯಸೂಚಿಯನ್ನು ಮುನ್ನೆಲೆಗೆ ತರುತ್ತಿದೆ ಎನ್ನುವ ವಿಶ್ಲೇಷಣೆಗಳಿವೆ.

'ವಂದೇ ಮಾತರಂ' ಗೀತೆ 19ನೇ ಶತಮಾನದ ಕೊನೆ–20ನೇ ಶತಮಾನದ ಆರಂಭದಲ್ಲಿ ದೇಶದಾದ್ಯಂತ ಪಸರಿಸಿತು. ಅದೆಷ್ಟು ಖ್ಯಾತಿ ಗಳಿಸಿತು ಎಂದರೆ, 1906 ಆಗಸ್ಟ್ 6ರಂದು ಕಲ್ಕತ್ತದಲ್ಲಿ 'ವಂದೇ ಮಾತರಂ' ಹೆಸರಿನಲ್ಲಿ ಇಂಗ್ಲಿಷ್ ಪತ್ರಿಕೆ ಆರಂಭಗೊಂಡಿತು. ವಿಪಿನ್ ಚಂದ್ರಪಾಲ್ (ಲಾಲ್–ಬಾಲ್–ಪಾಲ್ ಎಂದು ಖ್ಯಾತಿ ಗಳಿಸಿದ ಮೂವರಲ್ಲಿ ಒಬ್ಬರು) ಇದರ ಸಂಸ್ಥಾಪಕರು. ಈ ಪತ್ರಿಕೆಯ ವಿರುದ್ಧ ಬ್ರಿಟಿಷ್ ಆಡಳಿತ ದೇಶದ್ರೋಹ ಪ್ರಕರಣವನ್ನೂ ದಾಖಲಿಸಿತ್ತು

## ಮುಸ್ಲಿಂ ಲೀಗ್ ತೀವ್ರ ವಿರೋಧ

ಕಲ್ಕತ್ತದಲ್ಲಿ 1896ರಲ್ಲಿ ನಡೆದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ 12ನೇ ಸಮಾವೇಶದಲ್ಲಿ ರವೀಂದ್ರನಾಥ ಟ್ಯಾಗೋರ್ ಅವರು ಮೊದಲ ಬಾರಿಗೆ ಈ ಗೀತೆಯನ್ನು ಹಾಡಿದಾಗ, ರಹೀಮುತುಲ್ಲಾ ಸಯಾನಿ ಅವರು ಆ ಸಮಾವೇಶದ ಅಧ್ಯಕ್ಷರಾಗಿದ್ದರು. 1905ರ ನಂತರ 'ವಂದೇ ಮಾತರಂ' ಸ್ವಾತಂತ್ರ್ಯ ಹೋರಾಟದ ಭಾಗವಾಗಿ ಬದಲಾಯಿತು. ಆದರೆ, ಹಾಡಿನಲ್ಲಿರುವ ದೇವತೆಗಳ ಪ್ರಸ್ತಾಪ ಮತ್ತು ಹಿಂದೂ ಪರವಾದ ಧ್ವನಿ ಮುಸ್ಲಿಮರ ಆಕ್ಷೇಪಕ್ಕೆ ಕಾರಣವಾಯಿತು.

ಬಂಗಾಳ ವಿಭಜನೆಯ ನಂತರ ಜಮಲ್‌ಪುರ (1907) ಸೇರಿದಂತೆ ಬಂಗಾಳದ ಹಲವು ಕಡೆಗಳಲ್ಲಿ ಕೋಮು ಘರ್ಷಣೆಗಳು ನಡೆದವು.

1908ರ ಡಿ.30ರಂದು ಅಮೃತಸರದಲ್ಲಿ ನಡೆದಿದ್ದ ಅಖಿಲ ಭಾರತ ಮುಸ್ಲಿಂ ಲೀಗ್‌ನ ಎರಡನೇ ಸಮಾವೇಶದಲ್ಲಿ ಅಧ್ಯಕ್ಷರಾಗಿದ್ದ ಸೈಯದ್ ಅಲಿ ಇಮಾಮ್ ಅವರು 'ವಂದೇ ಮಾತರಂ' ಹಿಂದೂ ರಾಷ್ಟ್ರೀಯವಾದದ ಭಾಗವಾಗುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದರು. ನೈಜ ಭಾರತೀಯ ರಾಷ್ಟ್ರೀಯವಾದದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದರು. ಈ ಗೀತೆ ಮುಸ್ಲಿಮರ ಸಂಪ್ರದಾಯಕ್ಕೆ ವಿರೋಧವಾದುದು ಎಂದೂ ಹೇಳಿದ್ದರು.

1937ರ ಅಕ್ಟೋಬರ್‌ನಲ್ಲಿ ಮಹಮ್ಮದ್ ಅಲಿ ಜಿನ್ನಾ ಅವರ ನೇತೃತ್ವದಲ್ಲಿ ನಡೆದಿದ್ದ ಮುಸ್ಲಿಂ ಲೀಗ್‌ನ 25ನೇ ವಾರ್ಷಿಕ ಸಮಾವೇಶವು 'ವಂದೇ ಮಾತರಂ' ವಿರುದ್ಧವಾಗಿ ನಿರ್ಣಯ ಕೈಗೊಂಡಿತ್ತು. ಇದನ್ನು ರಾಷ್ಟ್ರಗೀತೆ ಎಂದು ಘೋಷಿಸುವ ಭಾರತೀಯ ಕಾಂಗ್ರೆಸ್‌ನ ನಿರ್ಧಾರವನ್ನು ಖಂಡಿಸಿತ್ತು. ಅಲ್ಲದೇ, 'ಇದು ಸಂವೇದನಾರಹಿತ, ಮುಸ್ಲಿಂ ವಿರೋಧಿ. ಕಾಂಗ್ರೆಸ್‌ನ ನಿಲುವು, ಯೋಚನೆಗಳು ವಿಗ್ರಹಾರಾಧನೆಯ ಪರವಾಗಿವೆ. ಇದು ಭಾರತದಲ್ಲಿ ನೈಜ ರಾಷ್ಟ್ರೀಯವಾದದ ಬೆಳವಣಿಗೆಯನ್ನು ಬುಡಮೇಲು ಮಾಡಲಿದೆ' ಎಂದು ನಿರ್ಣಯದಲ್ಲಿ ಹೇಳಲಾಗಿತ್ತು.

## ಎರಡು ಪ್ಯಾರಾ ಬಳಸುವ ನಿರ್ಧಾರ

ಮುಸ್ಲಿಂ ಸಮುದಾಯದಿಂದ ತೀವ್ರ ವಿರೋಧ ಬಂದ ನಂತರ ಕಲ್ಕತ್ತದಲ್ಲಿ ಜವಾಹರಲಾಲ್ ನೆಹರೂ ಅವರ ಅಧ್ಯಕ್ಷತೆಯಲ್ಲಿ 1937ರ ಅ.26ರಂದು ಸಭೆ ಸೇರಿದ್ದ ಕಾಂಗ್ರೆಸ್ ಕಾರ್ಯಕಾರಿ ಸಮಿತಿಯು ಐದು ಪ್ಯಾರಾಗಳನ್ನು ಹೊಂದಿದ್ದ 'ವಂದೇ ಮಾತರಂ' ಗೀತೆಯಲ್ಲಿ ಮೊದಲ ಎರಡು ಪ್ಯಾರಾಗಳನ್ನು ಮಾತ್ರ ಬಳಸುವ ಬಗ್ಗೆ ಚರ್ಚೆ ನಡೆಸಿತ್ತಲ್ಲದೇ, ಈ ಬಗ್ಗೆ ಸುದೀರ್ಘ ಹೇಳಿಕೆಯನ್ನೂ ಬಿಡುಗಡೆ ಮಾಡಿತ್ತು.

'ಕಳೆದ 30 ವರ್ಷಗಳಲ್ಲಿ ದೇಶದಾದ್ಯಂತ ಕಂಡುಬಂದಿರುವ ಜನರ ತ್ಯಾಗ ಮತ್ತು ನರಳಾಟದೊಂದಿಗೆ 'ವಂದೇ ಮಾತರಂ' ಬೆಸೆದುಕೊಂಡಿದೆ. ಈ ಗೀತೆ ಮತ್ತು ಅದರಲ್ಲಿನ ಪದಗಳು ಬಂಗಾಳ ಮತ್ತು ದೇಶದ ಇತರ ಕಡೆಗಳಲ್ಲಿ ಬ್ರಿಟಿಷ್ ಸಾಮ್ರಾಜ್ಯಶಾಹಿ ವಿರುದ್ಧದ ರಾಷ್ಟ್ರೀಯ ಸಂಕೇತವಾಗಿ ರೂಪುಗೊಂಡಿವೆ. ಕ್ರಮೇಣ ಹಾಡಿನ ಮೊದಲೆರಡು ಪ್ಯಾರಾಗಳ ಬಳಕೆಯು ದೇಶದ ಇತರ ಪ್ರಾಂತ್ಯಗಳಿಗೆ ಹರಡಿದೆ ಮತ್ತು ಅವುಗಳಿಗೆ ರಾಷ್ಟ್ರೀಯ ಪ್ರಾಮುಖ್ಯವೂ ಸಿಕ್ಕಿದೆ. ಹಾಡಿನ ಉಳಿದ ಸಾಲುಗಳ ಬಳಕೆ ಅಪರೂಪವಾಗಿದೆ. ಮೊದಲ ಎರಡು ಪ್ಯಾರಾಗಳು ನಮ್ಮ ತಾಯಿನೆಲದ ಸೌಂದರ್ಯ ಮತ್ತು ಆಕೆಯ ಕೊಡುಗೆಗಳನ್ನು ಕೋಮಲವಾದ ಭಾಷೆಯಲ್ಲಿ ಕಟ್ಟಿಕೊಟ್ಟಿದೆ. ಧಾರ್ಮಿಕವಾಗಿ ಅಥವಾ ಬೇರೆ ಯಾವುದೇ ದೃಷ್ಟಿಕೋನದಿಂದ ಆಕ್ಷೇಪಿಸಬಹುದಾದ ಯಾವ ಸಂಗತಿಗಳು ಇವುಗಳಲ್ಲಿ ಇಲ್ಲ' ಎಂದು ಹೇಳಿಕೆಯಲ್ಲಿ ವಿವರಿಸಲಾಗಿತ್ತು. ಮುಸ್ಲಿಮರು ವ್ಯಕ್ತಪಡಿಸಿದ್ದ ಆಕ್ಷೇಪವನ್ನು ಅದರಲ್ಲಿ ಪ್ರಸ್ತಾಪಿಸಲಾಗಿತ್ತು. ಈ ಹೇಳಿಕೆಯನ್ನು ಸಿದ್ಧಪಡಿಸುವಲ್ಲಿ ನೆಹರೂ ಅವರ ಪಾತ್ರವಿತ್ತು. ರವೀಂದ್ರನಾಥ ಟ್ಯಾಗೋರ್ ಅವರು ಇದಕ್ಕೆ ಸಮ್ಮತಿಸಿದ್ದರು. ಕಾಂಗ್ರೆಸ್ ಸಮಿತಿಯು ಮೊದಲೆರಡು ಪ್ಯಾರಾಗಳನ್ನು ಹೊಂದಿದ 'ವಂದೇ ಮಾತರಂ' ಅನ್ನು ರಾಷ್ಟ್ರೀಯ ಗೀತೆಯನ್ನಾಗಿ ಘೋಷಿಸಲು ಸಮ್ಮತಿಸಿತ್ತು. ದೇಶದ ಸ್ವಾತಂತ್ರ್ಯ ಸಂಗ್ರಾಮದ ಭಾಗವಾಗಿದ್ದ ಈ ಗೀತೆಯನ್ನು ಎಲ್ಲರೂ ಒಪ್ಪಬೇಕು ಎಂದು ಮಹಾತ್ಮ ಗಾಂಧೀಜಿ ಅವರು ಬಯಸಿದ್ದರು. ಆದರೆ, ಅದರ ಹೇರಿಕೆಯನ್ನು ವಿರೋಧಿಸಿದ್ದರು.

## ರಾಷ್ಟ್ರಗೀತೆಗೆ ಸಮನಾದ ಸ್ಥಾನಮಾನ

ಸ್ವಾತಂತ್ರ್ಯಾನಂತರ ರಾಷ್ಟ್ರಗೀತೆಯನ್ನಾಗಿ ಯಾವ ಹಾಡನ್ನು ಆಯ್ಕೆ ಮಾಡಬೇಕು ಎಂಬ ಚರ್ಚೆ ಸಂವಿಧಾನ ರಚನಾ ಸಭೆಯಲ್ಲಿ ನಡೆದಿತ್ತು.

1948ರ ಆಗಸ್ಟ್ 25ರಂದು ನಡೆದಿದ್ದ ಸಂವಿಧಾನ ರಚನಾ ಸಭೆಯಲ್ಲಿ ಮಾತನಾಡಿದ್ದ ಪ್ರಧಾನಿ ನೆಹರೂ ಅವರು ರವೀಂದ್ರನಾಥ್ ಟ್ಯಾಗೋರ್ ವಿರಚಿತ 'ಜನ ಗಣ ಮನ'ದ ಪರವಾಗಿ ಮಾತನಾಡಿದ್ದರು. 'ನೈರುತ್ಯ ಏಷ್ಯಾದಲ್ಲಿ ಭಾರತೀಯ ರಾಷ್ಟ್ರೀಯ ಸೇನೆಯು ಈ ಹಾಡನ್ನು ರಾಷ್ಟ್ರಗೀತೆಯನ್ನಾಗಿ ಅಳವಡಿಸಿಕೊಂಡಿತ್ತು. ಭಾರತದಲ್ಲೂ ಇದು ಜನಪ್ರಿಯವಾಗಿದೆ. ಜನ ಗಣ ಮನವನ್ನು ಅಥವಾ ಬೇರೆ ಹಾಡನ್ನು ರಾಷ್ಟ್ರಗೀತೆಯನ್ನಾಗಿ ಆಯ್ಕೆ ಮಾಡುವ ಬಗ್ಗೆ ಎಲ್ಲ ಪ್ರಾಂತ್ಯಗಳ ರಾಜ್ಯಪಾಲರ ಅಭಿಪ್ರಾಯವನ್ನು ಕೇಳಿದ್ದೆ. ಒಬ್ಬರನ್ನು ಬಿಟ್ಟು ಉಳಿದೆಲ್ಲರೂ 'ಜನ ಗಣ ಮನ'ಕ್ಕೆ ಒಪ್ಪಿಗೆ ಸೂಚಿಸಿದ್ದಾರೆ. ಈ ಅಭಿಪ್ರಾಯವನ್ನು ಸಂಪುಟ ಪರಿಗಣಿಸಿದ್ದು, ಸಂವಿಧಾನ ರಚನಾ ಸಭೆಯು ಅಂತಿಮ ನಿರ್ಧಾರ ಕೈಗೊಳ್ಳುವವರೆಗೂ ಜನ ಗಣ ಮನವನ್ನು ತಾತ್ಕಾಲಿಕವಾಗಿ ರಾಷ್ಟ್ರಗೀತೆಯನ್ನಾಗಿ ಬಳಸಲು ನಿರ್ಧರಿಸಲಾಗಿದೆ' ಎಂದು ಹೇಳಿದ್ದರು.

ತಮ್ಮ ಭಾಷಣದಲ್ಲಿ 'ವಂದೇ ಮಾತರಂ'ನ ಬಗ್ಗೆಯೂ ಪ್ರಸ್ತಾಪಿಸಿದ್ದ ಅವರು, 'ನಿಜಕ್ಕೂ ಅದು ಪ್ರಮುಖವಾದ ರಾಷ್ಟ್ರೀಯ ಹಾಡು. ನಮ್ಮ ದೇಶ ಮತ್ತು ಸ್ವಾತಂತ್ರ್ಯ ಹೋರಾಟದೊಂದಿಗೆ ಗುರುತಿಸಿಕೊಂಡಿದೆ. ಅದರ ಸ್ಥಾನವನ್ನು ಬೇರೆ ಯಾವ ಹಾಡು ಕೂಡ ತುಂಬಲು ಸಾಧ್ಯವಿಲ್ಲ. ರಾಷ್ಟ್ರಗೀತೆಯ ವಿಚಾರಕ್ಕೆ ಬಂದಾಗ ಪದಗಳಿಗಿಂತಲೂ ರಾಗ/ಧಾಟಿ (ಟ್ಯೂನ್) ಮುಖ್ಯ' ಎಂದು ಪ್ರತಿಪಾದಿಸಿದ್ದರು.

1950ರ ಜನವರಿ 24ರಂದು ಸಂವಿಧಾನ ರಚನಾ ಸಭೆಯಲ್ಲಿ ಮಾತನಾಡಿದ್ದ ಅಧ್ಯಕ್ಷ ಡಾ.ರಾಜೇಂದ್ರ ಪ್ರಸಾದ್ ಅವರು, 'ಪದಗಳು ಮತ್ತು ಸಂಗೀತವನ್ನೊಳಗೊಂಡ ಜನ ಗಣ ಮನವು ದೇಶದ ರಾಷ್ಟ್ರಗೀತೆಯಾಗಿದ್ದು, ಸಂದರ್ಭ ಬಂದಾಗ ಸರ್ಕಾರ ಅನುಮತಿಸಿದರೆ ಗೀತೆಯಲ್ಲಿನ ಪದಗಳನ್ನು ಬದಲಾಯಿಸುವುದಕ್ಕೆ ಅವಕಾಶ ಇರುತ್ತದೆ. ಭಾರತದ ಸ್ವಾತಂತ್ರ್ಯದಲ್ಲಿ ಪ್ರಮುಖ ಪಾತ್ರವಹಿಸಿದ 'ವಂದೇ ಮಾತರಂ'ಗೆ ಕೂಡ 'ಜನ ಗಣ ಮನ'ಕ್ಕೆ ಸಮನಾದ ಗೌರವ, ಅದಕ್ಕೆ ಸರಿಸಮಾನದ ಸ್ಥಾನಮಾನವನ್ನೇ ನೀಡಬೇಕು' ಎಂದು ಹೇಳಿದ್ದರು.

ಇಡೀ ಸಭೆಯು ಕರತಾಡನದ ಮೂಲಕ ಈ ಹೇಳಿಕೆಯನ್ನು ಅನುಮೋದಿಸಿತ್ತು.

**ಆಧಾರ:** ಜ್ಯೂಲಿಯಸ್ ಜೆ.ಲೈಪ್ನರ್ ಭಾಷಾಂತರಿಸಿದ 'ಆನಂದಮಠ, ಆರ್ ದಿ ಸೇಕ್ರೆಡ್ ಬ್ರದರ್‌ಹುಡ್' ಕೃತಿ, ಅಮರೇಂದ್ರ ಲಕ್ಷ್ಮಣ್ ಗಾಡ್ಗೀಳ್ ಅವರ 'ವಂದೇ ಮಾತರಂ' ಕೃತಿ, ಪಿಐಬಿ, ತಜ್ಞರ ಲೇಖನಗಳು

ಜವಾಹರಲಾಲ್ ನೆಹರೂ

ರಾಜೇಂದ್ರ ಪ್ರಸಾದ್

ಪದ

**ಎಡದಿಂದ ಬಲಕ್ಕೆ**
3.ಪದ ಹೇಳಿಬಹುಮಾನವಾಗಿ ಪಡೆದಿರುವ ಬಿಲ್ಲೆ (3)
5.ಮಾತಾಡದಿರುವಿಕೆ ಅಥವಾ ನೀರವತೆ (2)
7.ಆ ಮನೆ ಮುಂದೆ ನಿಂತಿರುವ ಗಜ (2)
8.ಮಯನ ಹತ್ತಿರ ಕಳೆದ ವೇಳೆ (3)
9.ವನದ ಹತ್ತಿರ ಕಾಣಿಸಿದ ಬೇಡರ ಹೆಂಗಸು (4)
11.ನಿರುಪಯುಕ್ತವಾದುದನ್ನು ಹೀಗೆನ್ನಿ (2)
13.ಏಳು ದಿನಗಳ ಅವಧಿ (2)
14.ಪಂಚಾಯಿತರ ಸಮ್ಮುಖದಲ್ಲಿ ಸಿದ್ಧಗೊಳಿಸಿದ ವರದಿ (4)
17.ಉತ್ತರದವರ ಮಂಚ (3)
18.ಪತ್ರ ಬರೆದಿರುವ ಸ್ನೇಹಿತ (2)
19.ವಸ್ತುಗಳನ್ನಿಡುವ ತಗಡಿನ ಪೆಟ್ಟಿಗೆ (2)
20.ಪಚನಾಂಗವಿಲ್ಲಿ ಉಲ್ಟಾ ಕಾಣು

**ಮೇಲಿಂದ ಕೆಳಕ್ಕೆ**
1.ಅವಶ್ಯವಿಲ್ಲದ ಖರ್ಚು
2.ಮನದನ್ನೆ ಇರುವ ಗೃಹ
4.ಕಕ್ಕಾವಿಕ್ಕಿಯಾಗಿ ನೋಡುತ್ತಿರುವ
6.ಉತ್ತಮ ಜಾತಿಯ ಜೇನುತುಪ್ಪ ನ ಸಿಗುವುದೇ?
7.ಆದಾಯ ಮತ್ತು ಖರ್ಚು
10.ಇದು ಕನ್ನಡಿಗನ ಸ್ಪೂನ್!
12.ಕೈಯಲ್ಲಿರುವ ಪ್ರಚಾರದ ಚೀಟಿ
14.ಪ್ರತ್ಯೇಕವಾದ ಗುಂಪು
15.ಮಸ್ತಿಷ್ಕ ಇಲ್ಲಿದೆ
16.ಕರಿಯ ಹತ್ತಿರ ಹಾರಾಡುತ್ತಿರು
18.ಮಿಟಕಲಾಡಿ ಹಿಡಿದಿರುವ ಹೀ

6248ನೇ ಪದಬಂಧದ ಉತ್ತರ

ಆಡುವುದು
**ಹೀಗೆ:** ಮನೆಗಳನ್ನು

## ❖ ಭಾರತದ ಅಕ್ಕಿಗೆ ಹೆಚ್ಚಿನ ತೆರಿಗೆ: ಟ್ರಂಪ್

**ಸಂದರ್ಭ: ಆಮದು ನಿಯಂತ್ರಣಕ್ಕೆ ಕ್ರಮ: ಅಮೆರಿಕದ ಕೃಷಿಕರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಘೋಷಣೆ ತೆರಿಗೆ ಹೇರಿಕೆಯು ಭಾರತದ ಅಕ್ಕಿ ರಫ್ತಿನ ಮೇಲೆ ತಾತ್ಕಾಲಿಕ ಪರಿಣಾಮ ಬೀರಬಹುದಷ್ಟೇ. ಹೊಸ ಕಾರ್ಯತಂತ್ರ ಅಳವಡಿಸಿಕೊಂಡರೆ ಅಮೆರಿಕದಲ್ಲಿ ಅಕ್ಕಿ ಮಾರುಕಟ್ಟೆ ವಿಸ್ತರಿಸಿಕೊಳ್ಳಲು ನಮಗೆ ಇನ್ನೂ ಹೆಚ್ಚಿನ ಅವಕಾಶಗಳಿವೆ ಪ್ರೇಮ್ ಗಾರ್ಗ್, ಭಾರತೀಯ ಅಕ್ಕಿ ರಫ್ತುದಾರರ ಒಕ್ಕೂಟದ ಅಧ್ಯಕ್ಷ.**

- ಭಾರತವು, ಬಾಸ್ಮತಿ, ಸೋನಾ ಮಸೂರಿ ಸೇರಿದಂತೆ ವಿವಿಧ ತಳಿಗಳ ಅಕ್ಕಿಯನ್ನು ತಂದು ಅಮೆರಿಕದ ಮಾರುಕಟ್ಟೆಗೆ ಸುರಿಯುತ್ತಿದ್ದು, ಆಮದು ನಿಯಂತ್ರಿಸಲು ಅಕ್ಕಿ ಮೇಲೆ ಹೆಚ್ಚಿನ ತೆರಿಗೆ ವಿಧಿಸುವುದಾಗಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ.
- ವೈಟ್‌ಹೌಸ್‌ನಲ್ಲಿ ಕೃಷಿ ವಲಯದ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ, ಲೂಸಿಯಾನದ ಕೆನಡಿ ಅಕ್ಕಿ ಗಿರಣಿಯ ಮೆರಿಲ್ ಕೆನಡಿ ಅವರು, 'ಭಾರತ, ಥಾಯ್ಲೆಂಡ್ ಮತ್ತು ಚೀನಾ ಅಮೆರಿಕದ ಮಾರುಕಟ್ಟೆಗೆ ದೊಡ್ಡ ಪ್ರಮಾಣದಲ್ಲಿ ಅಕ್ಕಿಯನ್ನು ತಂದು ಸುರಿಯುತ್ತಿವೆ. ಇದರಿಂದ ಅಮೆರಿಕದ ಅಕ್ಕಿ ಉತ್ಪಾದಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇದರಲ್ಲಿ ಭಾರತದ ಪಾಲು ಗರಿಷ್ಠ ಮಟ್ಟದಲ್ಲಿದೆ' ಎಂದು ದೂರಿದರು.
- 'ಯಾಕೆ, ಭಾರತ ಅಮೆರಿಕದ ಮಾರುಕಟ್ಟೆಗೆ ದೊಡ್ಡ ಪ್ರಮಾಣದಲ್ಲಿ ಅಕ್ಕಿ ತಂದು ಸುರಿಯುತ್ತಿದೆ. ಭಾರತದ ಅಕ್ಕಿಗೆ ತೆರಿಗೆಯಿಂದ ವಿನಾಯ್ತಿ ನೀಡಲಾಗಿದೆಯೇ' ಎಂದು ಟ್ರಂಪ್, ಸಭೆಯಲ್ಲಿ ಹಾಜರಿದ್ದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಅವರನ್ನು ಪ್ರಶ್ನಿಸಿದರು. 'ಇಲ್ಲ, ನಾವು ಈ ಬಗ್ಗೆ ಶೀಘ್ರದಲ್ಲೇ ಹೊಸ ಒ ಪ್ಪಂದ ಮಾಡಿ ಕೊಳ್ಳುತ್ತೇವೆ' ಎಂದು ಬೆಸೆಂಟ್ ಹೇಳಿದರು.
- 'ಅಮೆರಿಕನ್ನರಿಗೆ ಬೇಕಾಗುವಷ್ಟು ಭತ್ತವನ್ನು ಅಮೆರಿಕದ ರೈತರೇ ಬೆಳೆಯುತ್ತಾರೆ. ನಮಗೆ ಬೇರೆ ದೇಶಗಳೊಂದಿಗೆ ನ್ಯಾಯಯುತ ವ್ಯಾಪಾರ ಬೇಕೇ ಹೊರತು, ಉಚಿತ ವ್ಯಾಪಾರವಲ್ಲ. ಅಕ್ಕಿ ಆಮದಿನ ಮೇಲೆ ನಿಯಂತ್ರಣ ಹೇರಬೇಕು ' ಎಂದು ಕೆನಡಿ, ಟ್ರಂಪ್ ಅವರನ್ನು ಒತ್ತಾಯಿಸಿದರು.
- 'ಭಾರತವು ಅಮೆರಿಕದ ಮಾರುಕಟ್ಟೆಗೆ ಅಕ್ಕಿಯನ್ನು ತಂದು ಸುರಿಯಬಾರದು. 'ತೆರಿಗೆ' ವಿಧಿಸುವ ಮೂಲಕ ಈ ಸಮಸ್ಯೆಯನ್ನು ನಾವು ಸರಳವಾಗಿ ಬಗೆಹರಿಸಿಕೊಳ್ಳಬಹುದು' ಎಂದು ಟ್ರಂಪ್ ಹೇಳಿದರು.
- ಭಾರತದಿಂದ ಆಮದು ಮಾಡಿಕೊಳ್ಳುವ ಅಕ್ಕಿಯ ಮೇಲೆ ಅಮೆರಿಕವು ಮೊದಲು ಶೇ 10ರಷ್ಟು ತೆರಿಗೆ ವಿಧಿಸಿತ್ತು. ಟ್ರಂಪ್ ಆಡಳಿತವು ಇತ್ತೀಚೆಗೆ ತೆರಿಗೆ ಪರಿಷ್ಕರಣೆ ಮಾಡಿದ ಬಳಿಕ ಇದು ಶೇ 40ಕ್ಕೆ ಏರಿಕೆಯಾಗಿದೆ.
- ಸಭೆ ಮುಗಿದ ಬಳಿಕ ಟ್ರಂಪ್, ಅಮೆರಿಕದ ಕೃಷಿಕರಿಗಾಗಿ ನಾಲ್ಕು ವರ್ಷಗಳ ಅವಧಿಗೆ 12 ಶತಕೋಟಿ ಡಾಲರ್ (₹1.07 ಲಕ್ಷ ಕೋಟಿ) ಕೃಷಿ ಪರಿಹಾರ ಪ್ಯಾಕೇಜ್ ಪ್ರಕಟಿಸಿದರು. ಕೃಷಿ ಕಾರ್ಯದರ್ಶಿ ಬ್ರೂಕ್ ರೋಲಿನ್ಸ್, ಕೃಷಿ ವಲಯದ ಪ್ರತಿನಿಧಿಗಳು, ಟ್ರಂಪ್ ಸಂಪುಟದ ಸದಸ್ಯರು ಭಾಗವಹಿಸಿದ್ದರು.

**ಅಮೆರಿಕಕ್ಕೆ 2.74 ಲಕ್ಷ ಟನ್ ಬಾಸ್ಮತಿ ಅಕ್ಕಿ**

- ಬಾಸ್ಮತಿ ಅಕ್ಕಿ ರಫ್ತಿನಲ್ಲಿ ಅಮೆರಿಕವು ಭಾರತಕ್ಕೆ ವಿಶ್ವದಲ್ಲೇ ನಾಲ್ಕನೆಯ ಅತಿ ದೊಡ್ಡ ಮಾರುಕಟ್ಟೆ. 2024–25ನೇ ಸಾಲಿನ ಹಣಕಾಸು ವರ್ಷದಲ್ಲಿ ಭಾರತವು ಅಮೆರಿಕಕ್ಕೆ 337 ದಶಲಕ್ಷ ಡಾಲರ್ (₹3,028 ಕೋಟಿ) ಮೌಲ್ಯದ 2.74 ಲಕ್ಷ ಟನ್‌ನಷ್ಟು ಅಕ್ಕಿಯನ್ನು ರಫ್ತು ಮಾಡಿದೆ. ಇದೇ ಅವಧಿಯಲ್ಲಿ 61 ಸಾವಿರ ಟನ್‌ನಷ್ಟು ಬಾಸ್ಮತಿಯೇತರ ಅಕ್ಕಿಯನ್ನೂ ಅಮೆರಿಕಕ್ಕೆ ರಫ್ತು ಮಾಡಲಾಗಿದೆ.

## ❖ ರಸಗೊಬ್ಬರ ಆಮದು ಹೆಚ್ಚಳ ನಿರೀಕ್ಷೆ: 2.23 ಕೋಟಿ ಟನ್‌ನಷ್ಟು ಆಮದು: ಎಫ್‌ಎಐ ಅಂದಾಜು

**ಸಂದರ್ಭ: 'ಪ್ರಸಕ್ತ ಆರ್ಥಿಕ ವರ್ಷದಲ್ಲಿ ದೇಶದ ರಸಗೊಬ್ಬರ ಆಮದು 2.23 ಕೋಟಿ ಟನ್‌ಗೆ ಹೆಚ್ಚಳವಾಗುವ ನಿರೀಕ್ಷೆ ಇದೆ' ಎಂದು ಭಾರತೀಯ ರಸಗೊಬ್ಬರ ಸಂಘ (ಎಫ್‌ಎಐ) ತಿಳಿಸಿದೆ.**

- ಇದು ಹಿಂದಿನ ಆರ್ಥಿಕ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ 41ರಷ್ಟು ಹೆಚ್ಚು ಎಂದು ತಿಳಿಸಿದೆ. ದೇಶದಲ್ಲಿ ಸುರಿದ ಉತ್ತಮ ಮುಂಗಾರು, ಬೇಡಿಕೆ ಹೆಚ್ಚಳಕ್ಕೆ ಕಾರಣ ಎಂದು ತಿಳಿಸಿದೆ.
- ಭಾರತವು ಜಗತ್ತಿನಲ್ಲಿ ಅತಿಹೆಚ್ಚು ರಸಗೊಬ್ಬರ ಬಳಸುವ ದೇಶಗಳ ಪೈಕಿ 2ನೇ ಸ್ಥಾನದಲ್ಲಿದೆ. ಚೀನಾ ಮೊದಲ ಸ್ಥಾನದಲ್ಲಿದೆ. ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಅಕ್ಟೋಬರ್ ಅವಧಿಯಲ್ಲಿ ದೇಶದಲ್ಲಿ 1.44 ಕೋಟಿ ಟನ್‌ನಷ್ಟು ರಸಗೊಬ್ಬರ ಆಮದಾಗಿದೆ. ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ 85.6 ಲಕ್ಷ ಟನ್ ಆಮದಾಗಿತ್ತು. ಇದಕ್ಕೆ ಹೋಲಿಸಿದರೆ ಆಮದು ಪ್ರಮಾಣ ಈ ಅವಧಿಯಲ್ಲಿ ಶೇ 69ರಷ್ಟು ಹೆಚ್ಚಳವಾಗಿದೆ.

- 'ದೇಶದಲ್ಲಿ ಸುರಿದ ಉತ್ತಮ ಮಳೆಯಿಂದಾಗಿ ರಸಗೊಬ್ಬರದ ಆಮದು ಪ್ರಮಾಣ ಹೆಚ್ಚಳವಾಗಿದೆ' ಎಂದು ಎಫ್ಎಐ ಅಧ್ಯಕ್ಷ ಎಸ್. ಶಂಕರ್‌ಸುಬ್ರಮಣಿಯನ್ ಹೇಳಿದ್ದಾರೆ.
- ನವೆಂಬರ್ ಅಂತ್ಯದ ವೇಳೆಗೆ ರಸಗೊಬ್ಬರ ದಾಸ್ತಾನು 1.02 ಕೋಟಿ ಟನ್‌ನಷ್ಟಿದೆ. ಈ ದಾಸ್ತಾನಿನಲ್ಲಿ 50 ಲಕ್ಷ ಟನ್ ಯೂರಿಯಾ, 17 ಲಕ್ಷ ಟನ್ ಡಿಎಪಿ ಮತ್ತು 35 ಲಕ್ಷ ಟನ್ ಎನ್‌ಪಿಕೆ ರಸಗೊಬ್ಬರ ಸೇರಿದೆ ಎಂದು ಹೇಳಿದ್ದಾರೆ.
- ಕೋರಮಂಡಲ್ ಇಂಟರ್‌ನ್ಯಾಷನಲ್‌ನ ವ್ಯವಸ್ಥಾಪಕ ನಿರ್ದೇಶಕರೂ ಆಗಿರುವ ಶಂಕರ್ ಸುಬ್ರಮಣಿಯನ್ ಅವರು, ಕಳೆದ ಎರಡು ತಿಂಗಳಿನಲ್ಲಿ ಭಾರತವು ದೊಡ್ಡ ಪ್ರಮಾಣದಲ್ಲಿ ಒಪ್ಪಂದ ಮಾಡಿಕೊಂಡಿದ್ದು, ಯಾವುದೇ ಪೂರೈಕೆ ನಿರ್ಬಂಧಗಳಿಲ್ಲ ಎಂದು ಹೇಳಿದ್ದಾರೆ.
- ದೇಶದಲ್ಲಿ ರಸಗೊಬ್ಬರ ಉತ್ಪಾದನೆ ಕಳೆದ ಏಪ್ರಿಲ್‌ನಿಂದ ಅಕ್ಟೋಬರ್ ಅವಧಿಯಲ್ಲಿ 2.97 ಕೋಟಿ ಟನ್ ನಷ್ಟಿತ್ತು. ಅದು ಈ ಬಾರಿ 2.99 ಕೋಟಿ ಟನ್‌ಗೆ ಹೆಚ್ಚಳವಾಗಿದೆ.
- ಈ ಪೈಕಿ 1.71 ಕೋಟಿ ಟನ್ ಯೂರಿಯಾ, 23.2 ಲಕ್ಷ ಟನ್ ಡಿಎಪಿ, 70.4 ಲಕ್ಷ ಟನ್ ಎನ್‌ಪಿಕೆ ರಸಗೊಬ್ಬರ ಮತ್ತು 34.8 ಲಕ್ಷ ಟನ್ ಎಸ್‌ಎಸ್‌ಪಿ ಇದೆ. ವಾರ್ಷಿಕವಾಗಿ ದೇಶದಲ್ಲಿ 7 ಕೋಟಿ ಟನ್‌ನಷ್ಟು ರಸಗೊಬ್ಬರ ಬಳಕೆ ಆಗುತ್ತದೆ.

## ❖ ಉಡಾನ್ 10 ವರ್ಷಕ್ಕೆ ವಿಸ್ತರಣೆ: ಕೇಂದ್ರಕ್ಕೆ ಪ್ರಸ್ತಾವ

**ಸಂದರ್ಭ: ಪ್ರಾದೇಶಿಕ ವಿಮಾನಯಾನ ಸೇವೆಗೆ ಉಡಾನ್ ಯೋಜನೆ ಮೂಲಕ ನೀಡುತ್ತಿರುವ ಆರ್ಥಿಕ ನೆರವನ್ನು 10 ವರ್ಷಗಳವರೆಗೆ ವಿಸ್ತರಿಸುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ ಹೇಳಿದರು.**

- ಕಲಬುರಗಿಯಲ್ಲಿ ವಿಮಾನ ಹಾರಾಟ ಸ್ಥಗಿತ ಕುರಿತಂತೆ ಬಿಜೆಪಿಯ ಶಶೀಲ್ ನಮೋಶಿ ಶೂನ್ಯವೇಳೆಯಲ್ಲಿ ಮಾಡಿದ ಪ್ರಸ್ತಾಪಕ್ಕೆ ಉತ್ತರಿಸಿದ ಅವರು, 'ದೇಶದ ವಿಮಾನಯಾನ ಕ್ಷೇತ್ರದಲ್ಲಿ ಸುಧಾರಣೆ ತರಲು ಕೇಂದ್ರ ಸರ್ಕಾರ ಉಡಾನ್ ಯೋಜನೆ ಜಾರಿಗೆ ತಂದಿದೆ.
- ಈ ಯೊಜನೆಯಡಿ ಮೂರು ವರ್ಷ ಮಾತ್ರ ಪ್ರಾದೇಶಿಕ ವಿಮಾನಯಾನದ ಅಭಿವೃದ್ಧಿ, ಪುನಶ್ಚೇತನಕ್ಕೆ ಆರ್ಥಿಕ ನೆರವನ್ನು ನೀಡುತ್ತಿದೆ. ಇದನ್ನು 10 ವರ್ಷಕ್ಕೆ ವಿಸ್ತರಿಸಿ, ಐದು ವರ್ಷ ಪೂರ್ತಿ ನಿಲ್ದಾಣಗಳ ಅಭಿವೃದ್ಧಿಗೆ ನೆರವು ಒದಗಿಸಬೇಕು. ಉಳಿದ ಐದು ವರ್ಷದ ಅವಧಿಗೆ ರಾಜ್ಯ ಸರ್ಕಾರ ಶೇ 50ರ ಅನುಪಾತದಲ್ಲಿ ಅನುದಾನ ಒದಗಿಸಲು ಸಿದ್ಧವಿದೆ' ಎಂದು ಹೇಳಿದರು.
- ಕೇಂದ್ರ ಸರ್ಕಾರದ ಪ್ರಾದೇಶಿಕ ಸಂಪರ್ಕ ಯೋಜನೆಯಡಿ ಕಲಬುರಗಿ ವಿಮಾನ ನಿಲ್ದಾಣ 2022ರಿಂದ ಕಾರ್ಯಾಚರಣೆ ಆರಂಭಗೊಂಡಿತ್ತು. ವಿಮಾನಯಾನ ಸಂಸ್ಥೆಗಳು ಕೇಂದ್ರದ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಜೊತೆ ಉಡಾನ್ ಯೋಜನೆಯಡಿ ಒಪ್ಪಂದ ಮಾಡಿಕೊಂಡಿವೆ. ಅದರಂತೆ ಮೂರು ವರ್ಷ ಸೇವೆ ಒದಗಿಸಿವೆ. ಅವಧಿ ಪೂರ್ಣಗೊಂಡ ಕಾರಣ ಸೇವೆ ಸ್ಥಗಿತಗೊಳಿಸಿವೆ. ಅವಧಿ ವಿಸ್ತರಿಸದಿದ್ದರೆ ಉಡಾನ್ ಯೋಜನೆಯಡಿ ವಿಮಾನಯಾನ ಸೌಲಭ್ಯ ಪಡೆದ ನಿಲ್ದಾಣಗಳು ಬಂದ್ ಆಗಲಿವೆ ಎಂದು ಹೇಳಿದರು.

## ❖ ಆಸ್ಟ್ರೇಲಿಯಾ: 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆ ನಿಷೇಧ

**ಸಂದರ್ಭ: ಆಸ್ಟ್ರೇಲಿಯಾದಲ್ಲಿ 16 ವರ್ಷದೊಳಗಿನ ಮಕ್ಕಳು ಸಾಮಾಜಿಕ ಜಾಲತಾಣಗಳನ್ನು ಬಳಸುವುದನ್ನು ನಿಷೇಧಿಸುವ ಕಾನೂನು ಬುಧವಾರದಿಂದ ಜಾರಿಗೆ ಬರಲಿದೆ.**

- ಮಕ್ಕಳ ಸಾಮಾಜಿಕ ಜಾಲತಾಣಗಳ ಬಳಕೆಗೆ ಸಂಬಂಧಿಸಿದಂತೆ ಸಮಗ್ರವಾದ ಕಾನೂನು ರೂಪಿಸಿರುವ ಮೊದಲ ದೇಶ ಆಸ್ಟ್ರೇಲಿಯಾ. ಈ ಕಾನೂನಿನ ಮೂಲಕ ಸಾಮಾಜಿಕ ಜಾಲತಾಣ ವೇದಿಕೆಗಳು ಬಳಕೆದಾರರ ವಯಸ್ಸನ್ನು ಖಚಿತಪಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಇಲ್ಲದಿದ್ದರೆ ಭಾರಿ ದಂಡ ತೆರಬೇಕಾಗುತ್ತದೆ.

Dr. Rajkumar IAS Academy

- ‘ಮಕ್ಕಳ ಸುರಕ್ಷತೆಯನ್ನು ಖಾತರಿಪಡಿಸಲು ಸಾಮಾಜಿಕ ಹೊಣೆಗಾರಿಕೆಯನ್ನು ನಿಗದಿಪಡಿಸುವ ಉದ್ದೇಶ ಈ ಕಾನೂನಿಗೆ ಇದೆ’ ಎಂದು ಅಲ್ಲಿನ ಸರ್ಕಾರ ಹೇಳಿದೆ.
- ಆದರೆ, ಫೇಸ್‌ಬುಕ್, ಇನ್‌ಸ್ಟಾಗ್ರಾಂ, ಕಿಕ್, ಸ್ನಾಪ್‌ಚಾಟ್, ಟಿಕ್‌ಟಾಕ್, ಯೂಟ್ಯೂಬ್, ಥ್ರೆಡ್ಸ್ ಸೇರಿದಂತೆ ಸಾಮಾಜಿಕ ಜಾಲತಾಣಗಳನ್ನು ಬಳಸದೆ ತಮ್ಮ ಸ್ನೇಹಿತರ ಜತೆಗೆ ಸಂಪರ್ಕ ದಲ್ಲಿರುವುದು ಹೇಗೆ ಎಂಬ ಚಿಂತೆ ಮಕ್ಕಳನ್ನು ಕಾಡುತ್ತಿದೆ.
- ‘ಈ ನಿಷೇಧವು ನಮ್ಮ ಮೇಲೆ ಸಕಾರಾತ್ಮಕ ಪರಿಣಾಮ ಬೀರುವುದಿಲ್ಲ. ನಾವು ಸ್ನೇಹಿತರು ಪರಸ್ಪರ ಸಂಪರ್ಕದಲ್ಲಿರಲು ಪರ್ಯಾಯ ಆಯ್ಕೆಗಳು ಸಾಕಷ್ಟಿಲ್ಲ’ ಎಂದು ಮೆಲ್ಬರ್ನ್‌ನ 15 ವರ್ಷದ ಬಾಲಕ ರಿಲೆ ಅಲೆನ್ ಹೇಳಿದ್ದಾರೆ.

## ❖ ರಾಜ್ಯದ ಪ್ರತಿ ಕುಟುಂಬಕ್ಕೂ ವಿಶಿಷ್ಟ ಗುರುತಿನ ಸಂಖ್ಯೆ ನೀಡುವ ಉದ್ದೇಶದಿಂದ ‘ಕುಟುಂಬ ಸಂಖ್ಯೆ’ ವ್ಯವಸ್ಥೆಯನ್ನು ರೂಪಿಸಲು ಸರ್ಕಾರ ಮುಂದಾಗಿದೆ.

**ಸಂದರ್ಭ: ಇದರ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಮಸೂದೆ ಸಿದ್ಧಪಡಿಸಿದೆ. ಸರ್ಕಾರದ ಎಲ್ಲ ಕಲ್ಯಾಣ ಕಾರ್ಯಕ್ರಮ, ಯೋಜನೆಗಳನ್ನು ಈ ಸಂಖ್ಯೆ ಆಧರಿಸಿಯೇ ಫಲಾನುಭವಿಗಳಿಗೆ ತಲುಪಿಸಲಾಗುತ್ತದೆ.**

- ‘ಕರ್ನಾಟಕ ಕುಟುಂಬ (ಮಾಹಿತಿ ಮತ್ತು ನಿರ್ವಹಣೆ) ಮಸೂದೆ-2025’ ಅನ್ನು ಇಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನ ದಲ್ಲಿ ಮಂಡಿಸಲು ಸಿದ್ಧತೆ ನಡೆಸಿದೆ. ರಾಜ್ಯದ ಕುಟುಂಬಗಳಿಗೆ ಸರ್ಕಾರದ ಯಾವುದೇ ಕಲ್ಯಾಣ ಕಾರ್ಯಕ್ರಮ, ಸವಲತ್ತು, ಸಹಾಯಧನ, ಪ್ರಮಾಣಪತ್ರ, ಪರವಾನಗಿ, ವಿಕೋಪ ನಿರ್ವಹಣೆ, ಎಲ್ಲ ಈ ರೀತಿಯ ಪರಿಹಾರಗಳನ್ನು ಈ ಕುಟುಂಬ ಸಂಖ್ಯೆಯ ಆಧಾರದಲ್ಲಿಯೇ ನೀಡುವ ಅಧಿಕಾರ ಸರ್ಕಾರಕ್ಕೆ ದತ್ತವಾಗಲಿದೆ.
- ಈ ವ್ಯವಸ್ಥೆ ನಿರ್ವಹಣೆಗಾಗಿ ಸರ್ಕಾರವು ‘ಕರ್ನಾಟಕ ಕುಟುಂಬ (ಮಾಹಿತಿ ಮತ್ತು ನಿರ್ವಹಣೆ) ಪ್ರಾಧಿಕಾರ’ ಸ್ಥಾಪಿಸಲಿದೆ. ಪ್ರಾಧಿಕಾರವು ರೂಪಿಸಲಿರುವ ‘ಕುಟುಂಬ ತಂತ್ರಾಂಶ ವ್ಯವಸ್ಥೆ’ ಯ ಮೂಲಕ ರಾಜ್ಯದ ಪ್ರತಿ ಕುಟುಂಬವು ತನ್ನ ವಿವರಗಳನ್ನು ನಮೂದಿಸಿ, ಕುಟುಂಬ ಸಂಖ್ಯೆ ಪಡೆಯಬಹುದು. ಹೀಗೆ ಮಾಹಿತಿಗಳನ್ನು ನಮೂದಿಸಲು ಕುಟುಂಬವು ಯಾವೆಲ್ಲಾ ದಾಖಲೆಗಳನ್ನು ನೀಡಬೇಕು ಎಂಬುದರ ಬಗ್ಗೆ ಕಾಯ್ದೆ ಜಾರಿಯಾದ ಮೇಲೆ ಸರ್ಕಾರವು ನಿಯಮಗಳನ್ನು ರೂಪಿಸಲಿದೆ.



### ದತ್ತಾಂಶ ಸುರಕ್ಷತೆಗೆ ಒತ್ತು

- ಒಂದು ಕುಟುಂಬಕ್ಕೆ ಒಂದೇ ಸಂಖ್ಯೆ. ಕುಟುಂಬದ ಸರ್ವ ಸದಸ್ಯರ ವಿವರ ಆ ಸಂಖ್ಯೆಯೊಂದಿಗೆ ಜೋಡಣೆಯಾಗಿರಲಿದೆ. ಕುಟುಂಬದ ಸದಸ್ಯರು ವೈಯಕ್ತಿಕ ದೃಢೀಕರಣದ ನಂತರ ವಿವರಗಳನ್ನು ಪರಿಷ್ಕರಿಸಬಹುದಾಗಿದೆ. ಆದರೆ ಪ್ರಾಧಿಕಾರವು ಹಲವು ಹಂತದ ಪರಿಶೀಲನೆಯ ನಂತರವಷ್ಟೇ ಪರಿಷ್ಕೃತ ವಿವರಗಳು ಅಧಿಕೃತವಾಗಲಿವೆ
- ಕುಟುಂಬ ಸಂಖ್ಯೆಯನ್ನಷ್ಟೇ ಇಲಾಖೆಗಳಿಗೆ ಒದಗಿಸಲಾಗುತ್ತದೆ. ವೈಯಕ್ತಿಕ ವಿವರಗಳು ಅವುಗಳೊಂದಿಗೆ ಇರುವುದಿಲ್ಲ. ನಾಗರಿಕರ ಖಾಸಗಿ ವಿವರಗಳ ಗೌಪ್ಯತೆ ಕಾಪಾಡಿಕೊಳ್ಳುವ ಉದ್ದೇಶದಿಂದ ಈ ಷರತ್ತು ರೂಪಿಸಲಾಗಿದೆ
- ಕುಟುಂಬ ಸಂಖ್ಯೆ ಮತ್ತು ಕುಟುಂಬಗಳ ವಿವರಗಳನ್ನು ಸಾರ್ವಜನಿಕವಾಗಿ ಪ್ರದರ್ಶಿಸಲು ಅಥವಾ ಲಭ್ಯವಿರುವಂತೆ ಮಾಡುವಂತಿಲ್ಲ. ನ್ಯಾಯಾಲಯಗಳ ಆದೇಶದ ಮೇರೆಗಷ್ಟೇ ವಿವರ ಸಾರ್ವಜನಿಕವಾಗಿ ಬಹಿರಂಗಪಡಿಸಬಹುದಾಗಿದೆ. ರಾಜ್ಯ ಸರ್ಕಾರದ ಯಾವುದಾದರೂ ಕಾನೂನಿನ ಪ್ರಕಾರ ಈ ವಿವರಗಳನ್ನು ನೀಡುವುದು ಕಡ್ಡಾಯವಾದ ಸಂದರ್ಭದಲ್ಲಿ ಮಾತ್ರ, ಬಹಿರಂಗಪಡಿಸಬಹುದಾಗಿದೆ
- ವಿವಿಧ ಇಲಾಖೆಗಳಿಗೆ ನೀಡಿರುವ ಕುಟುಂಬ ಸಂಖ್ಯೆಯ ವಿವರಗಳು, ಸೀಮಿತ ಅವಧಿಯವರೆಗೆ ಮಾತ್ರ ಆ ಇಲಾಖೆಗಳಿಗೆ ಲಭ್ಯವಿರಲಿದೆ. ಆ ಅವಧಿ ಮುಗಿದ ನಂತರ ಇಲಾಖೆಗಳಿಗೆ ನೀಡಲಾಗಿದ್ದ ಕುಟುಂಬ ತಂತ್ರಾಂಶದ ಆಕ್ಸೆಸ್ ಸ್ಥಗಿತವಾಗಲಿದೆ
- ಕುಟುಂಬ ಸಂಖ್ಯೆ ಮತ್ತು ವಿವರಗಳನ್ನು ದುರುಪಯೋಗ ಮಾಡಿಕೊಳ್ಳುವವರಿಗೆ ಮೂರು ವರ್ಷಗಳ ವರೆಗೆ ಜೈಲು ಅಥವಾ ₹55,000ದಿಂದ ₹1 ಲಕ್ಷದವರೆಗೆ ದಂಡ ಅಥವಾ ಎರಡನ್ನೂ ವಿಧಿಸಬಹುದಾಗಿದೆ

### ಕುಟುಂಬ ತಂತ್ರಾಂಶ

ಕುಟುಂಬ ತಂತ್ರಾಂಶವು ಈ ಕೆಳಕಂಡ ಉಪ ವ್ಯವಸ್ಥೆಗಳನ್ನು ಒಳಗೊಂಡ ಒಂದು ಸಮಗ್ರ ವ್ಯವಸ್ಥೆಯಾಗಿದೆ.

1. ಸಾಮಾಜಿಕ ನೋಂದಣಿ
2. ಸಂಯೋಜಿತ ಫಲಾನುಭವಿಗಳ ನಿರ್ವಹಣಾ ವ್ಯವಸ್ಥೆ
3. ಫಲಾನುಭವಿಗಳ ನೋಂದಣಿ
4. ಪಾವತಿ ವ್ಯವಸ್ಥೆ
5. ಕುಂದುಕೊರತೆ ಪರಿಹಾರ ವೇದಿಕೆ

### ಸಾಮಾಜಿಕ ನೋಂದಣಿ

ಪ್ರಾಧಿಕಾರವು ಜನರಿಂದ, ವಿವಿಧ ಇಲಾಖೆ ಮತ್ತು ಸಂಸ್ಥೆಗಳಿಂದ ಸಂಗ್ರಹಿಸಿದ ದತ್ತಾಂಶಗಳನ್ನು ಬಳಸಿಕೊಂಡು ‘ಸಾಮಾಜಿಕ ನೋಂದಣಿ’ಯನ್ನು ಸಿದ್ಧಪಡಿಸಲಿದೆ. ರಾಜ್ಯ ಸರ್ಕಾರವು ತನ್ನ ಬೇರೆ-ಬೇರೆ ಕಾರ್ಯಕ್ರಮಗಳಿಗಾಗಿ ಈ ನೋಂದಣಿಯನ್ನು ಬಳಸಿಕೊಳ್ಳಬಹುದಾಗಿದೆ.

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳೂ ಈ ನೋಂದಣಿ ಮತ್ತು ಕುಟುಂಬ ಸಂಖ್ಯೆ ದತ್ತಾಂಶಗಳನ್ನು ಬಳಸಿಕೊಳ್ಳಬಹುದಾಗಿದೆ. ಈ ನೋಂದಣಿಯ ದತ್ತಾಂಶಗಳನ್ನು ಪಡೆದುಕೊಳ್ಳಲು ಇತರ ಇಲಾಖೆಗಳು ಪ್ರಾಧಿಕಾರಕ್ಕೆ ಪತ್ರ ಬರೆಯಬೇಕಿದ್ದು, ದತ್ತಾಂಶ ಏಕೆ ಅಗತ್ಯ, ಯಾವ ಉದ್ದೇಶಕ್ಕೆ ಬಳಸಲಾಗುತ್ತದೆ ಎಂಬುದನ್ನು ಸ್ಪಷ್ಟವಾಗಿ ಉಲ್ಲೇಖಿಸಲೇಬೇಕು. ಹೀಗಿದ್ದೂ, ದತ್ತಾಂಶವನ್ನು ಒದಗಿಸುವ ಅಥವಾ ನಿರಾಕರಿಸುವ ಅಧಿಕಾರ ಪ್ರಾಧಿಕಾರಕ್ಕೆ ಇರಲಿದೆ.

ಈ ವ್ಯವಸ್ಥೆಯು ಪೂರ್ಣ ಪ್ರಮಾಣದಲ್ಲಿ ಜಾರಿಯಾದ ನಂತರ, ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಲ್ಲ ಕಲ್ಯಾಣ ಕಾರ್ಯಕ್ರಮಗಳ ಸವಲತ್ತುಗಳನ್ನು ಕುಟುಂಬ ಸಂಖ್ಯೆಯ ಮೂಲಕವೇ ವಿತರಣೆ ಮಾಡಲಾಗುತ್ತದೆ.

ರಾಜ್ಯ ಸರ್ಕಾರದ ಸಂಚಿತ ನಿಧಿ ಮತ್ತು ಕೇಂದ್ರ ಸರ್ಕಾರದ ಸಂಚಿತ ನಿಧಿಯಿಂದ ಸಂದಾಯವಾಗುವ ಪೂರ್ಣ ಅಥವಾ ಅರೆ ಪ್ರಮಾಣದ ಸಹಾಯಧನ, ಆರ್ಥಿಕ ನೆರವು, ಪ್ರಾಕೃತಿಕ ವಿಕೋಪಗಳ ಸಂದರ್ಭದಲ್ಲಿ ನೀಡಲಾಗುವ ಪರಿಹಾರಗಳು ಸಂದಾಯವಾಗುವುದಿದ್ದರೆ, ಅದಕ್ಕೆ ಕುಟುಂಬ ಸಂಖ್ಯೆಯನ್ನು ನೀಡುವುದು ಕಡ್ಡಾಯವಾಗಲಿದೆ. ರಾಜ್ಯ ಸರ್ಕಾರವು ಘೋಷಿಸುವ ಯಾವುದೇ ಕಲ್ಯಾಣ ಕಾರ್ಯಕ್ರಮ ಅಥವಾ ನೆರವುಗಳ ಫಲಗಳೂ ಈ ಸಂಖ್ಯೆಯ ಮೂಲಕವೇ ಫಲಾನುಭವಿಗಳಿಗೆ ತಲುಪಲಿದೆ.

ಸರ್ಕಾರದ ಸವಲತ್ತುಗಳನ್ನು ನೀಡುವುದಷ್ಟೇ ಅಲ್ಲದೆ, ಪ್ರಾಕೃತಿಕ ವಿಕೋಪ, ವಿವಿಧ ಕಾರ್ಯಕ್ರಮಗಳಿಗಾಗಿ ನಾಗರಿಕರ ಮಾಹಿತಿ ಸಂಗ್ರಹಿಸವ ಅಗತ್ಯವಿದ್ದರೆ ಕುಟುಂಬ ತಂತ್ರಾಂಶದ ಮೂಲಕವೇ ಆ ಮಾಹಿತಿ ಪಡೆದುಕೊಳ್ಳಲು ಅವಕಾಶವಿರಲಿದೆ.

- ಕುಟುಂಬವು, ‘ಕುಟುಂಬ ತಂತ್ರಾಂಶ’ ದಲ್ಲಿ ಮಾಹಿತಿ ನಮೂದಿಸದ ತಕ್ಷಣವೇ ವಿಶಿಷ್ಟ ಸಂಖ್ಯೆ ಸೃಜನೆಯಾಗುವುದಿಲ್ಲ. ಬದಲಿಗೆ ಆ ವಿವರಗಳನ್ನು ಪರಿಶೀಲಿಸುವ ಅಧಿಕಾರವು ಪ್ರಾಧಿಕಾರಕ್ಕೆ ಇರಲಿದೆ. ಜನರು ನೀಡುವ ದತ್ತಾಂಶ ಮತ್ತು ವಿವರಗಳನ್ನು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು ಮತ್ತು

ಸಂಸ್ಥೆಗಳ ಬಳಿ ಇರುವ ದತ್ತಾಂಶಗಳೊಂದಿಗೆ ಹೋಲಿಸುವ ಹಾಗೂ ಮನೆ-ಮನೆಗೆ ಭೇಟಿ ನೀಡಿ, ಖಚಿತಪಡಿಸಿಕೊಳ್ಳುವ ಅಧಿಕಾರ ಪ್ರಾಧಿಕಾರಕ್ಕೆ ಇರಲಿದೆ. ಎಲ್ಲ ಮಾಹಿತಿಗಳು ಸರಿ ಎಂದು ಖಚಿತವಾದ ನಂತರವೇ ವಿಶಿಷ್ಟ ಸಂಖ್ಯೆ ಸೃಜನೆಯಾಗಲಿದೆ.

## ❖ 'ಬೆಳಕಿನ ಹಬ್ಬ' ಕ್ಕೆ ಯುನೆಸ್ಕೊ ಮಾನ್ಯತೆ

**ಸಂದರ್ಭ:ಬೆಳಕಿನ ಹಬ್ಬವಾದ ದೀಪಾವಳಿಯನ್ನು ಯುನೆಸ್ಕೊ 'ಮಾನವಕುಲದ ಅಮೂರ್ತ ಸಾಂಸ್ಕೃತಿಕ ಪರಂಪರೆ' ಪಟ್ಟಿಗೆ ಸೇರ್ಪಡೆ ಮಾಡಿದೆ.**

- ಯುನೆಸ್ಕೊ ಮಾನ್ಯತೆಯಿಂದ 'ದೀಪಾವಳಿ 'ಯ ಜಾಗತಿಕ ಜನಪ್ರಿಯತೆ ಇನ್ನಷ್ಟು ಹೆಚ್ಚಲಿದೆ. ದೇಶದ ಜನರು ಈ ಗೌರವದಿಂದ ಪುಳಕಿತಗೊಂಡಿದ್ದಾರೆ ನರೇಂದ್ರ ಮೋದಿ, ಪ್ರಧಾನಿ (ಎಕ್ಸ್‌ಪೋಸ್ಟ್‌ನಲ್ಲಿ)
- ದೆಹಲಿಯ ಕೆಂಪುಕೋಟೆ ಆವರಣದಲ್ಲಿ ನಡೆದ ಯುನೆಸ್ಕೊ ಸಮಿತಿ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ.
- **ಕೋಲ್ಕತ್ತಾದ ದುರ್ಗಾಪೂಜಾ, ಕುಂಭಮೇಳ, ಕೇರಳದ ಮುಡಿಯೇಟ್ಟು, ಗುಜರಾತ್‌ನ ಗರ್ಬಾ ನೃತ್ಯ, ಯೋಗ, ರಾಮಾಯಣ ಮಹಾಕಾವ್ಯದ ಸಾಂಪ್ರದಾಯಿಕ ಪ್ರದರ್ಶನ ರಾಮಲೀಲಾ ಸೇರಿದಂತೆ ದೇಶದ ಹಲವು ಸಾಂಪ್ರದಾಯಿಕ – ಧಾರ್ಮಿಕ ಆಚರಣೆಗಳು ಈ ಪಟ್ಟಿಗೆ ಈಗಾಗಲೇ ಸೇರ್ಪಡೆಗೊಂಡಿವೆ. 'ದೀಪಾವಳಿ' ಈ ಪಟ್ಟಿಯಲ್ಲಿ ಸ್ಥಾನ ಪಡೆದ ಭಾರತದ 16ನೇ ಸಾಂಸ್ಕೃತಿಕ ಪರಂಪರೆ ಎನಿಸಿಕೊಂಡಿದೆ.**
- ಅಮೂರ್ತ ಸಾಂಸ್ಕೃತಿಕ ಪರಂಪರೆ ಸಂರಕ್ಷಿಸುವ ಅಂತರ್ ಸರ್ಕಾರಿ ಸಮಿತಿಯ (ಐಸಿಎಚ್) 20ನೇ ಅಧಿವೇಶನ ಕೆಂಪುಕೋಟೆ ಆವರಣದಲ್ಲಿ ಡಿ.8ರಿಂದ ಆರಂಭಗೊಂಡಿದ್ದು,ಡಿ. 13ರವರೆಗೆ ನಡೆಯಲಿದೆ. ಈ ಅಧಿವೇಶನದ ಸಂದರ್ಭದಲ್ಲೇ ಈ ಘೋಷಣೆ ಹೊರಬಿದ್ದಿದ್ದು, ಕಾರ್ಯಕ್ರಮದಲ್ಲಿ ಸೇರಿದ್ದವರು ಜೈಹಿಂದ್, ವಂದೇ ಮಾತರಂ, ಭಾರತ್ ಮಾತಾ ಕೀ ಜೈ ಘೋಷಣೆಗಳನ್ನು ಮೊಳಗಿಸಿ ಯುನೆಸ್ಕೊ ಮಾನ್ಯತೆಯನ್ನು ಸ್ವಾಗತಿಸಿದರು.
- ದೀಪಾವಳಿಯು ಭಾರತೀಯರ ಸಾಂಸ್ಕೃತಿಕ ಹಿರಿಮೆ. ತಲೆಮಾರಿನಿಂದ ತಲೆಮಾರಿಗೆ ಈ ಪರಂಪರೆ ಸಾಗಿಬಂದಿದೆ ಗಜೇಂದ್ರ ಸಿಂಗ್ ಶೆಖಾವತ್, ಕೇಂದ್ರ ಸಂಸ್ಕೃತಿ ಸಚಿವ.
- ದೇಶದ ಸಾಂಸ್ಕೃತಿಕ ವೈವಿಧ್ಯ ಪ್ರತಿನಿಧಿಸುವ ಉಡುಪುಗಳನ್ನು ಧರಿಸಿದ್ದ ಕಲಾವಿದರು ಕೆಂಪುಕೋಟೆಯ ಮುಖ್ಯ ವೇದಿಕೆ ಎದುರು ಪ್ರದರ್ಶನ ನೀಡಿದರು. ಹಿನ್ನೆಲೆಯಲ್ಲಿ ದೊಡ್ಡ ಪರದೆಯಲ್ಲಿ ದೀಪಾವಳಿಯ ಸಾಂಸ್ಕೃತಿಕ, ಧಾರ್ಮಿಕ ಶ್ರೀಮಂತಿಕೆ ಸಾರುವ ಚಿತ್ರಗಳು ಮೂಡಿಬಂದವು.
- 'ದೀಪಾವಳಿಯು ಉತ್ತಮ ಆಡಳಿತಕ್ಕೆ ಮಾದರಿ ಎನಿಸುವ ರಾಮ ರಾಜ್ಯದ ಹಬ್ಬವಾಗಿದೆ. ಮುಂದಿನ ದೀಪಾವಳಿ ಸಂದರ್ಭದಲ್ಲಿ ಜನರು ಹೆಚ್ಚುವರಿಯಾಗಿ ಒಂದು ಹಣತೆಯನ್ನು ಬೆಳಗಬೇಕು. ಇದು ಕೃತಜ್ಞತೆ, ಶಾಂತಿ, ಉತ್ತಮ ಆಡಳಿತ ಮತ್ತು ಮಾನವೀಯತೆಯನ್ನು ಪಸರಿಸುವ ದೀಪವಾಗಿರಬೇಕು' ಎಂದು ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೆಖಾವತ್ ಹೇಳಿದರು. ಈ ಬಾರಿ ಯುನೆಸ್ಕೊ 'ಮಾನವ ಕುಲದ ಅಮೂರ್ತ ಸಾಂಸ್ಕೃತಿಕ ಪರಂಪರೆ' ಪಟ್ಟಿಗೆ ಸೇರ್ಪಡೆ ಕೋರಿ 80 ದೇಶಗಳಿಂದ 67 ನಾಮನಿರ್ದೇಶನಗಳು ಸಲ್ಲಿಕೆಯಾಗಿದ್ದವು. ಇರಾಕ್‌ನ ಅಲ್-ಮುಹೈಬಿಸ್, ಜೋರ್ಡನ್‌ನ ಅಲ್-ಮಿಹ್ರಾಸ್ ಟ್ರೀ ಮತ್ತು ಕುವೈತ್‌ನ ಸಾಂಸ್ಕೃತಿಕ ಪ್ರಕಾರವಾದ ದಿವಾನಿಯಾ ಈ ಬಾರಿ ಪಟ್ಟಿಯಲ್ಲಿ ಸ್ಥಾನ ಪಡೆದಿವೆ.

Dr. Rajkumar IAS/KAS

## ❖ ಐವರು ಯಕ್ಷ ಸಾಧಕರು 'ಗೌರವ ಪ್ರಶಸ್ತಿ' ಗೆ ಆಯ್ಕೆ

**ಸಂದರ್ಭ: ಕರ್ನಾಟಕ ಯಕ್ಷಗಾನ ಅಕಾಡೆಮಿಯ 2025ನೇ ಸಾಲಿನ ಪ್ರಶಸ್ತಿಗಳು ಪ್ರಕಟವಾಗಿದ್ದು, 'ಗೌರವ ಪ್ರಶಸ್ತಿ' ಗೆ ತೆಂಕುತಿಟ್ಟು ಕಲಾವಿದ ರೆಂಜಾಳ ರಾಮಕೃಷ್ಣ ರಾವ್ (ಬೆಳ್ತಂಗಡಿ) ಸೇರಿ ಐವರು ಆಯ್ಕೆಯಾಗಿದ್ದಾರೆ.**

- ಉತ್ತರ ಕನ್ನಡ ಜಿಲ್ಲೆಯ ವಿಷ್ಣು ಆಚಾರಿ ಬಳ್ಕೂರು (ಬಡಾಬಡಗು), ಬಂಟ್ವಾಳದ ಡಿ. ಮನೋಹರ್ ಕುಮಾರ್ (ತೆಂಕುತಿಟ್ಟು), ಉಡುಪಿಯ ಮುರಲಿ ಕಡೆಕಾರ್ (ಬಡಗುತಿಟ್ಟು) ಹಾಗೂ ರಾಮನಗರದ ರಮೇಶ್ (ಮೂಡಲಪಾಯ) ಅವರು 'ಗೌರವ ಪ್ರಶಸ್ತಿ' ಗೆ ಭಾಜನರಾಗಿದ್ದಾರೆ. ಈ ಪ್ರಶಸ್ತಿ ತಲಾ ₹ 50 ಸಾವಿರ ನಗದು ಒಳಗೊಂಡಿದೆ.
- 'ಯಕ್ಷಸಿರಿ ವಾರ್ಷಿಕ ಪ್ರಶಸ್ತಿ' ಗೆ ಯಕ್ಷಗಾನ ಕ್ಷೇತ್ರದ 10 ಮಂದಿ ಸಾಧಕರನ್ನು ಆಯ್ಕೆ ಮಾಡಲಾಗಿದೆ. ಕಾಸರಗೋಡಿನ ದಾಸನಡ್ಕ ರಾಮ ಕುಲಾಲ್, ಕುಂದಾಪುರದ ರಾಜೀವ್ ಶೆಟ್ಟಿ ಹೊಸಂಗಡಿ, ಬೆಳ್ತಂಗಡಿಯ ದಾಸಪ್ಪಗೌಡ ಗೇರುಕಟ್ಟೆ, ಮಂಗಳೂರಿನ ಶ್ರೀನಿವಾಸ್ ಸಾಲ್ಯಾನ್, ವೇಣೂರಿನ ಸದಾಶಿವ ಕುಲಾಲ್, ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ಳಾರೆ ಮಂಜುನಾಥ್ ಭಟ್, ಕೇಶವ ಶಕ್ತಿನಗರ, ಲಕ್ಷ್ಮಣಗೌಡ ಬೆಳಾಲ್, ಮೈಸೂರಿನ ಸಣ್ಣ ಮಲ್ಲಯ್ಯ ಹಾಗೂ ತುಮಕೂರಿನ ಎ.ಜಿ. ನಾಗರಾಜು ಅವರು 'ಯಕ್ಷಸಿರಿ ಪ್ರಶಸ್ತಿ' ಗೆ ಆಯ್ಕೆಯಾಗಿದ್ದಾರೆ. ಈ ಪ್ರಶಸ್ತಿಗಳು ತಲಾ ₹ 25 ಸಾವಿರ ನಗದು ಒಳಗೊಂಡಿವೆ.
- 2024ನೇ ಸಾಲಿನ ಪುಸ್ತಕ ಬಹುಮಾನಕ್ಕೆ ಉತ್ತರ ಕನ್ನಡ ಜಿಲ್ಲೆಯ ಅಶೋಕ ಹಾಸ್ಯಗಾರ ಅವರ 'ದಶರೂಪಕಗಳ ದಶಾವತಾರ' , ಕೆರೆಮನೆ ಶಿವಾನಂದ ಹೆಗಡೆ ಅವರ 'ಆಟದ ಮೇಳ' ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಮಣಿಪಾಲ್ ಯೂನಿವರ್ಸಲ್ ಪ್ರೆಸ್‌ನ 'ದೊಡ್ಡ ಸಾಮಗರ ನಾಲ್ಕೊಗ' ಪುಸ್ತಕ ಆಯ್ಕೆಯಾಗಿವೆ.
- 2025ನೇ ಸಾಲಿನ 'ದಿ.ಕರ್ಕಿ ಹಿರಿಯ ಪರಮಯ್ಯ ಹಾಸ್ಯಗಾರ ಪ್ರಶಸ್ತಿ' ಗೆ ಕುಂದಾಪುರದ ದೇವದಾಸ ರಾವ್ ಕೊಡ್ಲಿ ಆಯ್ಕೆಯಾಗಿದ್ದಾರೆ. ಪುಸ್ತಕ ಬಹುಮಾನ ಹಾಗೂ ದತ್ತಿನಿಧಿ ಪ್ರಶಸ್ತಿಯು ತಲಾ ₹ 25 ಸಾವಿರ ನಗದು ಒಳಗೊಂಡಿವೆ.
- '2025ನೇ ಸಾಲಿನ 'ಪಾರ್ತಿಸುಬ್ಬ ಪ್ರಶಸ್ತಿ' ಯನ್ನು ಮುಂದಿನ ದಿನಗಳಲ್ಲಿ ಘೋಷಣೆ ಮಾಡಲಾಗುತ್ತದೆ. ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭವು ಇದೇ 21ರಂದು ಮಧ್ಯಾಹ್ನ 2 ಗಂಟೆಯಿಂದ ಉಡುಪಿಯ ಜನಾರ್ದನ ಮಹಾಕಾಳಿ ದೇವಸ್ಥಾನದಲ್ಲಿ ನಡೆಯಲಿದೆ' ಎಂದು ತಲ್ಲೂರು ಶಿವರಾಮ ಶೆಟ್ಟಿ ತಿಳಿಸಿದರು.
- ಅಕಾಡೆಮಿ ರಿಜಿಸ್ಟ್ರಾರ್ ನಮ್ರತ ಎನ್., ಸದಸ್ಯರಾದ ಕೃಷ್ಣಪ್ಪ ಪೂಜಾರಿ ಕಿನ್ಯಾ, ವಿನಯ ಕುಮಾರ್ ಶೆಟ್ಟಿ, ಸತೀಶ್ ಸಂಕಬೈಲ್ ಉಪಸ್ಥಿತರಿದ್ದರು.

## ❖ ಎಐ ಸಮಿತಿ ಪುನರ್‌ರಚನೆ: ಸುಪ್ರೀಂ

**ಸಂದರ್ಭ: ನ್ಯಾಯಾಂಗದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಪರಿಕರಗಳ ಅಳವಡಿಕೆ, ಅಭಿವೃದ್ಧಿ ಮತ್ತು ನಿಯೋಜನೆಗೆ ಸಂಬಂಧಿಸಿದ ಕ್ರಮಗಳ ಮೇಲ್ವಿಚಾರಣೆಗೆ ಸುಪ್ರೀಂ ಕೋರ್ಟ್‌ನ ಎಐ ಸಮಿತಿಯನ್ನು ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಸೂರ್ಯ ಕಾಂತ್ ಅವರು ಪುನರ್‌ರಚಿಸಿದ್ದಾರೆ.**


- ಸುಪ್ರೀಂ ಕೋರ್ಟ್‌ನ ನ್ಯಾಯ ಮೂರ್ತಿ ಪಿ.ಎಸ್.ನರಸಿಂಹ ಅವರು ಸಮಿತಿಯ ನೇತೃತ್ವ ವಹಿಸಲಿದ್ದಾರೆ. ಮಧ್ಯಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸಂಜೀವ್ ಸಚ್‌ದೇವ, ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ಸೂರಜ್ ಗೋವಿಂದ ರಾಜ್, ಕೇರಳ ಹೈಕೋರ್ಟ್‌ನ ನ್ಯಾಯಮೂರ್ತಿ ರಾಜಾ ವಿಜಯ ರಾಘವನ್ ವಿ, ಹರಿಯಾಣ ಹೈಕೋರ್ಟ್ ನ್ಯಾಯಮೂರ್ತಿ ಅನೂಪ್ ಚಿತ್ಕಾರ ಸದಸ್ಯರಾಗಿರುತ್ತಾರೆ ಎಂದು ಸುಪ್ರೀಂ ಕೋರ್ಟ್ ಪ್ರಕಟಣೆಯಲ್ಲಿ ತಿಳಿಸಿದೆ.
- ಸುಪ್ರೀಂ ಕೋರ್ಟ್‌ನ ರಿಜಿಸ್ಟ್ರಾರ್ (ತಂತ್ರಜ್ಞಾನ) ಅನುಪಮ್ ಪಾತ್ರಾ ಸಮಿತಿಯ ಸದಸ್ಯ (ಕಾರ್ಯದರ್ಶಿ) ಮತ್ತು ಸಂಚಾಲಕರಾಗಿ ಕಾರ್ಯ ನಿರ್ವಹಿಸಲಿ ದ್ದಾರೆ ಮತ್ತು ಇ-ಸಮಿತಿ ಸದಸ್ಯ ಆಶಿಶ್ ಜೆ. ಶಿರಾಧೋಂಕರ್ ವಿಶೇಷ ಆಹ್ವಾನಿತ ರಾಗಿರುತ್ತಾರೆ ಎಂದು ಪ್ರಕಟಣೆ ಹೇಳಿದೆ.

Dr. Rajkumar IAS/KAS Academy

## ❖ ಪ್ರಸ್ತಾವನೆಯ ಆಶಯ, ಆಶಾಭಾವ

**ಸಂದರ್ಭ: ಸಂವಿಧಾನ ರಚನೆಗೆ ಮುಂದಡಿ ಇಡುವುದಕ್ಕೂ ಮೊದಲು ನಮಗೆ ಕೆಲವು ಸ್ಪಷ್ಟತೆಗಳಿರಬೇಕು. ಇಲ್ಲಿಯವರೆಗೆ ನಮಗೆ ನಮ್ಮದೇ ಆದ ಭಾರತದ ಕಲ್ಪನೆಗಳಿದ್ದವು. ಈಗ ಈ ಕಲ್ಪನೆಗಳನ್ನು ಕಾರ್ಯರೂಪಕ್ಕೆ ತರುವ ಹೊಸ್ತಿಲಲ್ಲಿದ್ದೇವೆ. ಮೊದಲು ನಮಗೆ ಈ ಕಲ್ಪನೆಗಳ ಬಗ್ಗೆ ಸ್ಪಷ್ಟತೆ ಇರಬೇಕು, ಇದನ್ನೇ ನಾವು ದೇಶದ ಜನರಿಗೆ ನೀಡಬೇಕು; ಮತ್ತು ಜಗತ್ತಿಗೆ ಕೂಡ. ನಮ್ಮ ಗುರಿ, ನಮ್ಮ ಆಶೋತ್ತರಗಳ ಈ ಸಂಕಲ್ಪವನ್ನು (ರೆಸಲ್ಯೂಷನ್) ನಾನು ನಿಮ್ಮ ಮುಂದಿಡುತ್ತಿದ್ದೇನೆ.**

- ಜವಾಹರಲಾಲ್ ನೆಹರೂ, (ಸಂವಿಧಾನವು ಹೇಗಿರಬೇಕು ಎನ್ನುವ ಬಗ್ಗೆ ನೆಹರೂ ಅವರು 1946ರ ಡಿಸೆಂಬರ್ 13ರಂದು ಸಂವಿಧಾನ ಕರಡು ರಚನಾ ಸಮಿತಿ ಸಭೆಯಲ್ಲಿ ನಿರ್ಣಯ ಮಂಡಿಸಿ ಆಡಿದ ಮಾತು)
- ಸಂವಿಧಾನದ ಪ್ರಸ್ತಾವನೆಯೇ ಸಂವಿಧಾನದ ಸಾರಸತ್ವ, ಆಶಯ. ನಮ್ಮ ದೇಶ, ಅಂದರೆ ನಾವು- ಜನರು ಹೇಗಿರಬೇಕು? ಯಾವ ರೀತಿಯಲ್ಲಿ ಬದುಕಬೇಕು? ದೇಶ ಕಟ್ಟುವ ಬಗೆ ಹೇಗೆ? ನಮ್ಮೆಲ್ಲರ ಕರ್ತವ್ಯದ ಜೊತೆ ಜೊತೆಗೆ ನಮ್ಮ ಹಕ್ಕುಗಳು ಯಾವುವು ಎಂಬುದನ್ನು ವಿವರಿಸುತ್ತಾ, ಸದಾ ಎಚ್ಚರದಲ್ಲಿ ಇರುವಂತೆ ಪ್ರಸ್ತಾವನೆಯು ನಮ್ಮನ್ನು ಪ್ರೇರೇಪಿಸುತ್ತಲೇ ಇರುವ ಶಕ್ತಿಧಾತುವಾಗಿದೆ.



**ಪ್ರಸ್ತಾವನೆ ಸಾರುವುದೇನು?**

**ಭಾರತದ ಜನರಾದ ನಾವು:** ದೇಶದಲ್ಲಿ ಜನರೇ ಸಾರ್ವಭೌಮರು. ಇದು ಜನರಿಂದಲೇ ನಡೆಯುವ ದೇಶ

**ಸಾರ್ವಭೌಮತ್ವ:** ಇತರೆ ಯಾವ ದೇಶದ ನಿಯಂತ್ರಣವೂ ಇಲ್ಲದೆ, ಸ್ವತಂತ್ರ ಆಡಳಿತದ ದೇಶ

**ಸಮಾಜವಾದಿ:** ಖಾಸಗಿ ಕ್ಷೇತ್ರವೇ ಪ್ರಧಾನವಾಗದಂತೆ ಆರ್ಥಿಕ ಚುವಟಿಕೆಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಕ್ಷೇತ್ರಗಳು ಸಮನಾಗಿ ಒಟ್ಟುಗೂಡಿ ದೇಶದ ಆರ್ಥಿಕ ಪ್ರಗತಿಗಾಗಿ ದುಡಿಯುವುದು

**ಜಾತ್ಯತೀತ:** ಎಲ್ಲ ಜಾತಿ, ಧರ್ಮ, ನಂಬಿಕೆಗಳಿಗೂ ಸಮಾನ ಗೌರವ, ಆದರ ನೀಡುವ ದೇಶ

**ಪ್ರಜಾಪ್ರಭುತ್ವವಾದಿ:** ಜನರ ಆಶೋತ್ತರಗಳಿಗೆ ಅನುಗುಣವಾಗಿ ಚುನಾವಣೆ ಮೂಲಕ ಜನರೇ ಆರಿಸಿದ ಸರ್ಕಾರದ ಆಡಳಿತ ಇರುವ ದೇಶ

**ಗಣರಾಜ್ಯ:** ದೇಶದ ಎಲ್ಲ ಸರ್ಕಾರದ ಪ್ರಮುಖರೂ ಜನರಿಂದಲೇ ಆಯ್ಕೆಗೊಂಡು ಆಡಳಿತ ನಡೆಸುವ ದೇಶ

**ನ್ಯಾಯ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ:** ಜಾತಿ, ಧರ್ಮ, ಲಿಂಗ – ಹೀಗೆ ಯಾವ ಆಧಾರದಲ್ಲಿಯೂ ಯಾರನ್ನೂ ತಾರತಮ್ಯದಿಂದ ನೋಡದೆ, ಎಲ್ಲರೂ ಒಂದೇ ಎಂದು ಕಾಣುವ ದೇಶ

**ನಾಗರಿಕ ಸ್ವಾತಂತ್ರ್ಯ:** ಜನರು ಬೇಕಾದ ಜೀವನ ವಿಧಾನವನ್ನು, ತಮ್ಮಿಷ್ಟದ ರಾಜಕೀಯ ಸಿದ್ಧಾಂತ ಅಥವಾ ಅಭಿಪ್ರಾಯವನ್ನು ಇಟ್ಟುಕೊಳ್ಳುವ ಸ್ವಾತಂತ್ರ್ಯ ಇರುವ ದೇಶ

**ಸಮಾನತೆ:** ಜಾತಿ, ಧರ್ಮ, ಲಿಂಗ, ಶ್ರೀಮಂತ, ಬಡವ, ಚರ್ಮದ ಬಣ್ಣ– ಹೀಗೆ ಯಾವ ಆಧಾರದ ಮೇಲೆಯೂ ತಾರತಮ್ಯ ಮಾಡದೆ, ಸಮಾನ ಅವಕಾಶಗಳನ್ನೂ ಸ್ಥಾನಮಾನವನ್ನೂ ನೀಡುವ ದೇಶ

**ಭ್ರಾತೃತ್ವ:** ದೇಶದ ಜನರೊಟ್ಟಿಗೆ ಸಹೋದರತ್ವದಿಂದ ಇರುವ, ವ್ಯಕ್ತಿ ಗೌರವವನ್ನು ಎತ್ತಿ ಹಿಡಿಯುವ ದೇಶ

ಸುದೀರ್ಘ ಚರ್ಚೆಯ ಬಳಿಕ 1949ರ ನವೆಂಬರ್‌ನಲ್ಲಿ ಒಪ್ಪಿಕೊಂಡ ಈ ಪ್ರಸ್ತಾವನೆಯನ್ನು ನಾವು ನಮಗೇ ಸಮರ್ಪಿಸಿಕೊಂಡಿದ್ದೇವೆ.

- ಅಂದು, ಅಮೆರಿಕ ಮತ್ತು ಐರೋಪ್ಯ ದೇಶಗಳ ಸಂವಿಧಾನಗಳು ನಮ್ಮ ಮುಂದಿದ್ದವು. ಇವುಗಳಿಂದ ನಾವು ಹಲವು ಅಂಶಗಳನ್ನು ಪಡೆದುಕೊಂಡಿ ದ್ದೇವೆ. ಆದರೆ, ಭಾರತವು ಆ ಎಲ್ಲ ದೇಶಗಳಿಗಿಂತ ಭಿನ್ನವಾಗಿರುವ ದೇಶ. ನಮ್ಮ ಇತಿಹಾಸ, ಸಂಸ್ಕೃತಿ, ಭಾಷೆ, ವಿವಿಧ ತತ್ವ ಸಿದ್ಧಾಂತಗಳು, ಪರಂಪರೆಗಳು- ಹೀಗೆ ನಮ್ಮದು ವೈವಿಧ್ಯದಲ್ಲಿ ಏಕತೆಯನ್ನು ಪ್ರತಿಪಾದಿಸುವ, ಪ್ರತಿಬಿಂಬಿಸುವ ವೈಶಿಷ್ಟ್ಯ ಪೂರ್ಣ ದೇಶ. ನಮ್ಮಲ್ಲಿ ಬೇರೂರಿರುವ ಜಾತಿ ವ್ಯವಸ್ಥೆ, ಅದರಿಂದ ಉಂಟಾಗಿರುವ ಅಸಮಾನತೆಯೂ ಇದೆ. ಕೋಮುದ್ವೇಷ, ಲಿಂಗ ತಾರತಮ್ಯ, ಮೌಢ್ಯ, ತೀವ್ರ ಬಡತನ ಮತ್ತು ಆರ್ಥಿಕ ಅಸಮಾನತೆ- ಇಂಥ ಸಮಸ್ಯೆಗಳೂ ಇಂದಿನಂತೆಯೇ ಅಂದೂ ನಮ್ಮ ಮುಂದಿದ್ದವು.
- ಸ್ವಾತಂತ್ರ್ಯ ಪಡೆದಾಗ, ಭವಿಷ್ಯವೇ ಇಲ್ಲ, ಭವಿಷ್ಯವನ್ನು ರೂಪಿಸಿಕೊಳ್ಳುವುದು ಸಾಧ್ಯವೇ ಇಲ್ಲವೇನೋ ಅನ್ನುವಂಥ ಸ್ಥಿತಿಯಲ್ಲಿ ಈ ದೇಶವಿತ್ತು. ಹೊಸ ಕನಸುಗಳು, ಭರವಸೆಗಳನ್ನು ದೇಶದ ಜನರಿಗೆ ನೀಡಬೇಕಿತ್ತು. ಜಗತ್ತಿನೆದುರು ಈ ದೇಶವನ್ನು ಹಿಡಿದು ನಿಲ್ಲಿಸಬೇಕಿತ್ತು. ಸಂವಿಧಾನವು ಆ ಮಹೋನ್ನತ ಕಾಯಕಕ್ಕೆ ಬೇಕಾದ ದಾರಿಯೊಂದನ್ನು ತನ್ನ ಪ್ರಸ್ತಾವನೆಯ ಮುಖೇನ ಧಾರೆ ಎರೆದು, ಭಾರತವು ಬಲಶಾಲಿಯಾಗಿ ಬೆಳೆಯುವಂತೆ ಮಾಡಿತು.
- ನಮ್ಮ ಸಂವಿಧಾನ ಹೇಗಿರಬೇಕು ಎಂಬುದನ್ನು ನಿರ್ಧರಿಸಲು ಜವಾಹರಲಾಲ್ ನೆಹರೂ ಅವರು ಮೊದಲಿಗೆ 8 ಅಂಶಗಳಿರುವ ನಿರ್ಣಯ ಒಂದನ್ನು ಸಭೆಯಲ್ಲಿ ಮುಂಡಿಸಿದ್ದರು. ಈ ಅಂಶಗಳನ್ನು ಇಟ್ಟುಕೊಂಡೇ ಪ್ರಸ್ತಾವನೆಯನ್ನೂ ರಚಿಸಲಾಗಿದೆ. ಅವುಗಳಲ್ಲಿ ಕೆಲವು ಇಂತಿವೆ:
- ಈ ದೇಶವು ಸ್ವತಂತ್ರ್ಯ ಸಾರ್ವಭೌಮ ಗಣರಾಜ್ಯವಾಗಬೇಕು
- ಸ್ವತಂತ್ರ ಸಾರ್ವಭೌಮ ಭಾರತದ ಸರ್ಕಾರವು ಜನರಿಂದಲೇ ಆಯ್ಕೆಯಾಗಿರಬೇಕು
- ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯವಾದ ನ್ಯಾಯ, ಎಲ್ಲರಿಗೂ ಸಮಾನ ಅವಕಾಶ, ಕಾನೂನಿನ ಮುಂದೆ ಎಲ್ಲರೂ ಸಮಾನರು. ಯೋಚನೆಯ, ಅಭಿವ್ಯಕ್ತಿಯ, ಯಾವುದೇ ನಂಬಿಕೆಯನ್ನು ಅನುಸರಿಸುವ, ಯಾವುದೇ ದೇವರನ್ನು ಪೂಜಿಸುವ, ಪ್ರವಾಸದ ಸ್ವಾತಂತ್ರ್ಯಇರಬೇಕು

- ಅಲ್ಪಸಂಖ್ಯಾತರು, ಹಿಂದುಳಿದವರು ಮತ್ತು ಆದಿವಾಸಿಗಳು ನೆಲಸಿರುವ ಪ್ರದೇಶಗಳು ಮತ್ತು ಶೋಷಿತರು ಹಾಗೂ ಇತರ ಹಿಂದುಳಿದ ವರ್ಗಗಳಿಗೆ ಅಗತ್ಯ ರಕ್ಷಣೆ ನೀಡಬೇಕು
- ಮಾನವನ ಒಳಿತಿಗೆ, ಜಗತ್ತಿನ ಶಾಂತಿಗಾಗಿ ಭಾರತವು ಕೊಡುಗೆ ನೀಡಲು ಇಚ್ಛಿಸುತ್ತದೆ
- ತಮ್ಮ ನಿರ್ಣಯಕ್ಕೆ ಸಂಬಂಧಿಸಿದಂತೆ ಕೆಲವು ಸದಸ್ಯರ ಆಕ್ಷೇಪಗಳ ಬಗ್ಗೆ ನೆಹರೂ ಅವರು ಸಭೆಯಲ್ಲಿ ಪ್ರಸ್ತಾಪಿಸಿದ್ದರು. 'ಪ್ರಜಾಪ್ರಭುತ್ವ' ಮತ್ತು 'ಸಮಾಜವಾದ' ಎನ್ನುವ ಎರಡು ಪದಗಳನ್ನು ಬಳಸಿಲ್ಲ ಎಂಬುದೇ ಆ ಆಕ್ಷೇಪವಾಗಿತ್ತು. ಇದಕ್ಕೆ ಪ್ರತಿಕ್ರಿಯಿಸಿದ್ದ ನೆಹರೂ, ಈ ಪ್ರಸ್ತಾವನೆಯಲ್ಲಿ ಕೆಲವು ಪಾರಿಭಾಷಿಕ ಪದಗಳನ್ನು ಉದ್ದೇಶಪೂರ್ವಕವಾಗಿಯೇ ಬಳಸಿಲ್ಲ. ಆದರೆ, ನಮ್ಮ ಇಡೀ ನಿರ್ಣಯವು ಈ ಎರಡು ಪರಿಕಲ್ಪನೆಗಳ ಆಧಾರದಲ್ಲಿಯೇ ರೂಪುಗೊಂಡಿದೆ ಎಂದಿದ್ದರು. ಇದಾದ 26 ವರ್ಷಗಳ ಬಳಿಕ ಇಂದಿರಾ ಗಾಂಧಿ ಅವರು ಪ್ರಧಾನಿ ಆಗಿದ್ದ ಸಂದರ್ಭದಲ್ಲಿ ಸಂವಿಧಾನಕ್ಕೆ 42ನೇ ತಿದ್ದುಪಡಿ ತಂದು, ಪ್ರಸ್ತಾವನೆಯಲ್ಲಿ 'ಸಮಾಜವಾದ' ಮತ್ತು 'ಜಾತ್ಯತೀತ' ಪದಗಳನ್ನು ಸೇರಿಸಲಾಯಿತು.

## ❖ ದ್ವೇಷ ಭಾಷಣ ತಡೆ ಮಸೂದೆ ಮಂಡನೆ

**ಸಂದರ್ಭ: ದ್ವೇಷ ಭಾಷಣ ಮತ್ತು ದ್ವೇಷಾಪರಾಧಗಳನ್ನು ನಿರ್ಬಂಧಿಸುವ ಮಸೂದೆಯನ್ನು ಸರ್ಕಾರ ವಿಧಾನಸಭೆಯಲ್ಲಿ ಮಂಡಿಸಿತು.**

- ಧರ್ಮ, ಜನಾಂಗ, ಭಾಷೆ, ಜನ್ಮಸ್ಥಳ, ಜಾತಿ, ಲಿಂಗ ಆಧರಿಸಿ ದ್ವೇಷದ ಭಾಷಣ ಮಾಡುವವರನ್ನು ನಿರ್ಬಂಧಿಸಲು ಈ ಮಸೂದೆ ತರಲಾಗಿದೆ. ದ್ವೇಷಾಪರಾಧ ಎಸಗಿದವರಿಗೆ ಒಂದು ವರ್ಷದಿಂದ ಏಳು ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ₹50 ಸಾವಿರ ದಂಡ ವಿಧಿಸುವ ಅಂಶ ಮಸೂದೆಯ ಭಾಗವಾಗಿದೆ.

**<u>ಮಂಡನೆಯಾದ ಮಸೂದೆಗಳು:</u>**

- ಮಲೆ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಮಸೂದೆ, ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ಮಸೂದೆ, ಔಷಧ ಮತ್ತು ಪ್ರಸಾಧನ ಸಾಮಗ್ರಿ (ತಿದ್ದುಪಡಿ) ಮಸೂದೆ, ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ ತಿದ್ದುಪಡಿ) ಮಸೂದೆ ಸೇರಿ ಒಟ್ಟು 13 ಮಸೂದೆಗಳನ್ನು ಮಂಡಿಸಲಾಯಿತು.
- ಸಂವಿಧಾನ ಒಪ್ಪುವವರು ಮತ್ತು ಸಮಾಜದಲ್ಲಿ ಶಾಂತಿ ಬಯಸುವವರು ಈ ಮಸೂದೆಯನ್ನು ವಿರೋಧಿಸುವುದಿಲ್ಲ. ಯಾವುದೇ ಪಕ್ಷ ಅಥವಾ ಸಂಘಟನೆಯನ್ನು ಗುರಿಯಾಗಿಸಿ ದುರುದ್ದೇಶದಿಂದ ಈ ಮಸೂದೆ ತಂದಿಲ್ಲ. ಧರ್ಮದ ಯಾವುದೇ ಅಂಶ ಮಸೂದೆಯಲ್ಲಿ ಇಲ್ಲ. ಸಮಾಜದ ಸ್ವಾಸ್ಥ್ಯ ಕಾಪಾಡಲು ಈ ಮಸೂದೆ ತರಲಾಗಿದೆ

## ❖ ಫಸಲ್ ಬಿಮಾ: 74 ಲಕ್ಷ ರೈತರು ನೋಂದಣಿ

- ಫಸಲ್ ಬಿಮಾ ಯೋಜನೆ ಜನಪ್ರಿಯವಾಗಿದ್ದು, ಕಳೆದ ಸಾಲಿನಲ್ಲಿ 74 ಲಕ್ಷ ರೈತರು ತಮ್ಮ ಹೆಸರನ್ನು ನೋಂದಣಿ ಮಾಡಿಸಿಕೊಂಡಿದ್ದು, ₹5,534 ಕೋಟಿ ಬೆಳೆ ವಿಮಾ ಮೊತ್ತ ಪಾವತಿ ಮಾಡಲಾಗಿದೆ. ನೋಂದಣಿ ಮಾಡಿಸಿಕೊಳ್ಳುವವರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗಿದೆ. ಈ ಯೋಜನೆಯಡಿ ವಿಮಾ ಕಂತನ್ನು ಸರ್ಕಾರ ಶೇ 98ರಷ್ಟು ಪಾವತಿಸಿದರೆ, ರೈತರು ಶೇ 2ರಷ್ಟು ಪಾವತಿಸಿದರೆ ಸಾಕು.

## ❖ ಸಿಐಸಿ ಆಯ್ಕೆಗೆ ಪ್ರಧಾನಿ ನೇತೃತ್ವದ ಸಮಿತಿ ಸಭೆ

**ಸಂದರ್ಭ: ನೂತನ ಮುಖ್ಯ ಮಾಹಿತಿ ಆಯುಕ್ತರ (ಸಿಐಸಿ) ಆಯ್ಕೆಗೆ ರಚನೆಯಾದ ಪ್ರಧಾನಿ ಮೋದಿ ನೇತೃತ್ವದ ಸಮಿತಿಯು ಸಭೆ ಸೇರಿ ಚರ್ಚೆ ನಡೆಸಿತು.**

- ಸಿಐಸಿ ಮತ್ತು 8 ಮಾಹಿತಿ ಆಯುಕ್ತರ ಆಯ್ಕೆಗೆ ಸಂಬಂಧಿಸಿದಂತೆ ಸಭೆಯಲ್ಲಿ ನಿರ್ಧಾರ ಕೈಗೊಳ್ಳ ಲಾಗಿದ್ದು, ಇದಕ್ಕೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಆಕ್ಷೇಪ ವ್ಯಕ್ತಪಡಿಸಿದ್ದಾರೆ ಎಂದು ತಿಳಿದುಬಂದಿದೆ.
- ಪ್ರಧಾನಮಂತ್ರಿಗಳ ಕಾರ್ಯಾಲಯದಲ್ಲಿ ಒಂದೂವರೆ ತಾಸು ಸಭೆ ನಡೆದಿದ್ದು, ರಾಹುಲ್ ಗಾಂಧಿ, ಗೃಹ ಸಚಿವ ಅಮಿತ್ ಶಾ ಅವರು ಭಾಗಿಯಾಗಿದ್ದರು.

# ಸೂಜಿದುಂಬಿಯ ಹೊಸ ಪ್ರಭೇದ ಗೋಚರ

### ಪಶ್ಚಿಮಘಟ್ಟದ ಸಂಪಾಜೆ ನದಿತೀರ, ಆಗುಂಬೆ ಗುಡ್ಡದಲ್ಲಿ ಕಂಡ 'ಶ್ಯಾಡೊ ಡ್ಯಾಮ್ಸೆಲ್'

• ವಿಕ್ರಂ ಕಾಂತಿಕೆರೆ

ಮಂಗಳೂರು: ಕೊಡಗು ಜಿಲ್ಲೆಯ ಸಂಪಾಜೆ ಮತ್ತು ಶಿವಮೊಗ್ಗ ಜಿಲ್ಲೆಯ ಆಗುಂಬೆಯಲ್ಲಿ ಸೂಜಿದುಂಬಿಯ ಹೊಸ ಪ್ರಭೇದವನ್ನು ಕರ್ನಾಟಕ, ಕೇರಳ ಮತ್ತು ಮಹಾರಾಷ್ಟ್ರದ ಜೀವ ವಿಜ್ಞಾನಿಗಳು ಪತ್ತೆ ಮಾಡಿದ್ದಾರೆ.

ದುಂಬಿ, ಸೂಜಿದುಂಬಿಗಳ ಬಗ್ಗೆ ಅಧ್ಯಯನ ನಡೆಸುತ್ತಿರುವ ಕೇರಳದ ತಲಶ್ಶೇರಿ ಬ್ರನ್ನನ್ ಕಾಲೇಜು ಸಹಾಯಕ ಪ್ರಾಧ್ಯಾಪಕ ಮಹಮ್ಮದ್ ಹನೀಫ್ ಅವರು ಬ್ರಿಟಿಷ್ ಅಧಿಕಾರಿ ಫ್ರೇಜರ್ ಉಲ್ಲೇಖಿಸಿದ್ದ ಚಿಟ್ಟೆಗಳ ಬಗ್ಗೆ ತಿಳಿಯಲು ಸಂಪಾಜೆಗೆ ಹೋಗಿದ್ದಾಗ ಇದು ಪತ್ತೆಯಾಗಿವೆ.

ನೆರಳಿನಲ್ಲಿ ಬದುಕುವ ಇವುಗಳನ್ನು ಕೊಡಗಿನ ಛಾಯಾ ಸುಂದರಿ (ಕೊಡಗು ಶ್ಯಾಡೊ ಡ್ಯಾಮ್ಸೆಲ್) ಎಂದು ಕರೆಯಲಾಗಿದೆ. ಮಂಗಳೂರಿನ ವಿಜ್ಞಾನಿ ಹಾಗೂ ಮಂಗಳೂರು ವಿಶ್ವ ವಿದ್ಯಾಲಯದ ಪ್ರಾಧ್ಯಾಪಕ ರಾಗಿದ್ದ ಎಚ್.ಸೂರ್ಯಪ್ರಕಾಶ್ ಶೆಣೈ ಅವರ ಸ್ಮರಣಾರ್ಥ ಅವುಗಳಿಗೆ 'ಪ್ರೋಟೊಸ್ಟಿಕ್ಟಾ ಸೂರ್ಯಪ್ರಕಾಶಿ' ಎಂಬ ಹೆಸರು ಇರಿಸಲಾಗಿದೆ.

ಬೆಂಗಳೂರಿನ ಜೈವಿಕ ವಿಜ್ಞಾನದ ರಾಷ್ಟ್ರೀಯ ಸಂಶೋಧನಾ ಕೇಂದ್ರದ ಸಂಶೋಧಕ ಕೃಷ್ಣಮೇಘ ಕುಂಟೆ, ಪುಣೆ ಎಂಐಟಿ ಪ್ರಾಧ್ಯಾಪಕ ಪಂಕಜ್ ಕೋಪರ್ಡೆ, ಮಹಮ್ಮದ್ ಹನೀಫ್ ಅವರ ಪತ್ನಿ ಮೈಮೂನತ್ ಬೀವಿ ಮತ್ತು ತ್ರಿಶೂರ್ ಅರಣ್ಯ ಕಾಲೇಜು ಪ್ರಾಧ್ಯಾಪಕ ವಿವೇಕ್ ಚಂದ್ರನ್ ಸಂಶೋಧನೆಯಲ್ಲಿ ತಂಡದಲ್ಲಿದ್ದರು. 'ನ್ಯೂಜಿಲೆಂಡ್‌ನ ಜರ್ನಲ್ ಆಫ್ ಝೂಟ್ಯಾಕ್ಸದ ಡಿಸೆಂಬರ್ ಸಂಚಿಕೆಯಲ್ಲಿ ಲೇಖನ ಪ್ರಕಟಗೊಂಡಿದೆ' ಎಂದು ಮಹಮ್ಮದ್ ಹನೀಫ್ ಅವರು 'ಪ್ರಜಾವಾಣಿ'ಗೆ ತಿಳಿಸಿದರು.

**ಉತ್ತಮ ಪರಿಸರದ ಸೂಚಕ:** ಸೂಜಿ ದುಂಬಿಗಳು ಶುದ್ಧನೀರು ಇದ್ದಲ್ಲಿ ವಾಸಿಸುತ್ತವೆ. ಸೊಳ್ಳೆ, ಸಣ್ಣ ಕೀಟ ಭಕ್ಷಿಸುತ್ತವೆ. ಈ ದುಂಬಿಗಳ ಸಂಖ್ಯೆ ಕಡಿಮೆಯಾದರೆ ಪರಿಸರದ ಸಮತೋಲನವು ತಪ್ಪಿದೆ ಎಂದು ನಾವು ಊಹಿಸಬಹುದು ಎಂದು ಮಹಮ್ಮದ್ ಹನೀಫ್ ಅವರು ವಿವರಿಸಿದರು.



ಪ್ರೊಟೊಸ್ಟಿಕ್ಟ ಸೂರ್ಯಪ್ರಕಾಶಿ ಸೂಜಿದುಂಬಿ




ಸಂಪಾಜೆಯಲ್ಲಿ ಹೊಸ ಬಗೆಯ ದುಂಬಿಯನ್ನು ಕಂಡ ನಂತರ ದುಂಬಿಗಳ ಬಗ್ಗೆ ಜ್ಞಾನವುಳ್ಳ ವಿವೇಕ್ ಚಂದ್ರನ್ ಕರೆದುಕೊಂಡು ಹೋದೆ. ಇದು ಹೊಸ ಸಂಶೋಧನೆಗೆ ಹಾದಿಯನ್ನು ಒದಗಿಸಿತು.

**ಮುಹಮ್ಮದ್ ಹನೀಫ್**

ಸಹಾಯಕ ಪ್ರಾಧ್ಯಾಪಕ.




## ❖ ದೀಪಾವಳಿಗೆ ಯುನೆಸ್ಕೊ ಪ್ರಭೆ



# ದೀಪಾವಳಿಗೆ ಯುನೆಸ್ಕೊ ಪ್ರಭೆ

**ಈವರೆಗೆ ಈ ಪಟ್ಟಿಗೆ ಸೇರ್ಪಡೆಗೊಂಡ ಭಾರತದ ಕಲೆ/ ಆಚರಣೆಗಳು (ಸೇರ್ಪಡೆಯಾದ ವರ್ಷ)**

ದೀಪಾವಳಿ ಭಾರತದ ಪ್ರಮುಖ ಹಬ್ಬ. ಕತ್ತಲಿನ ಮೇಲೆ ಬೆಳಕಿನ ವಿಜಯವನ್ನು ಸಂಕೇತಿಸುವ ಈ ಹಬ್ಬಕ್ಕೆ ಜಾಗತಿಕ ಮನ್ನಣೆ ದೊರಕಿದೆ. ದೀಪಾವಳಿಯನ್ನು 'ಮಾನವಕುಲದ ಅಮೂರ್ತ ಸಾಂಸ್ಕೃತಿಕ ಪರಂಪರೆ' ಎಂದು ಯುನೆಸ್ಕೊ ಗುರುತಿಸಿದೆ. ಹಬ್ಬಕ್ಕೆ ಸಂಬಂಧಿಸಿದ ಆಚರಣೆಗಳನ್ನು ರಕ್ಷಿಸುವ ದಿಸೆಯಲ್ಲಿ ಮತ್ತು ಭವಿಷ್ಯದ ತಲೆಮಾರುಗಳಿಗೆ ಅದನ್ನು ದಾಟಿಸುವ ದೃಷ್ಟಿಯಿಂದ ಈ ಮನ್ನಣೆಯು ಮುಖ್ಯಪಾತ್ರ ವಹಿಸಲಿದೆ ಎನ್ನುವ ವಿಶ್ವಾಸ ವ್ಯಕ್ತವಾಗಿದೆ

ಪ್ರಜಾವಾಣಿ ವಾರ್ತೆ

ದೇಶದ ವಿವಿಧ ಭಾಗಗಳಲ್ಲಿ ವಿವಿಧ ರೀತಿಯಲ್ಲಿ ಆಚರಿಸಲ್ಪಡುವ ದೀಪಾವಳಿಯು ಜನರ ಬದುಕು, ಭಾವನೆ, ಪುರಾಣ, ಐತಿಹ್ಯಗಳೊಂದಿಗೆ ನಂಟು ಹೊಂದಿದ್ದು, ಅತ್ಯಂತ ಸಂಭ್ರಮದಿಂದ ಆಚರಿಸುವ ಹಬ್ಬವಾಗಿದೆ. ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆಯು (ಯುನೆಸ್ಕೊ) ದೀಪಾವಳಿಯನ್ನು 'ಮಾನವಕುಲದ ಅಮೂರ್ತ ಸಾಂಸ್ಕೃತಿಕ ಪರಂಪರೆ'ಯ ಪಟ್ಟಿಗೆ ಸೇರಿಸಿದೆ. ಯುನೆಸ್ಕೊದಿಂದ ಈ ಗೌರವಕ್ಕೆ ಪಾತ್ರವಾಗಿರುವ ಭಾರತದ 16ನೇ ಸಾಂಸ್ಕೃತಿಕ ಕಲೆ/ ಆಚರಣೆ ಇದು. ದೆಹಲಿಯ ಕೆಂಪುಕೋಟೆಯಲ್ಲಿ ನಡೆದ ಯುನೆಸ್ಕೊದ ಅಂತರಸರ್ಕಾರಿ ಸಮಿತಿಯ 20ನೇ ಅಧಿವೇಶನದಲ್ಲಿ ಈ ಘೋಷಣೆಯನ್ನು ಮಾಡಲಾಗಿದೆ.

ಪರಂಪರೆ ಎಂದರೆ, ಕೇವಲ ಕಟ್ಟಡ ಅಥವಾ ಸ್ಮಾರಕ ಅಲ್ಲ; ಜೀವಂತ ಆಚರಣೆಗಳೂ ಅದರ ಭಾಗವಾಗಿವೆ. ಜಾನಪದ, ಸಾಮಾಜಿಕ ಆಚರಣೆ, ಹಬ್ಬ, ಪ್ರಕೃತಿಗೆ ಸಂಬಂಧಿಸಿದ ಆಚರಣೆಗಳೂ ಸಾಂಸ್ಕೃತಿಕ ಪರಂಪರೆಯಲ್ಲಿರುತ್ತವೆ. ಅವುಗಳನ್ನು ಸಂರಕ್ಷಿಸಿ, ಮುಂದಿನ ತಲೆಮಾರುಗಳಿಗೆ ಕೊಂಡೊಯ್ಯುವ ದಿಸೆಯಲ್ಲಿ ಸಮುದಾಯಗಳನ್ನು, ಸರ್ಕಾರಗಳನ್ನು ಉತ್ತೇಜಿಸುವುದು ಈ ಮನ್ನಣೆಯ ಮುಖ್ಯ ಧ್ಯೇಯ.

ದೀಪಾವಳಿ ಬೆಳಕಿನ ಹಬ್ಬ. ದೇಶದಾದ್ಯಂತ ವಿಭಿನ್ನ ಸಮುದಾಯಗಳು, ವ್ಯಕ್ತಿಗಳು ಹಬ್ಬವನ್ನು ಭಿನ್ನ ರೀತಿಯಲ್ಲಿ ಆಚರಿಸುತ್ತಾರೆ. ಅಕ್ಟೋಬರ್ ಅಥವಾ ನವೆಂಬರ್ (ಕಾರ್ತಿಕ) ಮಾಸದಲ್ಲಿ ಆಚರಿಸಲಾಗುವ ಈ ಹಬ್ಬವನ್ನು ಹಟ್ಟಿ ಹಬ್ಬ ಎಂದೂ ಕರೆಯಲಾಗುತ್ತದೆ. ಕತ್ತಲೆಯ ಮೇಲೆ ಬೆಳಕಿನ, ಕೇಡಿನ ವಿರುದ್ಧ ಒಳಿತಿನ ವಿಜಯವನ್ನು ಹಬ್ಬವು ಸಂಕೇತಿಸುತ್ತದೆ. ಕಾಲಾತೀತವಾದ ಹಬ್ಬವಾಗಿರುವ ದೀಪಾವಳಿಯನ್ನು ಭಾರತವಷ್ಟೇ ಅಲ್ಲದೆ ಜಗತ್ತಿನ ಹಲವು ಭಾಗಗಳಲ್ಲಿಯೂ ಆಚರಿಸಲಾಗುತ್ತದೆ.

ಹಬ್ಬದ ಸಂದರ್ಭದಲ್ಲಿ ಮನೆಗಳನ್ನು, ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸಿ, ಸಿಂಗರಿಸಲಾಗುತ್ತದೆ. ಮನೆ, ಅಂಗಳದಲ್ಲಿ ದೀಪಗಳನ್ನು ಹಚ್ಚಿ ಮನೆಮಂದಿಯೆಲ್ಲಾ ಸಂಭ್ರಮಿಸುತ್ತಾರೆ. ಪಟಾಕಿಗಳನ್ನು ಸಿಡಿಸಿ, ಸಮೃದ್ಧಿಗಾಗಿ ಪ್ರಾರ್ಥಿಸುತ್ತಾರೆ. ಸಾಮಾಜಿಕ ಬಂಧಗಳನ್ನು ಗಟ್ಟಿಗೊಳಿಸುವ, ಒಳಗೊಳ್ಳುವಿಕೆಯನ್ನು ಹೆಚ್ಚು ಮಾಡುವ, ಕರುಣೆ, ಕೃತಜ್ಞತೆ ಮತ್ತು ಭರವಸೆಯಂಥ ಮೌಲ್ಯಗಳನ್ನು ಬಿತ್ತುವ ಶಕ್ತಿ ಹಬ್ಬಕ್ಕಿದೆ. ಸ್ಥಳೀಯ ಆರ್ಥಿಕತೆ ಮತ್ತು ಸೃಜನಶೀಲ ಅಭಿವ್ಯಕ್ತಿಯನ್ನೂ ದೀಪಾವಳಿ ಉತ್ತೇಜಿಸುತ್ತದೆ ಎಂದು ಭಾರತ ಸರ್ಕಾರವು ಯುನೆಸ್ಕೊಗೆ ಮಾಡಿದ್ದ ನಾಮ ನಿರ್ದೇಶನದಲ್ಲಿ ಪ್ರತಿಪಾದಿಸಿತ್ತು.

ದೀಪಾವಳಿಯು ಜನರು, ಕುಟುಂಬಗಳು ಮತ್ತು ಸಮುದಾಯಗಳು ಒಟ್ಟಿಗೆ ಸೇರುವ, ಉಡುಗೊರೆ, ಸಿಹಿ ಪದಾರ್ಥಗಳನ್ನು ವಿನಿಮಯ ಮಾಡಿಕೊಳ್ಳುವ ಸಮಯವಾಗಿದೆ. ಜತೆಗೆ, ಒಟ್ಟಿಗೆ ಊಟ ಸವಿಯುವುದು, ಸಂಗೀತ, ನೃತ್ಯ ಮತ್ತು ಆಚರಣೆಗಳನ್ನೂ ಇದು ಒಳಗೊಂಡಿದೆ. ಸಂಪ್ರದಾಯಗಳನ್ನು ಹೇಗೆ ವಿಧ್ಯುಕ್ತವಾಗಿ ಪಾಲಿಸಬೇಕು ಎನ್ನುವ ಜ್ಞಾನವು ತಲೆಮಾರುಗಳಿಂದ ತಲೆಮಾರಿಗೆ ಅನೌಪಚಾರಿಕವಾಗಿ, ಕಥೆಗಳ ಮೂಲಕ, ಪ್ರತ್ಯಕ್ಷ ಕಲಿಕೆಯ ಮೂಲಕ ಹರಿದುಬರುತ್ತಲೇ ಇದೆ. ದೇವಾಲಯಗಳು, ಶಾಲೆಗಳು, ಸಾಂಸ್ಕೃತಿಕ ಸಂಘಟನೆಗಳು ಮತ್ತು ಡಿಜಿಟಲ್ ವೇದಿಕೆಗಳು ಹಬ್ಬದ ಸಂಪ್ರದಾಯವನ್ನು ಕಾಪಾಡುವಲ್ಲಿ ಮತ್ತು ಪ್ರಚಾರ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಎಂಬ ಪ್ರತಿಪಾದನೆಯನ್ನು ಯುನೆಸ್ಕೊ ಉಲ್ಲೇಖಿಸಿದೆ.

### ಏನೇನು ಪ್ರಯೋಜನ?

- ಸ್ಥಳೀಯ ಆಚರಣೆಗಳ ದಾಖಲೀಕರಣ; ಸಂಪ್ರದಾಯಗಳ ರಕ್ಷಣೆಗೆ ಸಮುದಾಯದ ಮುಖಂಡರನ್ನು ಬೆಂಬಲಿಸುವುದು ಮತ್ತು ನಿಯಮಗಳನ್ನು ರೂಪಿಸುವುದು (ಉದಾಹರಣೆಗೆ, ಪಟಾಕಿಗಳನ್ನು ಸಿಡಿಸುವುದಕ್ಕೆ ಸಂಬಂಧಿಸಿ ಸಂಪ್ರದಾಯವನ್ನು ಪಾಲಿಸುತ್ತಲೇ ಪರಿಸರ ಮತ್ತು ಜನರ ರಕ್ಷಣೆಯ ವಿಚಾರಕ್ಕೆ ಗಮನ ಕೊಡುವುದು)
- ಆಚರಣೆಗಳಲ್ಲಿ ಸಮುದಾಯದ ಸಕ್ರಿಯ ಪಾಲ್ಗೊಳ್ಳುವಿಕೆ, ಪ್ರಸಾರ, ರಕ್ಷಣಾ ಕ್ರಮಗಳನ್ನು ಗುರುತಿಸಿ, ಅವುಗಳನ್ನು ಜಾಗತಿಕ ಮಟ್ಟದಲ್ಲಿ ಪ್ರತಿಬಿಂಬಿಸುವುದು ಮತ್ತು ರಕ್ಷಣೆಗೆ ಸಹಕಾರ ನೀಡುವುದು
- ಸಮುದಾಯದ ಸಹಭಾಗಿತ್ವ, ಸಾಂಸ್ಕೃತಿಕ ಪರಂಪರೆ ಮತ್ತು ವೈವಿಧ್ಯವನ್ನು ಗುರುತಿಸುವುದು
- ಹಬ್ಬದ ಸಂಪ್ರದಾಯಗಳನ್ನು, ಆಚರಣೆಗಳನ್ನು ಉಳಿಸಿ ಬೆಳೆಸಲು ನೆರವು

ಆಧಾರ: ಯುನೆಸ್ಕೊ ಇನ್‌ಟ್ಯಾಂಜಿಬಲ್ ಕಲ್ಚರಲ್ ಹೆರಿಟೇಜ್, ಪಿಟಿಐ, ಪಿಐಬಿ
ಚಿತ್ರಗಳು: ಸಂಸ್ಕೃತಿ ಸಚಿವಾಲಯ, ಸಂಗೀತ ನಾಟಕ ಅಕಾಡೆಮಿ

### ಆಯ್ಕೆ ಪ್ರಕ್ರಿಯೆ ಹೇಗೆ?

ಯುನೆಸ್ಕೊ, ಪ್ರಾಚ್ಯ ವಸ್ತು ಸ್ಮಾರಕಗಳು, ಪಾರಂಪರಿಕ ಕಟ್ಟಡಗಳು, ನೈಸರ್ಗಿಕವಾದ ಪ್ರವಾಸಿ ತಾಣಗಳಿಗೆ ಪಾರಂಪರಿಕ ತಾಣ ಎಂಬ ಮಾನ್ಯತೆ ನೀಡುತ್ತದೆ. ಅದೇ ಮಾದರಿಯಲ್ಲಿ ಚಾಲ್ತಿಯಲ್ಲಿಯಲ್ಲಿರುವ ಸಂಪ್ರದಾಯಗಳು, ಆಚರಣೆಗಳು, ಸಾಮಾಜಿಕ ಪದ್ಧತಿಗಳನ್ನು ಆಯ್ಕೆ ಮಾಡಿ ಅವುಗಳನ್ನು 'ಮಾನವಕುಲದ ಸಾಂಸ್ಕೃತಿಕ ಪರಂಪರೆ'ಯ ಪಟ್ಟಿಗೆ ಸೇರಿಸಲಾಗುತ್ತದೆ.

ಮೌಖಿಕ ಸಂಪ್ರದಾಯಗಳು, ಪ್ರದರ್ಶನ ಕಲೆಗಳು, ಸಾಮಾಜಿಕ/ಧಾರ್ಮಿಕ ಆಚರಣೆಗಳು/ಹಬ್ಬ/ಉತ್ಸವಗಳು, ಪ್ರಕೃತಿ/ಸಾರ್ವತ್ರಿಕ ಜ್ಞಾನ ಮತ್ತು ಸಾಂಪ್ರದಾಯಿಕ ಕರಕುಶಲ ಕಲೆಗಳನ್ನು ಈ ಮಾನ್ಯತೆ ನೀಡಲು ಯುನೆಸ್ಕೊ ಪರಿಗಣಿಸುತ್ತದೆ. ಸದ್ಯ, 140 ದೇಶಗಳ 700 ಕಲೆ/ ಆಚರಣೆ/ಉತ್ಸವಗಳು/ ಸಾಂಸ್ಕೃತಿಕ ಪರಂಪರೆಗಳ ಪಟ್ಟಿಯಲ್ಲಿ ಸ್ಥಾನ ಪಡೆದಿವೆ. ಇದರಲ್ಲಿ ಭಾರತದ 16 ಕಲೆ/ ಆಚರಣೆಗಳು ಸೇರಿವೆ.

ಈ ಪಟ್ಟಿಗೆ ಆಯ್ಕೆಯಾಗಬೇಕಾದರೆ ಯಾವುದೇ ಆಚರಣೆಯು ಪ್ರಮುಖವಾಗಿ ಮೂರು ಮಾನದಂಡಗಳಿಗೆ ಹೊಂದುವಂತಿರಬೇಕು. ಎಲ್ಲರನ್ನೂ ಒಳಗೊಳ್ಳುವಂತಿರಬೇಕು, ಪ್ರಾತಿನಿಧಿಕರವಾಗಿರಬೇಕು ಮತ್ತು ಸಮುದಾಯ ಆಧಾರಿತವಾಗಿರಬೇಕು. ಸಮುದಾಯಗಳಲ್ಲಿ ಜೀವಂತವಾಗಿರುವ ಸಂಪ್ರದಾಯ, ಆಚರಣೆಗಳನ್ನು ಸಂರಕ್ಷಿಸಿ, ಮುಂದಿನ ತಲೆಮಾರುಗಳಿಗೂ ಅದನ್ನು ತಲುಪಿಸುವ ಉದ್ದೇಶವೂ ಇದರ ಹಿಂದೆ ಅಡಗಿದೆ.

**ನಾಮನಿರ್ದೇಶನ:** ನಿರ್ದಿಷ್ಟ ಕಲೆ/ಆಚರಣೆಯನ್ನು ಈ ಪಟ್ಟಿಗೆ ಸೇರಿಸುವ ಬಗ್ಗೆ ಆಯಾ ದೇಶಗಳು ಯುನೆಸ್ಕೊಗೆ ನಾಮ ನಿರ್ದೇಶನ ಮಾಡಬೇಕು. ಭಾರತವು 2023ರಲ್ಲಿ ದೀಪಾವಳಿಯನ್ನು ಪಟ್ಟಿಗೆ ಸೇರಿಸುವಂತೆ ನಾಮ ನಿರ್ದೇಶನ ಮಾಡಿತ್ತು.

ಇದಕ್ಕಾಗಿ ಸಂಗೀತ ನಾಟಕ ಅಕಾಡೆಮಿಯು ವಿದ್ವಾಂಸರು, ಕಲಾವಿದರು, ಲೇಖಕರು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ತೊಡಗಿರುವ ತಜ್ಞರ ಸಮಿತಿಯೊಂದನ್ನು ರಚಿಸಿತ್ತು. ಸಮಿತಿಯು ಆದಿವಾಸಿಗಳು, ಲಿಂಗತ್ವ ಅಲ್ಪಸಂಖ್ಯಾತರು, ಕೃಷಿಕರು, ಕಲಾವಿದರು, ಧಾರ್ಮಿಕ ಸಂಘಟನೆಗಳು ಸೇರಿದಂತೆ ದೇಶದಾದ್ಯಂತ ವಿವಿಧ ಸಮುದಾಯಗಳನ್ನು ಸಂಪರ್ಕಿಸಿ ಅಭಿಪ್ರಾಯಗಳನ್ನು ಸಂಗ್ರಹಿಸಿತ್ತು. ದೀಪಾವಳಿಯ ಸಾಂಸ್ಕೃತಿಕ ಮಹತ್ವ, ಅದರ ವೈವಿಧ್ಯ, ವಿವಿಧ ಸಮುದಾಯಗಳಲ್ಲಿ ಅದನ್ನು ಆಚರಿಸುವ ರೀತಿ ಸೇರಿದಂತೆ ಈ ಹಬ್ಬಕ್ಕೆ ಸಂಬಂಧಿಸಿದ ಎಲ್ಲ ವಿವರಗಳನ್ನೂ ದಾಖಲು ಮಾಡಿಕೊಂಡಿತ್ತು.

1. ಕೂಡಿಯಾಟ್ಟಂ: ಕೇರಳದ ಸಂಸ್ಕೃತ ರಂಗಕಲೆ (2008)
2. ವೇದ ಮಂತ್ರ ಘೋಷದ ಸಂಪ್ರದಾಯ (2008)
3. ರಾಮ್‌ಲೀಲಾ: ಸಾಂಪ್ರದಾಯಿಕ ರಾಮಾಯಣ ಪ್ರದರ್ಶನ ಕಲೆ (2008)
4. ರಮ್ಮಣ್: ಉತ್ತರಾಖಂಡದ ಗಡವಾಲ್ ಪ್ರಾಂತ್ಯದಲ್ಲಿ ಚಾಲ್ತಿಯಲ್ಲಿರುವ ಧಾರ್ಮಿಕ ಉತ್ಸವ (2009)
5. ಛವೂ ನೃತ್ಯ: ಉತ್ತರ ಭಾರತದ ಜಾರ್ಖಂಡ್, ಒಡಿಶಾ ಇನ್ನಿತರ ರಾಜ್ಯಗಳಲ್ಲಿ ಚಾಲ್ತಿಯಲ್ಲಿರುವ ರಾಮಾಯಣ ಆಧಾರಿತ ನೃತ್ಯ ಪ್ರಕಾರ (2010)
6. ರಾಜಸ್ಥಾನದ ಕಾಲ್‌ಬೆಲಿಯಾ ಜಾನಪದ ಹಾಡುಗಳು ಮತ್ತು ನೃತ್ಯಗಳು (2010)
7. ಮುಡಿಯೇಟ್ಟು: ಕೇರಳದಲ್ಲಿ ಪ್ರಚಲಿತದಲ್ಲಿರುವ ಧಾರ್ಮಿಕ ರಂಗ ಮತ್ತು ನೃತ್ಯ ಕಲೆ (2010)
8. ಲಡಾಖ್‌ನಲ್ಲಿ ಬೌದ್ಧ ಭಿಕ್ಕುಗಳು ಮಾಡುವ ಮಂತ್ರಘೋಷ (2012)
9. ಸಂಕೀರ್ತನ: ಮಣಿಪುರದಲ್ಲಿ ಚಾಲ್ತಿಯಲ್ಲಿರುವ, ಕೃಷ್ಣನಿಗೆ ಸಂಬಂಧಿಸಿದ ಗೀತೆಗಳನ್ನು ಚರ್ಮ ವಾದ್ಯ ಸೇರಿದಂತೆ ವಿವಿಧ ಸಂಗೀತ ಪರಿಕರಗಳನ್ನು ನುಡಿಸುವುದರ ಜೊತೆಗೆ ನೃತ್ಯ ಮಾಡುವ ಆಚರಣೆ (2013)
10. ಪಂಜಾಬ್‌ನ ಜಂಡಿಯಾಲಾ ಗುರು ಗ್ರಾಮದಲ್ಲಿ ಠಠೇರ ಸಮುದಾಯದವರು ತಾಮ್ರ ಮತ್ತು ಕಂಚಿನಿಂದ ಪಾತ್ರೆ ಹಾಗೂ ಇತರ ಪರಿಕರಗಳನ್ನು ತಯಾರಿಸುವ ಸಾಂಪ್ರದಾಯಿಕ ಕರಕುಶಲ ಕಲೆ (2014)
11. ಯೋಗ (2016)
12. ಕುಂಭಮೇಳ (2017)
13. ಕೋಲ್ಕತ್ತದ ದುರ್ಗಾ ಪೂಜೆ (2021)
14. ಗುಜರಾತ್‌ನ ಗರ್ಬಾ ನೃತ್ಯ (2023)
15. ನೌವ್‌ರೋಜ್: ಭಾರತದಲ್ಲಿ ಪಾರ್ಸಿಗಳು ಆಚರಿಸುವ ಹೊಸ ವರ್ಷದ ಮೊದಲ ದಿನ (2024)

## ❖ ಜಿಡಿಪಿ ಅಂದಾಜು ಪರಿಷ್ಕರಿಸಿದ ಎಡಿಬಿ

**ಸಂದರ್ಭ: ಪ್ರಸಕ್ತ ಆರ್ಥಿಕ ವರ್ಷದಲ್ಲಿ ದೇಶದ ಒಟ್ಟು ಆಂತರಿಕ ಉತ್ಪಾದನೆಯ (ಜಿಡಿಪಿ) ಬೆಳವಣಿಗೆ ದರ ಶೇ 7.2ರಷ್ಟು ಇರಲಿದೆ ಎಂದು ಏಷ್ಯಾ ಅಭಿವೃದ್ಧಿ ಬ್ಯಾಂಕ್ (ಎಡಿಬಿ) ಅಂದಾಜಿಸಿದೆ.**




- ಈ ಮೊದಲು ಅದು ಜಿಡಿಪಿ ಬೆಳವಣಿಗೆ ಶೇ 6.5ರಷ್ಟಾಗಲಿದೆ ಎಂದು ಹೇಳಿತ್ತು. ಈಗ ಅಂದಾಜನ್ನು ಪರಿಷ್ಕರಿಸಿದ್ದು, ಶೇ 0.7ರಷ್ಟು ಹೆಚ್ಚಿಸಿದೆ. ಈ ಮೊದಲಿನ ಅಂದಾಜಿನಂತೆ 2026–27ರಲ್ಲಿ ಜಿಡಿಪಿ ಬೆಳವಣಿಗೆ ಶೇ 6.5ರಷ್ಟು ಇರಲಿದೆ ಎಂದು ಹೇಳಿದೆ.
- ದೇಶದಲ್ಲಿ ಹೆಚ್ಚಿದ ಬೇಡಿಕೆ ಮತ್ತು ಆದಾಯ ತೆರಿಗೆ ವಿನಾಯಿತಿಯು ಜಿಡಿಪಿ ಪರಿಷ್ಕರಣೆಗೆ ನೆರವಾಗಿವೆ ಎಂದು ಹೇಳಿದೆ.

## ❖ ದೇಶದಲ್ಲಿ 2 ಲಕ್ಷ ನವೋದ್ಯಮ

**ಸಂದರ್ಭ: ದೇಶದಲ್ಲಿ ಮಾನ್ಯತೆ ಪಡೆದ ಎರಡು ಲಕ್ಷಕ್ಕೂ ಅಧಿಕ ನವೋದ್ಯಮಗಳು ಇವೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ.**

- ಸ್ಟಾರ್ಟ್‌ಅಪ್ ಇಂಡಿಯಾ ಕ್ರಿಯಾ ಯೋಜನೆ ಅಡಿಯಲ್ಲಿ ಈ ನವೋದ್ಯಮಗಳು ತೆರಿಗೆ ಪ್ರೋತ್ಸಾಹಕ್ಕೆ ಅರ್ಹತೆ ಹೊಂದಿರುತ್ತವೆ ಎಂದು ತಿಳಿಸಿದೆ.

- ಕೈಗಾರಿಕೆ ಮತ್ತು ಆಂತರಿಕ ವ್ಯಾಪಾರ ಉತ್ತೇಜನಾ ಇಲಾಖೆಯು (ಡಿಪಿಐಐಟಿ) ಇದುವರೆಗೆ 2,01,335 ನವೋದ್ಯಮಗಳನ್ನು ಗುರುತಿಸಿದೆ. ಈ ನವೋದ್ಯಮಗಳು ದೇಶದಲ್ಲಿ 21 ಲಕ್ಷಕ್ಕೂ ಅಧಿಕ ಉದ್ಯೋಗಗಳನ್ನು ಸೃಷ್ಟಿಸಿದೆ ಎಂದು ತಿಳಿಸಿದೆ.
- 14 ವಲಯಗಳಲ್ಲಿ ಉತ್ಪಾದನೆ ಆಧಾರಿತ ಉತ್ತೇಜನ (ಪಿಎಲ್ಐ) ಯೋಜನೆಯ ಅಡಿ ಪ್ರಸಕ್ತ ಜೂನ್‌ವರೆಗೆ ₹1.88 ಲಕ್ಷ ಕೋಟಿಗೂ ಹೆಚ್ಚು ಹೂಡಿಕೆ ಆಗಿದೆ.
- ಇದರ ಪರಿಣಾಮವಾಗಿ ₹17 ಲಕ್ಷ ಕೋಟಿ ಮೌಲ್ಯದಷ್ಟು ಹೆಚ್ಚುವರಿ ಉತ್ಪಾದನೆ ಅಥವಾ ಮಾರಾಟ ಆಗಿದೆ. 12.3 ಲಕ್ಷದಷ್ಟು ಪ್ರತ್ಯಕ್ಷ ಮತ್ತು ಪರೋಕ್ಷ ಉದ್ಯೋಗ ಸೃಷ್ಟಿಯಾಗಿದೆ. ಎಲೆಕ್ಟ್ರಾನಿಕ್ಸ್, ಔಷಧ, ದೂರಸಂಪರ್ಕ ಮತ್ತು ಆಹಾರ ಸಂಸ್ಕರಣೆ ವಲಯದ ರಫ್ತು ₹7.5 ಲಕ್ಷ ಕೋಟಿ ದಾಟಿದೆ ಎಂದು ತಿಳಿಸಿದೆ.
- ₹67 ಲಕ್ಷ ಕೋಟಿ ಎಫ್‌ಡಿಐ: ಕಳೆದ 11 ಆರ್ಥಿಕ ವರ್ಷದಲ್ಲಿ ಭಾರತವು, ₹67.28 ಲಕ್ಷ ಕೋಟಿಯಷ್ಟು ವಿದೇಶಿ ನೇರ ಹೂಡಿಕೆ (ಎಫ್‌ಡಿಐ) ಆಕರ್ಷಿಸಿದೆ. 2002–03ರಿಂದ 2013–14ರವರೆಗೆ ₹27.72 ಲಕ್ಷ ಕೋಟಿ ಹೂಡಿಕೆ ಆಗಿತ್ತು. ಇದಕ್ಕೆ ಹೋಲಿಸಿದರೆ ವಿದೇಶಿ ನೇರ ಹೂಡಿಕೆ ಪ್ರಮಾಣವು ಶೇ 143ರಷ್ಟು ಏರಿಕೆ ಆಗಿದೆ ಎಂದು ತಿಳಿಸಿದೆ.

## ❖ 'ಅರ್ಜಿಗಳ ತ್ವರಿತ ವಿಲೇವಾರಿಗೆ ಸೂಚನೆ' : ಪಿಎಂಎಫ್‌ಎಂಇ ಯೋಜನೆಯಡಿ ಸಾಲ ಮಂಜೂರಾತಿ

**ಸಂದರ್ಭ: ಪಿಎಂಎಫ್‌ಎಂಇ ಯೋಜನೆಯಡಿ ಸಾಲ ನೀಡುವಾಗ ಫಲಾನುಭವಿಗಳ ಸಿಬಿಲ್ ಸ್ಕೋರ್ ಅನ್ನು ಬ್ಯಾಂಕ್‌ಗಳು ಪರಿಗಣಿಸುವಂತಿಲ್ಲ, ಕೆಪೆಕ್ ವ್ಯವಸ್ಥಾಪಕ ನಿರ್ದೇಶಕ.**

- 'ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಯೋಜನೆಯಡಿ (ಪಿಎಂಎಫ್‌ಎಂಇ) ಸಹಾಯಧನ ಪಡೆಯಲು ಬ್ಯಾಂಕ್‌ಗಳಿಗೆ ಸಲ್ಲಿಸಿರುವ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಬೇಕು' ಎಂದು ರಾಜ್ಯಮಟ್ಟದ ಬ್ಯಾಂಕರ್‌ಗಳ ಸಮಿತಿಯ (ಎಸ್‌ಎಲ್‌ಬಿಸಿ) ಸಂಚಾಲಕ ಎಂ. ಭಾಸ್ಕರ್ ಚಕ್ರವರ್ತಿ, ಕೆಪೆಕ್ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್. ಶಿವಪ್ರಕಾಶ್ ಅವರು ಸೂಚನೆ ನೀಡಿದ್ದಾರೆ.
- 'ಈ ಬಾರಿ ಒಟ್ಟು 6,215 ಅರ್ಜಿಗಳು ಕೆಪೆಕ್‌ಗೆ ಬಂದಿವೆ. ಈ ಪೈಕಿ 4,150 ಅರ್ಜಿಗಳನ್ನು ವಿವಿಧ ಬ್ಯಾಂಕ್ ಗಳಿಗೆ ಕಳುಹಿಸಲಾಗಿದೆ. 2,600ಕ್ಕೂ ಹೆಚ್ಚು ಅರ್ಜಿಗಳು ಪರಿಶೀಲನಾ ಹಂತದಲ್ಲಿವೆ. ಇದರಲ್ಲಿ 1,682 ಮಂದಿಗೆ ಸಾಲ ಮಂಜೂರಾಗಿದ್ದು, ಈಗಾಗಲೇ 1200 ಫಲಾನುಭವಿಗಳು ಸಾಲ ಪಡೆದುಕೊಂಡಿದ್ದಾರೆ' ಎಂದು ಮಾಹಿತಿ ನೀಡಿದರು.
- 'ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2025–26ನೇ ಸಾಲಿನಲ್ಲಿ ರಾಜ್ಯದಲ್ಲಿ 5 ಸಾವಿರ ಕಿರು ಆಹಾರ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವಂತೆ ಸೂಚಿಸಿದ್ದಾರೆ. ಬಜೆಟ್‌ನಲ್ಲಿ ಇದಕ್ಕಾಗಿಯೇ ₹206 ಕೋಟಿ ಅನುದಾನ ಒದಗಿಸಲಾಗಿದೆ' ಎಂದರು.
- 'ರಾಷ್ಟ್ರೀಕೃತ ಬ್ಯಾಂಕ್‌ಗಳಾದ ಕೆನರಾ ಬ್ಯಾಂಕ್, ಭಾರತೀಯ ಸ್ಟೇಟ್ ಬ್ಯಾಂಕ್, ಬ್ಯಾಂಕ್ ಆಫ್ ಬರೋಡ ಸೇರಿದಂತೆ ಖಾಸಗಿ, ಸಹಕಾರ ಬ್ಯಾಂಕ್‌ಗಳಲ್ಲಿ ಪಿಎಂಎಫ್‌ಎಂಇ ಯೋಜನೆಯಡಿ ಸಾಲ ಪಡೆಯಲು ಅವಕಾಶ ಇದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಬ್ಯಾಂಕ್‌ಗಳ ಪಾತ್ರ ಮಹತ್ವದಾಗಿದೆ. ಫಲಾನು ಭವಿಗಳಿಗೆ ಬ್ಯಾಂಕ್‌ನಲ್ಲಿ ಸಾಲ ಮಂಜೂರಾದರೆ ಮಾತ್ರ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಾಯಧನ ಸಿಗಲಿದೆ' ಎಂದು ತಿಳಿಸಿದರು.

- **'ಪಿಎಂಎಫ್‌ಎಂಇ ಯೋಜನೆಯಡಿ ಗರಿಷ್ಠ ₹15 ಲಕ್ಷ ಸಹಾಯಧನ ಸಿಗುತ್ತದೆ. ಇದರಲ್ಲಿ ಕೇಂದ್ರ ಸರ್ಕಾರ ₹6 ಲಕ್ಷ ನೀಡಿದರೆ, ರಾಜ್ಯ ಸರ್ಕಾರ ₹9 ಲಕ್ಷ ನೀಡುತ್ತದೆ. ಮೂಲಸೌಕರ್ಯ ಕಲ್ಪಿಸಿಕೊಳ್ಳಲು ಎಫ್‌ಪಿಒಗಳಿಗೆ ಗರಿಷ್ಠ ₹3 ಕೋಟಿವರೆಗೆ ಸಹಾಯಧನ ಸಿಗುತ್ತದೆ. ಉತ್ಪನ್ನಗಳ ಬ್ರ್ಯಾಂಡಿಂಗ್ ಮತ್ತು ಮಾರುಕಟ್ಟೆಗೆ ಶೇ 50ರಷ್ಟು ಸಹಾಯಧನ ನೀಡಲಾಗುತ್ತದೆ'** ಎಂದು ಸಿ.ಎನ್. ಶಿವಪ್ರಕಾಶ್ ವಿವರಿಸಿದರು.

## ❖ ನೊಬೆಲ್ ಶಾಂತಿ ಪ್ರಶಸ್ತಿ ಸ್ವೀಕಾರಕ್ಕೆ ಮಾರಿಯಾ ಗೈರು

**ಸಂದರ್ಭ: ವೆನಿಜುವೆಲಾದ ವಿರೋಧ ಪಕ್ಷದ ನಾಯಕಿ, ನೊಬೆಲ್ ಶಾಂತಿ ಪುರಸ್ಕಾರ ಪುರಸ್ಕೃತೆ ಮಾರಿಯಾ ಕೊರಿನಾ ಮಚಾದೊ ಅವರು ಇಲ್ಲಿ ನಡೆದ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಭಾಗವಹಿಸಿಲ್ಲ ಎಂದು ನಾರ್ವೆಯ ನೊಬೆಲ್ ಸಮಿತಿ ಹೇಳಿದೆ.**



ಮಾರಿಯಾ ಕೊರಿನಾ ಮಚಾದೊ

- ಪ್ರಜಾಪ್ರಭುತ್ವ ಪರ ಹೋರಾಟಗಾರ್ತಿ ಮಾರಿಯಾ 11 ತಿಂಗಳ ಹಿಂದೆ ಸಾರ್ವಜನಿಕವಾಗಿ ಕಾಣಿಸಿಕೊಂಡಿದ್ದರು. ಅಜ್ಞಾತವಾಸದಲ್ಲಿರುವ ಅವರ ಪರವಾಗಿ ಅವರ ಪುತ್ರಿ ನೊಬೆಲ್ ಶಾಂತಿ ಪುರಸ್ಕಾರ ಸ್ವೀಕರಿಸಿದ್ದಾರೆ ಎಂದು ನೊಬೆಲ್ ಸಂಸ್ಥೆಯ ನಿರ್ದೇಶಕ ಕ್ರಿಶ್ಚಿಯನ್ ಬರ್ಗ್ ಹಾರ್ಪ್ವಿಕೆನ್ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.
- ಕಾರ್ಯಕ್ರಮದಲ್ಲಿ ಮಾರಿಯಾ ಭಾಗಿಯಾಗಿಲ್ಲ. ಆದರೆ, ನೊಬೆಲ್ ಪ್ರಶಸ್ತಿ ಪ್ರದಾನ ನಡೆಯಲಿರುವ ಇನ್ನುಳಿದ ದಿನಗಳಲ್ಲಿ ಅವರ ಉಪಸ್ಥಿತಿಯನ್ನು ನಿರೀಕ್ಷಿಸಹುದು ' ಎಂದು ಮಾರಿಯಾ ಮಚಾದೊ ಅವರ ವಕ್ತಾರೆ ಕ್ಲಾಡಿಯಾ ಮಸೆರೊ ತಿಳಿಸಿದ್ದಾರೆ. ಸದ್ಯ ಮಾರಿಯಾ ಅವರು ಇರುವ ಸ್ಥಳವನ್ನು ಬಹಿರಂಗಪಡಿಸಲು ಅವರು ನಿರಾಕರಿಸಿದ್ದಾರೆ.
- ಸರ್ವಾಧಿಕಾರದಿಂದ ಪ್ರಜಾಪ್ರಭುತ್ವದೆಡೆಗೆ ಶಾಂತಿಯುತವಾಗಿ ದೇಶವನ್ನು ಕೊಂಡೊಯ್ಯಲು ನಡೆಸಿದ ಹೋರಾಟಗಳಿಗಾಗಿ ಮಾರಿಯಾ (58) ಅವರಿಗೆ ಅಕ್ಟೋಬರ್ 10ರಂದು ನೊಬೆಲ್ ಶಾಂತಿ ಪುರಸ್ಕಾರ ಪ್ರಕಟವಾಗಿತ್ತು.

## ❖ ಲಿಥುವೇನಿಯಾದಲ್ಲಿ ತುರ್ತು ಪರಿಸ್ಥಿತಿ

**ಸಂದರ್ಭ: ರಷ್ಯಾ ಮಿತ್ರರಾಷ್ಟ್ರ ಬೆಲರೂಸ್ ಪದೇ ಪದೇ ಕಳುಹಿಸುತ್ತಿರುವ ಬಲೂನಿನಿಂದಾಗಿ ಭದ್ರತಾ ಅಪಾಯ ಉಂಟಾಗಿರುವ ಕಾರಣ ಲಿಥುವೇನಿಯಾದಲ್ಲಿ ರಾಷ್ಟ್ರೀಯ ತುರ್ತು ಪರಿಸ್ಥಿತಿ ಘೋಷಣೆಯಾಗಿದೆ.**

- 'ಬೆಲರೂಸ್‌ನ ದಾಳಿಯನ್ನು ತಡೆಯಲು ಕಠಿಣ ಕ್ರಮ ಕೈಗೊಳ್ಳುತ್ತೇವೆ. ದಾಳಿಯಿಂದ ಹೆಚ್ಚು ಹಾನಿಗೊಳಗಾಗಬಹುದಾದ ಪ್ರದೇಶಗಳ ಸುರಕ್ಷತೆ ಬಗ್ಗೆ ಗಮನಹರಿಸುತ್ತೇವೆ' ಲಿಥುವೇನಿಯಾದ ಪ್ರಧಾನಿ ಇಂಗಾ ರುಜಿನೀನೆ ತಿಳಿಸಿದ್ದಾರೆ.
- ನ್ಯಾಟೊ ಸದಸ್ಯ ರಾಷ್ಟ್ರವಾಗಿರುವ ಲಿಥುವೇನಿಯಾವು ಉಕ್ರೇನ್ ಅನ್ನು ಬೆಂಬಲಿಸುತ್ತಿದೆ. ಗಡಿ ವಿಚಾರಕ್ಕೆ ಸಂಬಂಧಿಸಿ ಮಾತುಕತೆಗೆ ಕರೆ ನೀಡಿರುವ ಬೆಲರೂಸ್ ನಾಯಕರು, 'ನಾವು ಯುದ್ಧವನ್ನು ಬಯಸುವುದಿಲ್ಲ' ಎಂದು ಹೇಳಿದ್ದಾರೆ.
- ಬಲೂನ್‌ಗಳಿಂದಾಗಿ ವಿಲ್ನಿಯಸ್‌ನ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣವು ಅಕ್ಟೋಬರ್‌ನಿಂದ ಈವರೆಗೆ 60 ಗಂಟೆಗೂ ಅಧಿಕ ಸಮಯ ಕಾರ್ಯಾಚರಣೆ ಸ್ಥಗಿತಗೊಳಿಸಿತ್ತು. ಇದರಿಂದಾಗಿ 350 ವಿಮಾನಗಳ ಹಾರಾಟ ರದ್ದಾಗಿದೆ ಮತ್ತು 51 ಸಾವಿರ ಪ್ರಯಾಣಿಕರಿಗೆ ತೊಂದರೆಯಾಗಿದೆ ಎಂದು ಲಿಥುವೇನಿಯಾ ಸರ್ಕಾರ ತಿಳಿಸಿದೆ.

## ❖ ಕಾಮನ್‌ವೆಲ್ತ್ ಕೊಕ್ಕೊ ಚಾಂಪಿಯನ್‌ಷಿಪ್‌ಗೆ ಭಾರತ ಆತಿಥ್ಯ

**ಸಂದರ್ಭ: ಮುಂದಿನ ಮಾರ್ಚ್ 9 ರಿಂದ 14 ರವರೆಗೆ ನಡೆಯಲಿರುವ ಚೊಚ್ಚಲ ಕಾಮನ್‌ವೆಲ್ತ್ ಕೊಕ್ಕೊ ಚಾಂಪಿಯನ್‌ಷಿಪ್‌ನಲ್ಲಿ 24 ತಂಡಗಳು ಭಾಗವಹಿಸಲಿವೆ. ಈ ಚಾಂಪಿಯನ್‌ಷಿಪ್ ನಡೆಯುವ ತಾಣ ಇನ್ನೂ ಅಂತಿಮಗೊಂಡಿಲ್ಲ.**

- ಈ ಸ್ಪರ್ಧೆಗೆ ಕಾಮನ್‌ವೆಲ್ತ್ ಸ್ಪೋರ್ಟ್ಸ್ (ಸಿಎಸ್) ಸಮ್ಮತಿ ದೊರೆತಿದ್ದು, ಸ್ಥಳ ನಿರ್ಧರಿಸಲು ಭಾರತ ಕೊಕ್ಕೊ ಫೆಡರೇಷನ್ ವಿವಿಧ ರಾಜ್ಯಗಳ ಜೊತೆ ಮಾತುಕತೆಯಲ್ಲಿದೆ.

Dr.Rajkumar's KAS Academy

- ಈ ವರ್ಷದ ಜನವರಿಯಲ್ಲಿ ನವದೆಹಲಿ ಯಲ್ಲಿ ಕೊಕ್ಕೊ ವಿಶ್ವಕಪ್ ನಡೆದಿತ್ತು. ಆಗ 23 ತಂಡಗಳು ಭಾಗವಹಿಸಿದ್ದವು. ಅದೇ ಮಾದರಿಯಲ್ಲಿ ಪಂದ್ಯಗಳನ್ನು ಆಯೋಜಿಸುವ ಉದ್ದೇಶವಿದೆ. ಪುರುಷರ ವಿಭಾಗದಲ್ಲಿ 16 ತಂಡಗಳು ಕಣಕ್ಕಿಳಿಯಲಿವೆ.

## ❖ 'ಅರ್ಜೆಂಟೀನಾ' ಜತೆ ಅಮುಲ್ ಪಾಲುದಾರಿಕೆ ಮತ್ತೆ ವಿಸ್ತರಣೆ


**ಸಂದರ್ಭ: ಭಾರತದ ಪ್ರತಿಷ್ಠಿತ ಡೇರಿ ಉತ್ಪನ್ನಗಳ ಬ್ರ್ಯಾಂಡ್ ಅಮುಲ್, ಅರ್ಜೆಂಟೀನಾ ಫುಟ್‌ಬಾಲ್ ತಂಡದೊಂದಿಗಿನ ಅಧಿಕೃತ ಪ್ರಾದೇಶಿಕ ಪಾಲುದಾರಿಕೆಯನ್ನು ಇನ್ನೊಂದು ವರ್ಷಕ್ಕೆ ವಿಸ್ತರಿಸಿದೆ. ಫಿಫಾ ಫುಟ್‌ಬಾಲ್ ವಿಶ್ವಕಪ್ 2026ರ ವರೆಗೆ ಈ ಪಾಲುದಾರಿಕೆ ಇರಲಿದೆ.**




- 'ಫುಟ್‌ಬಾಲ್ ಆಟದಂತೆಯೇ ಅಮುಲ್ ಕೂಡ ಗಡಿಯಾಚೆಗಿನ ಹೃದಯಗಳನ್ನು ಬೆಸೆಯುತ್ತದೆ. 2022ರ ವಿಶ್ವ ಚಾಂಪಿಯನ್ ಅರ್ಜೆಂಟೀನಾ ತಂಡದೊಂದಿಗೆ ಪಾಲುದಾರಿಕೆಯನ್ನು ಮುಂದುವರಿಸುತ್ತಿರುವುದು ಸಂತಸದ ವಿಚಾರ' ಎಂದು ಅಮುಲ್ ಸಂಸ್ಥೆಯ ಕಾರ್ಯಕಾರಿ ನಿರ್ದೇಶಕ ಡಾ.ಜಯನ್ ಮೆಹ್ತಾ ಹೇಳಿದರು.
- ಅಮುಲ್ ಸಂಸ್ಥೆಯು ಅರ್ಜೆಂಟೀನಾ ಫುಟ್‌ಬಾಲ್ ಅಸೋಸಿಯೇಷನ್ ಜೊತೆಗೆ 2022ರಿಂದಲೂ ಪ್ರಾದೇಶಿಕ ಪಾಲುದಾರಿಕೆಯನ್ನು ಹೊಂದಿದೆ.

## ❖ ವೀರೋಚಿತ ಗೆಲುವು; ಭಾರತಕ್ಕೆ ಕಂಚು: ಜೂನಿಯರ್ ಹಾಕಿ ವಿಶ್ವಕಪ್: ಆರಂಭಿಕ ಹಿನ್ನಡೆಯಿಂದ ಚೇತರಿಸಿ ಗೆದ್ದ ಆತಿಥೇಯರು

**ಸಂದರ್ಭ: ಎರಡು ಗೋಲುಗಳ ಹಿನ್ನಡೆಯಿಂದ ಚೇತರಿಸಿಕೊಂಡು ವೀರೋಚಿತ ಆಟವಾಡಿದ ಭಾರತ ತಂಡ ಬುಧವಾರ 4–2 ಗೋಲುಗಳಿಂದ ಅರ್ಜೆಂಟೀನಾ ತಂಡವನ್ನು ಸೋಲಿಸಿ ಪುರುಷರ ಜೂನಿಯರ್ ವಿಶ್ವಕಪ್ ಟೂರ್ನಿಯಲ್ಲಿ ಕಂಚಿನ ಪದಕ ಗೆದ್ದುಕೊಂಡಿತು.**


ಗೆಲುವಿನ ನಂತರ ಭಾರತ ತಂಡದ ಆಟಗಾರರು ಪಲ್ಟಿ ಹೊಡೆದು ಸಂಭ್ರಮಿಸಿದರು ಪಿಟಿಐ ಚಿತ್ರ

- ಲಖನೌದಲ್ಲಿ ನಡೆದ 2016ರ ಆವೃತ್ತಿಯಲ್ಲಿ ಪ್ರಶಸ್ತಿ ಗೆದ್ದಿದ್ದ ಆತಿಥೇಯ ತಂಡಕ್ಕೆ, ನಂತರದ ಎರಡು ಆವೃತ್ತಿಗಳಲ್ಲಿ ಮೊದಲ ಮೂರರಲ್ಲಿ ಸ್ಥಾನ ಪಡೆಯಲು (ಪೋಡಿಯಂ ಫಿನಿಷ್) ಸಾಧ್ಯವಾಗಿರಲಿಲ್ಲ. ಭುವನೇಶ್ವರದಲ್ಲಿ (2021) ಮತ್ತು ಕ್ವಾಲಾಲಂಪುರದಲ್ಲಿ (2023) ತಂಡ ನಾಲ್ಕನೇ ಸ್ಥಾನ ಪಡೆದಿತ್ತು.
- ಆದರೆ ಈ ಬಾರಿ ಪಿ.ಆರ್.ಶ್ರೀಜೇಶ್ ಮಾರ್ಗದರ್ಶನದ ತಂಡ, ಕೊನೆಯ ಕ್ವಾರ್ಟರ್‌ವರೆಗೆ (45ನೇ ನಿಮಿಷದ ವರೆಗೆ) ಗೋಲುಗಳ ಹಿನ್ನಡೆಯಿಂದ ಎದೆಗುಂದಲಿಲ್ಲ. ಅಂಕಿತ್ ಪಾಲ್ (49ನೇ ನಿಮಿಷ), ಮನಮೀತ್ ಸಿಂಗ್ (52ನೇ ನಿಮಿಷ), ಅನ್ಮೋಲ್ ಎಕ್ಕಾ (58ನೇ ನಿಮಿಷ) ಅವರು ಪೆನಾಲ್ಟಿ ಕಾರ್ನರ್‌ಗಳ ಮೂಲಕ ಗೋಲುಗಳನ್ನು ಗಳಿಸಿದರು. ಪಂದ್ಯ ಮುಗಿಯಲು ನಾಲ್ಕು ನಿಮಿಷ ಗಳಿರುವಾಗ ಶಾರದಾನಂದ ತಿವಾರಿ ಅವರು ಪೆನಾಲ್ಟಿ ಸ್ಟ್ರೋಕ್ ಅನ್ನು ಗೋಲಾಗಿ ಪರಿವರ್ತಿಸಿದರು.
- ಮೊದಲ ಎರಡು ಕ್ವಾರ್ಟರ್‌ಗಳಲ್ಲಿ ಅರ್ಜೆಂಟೀನಾ ತಂಡ ಉತ್ತಮ ತಂಡವಾಗಿ ಕಾಣಿಸಿತು. ಹೆಚ್ಚಿನ ಅವಧಿಯಲ್ಲಿ ತಂಡವು ನಿಯಂತ್ರಣ ಪಡೆದಿತ್ತು. ನಿಕೋಲಸ್ ರೋಡ್ರಿಗಸ್ ಅವರು ಮೂರನೇ ನಿಮಿಷ ಪೆನಾಲ್ಟಿ ಸ್ಟ್ರೋಕ್ ಮೂಲಕ ಗೋಲು ಗಳಿಸಿ ತಂಡಕ್ಕೆ ಬೇಗನೇ ಮುನ್ನಡೆ ಒದಗಿಸಿದರು. ಅನ್ಮೋಲ್ ಎಕ್ಕಾ

ಮಾಡಿದ ಫೌಲ್ ಇದಕ್ಕೆ ಕಾರಣವಾಯಿತು. 44ನೇ ನಿಮಿಷ ಸ್ಯಾಂಟಿಯಾಗೊ ಫರ್ನಾಂಡೀಸ್ ಅವರು ಮುನ್ನಡೆಯನ್ನು 2–0 ಗೋಲುಗಳಿಗೆ ಹೆಚ್ಚಿಸಿದರು.

- ರೋಹಿತ್ ಯಾದವ್ ನೇತೃತ್ವದ ಭಾರತ ತಂಡಕ್ಕೆ 20ನೇ ನಿಮಿಷ ಮೊದಲ ಅವಕಾಶ ದೊರೆಯಿತು. ಆದರೆ ವೃತ್ತದ ತುದಿಯಿಂದ ದಿಲ್‌ರಾಜ್ ಗೋಲಿನತ್ತ ಹೊಡೆದ ಚೆಂಡನ್ನು ಅರ್ಜೆಂಟೀನಾದ ಗೋಲ್ ಕೀಪರ್ ಜೋಕಿನ್ ರುಯಿಸ್ ಉತ್ತಮವಾಗಿ ತಡೆದರು. ಇದರ ನಂತರವೂ ಭಾರತ ಎದುರಾಳಿಗಳ ಮೇಲೆ ಒತ್ತಡ ಹೇರಿತು. 31ನೇ ನಿಮಿಷ ಒಂದರ ಹಿಂದೆ ಒಂದರಂತೆ ಪೆನಾಲ್ಟಿ ಕಾರ್ನರ್ ಅವಕಾಶಗಳು ದೊರೆತವು. ಇದರಲ್ಲಿ ಕೊನೆಯ ಅವಕಾಶದಲ್ಲಿ ಅನ್ಮೋಲ್ ಎಕ್ಕಾ ಅವರ ಯತ್ನದಲ್ಲಿ ಚೆಂಡು ಗೋಲುಪೆಟ್ಟಿಗೆ ಮೇಲಿಂದ ಹೋಯಿತು.
- ಅರ್ಜೆಂಟೀನಾ ಪ್ರತಿದಾಳಿಗಳನ್ನು ನಡೆಸಿತು. ಆದರೆ 37ನೇ ನಿಮಿಷ ಪೆನಾಲ್ಟಿ ಕಾರ್ನರ್‌ನಲ್ಲಿ ಅರ್ಜೆಂಟೀನಾ ತಂಡದ ಯತ್ನವನ್ನು ಗೋಲ್‌ಕೀಪರ್ ಪ್ರಿನ್ಸ್‌ದೀಪ್ ಸಿಂಗ್ ಅಮೋಘವಾಗಿ ತಡೆದು ಆತಿಥೇಯ ತಂಡದ ನಿಟ್ಟುಸಿರಿಗೆ ಕಾರಣರಾದರು. 40ನೇ ನಿಮಿಷ ಮತ್ತೆರಡು ಶಾರ್ಟ್ ಕಾರ್ನರ್ ಅವಕಾಶಗಳೂ ವಿಫಲವಾದವು. 41ನೇ ನಿಮಿಷ ಅರ್ಜೆಂಟೀನಾ ನಾಲ್ಕನೇ ಪೆನಾಲ್ಟಿ ಕಾರ್ನರ್ ಪಡೆಯಿತು. ಆದರೆ ರಾಡ್ರಿಗಸ್ ಅವರ 'ಫ್ಲಿಕ್' ಯತ್ನದಲ್ಲಿ ಚೆಂಡು ಗುರಿತಪ್ಪಿತು.
- ಈ ಹಿನ್ನಡೆಯಿಂದ ಭಾರತ ವಿಚಲಿತವಾಗಲಿಲ್ಲ. ಅಂತಿಮ ಕ್ವಾರ್ಟರ್ ನಲ್ಲಿ ಒತ್ತಡ ಹೇರಿತು. ಎರಡು ಪೆನಾಲ್ಟಿ ಕಾರ್ನರ್‌ಗಳನ್ನು ಗೋಲಾಗಿ ಪರಿವರ್ತಿಸಿ ಸ್ಕೋರ್ ಸಮ ಮಾಡಿಕೊಂಡಿತು. ಪಂದ್ಯ ಮುಗಿಯಲು ನಾಲ್ಕು ನಿಮಿಷಗಳಿದ್ದಾಗ ಒದಗಿಬಂದ ಪೆನಾಲ್ಟಿ ಸ್ಟ್ರೋಕ್ ಅನ್ನು ಗೋಲಾಗಿಸುವಲ್ಲಿ ಶಾರದಾನಂದ ತಿವಾರಿ ಎಡವಲಿಲ್ಲ. ಈ ಮುನ್ನಡೆಯ ಪರಿಣಾಮ ಹುರುಪಿನಿಂದ ಆಡಿದ ಆತಿಥೇಯ ತಂಡ ಮರುನಿಮಿಷ ಮತ್ತೊಂದು ಪೆನಾಲ್ಟಿ ಕಾರ್ನರ್ ಪಡೆಯಿತು. ಇದರಲ್ಲಿ ಅನ್ಮೋಲ್ ಚೆಂಡನ್ನು ಗುರಿಮುಟ್ಟಿಸಿದರು.

**ಪ್ರಶಸ್ತಿ ಉಳಿಸಿಕೊಂಡ ಜರ್ಮನಿ**

- ಫೇವರಿಟ್ ಜರ್ಮನಿ ತಂಡ ಪೆನಾಲ್ಟಿ ಶೂಟೌಟ್‌ನಲ್ಲಿ 3–2 ಗೋಲುಗಳಿಂದ ಸ್ಪೇನ್ ತಂಡದ ಪ್ರಬಲ ಹೋರಾಟ ಬದಿಗೊತ್ತಿ ಪುರುಷರ ಜೂನಿಯರ್ ವಿಶ್ವಕಪ್ ಹಾಕಿ ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದುಕೊಂಡಿತು.
- ಕಳೆದ ಬಾರಿಯೂ ಚಾಂಪಿಯನ್ ಆಗಿದ್ದ ಜರ್ಮನಿ ಹತ್ತನೇ ಬಾರಿ ಫೈನಲ್ ಆಡಿದ್ದು, ಎಂಟನೇ ಬಾರಿ ಚಾಂಪಿಯನ್ ಆಗಿದೆ.
- ಮೇಯರ್ ರಾಧಾಕೃಷ್ಣನ್ ಹಾಕಿ ಕ್ರೀಡಾಂಗಣದಲ್ಲಿ ಬುಧವಾರ ನಡೆದ ಫೈನಲ್ ಪಂದ್ಯದ ನಿಗದಿ ಅವಧಿಯ ಆಟ 1–1 ರಲ್ಲಿ ಸಮನಾಗಿತ್ತು. 26ನೇ ನಿಮಿಷ ಜುಸ್ಟಸ್ ವಾರ್ವೆಗ್ ಫೀಲ್ಡ್ ಗೋಲಿನ ಮೂಲಕ ಜರ್ಮನಿ ತಂಡಕ್ಕೆ ಮುನ್ನಡೆ ಒದಗಿಸಿದರು. ಆದರೆ 33ನೇ ನಿಮಿಷ ನಿಕೋಲಸ್ ಮುಸ್ತಾರೋಸ್ ಅವರೂ ಫೀಲ್ಡ್ ಗೋಲು ಗಳಿಸಿ ಸ್ಪೇನ್ ತಂಡ ಸ್ಕೋರ್ ಸಮ ಮಾಡಲು ನೆರವಾದರು.
- ನಂತರ ಉಭಯ ತಂಡಗಳು ಮುನ್ನಡೆಗಾಗಿ ಹೋರಾಡಿದರೂ ಯಶಸ್ಸು ಪಡೆಯಲಿಲ್ಲ. ಶೂಟೌಟ್‌ನಲ್ಲಿ ಜರ್ಮನಿ ಪರ ಬೆನೆಡಿಕ್ಟ್ ಗೇಯರ್, ಅಲೆಕ್ ವಾನ್ ಶ್ವೆರಿನ್ ಮತ್ತು ಬೆನ್ ಹಾಷ್‌ಬಾಕ್ ಅವರು ಗೋಲು ಗಳಿಸಿದರು. ಸ್ಪೇನ್ ಪರ ಪಾಬ್ಲೊ ರೋಮನ್, ಜುವಾನ್ ಪ್ರಾಡೊ ಮಾತ್ರ ಯಶ ಗಳಿಸಿದರು.

## ❖ ರ್‍ಯಾಂಕಿಂಗ್: ಎರಡನೇ ಸ್ಥಾನಕ್ಕೇರಿದ ಕೊಹ್ಲಿ: ಏಕದಿನ ಬ್ಯಾಟರ್‌ಗಳ ವಿಭಾಗದಲ್ಲಿ ರೋಹಿತ್ ಗೆ ಅಗ್ರಸ್ಥಾನ


**ಸಂದರ್ಭ: ಏಕದಿನ ಕ್ರಿಕೆಟ್ ರ್‍ಯಾಂಕಿಂಗ್‌ನಲ್ಲಿ ಅಗ್ರಸ್ಥಾನ ವನ್ನು ಮರಳಿ ಪಡೆಯುವ ವಿರಾಟ್ ಕೊಹ್ಲಿ ಅವರ ಕನಸು ಸಾಕಾರಗೊಳ್ಳಲು ಇನ್ನೊಂದೇ ಹೆಜ್ಜೆಯಿದೆ. ಅವರು ಪ್ರಕಟವಾದ ಐಸಿಸಿ ರ್‍ಯಾಂಕಿಂಗ್‌ನ ಬ್ಯಾಟರ್‌ಗಳ ವಿಭಾಗದಲ್ಲಿ ಎರಡನೇ ಸ್ಥಾನಕ್ಕೇರಿದರು.**



Dr. Rajkumar IAS/KAS Academy

- ಈ ಹಿಂದೆ ಅಗ್ರಸ್ಥಾನದಲ್ಲಿದ್ದ ಕೊಹ್ಲಿ ಅವರನ್ನು 2021ರ ಏಪ್ರಿಲ್‌ನಲ್ಲಿ ಪಾಕಿಸ್ತಾನದ ಬಾಬರ್ ಆಜಂ ಹಿಂದೆಹಾಕಿದ್ದರು. ನಂತರ ಅವರು ಅಗ್ರಪಟ್ಟಕ್ಕೇರಲು ಸಾಧ್ಯವಾಗಿರಲಿಲ್ಲ. ಇತ್ತೀಚೆಗೆ ದಕ್ಷಿಣ ಆಫ್ರಿಕಾ ವಿರುದ್ಧ ಏಕದಿನ ಸರಣಿಯಲ್ಲಿ ಅಮೋಘ ಯಶಸ್ಸು ಗಳಿಸಿದ್ದು, ಕೊಹ್ಲಿ ಅವರ ಬಡ್ತಿಗೆ ಕಾರಣವಾಗಿದೆ.
- ಒಟ್ಟು 302 ರನ್‌ಗಳೊಡನೆ ಸರಣಿಯ ಆಟಗಾರ ಗೌರವಕ್ಕೆ ಪಾತ್ರರಾಗಿದ್ದ 37 ವರ್ಷ ವಯಸ್ಸಿನ ಕೊಹ್ಲಿ ಎರಡು ಸ್ಥಾನ ಬಡ್ತಿ ಪಡೆದು ಎರಡನೇ ಸ್ಥಾನಕ್ಕೇರಿದ್ದಾರೆ. ಆರಂಭ ಆಟಗಾರ ರೋಹಿತ್ ಶರ್ಮಾ (781 ಪಾಯಿಂಟ್ಸ್) ಅಗ್ರಸ್ಥಾನದಲ್ಲಿ ಮುಂದುವರಿದಿದ್ದಾರೆ. ರೋಹಿತ್ ಆ ಸರಣಿಯಲ್ಲಿ 146 ರನ್ ಗಳಿಸಿದ್ದರು. ಕೊಹ್ಲಿ (773 ಪಾಯಿಂಟ್ಸ್) ಮತ್ತು ರೋಹಿತ್ ನಡುವೆ ಎಂಟು ರ್‍ಯಾಂಕಿಂಗ್ ಪಾಯಿಂಟ್‌ಗಳ ಅಂತರವಷ್ಟೇ ಇದೆ.
- ಭಾರತ ಮೂರು ಪಂದ್ಯಗಳ ಸರಣಿಯನ್ನು 2–1 ರಿಂದ ಗೆದ್ದುಕೊಂಡಿತ್ತು. ಗಾಯಾಳಾಗಿ ಏಕದಿನ ಸರಣಿ ತಪ್ಪಿಸಿ ಕೊಂಡಿದ್ದರೂ ಶುಭಮನ್ ಗಿಲ್ ಐದನೇ ಸ್ಥಾನ ಉಳಿಸಿ ಕೊಂಡಿದ್ದಾರೆ. ಸರಣಿಯಲ್ಲಿ ಎರಡು ಅರ್ಧಶತಕ ಗಳಿಸಿದ್ದ ಕೆ.ಎಲ್.ರಾಹುಲ್ 12ನೇ ಸ್ಥಾನಕ್ಕೇರಿದ್ದಾರೆ. ಅವರಿಗೆ ಎರಡು ಸ್ಥಾನ ಬಡ್ತಿ ದೊರೆತಿದೆ.
- ಮೂರನೇ ಸ್ಥಾನಕ್ಕೆ ಕುಲದೀಪ್: ಎಡಗೈ ಸ್ಪಿನ್ನರ್ ಕುಲದೀಪ್ ಯಾದವ್ ಅವರು ಮೂರು ಸ್ಥಾನ ಬಡ್ತಿ ಪಡೆದು ಮೂರನೇ ಕ್ರಮಾಂಕಕ್ಕೇರಿದ್ದಾರೆ.
- ಟೆಸ್ಟ್ ಬ್ಯಾಟರ್‌ಗಳ ಪೈಕಿ ಯಶಸ್ವಿ ಜೈಸ್ವಾಲ್ (ಎಂಟನೇ ಸ್ಥಾನ) ಅವರು ಅಗ್ರ 10ರಲ್ಲಿ ಸ್ಥಾನ ಗಳಿಸಿರುವ ಭಾರತದ ಏಕೈಕ ಆಟಗಾರ ಎನಿಸಿದ್ದಾರೆ. ಗಿಲ್ ಮತ್ತು ರಿಷಭ್ ಪಂತ್ ಕ್ರಮವಾಗಿ 11 ಮತ್ತು 13ನೇ ಸ್ಥಾನ ಪಡೆದಿದ್ದಾರೆ.
- ಬೌಲರ್‌ಗಳ ವಿಭಾಗದಲ್ಲಿ ಆಸ್ಟ್ರೇಲಿಯಾದ ಎಡಗೈ ವೇಗಿ ಮಿಚೆಲ್ ಸ್ಟಾರ್ಕ್ ಅವರು ಮೂರು ಸ್ಥಾನಗಳಷ್ಟು ಮೇಲೇರಿ 3ನೇ ಕ್ರಮಾಂಕಕ್ಕೆ ಲಗ್ಗೆಹಾಕಿದ್ದಾರೆ. ಅವರು ಆ್ಯಷಸ್ ಸರಣಿಯ ಮೊದಲೆರಡು ಟೆಸ್ಟ್ ಪಂದ್ಯಗಳಲ್ಲಿ 18 ವಿಕೆಟ್ ಪಡೆದಿದ್ದರು. ಜಸ್‌ಪ್ರೀತ್ ಬೂಮ್ರಾ ಅಗ್ರಸ್ಥಾನ ಅಬಾಧಿತವಾಗಿ ಉಳಿದಿದೆ.

IAS/KAS Academy



## ❖ ಬಿಬಿಎಂಪಿ ಆಚೆಗೂ ಜಿಬಿಎ: ತಿದ್ದುಪಡಿ ಮಸೂದೆ। ಸಂಸ್ಥೆಗಳ ಮರುವಿಂಗಡಣೆಗೆ 3 ತಿಂಗಳು ಗಡುವು

**ಸಂದರ್ಭ: ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯನ್ನು ಹಿಂದಿನ ಬಿಬಿಎಂಪಿ ವ್ಯಾಪ್ತಿಯ ಆಚೆಗೆ ವಿಸ್ತರಿಸಲು ಅವಕಾಶ ಕಲ್ಪಿಸುವ ಉದ್ದೇಶದಿಂದ 'ಗ್ರೇಟರ್ ಬೆಂಗಳೂರು ಆಡಳಿತ (ಎರಡನೇ ತಿದ್ದುಪಡಿ) ಮಸೂದೆ-2025' ಅನ್ನು ವಿಧಾನಸಭೆಯಲ್ಲಿ ಮಂಡಿಸಲಾಯಿತು.**

- ಬೆಂಗಳೂರು ಅಭಿವೃದ್ಧಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಪರವಾಗಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಈ ಮಸೂದೆ ಮಂಡಿಸಿದರು.
- ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಹೊಸದಾಗಿ ಸೇರಿಸಲಾದ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆ ವ್ಯಾಪ್ತಿಯ ಪ್ರದೇಶಗಳ ಮರು ವಿಂಗಡಣೆಗೆ ಮೂರು ತಿಂಗಳ ಕಾಲಮಿತಿ ವಿಧಿಸಲಾಗಿದೆ. ಜೊತೆಗೆ, ನಗರಪಾಲಿಕೆಯ ಮುಂದಿನ ಸಾರ್ವತ್ರಿಕ ಚುನಾವಣೆಯ ಕನಿಷ್ಠ ಆರು ತಿಂಗಳ ಮೊದಲು ಜನಗಣತಿಯ ಫಲಿತಾಂಶಗಳು ಲಭ್ಯ ಇದ್ದರೆ ಮತ್ತು ಪ್ರತಿ ಜನಗಣತಿಯ ಬಳಿಕ ನಗರಪಾಲಿಕೆಯ ಮುಂದಿನ ಸಾರ್ವತ್ರಿಕ ಚುನಾವಣೆಯ ಮೊದಲು ಹೊಸ ಪುನರ್‌ವಿಂಗಡಣೆ ಪ್ರಕ್ರಿಯೆ ನಡೆಸಬೇಕು ಎಂದು ಮಸೂದೆಯಲ್ಲಿ ಉಲ್ಲೇಖಿಸಲಾಗಿದೆ.
- ಗ್ರೇಟರ್ ಬೆಂಗಳೂರು ನಗರಪಾಲಿಕೆ ಗಳಿಗೆ ನೇಮಕವಾದ ಸದಸ್ಯ ಪದಾವಧಿ ಯವರೆಗೆ ಆಯಾ ವಿಧಾನಸಭೆ ಕ್ಷೇತ್ರ ಮಟ್ಟದ ಸಮಾಲೋಚನಾ ಮತ್ತು ಸಮನ್ವಯ ಸಮಿತಿಗೆ ನಾಮನಿರ್ದೇಶಿತ ಸದಸ್ಯ ಕೂಡ ಆಗಿರುತ್ತಾರೆ ಎಂದೂ ಮಸೂದೆಯಲ್ಲಿದೆ.
- ಜಿಬಿಎ ಸದಸ್ಯರ ಸಂಖ್ಯೆ ಹೆಚ್ಚಳ: ಜಿಬಿಎ ಪ್ರದೇಶ ಅಥವಾ ಭಾಗಶಃ ಮತಕ್ಷೇತ್ರ ಬರುವ ಲೋಕಸಭೆ, ರಾಜ್ಯಸಭೆ, ವಿಧಾನಸಭೆ, ವಿಧಾನ ಪರಿಷತ್ ಸದಸ್ಯರು, ರಾಜ್ಯಸಭೆ, ವಿಧಾನ ಪರಿಷತ್‌ಗೆ ನೇಮಕವಾದ ಸದಸ್ಯರು, ವಿಧಾನ ಪರಿಷತ್ ಶಿಕ್ಷಕರ, ಪದವೀಧರ ಕ್ಷೇತ್ರದಿಂದ ಚುನಾಯಿತರು, ಜಿಬಿಎ ಪ್ರದೇಶದ ಮತದಾರರ ಪಟ್ಟಿಯಲ್ಲಿ ಇರುವ ರಾಜ್ಯಸಭಾ, ವಿಧಾನ ಪರಿಷತ್ ಸದಸ್ಯರು ಪ್ರಾಧಿಕಾರದ ಸದಸ್ಯರಾಗಲಿದ್ದಾರೆ. ಅಲ್ಲದೆ, ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಹಾಗೂ ಆರ್ಥಿಕ ಇಲಾಖೆಗಳ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು ಜಿಬಿಎ ಪದನಿಮಿತ್ತ ಸದಸ್ಯರಾಗಲಿದ್ದಾರೆ ಎಂದೂ ಮಸೂದೆಯಲ್ಲಿ ಪ್ರಸ್ತಾಪಿಸಲಾಗಿದೆ.

### ನಗರ ಪಾಲಿಕೆಗೆ ನಾಮನಿರ್ದೇಶನ

- ಜಿಬಿಎ ವ್ಯಾಪ್ತಿಗೆ ಸೇರಿಸಲಾಗುವ ನಗರ, ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವವರೆಗೆ ಪ್ರತಿ 20 ಸಾವಿರ ಜನಸಂಖ್ಯೆಗೆ ಕನಿಷ್ಠ ಒಬ್ಬರಂತೆ ನಿರ್ದಿಷ್ಟ ನಗರಪಾಲಿಕೆಗೆ ಹೆಚ್ಚುವರಿ ಸದಸ್ಯರನ್ನು ನೇಮಿಸಲು ಮಸೂದೆ ಅವಕಾಶ ಕಲ್ಪಿಸಿದೆ.
- ಹೀಗೆ ನಾಮನಿರ್ದೇಶನಗೊಳ್ಳುವವರು ಸ್ಥಳೀಯ ಪ್ರದೇಶಕ್ಕೆ ಸೇರಿದವ ರಾಗಿಬೇಕು. ಹೀಗೆ ನೇಮಕಗೊಂಡವರಿಗೆ ನಗರಪಾಲಿಕೆಯಲ್ಲಿ ಮತದಾನ ಅಧಿಕಾರ ಇರುವುದಿಲ್ಲ. ಹೊಸದಾಗಿ ಸೇರಿಸಲಾದ ಸ್ಥಳೀಯ ಪ್ರದೇಶಕ್ಕೆ ಪುನರ್ ವಿಂಗಡಣೆಯ ನಂತರ ಆ ಪ್ರದೇಶದ ಸೇರ್ಪಡೆಯ ಆರು ತಿಂಗಳ ಒಳಗೆ ಚುನಾವಣೆ ನಡೆಸಬೇಕು. ಚುನಾಯಿತರಾದವರು ಹೊಸದಾಗಿ ಸೇರಿಸಲಾದ ಸ್ಥಳೀಯ ಪ್ರದೇಶವನ್ನು ಹೊಂದಿದ ನಗರಪಾಲಿಕೆಯ ಉಳಿದ ಅವಧಿವರೆಗೆ ಮಾತ್ರ ಸ್ಥಾನ ಹೊಂದಿರುತ್ತಾರೆ. ಆ ನಗರಪಾಲಿಕೆಯ ಸದಸ್ಯರ ಪದಾವಧಿ ಆರು ತಿಂಗಳ ಅವಧಿಯೊಳಗೆ ಅಂತ್ಯ ಆಗುವುದಾದರೆ ಹೊಸದಾಗಿ ಸೇರಿಸಿದ ಪ್ರದೇಶಕ್ಕೆ ಚುನಾವಣೆ ಬೇಡವೆಂದು ಮಸೂದೆಯಲ್ಲಿ ವಿವರಿಸಲಾಗಿದೆ.

Dr. Rajkumar IAS/KAS Academy

## ❖ 'ಪಾರಂಪರಿಕ ತಾಣ' ರದ್ದು": ಕಂಟೋನ್ಮೆಂಟ್: ಮೂರು ತಿಂಗಳಲ್ಲೇ ಅರಣ್ಯ ಇಲಾಖೆಯ ನಿರ್ಧಾರ ಬದಲು

**ಸಂದರ್ಭ: ರೈಲ್ವೆ ಕಂಟೋನ್ಮೆಂಟ್ ಕಾಲೊನಿಯಲ್ಲಿ 371 ಮರಗಳಿರುವ 8.61 ಎಕರೆ ಪ್ರದೇಶವನ್ನು 'ಜೀವವೈವಿಧ್ಯ ಪಾರಂಪರಿಕ ತಾಣ' ಎಂದು ಘೋಷಿಸಿ ಮೂರು ತಿಂಗಳ ಹಿಂದೆ ಹೊರಡಿಸಿದ್ದ ಆದೇಶವನ್ನು ಯಾವುದೇ ಕಾರಣ ನೀಡದೆ ಈ ತಿಂಗಳ 6ರಂದು ಅರಣ್ಯ ಇಲಾಖೆಯು ಹಿಂಪಡೆದಿದೆ.**

- ವಸಂತನಗರದ ದಂಡು ಪ್ರದೇಶದ ಬಳಿಯ ರೈಲ್ವೆ ಕಾಲೊನಿಯಲ್ಲಿ 371 ಮರಗಳಿರುವ ಈ ಪ್ರದೇಶವನ್ನು 'ಜೀವವೈವಿಧ್ಯ ಪಾರಂಪರಿಕ ತಾಣ' ಎಂದು 2025ರ ಸೆಪ್ಟೆಂಬರ್ 10ರಂದು ಘೋಷಿಸಿಲಾಗಿತ್ತು. ಆದರೆ, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಏಕಾಏಕಿ ಈ ಆದೇಶವನ್ನು ವಾಪಸ್ ಪಡೆದಿದ್ದು, ಇದಕ್ಕೆ ಆಕ್ಷೇಪ ವ್ಯಕ್ತವಾಗಿದೆ.
- ಈ ಜಾಗದಲ್ಲಿನ ಮರಗಳನ್ನು ತೆರವುಗೊಳಿಸಿ ವಾಣಿಜ್ಯ ಕೇಂದ್ರ ಅಭಿವೃದ್ಧಿಪಡಿಸು ವುದಕ್ಕೆ ಪರಿಸರ ಕಾರ್ಯಕರ್ತರು ವಿರೋಧ ವ್ಯಕ್ತಪಡಿಸಿ, ಹೋರಾಟ ನಡೆಸಿದ್ದರು. ಆಗ, ಇದಕ್ಕೆ ಸ್ಪಂದಿಸಿದ ರಾಜ್ಯ ಜೀವವೈವಿಧ್ಯ ಮಂಡಳಿಯ ಅಧ್ಯಕ್ಷರೂ ಆಗಿರುವ ಅರಣ್ಯ ಸಚಿವ ಈಶ್ವರ ಖಂಡ್ರೆ, ಮಂಡಳಿಯ ವಿಶೇಷ ಸಭೆ ನಡೆಸಿ, ಕಂಟೋನ್ಮೆಂಟ್ ರೈಲು ನಿಲ್ದಾಣಕ್ಕೆ ಹೊಂದಿಕೊಂಡಿರುವ ಈ ಪ್ರದೇಶವನ್ನು ಹಸಿರು ವಲಯವನ್ನಾಗಿ ಪರಿಗಣಿಸಲಾಗಿತ್ತು.
- ಜೀವ ವೈವಿದ್ಯ ಕಾಯ್ದೆ-2002 ನಿಬಂಧನೆಗಳ ಅಡಿಯಲ್ಲಿ ಈ ಸ್ಥಳವನ್ನು 'ಜೀವವೈವಿಧ್ಯ ಪಾರಂಪರಿಕ ತಾಣ' (ಬಿಎಚ್‌ಎಸ್) ಎಂದು ಘೋಷಿಸಿ ಅಧಿಸೂಚನೆ ಹೊರಡಿಸಲಾಗಿತ್ತು.
- 'ಈ ಪ್ರದೇಶವು ಸಸ್ಯ ಸಂಕುಲ, ಪಕ್ಷಿ ಸಂಕುಲ ಮತ್ತು ಕೀಟ ಸಂಕುಲದ ತಾಣವಷ್ಟೇ ಅಲ್ಲದೆ ಬೆಂಗಳೂರು ನಗರಕ್ಕೆ ಅತ್ಯಗತ್ಯವಾದ ಶ್ವಾಸತಾಣ ವಾಗಿದೆ. 50-60 ವರ್ಷಗಳಿಂದ ಬೆಳೆದ ಬೃಹತ್ ಮರಗಳಿರುವ ಪ್ರದೇಶ ವನ್ನು ಬೆಂಗಳೂರು ಉಪನಗರ ರೈಲ್ವೆ ಯೋಜನೆಗೆ ನಿಧಿ ಸಂಗ್ರಹಿಸುವ ಉದ್ದೇಶ ದಿಂದ ರೈಲ್ವೆ ಭೂ ಅಭಿವೃದ್ಧಿ ಪ್ರಾಧಿಕಾರ ಖಾಸಗಿ ಸಂಸ್ಥೆಯೊಂದಕ್ಕೆ 60 ವರ್ಷಗಳ ದೀರ್ಘಾವಧಿಗೆ ಗುತ್ತಿಗೆ ನೀಡಿತ್ತು.
- ಗುತ್ತಿಗೆ ಪಡೆದ ಸಂಸ್ಥೆ ಇಲ್ಲಿರುವ 368 ಮರಗಳನ್ನು ಕಡಿಯಲು ಅನುಮತಿ ಕೋರಿತ್ತು. ಇದಕ್ಕೆ ಪರಿಸರ ಪ್ರೇಮಿಗಳು, ವೃಕ್ಷ ಪ್ರೇಮಿಗಳು, ಸಾರ್ವಜನಿಕರಿಂದ ವಿರೋಧ ವ್ಯಕ್ತವಾಗಿತ್ತು.
- **ಯಾವುದೇ ವಿವರಣೆ ಇಲ್ಲ:** 'ಮರಗಳನ್ನು ಉಳಿಸಿಕೊಳ್ಳಲು ಆ ಪ್ರದೇಶವನ್ನು ಪಾರಂಪರಿಕ ತಾಣವನ್ನಾಗಿಸಲಾಗಿತ್ತು. ಇದಕ್ಕಾಗಿ ಸಾಕಷ್ಟು ಮಂದಿ ಹೋರಾಟ ನಡೆಸಿದ್ದರು. ಮರಗಳ ರಕ್ಷಣೆಯಾಯಿತು ಎಂಬ ಸಂತಸ ಇನ್ನೂ ಮಾಸದ ಸಮಯ ದಲ್ಲೇ ಯಾವುದೇ ವಿವರಣೆ ಇಲ್ಲದೆ ಅಧಿಸೂಚನೆ ವಾಪಸ್ ಪಡೆದಿರುವುದು ಸರಿಯಲ್ಲ. ಹೋರಾಟ ಮುಂದುವರಿಸು ತ್ತೇವೆ' ಎಂದು ಪರಿಸರ ಕಾರ್ಯಕರ್ತ ವಿಜಯ್ ನಿಶಾಂತ್ ಹೇಳಿದರು.

## ❖ ಒಳ ಮೀಸಲು ರಕ್ಷಣೆಗೆ ಮಸೂದೆ

**ಸಂದರ್ಭ: ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿ ಕಲ್ಪಿಸುವ ಚಾರಿತ್ರಿಕ ತೀರ್ಮಾನ ಕೈಗೊಂಡಿದ್ದ ರಾಜ್ಯ ಸರ್ಕಾರ, ಈ ಸೌಲಭ್ಯದ ಕಾನೂನಾತ್ಮಕ ರಕ್ಷಣೆಗಾಗಿ ರಚಿಸಲಾಗಿರುವ ಮಸೂದೆಗೆ ನಡೆದ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.**

- ಪರಿಶಿಷ್ಟ ಜಾತಿಯವರಿಗೆ ಲಭ್ಯ ಇರುವ ಶೇ 17 ರಷ್ಟು ಮೀಸಲಾತಿಯಡಿ ಎಡಗೈ ಸಂಬಂಧಿತ ಜಾತಿಗಳಿರುವ 'ಎ' ಪ್ರವರ್ಗಕ್ಕೆ ಶೇ 6, ಬಲಗೈ ಸಂಬಂಧಿತ ಜಾತಿಗಳಿರುವ 'ಬಿ' ಪ್ರವರ್ಗಕ್ಕೆ ಶೇ 6 ಹಾಗೂ ಸ್ಪೃಶ್ಯ ಮತ್ತು ಅಲೆಮಾರಿ ಜಾತಿಗಳಿರುವ 'ಸಿ' ಪ್ರವರ್ಗಕ್ಕೆ ಶೇ 5ರಷ್ಟು ಒಳ ಮೀಸಲಾತಿ ಜಾರಿಗೊಳಿಸಿ ರಾಜ್ಯ ಸರ್ಕಾರ ಈ ಹಿಂದೆ ಆದೇಶ ಹೊರಡಿಸಿತ್ತು. ಕಾನೂನಿನ ಅಡಚಣೆಗಳು ಎದುರಾಗುವ ಸನ್ನಿವೇಶ ಸೃಷ್ಟಿಯಾಗಿರುವ ಬೆನ್ನಲ್ಲೇ, ಆದೇಶಕ್ಕೆ ಹೆಚ್ಚಿನ ಕಾನೂನು ಬಲ ನೀಡಲು ತರಲಾದ ಮಸೂದೆಯನ್ನು ಸಚಿವ ಸಂಪುಟಯಲ್ಲಿ ಮಂಡಿಸಲಾಗಿತ್ತು.

Dr. Rajkumar IAS/KAS Academy

- ಈ ಬಗ್ಗೆ ಸುದೀರ್ಘವಾಗಿ ಚರ್ಚಿಸಿದ ಸಚಿವ ಸಂಪುಟ ಸಭೆಯು ಮಸೂದೆಗೆ ಒಪ್ಪಿಗೆ ನೀಡಿತು. ನಿಯಮಗಳನ್ನು ರೂಪಿಸುವ ಮುನ್ನ ಬೇರೆ ಬೇರೆ ರಾಜ್ಯಗಳು ಒಳ ಮೀಸಲು ವಿಷಯದಲ್ಲಿ ಯಾವ ರೀತಿಯಲ್ಲಿ ಕಾನೂನಿನ ರಕ್ಷಣಾತ್ಮಕ ಕ್ರಮ ಕೈಗೊಂಡಿವೆ ಎಂಬುದರ ಬಗ್ಗೆ ಅಧ್ಯಯನ ನಡೆಸಬೇಕು. ಬಳಿಕ, ಈ ಬಗ್ಗೆ ತೀರ್ಮಾನ ತೆಗೆದುಕೊಳ್ಳಬಹುದು ಎಂಬ ತೀರ್ಮಾನವನ್ನು ಸಚಿವ ಸಂಪುಟ ಸಭೆ ಕೈಗೊಂಡಿತು ಎಂದು ಗೊತ್ತಾಗಿದೆ.
- ಈ ತಿದ್ದುಪಡಿ ಮಸೂದೆ ಇದೇ ಅಧಿವೇಶನದಲ್ಲಿ ಮಂಡನೆಯಾಗಲಿದೆ.
- **ಮಸೂದೆಯ ಲಾಭವೇನು?**: 101 ಜಾತಿ ಗಳನ್ನು 'ಎ' , 'ಬಿ' , 'ಸಿ' ಎಂದು ಮೂರು ಪ್ರವರ್ಗಗಳಾಗಿ ವಿಂಗಡಿಸಲಾಗಿದೆ. ಸರ್ಕಾರಿ ಹುದ್ದೆಗಳಿಗೆ ಒಳ ಮೀಸಲಾತಿ ಕಾರಣಕ್ಕೆ ತಡೆ ಹಿಡಿಯಲಾಗಿದ್ದ ನೇರ ನೇಮಕಾತಿ ಪ್ರಕ್ರಿಯೆಯನ್ನು ಆರಂಭಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ (ಡಿಪಿಎಆರ್) ಇದರಿಂದ ನೆರವಾಗಲಿದೆ. ಅಲ್ಲದೇ ಎಲ್ಲ ಇಲಾಖೆಗಳು ಮತ್ತು ಅವುಗಳ ಅಧೀನದ ಎಲ್ಲ ನಿಗಮ, ಮಂಡಳಿ, ಸಂಸ್ಥೆಗಳಲ್ಲಿ ಮುಂಬಡ್ತಿ ಪ್ರಕ್ರಿಯೆಗೆ ಒಪ್ಪಿಗೆ ಸಿಗಲಿದೆ.
- ಒಳ ಮೀಸಲಾತಿ ಕಲ್ಪಿಸಲು ರಚಿಸಿದ್ದ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನದಾಸ್ ನೇತೃತ್ವದ ಆಯೋಗವು ಪರಿಶಿಷ್ಟ ಜಾತಿಗಳನ್ನು 'ಎ' , 'ಬಿ' , 'ಸಿ' , 'ಡಿ' , 'ಇ' ಎಂದು ಐದು ಪ್ರವರ್ಗಗಳಾಗಿ ವಿಂಗಡಿಸಿ, ಮೀಸಲಾತಿ ಹಂಚಿಕೆ ಮಾಡಿ ಶಿಫಾರಸು ಮಾಡಿತ್ತು. ಆ ವರದಿಯಲ್ಲಿ ಪ್ರವರ್ಗ 'ಇ' ಯಲ್ಲಿರುವ ಆದಿ ಕರ್ನಾಟಕ, ಆದಿ ಆಂಧ್ರ, ಆದಿ ದ್ರಾವಿಡ ಈ ಮೂರು ಸಮುದಾಯಗಳು ಮೂಲ ಜಾತಿಯನ್ನು ತಿಳಿಸದೇ ಇರುವುದರಿಂದ ಪ್ರವರ್ಗ 'ಎ' ಅಥವಾ ಪ್ರವರ್ಗ 'ಬಿ' ಅಡಿ ಮೀಸಲಾತಿ ಸೌಲಭ್ಯವನ್ನು ಪಡೆಯಬಹುದು.
- ವಯೋಮಿತಿ ಸಡಿಲಿಕೆಗೂ ಅವಕಾಶ: ನೇಮಕಾತಿಯಲ್ಲಿ ಎಲ್ಲ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ನೀಡಲು ತೀರ್ಮಾನಿಸಲಾಗಿದ್ದು, ಈ ಬಗ್ಗೆ ಪ್ರತ್ಯೇಕ ಆದೇಶ ಹೊರಡಿಸಲು ಡಿಪಿಎಆರ್ ಅಗತ್ಯ ಕ್ರಮ ವಹಿಸಲು ನೆರವಾಗಲಿದೆ.
- ಹೊಸ ದತ್ತಾಂಶ ಅಥವಾ ಮಾಹಿತಿ ಬಂದಾಗ ಅಗತ್ಯ ಮಾರ್ಪಾಡುಗಳನ್ನು ಮಾಡಲು ಕರ್ನಾಟಕ ರಾಜ್ಯ ಎಸ್‌ಸಿ ಮತ್ತು ಎಸ್‌ಟಿ ಆಯೋಗಕ್ಕೆ ಅಧಿಕಾರ ನೀಡುವ ಬಗ್ಗೆ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಕಾಯ್ದೆ 2002ಕ್ಕೆ ತಿದ್ದುಪಡಿ ಮಾಡಲಾಗುವುದು.

**ಶೇ 56ಕ್ಕೆ ಹೆಚ್ಚಿಸಲು ನಿರ್ಣಯ**

- ಈಗಿರುವ ಮೀಸಲಾತಿ ಪ್ರಮಾಣ ವನ್ನು ಹೆಚ್ಚಿಸಲು ಸಂವಿಧಾನದ 9ನೇ ಪರಿಚ್ಛೇದಕ್ಕೆ ತಿದ್ದುಪಡಿ ತರುವಂತೆ ಕೇಂದ್ರದ ಮೇಲೆ ಒತ್ತಡ ಹೇರುವ ನಿರ್ಣಯವನ್ನು ಇದೇ ಅಧಿವೇಶನದಲ್ಲಿ ಕೈಗೊಳ್ಳಲು ಸಂಪುಟ ಸಭೆ ತೀರ್ಮಾನಿಸಿದೆ.
- ಪರಿಶಿಷ್ಟ ಜಾತಿಯವರಿಗೆ ನ್ಯಾಯ ಒದಗಿಸಬೇಕಾದರೆ ಈ ಅನಿವಾರ್ಯ ಕ್ರಮ ಕೈಗೊಳ್ಳಲೇಬೇಕಿದೆ ಎಂದು ವಿರೋಧ ಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ನಾಯಕರಿಗೆ ಮನವರಿಕೆ ಮಾಡಿಕೊಟ್ಟು, ಸದನದಲ್ಲಿ ಸರ್ವಾನುಮತದ ನಿರ್ಣಯ ಕೈಗೊಳ್ಳಬೇಕು ಎಂಬ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಗೊತ್ತಾಗಿದೆ.
- ಕರ್ನಾಟಕದಲ್ಲಿ ಈಗ ಇರುವ ಮೀಸಲಾತಿ ಪ್ರಮಾಣ ಶೇ 56ಕ್ಕೆ ಏರಿದೆ. ಇಂದಿರಾ ಸಾಹ್ನಿ ಪ್ರಕರಣದಲ್ಲಿ ತೀರ್ಪು ನೀಡಿದ್ದ ಸುಪ್ರೀಂಕೋರ್ಟ್ ಮೀಸಲಾತಿ ಪ್ರಮಾಣ ಶೇ 50 ಮೀರಬಾರದು ಎಂದು ಹೇಳಿದೆ. ಕರ್ನಾಟಕ ಸರ್ಕಾರವು ರಾಜ್ಯದಲ್ಲಿನ ಜನ ಸಂಖ್ಯೆಯ ಪ್ರಮಾಣಕ್ಕೆ ಅನುಗುಣ ವಾಗಿ, ಪರಿಶಿಷ್ಟ ಜಾತಿಯ ಮೀಸಲಾತಿಯನ್ನು ಶೇ 15ರಿಂದ 17ಕ್ಕೆ ಹಾಗೂ ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ 3ರಿಂದ 7ಕ್ಕೆ ಹೆಚ್ಚಿಸಿತ್ತು. ಇದರಿಂದಾಗಿ ಮೀಸಲಾತಿ ಪ್ರಮಾಣ ಶೇ 50ರ ಗಡುವನ್ನು ಮೀರಿದೆ.

## ❖ ಸಾಮಾಜಿಕ ಬಹಿಷ್ಕಾರ ಅಪರಾಧ ಮಸೂದೆ: ವಿಧಾನಸಭೆಯಲ್ಲಿ ಮಂಡನೆ

**ಸಂದರ್ಭ: 'ಯಾವುದೇ ವ್ಯಕ್ತಿ, ಕುಟುಂಬ ಅಥವಾ ಕುಟುಂಬದ ಸದಸ್ಯರನ್ನು ಸಾಮಾಜಿಕವಾಗಿ ಬಹಿಷ್ಕರಿಸಿದರೆ, ಅದನ್ನು ಅಪರಾಧವೆಂದು ಪರಿಗಣಿಸಿ ₹ 1 ಲಕ್ಷ ದಂಡ ಹಾಗೂ ಮೂರು ವರ್ಷದವರೆಗೆ**



Dr. Rajkumar IAS/KAS Academy

**ಜೈಲು ಶಿಕ್ಷೆಗೆ ಗುರಿಪಡಿಸಲು ಅವಕಾಶವಿರುವ 'ಕರ್ನಾಟಕ ಸಾಮಾಜಿಕ ಬಹಿಷ್ಕಾರ (ಪ್ರತಿಬಂಧ, ನಿಷೇಧ ಮತ್ತು ಪರಿಹಾರ) ಮಸೂದೆ- 2025' ಅನ್ನು ವಿಧಾನಸಭೆಯಲ್ಲಿ ಮಂಡಿಸಲಾಯಿತು.**

- ಮಸೂದೆಯನ್ನು ಸಮಾಜ ಕಲ್ಯಾಣ ಸಚಿವ ಎಚ್.ಸಿ. ಮಹದೇವಪ್ಪ ಮಂಡಿಸಿದರು.
- ಸಾಮಾಜಿಕ ಬಹಿಷ್ಕಾರವನ್ನು ಸಂಪೂರ್ಣ ನಿಷೇಧಿಸಲು ಮುಂದಾಗಿರುವ ರಾಜ್ಯ ಸರ್ಕಾರ, ಬಹಿಷ್ಕಾರ ತೀರ್ಮಾನ ತೆಗೆದುಕೊಂಡವರು, ಈ ಉದ್ದೇಶದಿಂದ ಸಭೆ, ಪಂಚಾಯಿತಿ, ಜಮಾವಣೆ, ಅಭಿಪ್ರಾಯ ಸಂಗ್ರಹ ನಡೆಸುವುದು, ಬಹಿಷ್ಕಾರಕ್ಕೆ ಪ್ರತ್ಯಕ್ಷ, ಪರೋಕ್ಷ ಸಹಾಯ, ಒತ್ತಡ, ಪ್ರಚೋದನೆ ನೀಡುವವರನ್ನೂ ಅಪರಾಧಿಗಳೆಂದು ಪರಿಗಣಿಸಿ ಜೈಲು ಅಥವಾ ದಂಡ ಅಥವಾ ಎರಡನ್ನೂ ವಿಧಿಸಲು ಮಸೂದೆ ಅವಕಾಶ ಕಲ್ಪಿಸಲಿದೆ.

## ❖ ಹೈಡ್ರೋಜನ್ ಕಾರು ಚಲಾಯಿಸಿದ ಜೋಶಿ

**ಸಂದರ್ಭ: ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಅವರು ಹೈಡ್ರೋಜನ್ ಕಾರನ್ನು ಚಲಾಯಿಸಿಕೊಂಡು ಸಂಸತ್ ಅಧಿವೇಶನಕ್ಕೆ ಬಂದರು.**

- ನವೀಕರಿಸಬಹುದಾದ ಇಂಧನ ಇಲಾಖೆ, ಟೊಯೋಟಾ ಕಿರ್ಲೋಸ್ಕರ್ ಕಂಪನಿ ಮತ್ತು ರಾಷ್ಟ್ರೀಯ ಸೌರಶಕ್ತಿ ಸಂಸ್ಥೆ ಜೊತೆಯಾಗಿ ತಯಾರಿಸಿದ ಹೈಡ್ರೋಜನ್ ಕಾರಿನಲ್ಲಿ ಬಂದ ಜೋಶಿ, ದೇಶದಲ್ಲಿ ಹೈಡ್ರೋಜನ್, ಹಸಿರು ಶಕ್ತಿ ಮತ್ತು ಹಸಿರು ಇಂಧನ ಬಳಕೆಗೆ ಉತ್ತೇಜನ ನೀಡಿದರು.

## ❖ ಮಾನವೀಯ ಪರಿಗಣನೆಗಳು ಕನಿಷ್ಠ ಶಿಕ್ಷೆ ಮೀರುವಂತಿಲ್ಲ: ಸುಪ್ರೀಂ ಕೋರ್ಟ್

**ಸಂದರ್ಭ: ಮಾನವೀಯ ನೆಲೆಗಟ್ಟಿನ ಪರಿಶೀಲನೆಗಳು ಶಾಸನಬದ್ಧ ಕನಿಷ್ಠ ಶಿಕ್ಷೆಯ ಮಿತಿಯನ್ನು ಮೀರಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಗುರುವಾರ ಹೇಳಿದೆ.**

- ಮಾದಕ ವಸ್ತು ಪ್ರಕರಣವೊಂದರಲ್ಲಿ ಮಹಿಳೆಗೆ ವಿಧಿಸಲಾದ ಶಿಕ್ಷೆಯ ವಿಚಾರದಲ್ಲಿ ಮಧ್ಯಪ್ರವೇಶಿಸಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಮದ್ರಾಸ್ ಹೈಕೋರ್ಟ್ 2024ರ ಜೂನ್‌ನಲ್ಲಿ ನೀಡಿದ್ದ ತೀರ್ಪನ್ನು ಪ್ರಶ್ನಿಸಿ ಮಹಿಳೆ ಮೇಲ್ಮನವಿ ಸಲ್ಲಿಸಿದ್ದರು.
- ಮಾದಕ ವಸ್ತುಗಳು ಮತ್ತು ಅಮಲು ಪದಾರ್ಥಗಳ ನಿಯಂತ್ರಣ (ಎನ್‌ಡಿಪಿಎಸ್) ಕಾಯ್ದೆ-1985ರ ಅಡಿಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಮಹಿಳೆಗೆ ವಿಧಿಸಲಾಗಿರುವ 10 ವರ್ಷಗಳ ಜೈಲು ಶಿಕ್ಷೆಯನ್ನು ಎತ್ತಿಹಿಡಿದು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ.

## ❖ 'ಭಾರತದ ಎಐಗೆ ಹೊಸ ಮುನ್ನುಡಿ' : ಕಾಗ್ನಿಜೆಂಟ್, ಇನ್ಫೊಸಿಸ್, ಟಿಸಿಎಸ್, ವಿಪ್ರೊ ಜತೆಗೆ ಮೈಕ್ರೊಸಾಫ್ಟ್ ಪಾಲುದಾರಿಕೆ

**ಸಂದರ್ಭ: ಏಷ್ಯಾದಲ್ಲೇ ಅತಿ ದೊಡ್ಡ ಹೂಡಿಕೆಯಾದ 17.5 ಶತಕೋಟಿ ಡಾಲರ್ (₹1.57 ಲಕ್ಷ ಕೋಟಿ) ಮೂಲಕ, ಭಾರತದ ಕೃತಕ ಬುದ್ಧಿಮತ್ತೆ (ಎ.ಐ) ಕ್ಷೇತ್ರದ ಮೂಲ ಸೌಕರ್ಯ ಅಭಿವೃದ್ಧಿಗೆ ಮೈಕ್ರೊಸಾಫ್ಟ್‌ನ ಬದ್ಧತೆ ಮತ್ತಷ್ಟು ಬಲಗೊಂಡಿದೆ' ಎಂದು ಕಂಪನಿಯ ಅಧ್ಯಕ್ಷ ಮತ್ತು ಸಿಇಒ ಸತ್ಯ ನಾದೆಲ್ಲಾ ಹೇಳಿದರು.**

- ಇಲ್ಲಿ ನಡೆದ ಮೈಕ್ರೊಸಾಫ್ಟ್‌ನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 'ಎ.ಐ ಆಧಾರಿತ ಕ್ಷೇತ್ರದಲ್ಲಿ ಲಕ್ಷಾಂತರ ಜನರಿಗೆ ಕೌಶಲ ತರಬೇತಿ ನೀಡುವ ಮೂಲಕ ಮೈಕ್ರೊಸಾಫ್ಟ್, ಭಾರತದ ಕ್ಲೌಡ್ ಕಂಪ್ಯೂಟಿಂಗ್ ಕ್ಷೇತ್ರದಲ್ಲೂ ಹೊಸ ಹೆಜ್ಜೆಗುರುತುಗಳನ್ನು ಮೂಡಿಸಲಿದೆ' ಎಂದರು.
- 'ಭಾರತದಲ್ಲಿ ಸ್ವಾಯತ್ತ ಎಐ ವ್ಯವಸ್ಥೆ 'ಏಜೆಂಟ್- ಎಐ' ಜಾರಿಯ ವೇಗವನ್ನು ಹೆಚ್ಚಿಸಲು ಮಾಹಿತಿ ತಂತ್ರಜ್ಞಾನ ವಲಯದ ಪ್ರಮುಖ ನಾಲ್ಕು ಕಂಪನಿಗಳಾದ ಕಾಗ್ನಿಜೆಂಟ್, ಇನ್ಫೊಸಿಸ್, ಟಿಸಿಎಸ್ ಮತ್ತು ವಿಪ್ರೊ ಜತೆಗೆ ಮಹತ್ವದ ಪಾಲುದಾರಿಕೆ ಮಾಡಿಕೊಳ್ಳಲಾಗಿದೆ. ಎಐ ಮಾರುಕಟ್ಟೆ ವಿಸ್ತರಣೆಗಾಗಿ ಪ್ರತಿ

ಕಂಪನಿಯು ತಲಾ 50 ಸಾವಿರ ಮೈಕ್ರೊಸಾಫ್ಟ್ ಕೋಪೈಲಟ್ ಪರವಾನಗಿ ನಿಯೋಜನೆ ಮಾಡಿಕೊಳ್ಳಲಿವೆ. ಈ ಪಾಲುದಾರಿಕೆಯಿಂದ ಕಂಪನಿಗಳ ಉತ್ಪಾದನಾ ಸಾಮರ್ಥ್ಯ, ದಕ್ಷತೆ ಹೆಚ್ಚಲಿದೆ' ಎಂದರು.

- 'ಮೈಕ್ರೊಸಾಫ್ಟ್‌ನ ಕ್ಲೌಡ್ ಕಂಪ್ಯೂ ಟಿಂಗ್ ವೇದಿಕೆಯಾದ 'ಅಜೂರ್' ಅನ್ನು ನಾವು ಜಗತ್ತಿನ ಕಂಪ್ಯೂಟರ್ ಆಗಿ ಬದಲಾಯಿಸುತ್ತೇವೆ. ಕ್ಲೌಡ್ ಸೇವೆಗಳಿಗಾಗಿ ಭಾರತವೂ ಸೇರಿದಂತೆ ಪ್ರಪಂಚದಾದ್ಯಂತ 70 ಡೇಟಾ ಕೇಂದ್ರ ಗಳು ನಿರ್ಮಾಣವಾಗಲಿವೆ. ಸದ್ಯ ನಾವು, ದಕ್ಷಿಣ, ಪಶ್ಚಿಮ ಮತ್ತು ಮಧ್ಯ ಭಾರತದಲ್ಲಿ ಮಾರುಕಟ್ಟೆ ಹೊಂದಿದ್ದು, ಶೀಘ್ರದಲ್ಲೇ ರಿಲಯನ್ಸ್ ಜಿಯೊ ಜತೆಗೂ ಪಾಲುದಾರಿಕೆ ಘೋಷಿಸಲಿದ್ದೇವೆ. ಭಾರತದಲ್ಲಿ ನಿರ್ಮಾಣಗೊಳ್ಳಲಿರುವ ಹೊಸ ಡೇಟಾ ಕೇಂದ್ರವು 2026ರಲ್ಲಿ ಕಾರ್ಯಾರಂಭವಾಗಲಿದೆ' ಎಂದರು.
- **ಇ-ಶ್ರಮ:** ಭಾರತದಲ್ಲಿ 20 ಲಕ್ಷಕ್ಕೂ ಹೆಚ್ಚು ಜನರಿಗೆ ಎಐ ಆಧಾರಿತ ಕೌಶಲ ತರಬೇತಿ ನೀಡಲಾಗುವುದು. ಅಸಂಘಟಿತ ವಲಯದ ಕಾರ್ಮಿಕರನ್ನು ಎಐ ಮೂಲಕ ಹೇಗೆ ಮೇಲೆತ್ತಬಹುದು ಎನ್ನುವುದಕ್ಕೆ ಸರ್ಕಾರದ 'ಇ-ಶ್ರಮ' ಕಾರ್ಯಕ್ರಮ ಉತ್ತಮ ಉದಾಹರಣೆ ಎಂದು ಹೇಳಿದರು.

**'ಡಿಜಿಟಲ್ ಸಾರ್ವಭೌಮತ್ವ ಮುಖ್ಯ'**

- ಎಐ ಬಳಕೆ ಹೆಚ್ಚಿದಂತೆ ರಾಷ್ಟ್ರಗಳು ತಮ್ಮ ಡೇಟಾ ಮೇಲೆ ಸಂಪೂರ್ಣ ನಿಯಂತ್ರಣ ಮತ್ತು ಬಲವಾದ ಸೈಬರ್ ಸುರಕ್ಷತೆ ಖಾತರಿಪಡಿಸಿಕೊಳ್ಳುವುದು (ಡಿಜಿಟಲ್ ಸಾರ್ವಭೌಮತ್ವ) ಬಹು ಮುಖ್ಯವಾಗಿದೆ. 'ಅಜೂರ್' ಇದನ್ನು ಬೆಂಬಲಿಸಲಿದೆ. 2030ರ ವೇಳೆಗೆ ಭಾರತವು ವೆಬ್ ಆಧಾರಿತ ವೇದಿಕೆ 'ಗಿಟ್‌ಹಬ್' ಮೂಲಕ ವಿಶ್ವದ ನಂ.1 ಸಮುದಾಯವಾಗಲಿದೆ ಎಂದು ನಾದೆಲ್ಲಾ ವಿಶ್ವಾಸ ವ್ಯಕ್ತಪಡಿಸಿದರು.

## ❖ ಆಮದು ಸುಂಕ ಹೆಚ್ಚಿಸಿದ ಮೆಕ್ಸಿಕೊ

**ಸಂದರ್ಭ: ಭಾರತ, ಚೀನಾ ಸೇರಿದಂತೆ ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಳ್ಳದ ದೇಶಗಳಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಶೇಕಡ 50ರಷ್ಟು ಆಮದು ಸುಂಕ ವಿಧಿಸಲು ಮೆಕ್ಸಿಕೋದ ಸೆನೆಟ್ ಒಪ್ಪಿಗೆ ನೀಡಿದೆ.**

- ಹೊಸ ತೆರಿಗೆ ದರವು 2026ರ ಜನವರಿಯಿಂದ ಜಾರಿಗೆ ಬರಲಿದೆ. ಕಾರು, ಆಟೊ, ವಾಹನಗಳ ಬಿಡಿಭಾಗಗಳು, ಜವಳಿ, ಪ್ಲಾಸ್ಟಿಕ್, ಪಾದರಕ್ಷೆ, ಉಕ್ಕು ಸೇರಿದಂತೆ 1,400ಕ್ಕೂ ಹೆಚ್ಚು ಸರಕುಗಳಿಗೆ ಪರಿಷ್ಕೃತ ಸುಂಕ ಅನ್ವಯಿಸಲಿದೆ. ಕೆಲವು ಸರಕುಗಳಿಗೆ ಹೆಚ್ಚುವರಿಯಾಗಿ ಶೇ 35ರಷ್ಟು ಆಮದು ಸುಂಕ ಪಾವತಿಸಬೇಕಾಗುತ್ತದೆ.
- ಚೀನಾ, ಭಾರತ, ದಕ್ಷಿಣ ಕೊರಿಯಾ, ಥಾಯ್ಲೆಂಡ್ ಮತ್ತು ಇಂಡೊನೇಷ್ಯಾ ದೇಶಗಳು ಮೆಕ್ಸಿಕೊ ಜತೆಗೆ ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಂಡಿಲ್ಲ. ಈ ದೇಶಗಳ ರಫ್ತಿನ ಮೇಲೆ ಸುಂಕ ಹೇರಿಕೆಯು ನಕಾರಾತ್ಮಕ ಪರಿಣಾಮ ಬೀರಲಿದೆ. ಚೀನಾಕ್ಕೆ ಇದು ಹೆಚ್ಚಿನ ಹೊಡೆತ ನೀಡಲಿದೆ ಎಂದು ಮಾರುಕಟ್ಟೆ ತಜ್ಞರು ಹೇಳಿದ್ದಾರೆ.
- ಮೆಕ್ಸಿಕೊದ ಸೆನೆಟ್ ಆಮದು ಸುಂಕ ಹೆಚ್ಚಳದ ಪ್ರಸ್ತಾವಕ್ಕೆ ಅನುಮೋದನೆ ನೀಡಿದೆ. ಆಡಳಿತಾರೂಢ ಮೊರೆನಾ ಪಕ್ಷದ ಅಧ್ಯಕ್ಷೆ, ಕ್ಲಾಡಿಯಾ ಶೀನ್‌ಬಾಮ್ ಅವರು ತೆರಿಗೆ ಹೆಚ್ಚಳವನ್ನು ಸಮರ್ಥಿಸಿಕೊಂಡಿದ್ದು, ದೇಶೀಯ ಉತ್ಪಾದನೆಯನ್ನು ಹೆಚ್ಚಿಸಲು ಇದು ಅನಿವಾರ್ಯವಾಗಿತ್ತು ಎಂದು ಹೇಳಿದ್ದಾರೆ. ತೆರಿಗೆ ಹೆಚ್ಚಳದ ಪರವಾಗಿ 76 ಸದಸ್ಯರು ಮತ ಚಲಾಯಿಸಿದರೆ, ಐದು ಮಂದಿ ಇದಕ್ಕೆ ವಿರುದ್ಧವಾಗಿ ಮತ ಚಲಾಯಿಸಿದರು. 35 ಸದಸ್ಯರು ಗೈರಾಗಿದ್ದರು.
- ತೆರಿಗೆ ಹೆಚ್ಚಳಕ್ಕೆ ಟ್ರಂಪ್ ಕಾರಣ: 'ಮೆಕ್ಸಿಕೊದ ಪ್ರಮುಖ ವ್ಯಾಪಾರ ಪಾಲುದಾರ ದೇಶವಾಗಿರುವ ಅಮೆರಿಕದ ಜತೆಗೆ ನಡೆಯುತ್ತಿರುವ ಮಾತುಕತೆಯೇ ಆಮದು ಸುಂಕ ಹೆಚ್ಚಳಕ್ಕೆ ಕಾರಣ' ಎಂದು ಮಾರುಕಟ್ಟೆ ತಜ್ಞರು ವಿಶ್ಲೇಷಿಸಿದ್ದಾರೆ.
- ಚೀನಾವು ಅಮೆರಿಕದ ಮಾರುಕಟ್ಟೆ ಪ್ರವೇಶಿಸಲು ಮೆಕ್ಸಿಕೊವನ್ನು ಹಿಂಬಾಗಿಲಾಗಿ ಬಳಸಿಕೊಳ್ಳುತ್ತಿದೆ ಎಂಬ ಆರೋಪ ಇದೆ. ಇದಕ್ಕೆ ಪ್ರತಿಯಾಗಿ ಅಮೆರಿಕವು ಮೆಕ್ಸಿಕೊದ ಮೇಲೆ ಹೆಚ್ಚುವರಿ ತೆರಿಗೆ ವಿಧಿಸುವ

Dr. Rajkumar IAS Academy

ಎಚ್ಚರಿಕೆ ನೀಡಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಅಧ್ಯಕ್ಷೆ ಕ್ಲಾಡಿಯಾ ಶೀನ್‌ಬಾಮ್ ಈ ನಿರ್ಧಾರ ಕೈಗೊಂಡಿದ್ದಾರೆ ಎನ್ನಲಾಗಿದೆ.

## ❖ ರೂಪಾಯಿ ಮೌಲ್ಯ 38 ಪೈಸೆ ಇಳಿಕೆ

**ಸಂದರ್ಭ: ಕರೆನ್ಸಿ ವಿನಿಮಯ ಮಾರುಕಟ್ಟೆಯಲ್ಲಿ ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯವು ವಹಿವಾಟಿನಲ್ಲಿ 38 ಪೈಸೆಯಷ್ಟು ಕುಸಿದಿದೆ.**

- ವಹಿವಾಟಿನ ಅಂತ್ಯದ ವೇಳೆಗೆ ರೂಪಾಯಿ ಮೌಲ್ಯವು ₹90.32ಕ್ಕೆ ಇಳಿದಿದೆ. ಇದು ಸಾರ್ವಕಾಲಿಕ ಕನಿಷ್ಠ ಮಟ್ಟವಾಗಿದೆ.
- ಭಾರತ ಮತ್ತು ಅಮೆರಿಕದ ವ್ಯಾಪಾರ ಒಪ್ಪಂದವು ವಿಳಂಬವಾಗುತ್ತಿರುವುದು ಹೂಡಿಕೆದಾರರ ಮೇಲೆ ಪರಿಣಾಮ ಬೀರಿದೆ. ಇದು ರೂಪಾಯಿ ಮೌಲ್ಯ ಇಳಿಕೆಗೆ ಕಾರಣವಾಗಿದೆ ಎಂದು ಮಾರುಕಟ್ಟೆ ತಜ್ಞರು ಹೇಳಿದ್ದಾರೆ.
- **ಸೆನ್ಸೆಕ್ಸ್ , ನಿಫ್ಟಿ ಏರಿಕೆ:** ಮುಂಬೈ ಷೇರುಪೇಟೆ ಸೂಚ್ಯಂಕ ಸೆನ್ಸೆಕ್ಸ್ 426 ಅಂಶ ಏರಿಕೆಯಾಗಿ, 84,818ಕ್ಕೆ ವಹಿವಾಟು ಕೊನೆಗೊಂಡಿದೆ. ರಾಷ್ಟ್ರೀಯ ಷೇರುಪೇಟೆ ಸೂಚ್ಯಂಕ ನಿಫ್ಟಿ 140 ಅಂಶ ಹೆಚ್ಚಳವಾಗಿ, 25,898ಕ್ಕೆ ಅಂತ್ಯಗೊಂಡಿದೆ.
- ಬೆಳ್ಳಿ ₹2,400 ಏರಿಕೆ: ಇಲ್ಲಿನ ಚಿನಿವಾರ ಪೇಟೆಯಲ್ಲಿ ಗುರುವಾರದ ವಹಿವಾಟಿನಲ್ಲಿ ಬೆಳ್ಳಿ ಧಾರಣೆ ಕೆ.ಜಿಗೆ ₹2,400 ಹೆಚ್ಚಳವಾಗಿ, ₹1,94,400ರಂತೆ ಮಾರಾಟವಾಗಿದೆ.

## ❖ 'ಗೋಲ್ಡ್ ಕಾರ್ಡ್' ಗೆ ಟ್ರಂಪ್ ಚಾಲನೆ

**ಸಂದರ್ಭ: ಅಮೆರಿಕ ಪೌರತ್ವ ಪಡೆಯಬೇಕು ಎಂದು ಬಯಸುವ ವಲಸಿಗರಿಗಾಗಿ ಹತ್ತು ಲಕ್ಷ ಡಾಲರ್ ಶುಲ್ಕದ (ಅಂದಾಜು ₹9 ಕೋಟಿ) 'ಗೋಲ್ಡ್ ಕಾರ್ಡ್' ಗೆ ಚಾಲನೆ ನೀಡಿದ್ದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.**

- ಅಮೆರಿಕ್ಕೆ ಗಮನಾರ್ಹ ಕೊಡುಗೆ ನೀಡಬಲ್ಲಂಥ ಅಭ್ಯರ್ಥಿಗಳ ಸಾಮರ್ಥ್ಯ ಪರಿಗಣಿಸಿ, ವೀಸಾ ಆಧಾರಿತ ಈ ಸೌಲಭ್ಯವನ್ನು ನೀಡಲಾಗುತ್ತದೆ.
- ಅಮೆರಿಕದ ವಿಶ್ವವಿದ್ಯಾಲಯಗಳು/ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಪೂರ್ಣಗೊಳಿಸಿದ ಪ್ರತಿಭಾವಂತರನ್ನು ನೇಮಕ ಮಾಡಿಕೊಳ್ಳುವ ಕಂಪನಿಗಳಿಗೆ 'ಗೋಲ್ಡ್ ಕಾರ್ಡ್' ಅನುಕೂಲವಾಗಲಿದೆ.
- ಈ ಕಾರ್ಡ್‌ಗೆ ಚಾಲನೆ ನೀಡಿ ಮಾತನಾಡಿದ ಟ್ರಂಪ್,'ಅಮೆರಿಕದಲ್ಲಿ ಉನ್ನತ ವ್ಯಾಸಂಗ ಪೂರೈಸುವ ಭಾರತ ಮತ್ತು ಚೀನಾ ವಿದ್ಯಾರ್ಥಿಗಳು, ಮರಳಿ ತಮ್ಮ ದೇಶಗಳಿಗೆ ಹೋಗಬೇಕಾಗುತ್ತದೆ. ಇದು ನಾಚಿಕೆಗೇಡಿನ ವಿಚಾರ' ಎಂದು ಹೇಳಿದ್ದಾರೆ.

## ❖ ಐದು ರಾಜ್ಯಗಳಿಗೆ ₹6.2 ಕೋಟಿ

**ಸಂದರ್ಭ: ಕರ್ನಾಟಕ ಸೇರಿದಂತೆ ಐದು ರಾಜ್ಯಗಳಲ್ಲಿ ಅಳಿವಿನಂಚಿನಲ್ಲಿರುವ ರಕ್ತ ಚಂದನದ ಸಂರಕ್ಷಣೆ ಮತ್ತು ರೈತರು ಹಾಗೂ ಅರಣ್ಯ ಅವಲಂಬಿತ ಸಮುದಾಯಗಳ ಬದುಕು ಸದೃಢಗೊಳಿಸಲು ರಾಷ್ಟ್ರೀಯ ಜೀವವೈವಿಧ್ಯ ಪ್ರಾಧಿಕಾರ ₹6.2 ಕೋಟಿ ಬಿಡುಗಡೆ ಮಾಡಿದೆ ಎಂದು ಪರಿಸರ ಇಲಾಖೆ ಗುರುವಾರ ತಿಳಿಸಿದೆ.**

- ₹6.2 ಕೋಟಿಯಲ್ಲಿ, ತೆಲಂಗಾಣದ ರೈತರಿಗೆ ₹ 17.8 ಲಕ್ಷ, ಆಂಧ್ರದ ರೈತರಿಗೆ ₹1.1 ಕೋಟಿ, ತಮಿಳುನಾಡು ಅರಣ್ಯ ಇಲಾಖೆಗೆ ₹2.98 ಕೋಟಿ, ಕರ್ನಾಟಕ ಅರಣ್ಯ ಇಲಾಖೆಗೆ ₹1.05 ಕೋಟಿ, ಮಹಾರಾಷ್ಟ್ರ ಅರಣ್ಯ ಇಲಾಖೆಗೆ ₹ 69.2 ಲಕ್ಷ ಮತ್ತು ತೆಲಂಗಾಣ ಅರಣ್ಯ ಇಲಾಖೆಗೆ ₹ 5.8 ಲಕ್ಷ ಲಭಿಸಲಿದೆ.


Dr Rajkumar IAS Academy

## ❖ ಎಸ್‌ಐಆರ್: ಗಡುವು ವಿಸ್ತರಣೆ: ಪಶ್ಚಿಮ ಬಂಗಾಳ: ಗಡುವು ವಿಸ್ತರಣೆ ಇಲ್ಲ

**ಸಂದರ್ಭ: ಐದು ರಾಜ್ಯಗಳಲ್ಲಿ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ವಿವಿಧ ಹಂತಗಳ ಅಂತಿಮ ಗಡುವನ್ನು ಕೇಂದ್ರ ಚುನಾವಣಾ ಆಯೋಗವು ವಿಸ್ತರಿಸಿದೆ.**

- ತಮಿಳುನಾಡು, ಗುಜರಾತ್, ಮಧ್ಯಪ್ರದೇಶ, ಛತ್ತೀಸಗಢ, ಉತ್ತರ ಪ್ರದೇಶ ಹಾಗೂ ಅಂಡಮಾನ್ ಮತ್ತು ನಿಕೋಬಾರ್‌ಗೆ ಸಂಬಂಧಿಸಿದಂತೆ ಪರಿಷ್ಕೃತ ವೇಳಾಪಟ್ಟಿ ಪ್ರಕಟಿಸಲಾಗಿದೆ ಎಂದು ಆಯೋಗವು ಗುರುವಾರ ಪ್ರಕಟಣೆಯಲ್ಲಿ ತಿಳಿಸಿದೆ. ಆಯಾ ರಾಜ್ಯಗಳ ಮುಖ್ಯ ಚುನಾವಣಾ ಅಧಿಕಾರಿಗಳ ಮನವಿಯಂತೆ ಗಡುವು ವಿಸ್ತರಿಸಲಾಗಿದೆ ಎಂದು ಹೇಳಿದೆ.
- ತಮಿಳುನಾಡು ಮತ್ತು ಗುಜರಾತ್‌ನಲ್ಲಿ ಪಟ್ಟಿಗೆ ಹೆಸರು ಸೇರ್ಪಡೆಯ ಅರ್ಜಿ ನಮೂನೆ ವಿತರಣೆ ಗಡುವನ್ನು ಡಿ.14ರವರೆಗೆ ವಿಸ್ತರಿಸಲಾಗಿದೆ. ಮತದಾರರ ಕರಡು ಪಟ್ಟಿಯನ್ನು ಡಿ.19ಕ್ಕೆ ಪ್ರಕಟಿಸಲಾಗುವುದು ಎಂದಿದೆ.
- ಮಧ್ಯಪ್ರದೇಶ, ಛತ್ತೀಸಗಢ ಹಾಗೂ ಅಂಡಮಾನ್ ಮತ್ತು ನಿಕೋಬಾರ್‌ನಲ್ಲಿ ಅರ್ಜಿ ನಮೂನೆ ವಿತರಣೆ ಗಡುವನ್ನು ಡಿ.18ರವರೆಗೆ ವಿಸ್ತರಿಸಲಾಗಿದ್ದು, ಕರಡು ಪಟ್ಟಿಯನ್ನು ಡಿ.23ಕ್ಕೆ ಪ್ರಕಟಿಸಲಾಗುವುದು. ಉತ್ತರ ಪ್ರದೇಶದಲ್ಲಿ ಅರ್ಜಿ ವಿತರಣೆಗೆ ಡಿ.26ರವರೆಗೂ ಕಾಲಾವಕಾಶ ನೀಡಲಾಗಿದ್ದು, ಡಿ.31ರಂದು ಕರಡು ಪಟ್ಟಿ ಪ್ರಕಟಿಸಲಾಗುತ್ತದೆ ಎಂದು ಹೇಳಿದೆ.
- ಗೋವಾ, ಪುದುಚೇರಿ, ಲಕ್ಷದ್ವೀಪ, ರಾಜಸ್ಥಾನ ಮತ್ತು ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ಎಸ್ ಐಆರ್ ಪ್ರಕ್ರಿಯೆಯ ಗಡುವು ವಿಸ್ತರಿಸಿಲ್ಲ. ಇಲ್ಲಿ ಅರ್ಜಿ ವಿತರಣೆ ಕೊನೆಗೊಂಡಿದ್ದು, ಕರಡು ಪಟ್ಟಿಯನ್ನು ಇದೇ 16ರಂದು ಪ್ರಕಟಿಸಲಾಗುತ್ತದೆ.
- ಕೇರಳದಲ್ಲಿ ನಡೆಯುತ್ತಿರುವ ಪ್ರಕ್ರಿಯೆಯ ಗಡುವನ್ನು ಈ ಹಿಂದೆಯೇ ವಿಸ್ತರಿಸಲಾಗಿತ್ತು. ಡಿ.18ರವರೆಗೆ ಅರ್ಜಿ ವಿತರಣೆ ನಡೆಯಲಿದ್ದು, ಕರಡು ಪಟ್ಟಿಯನ್ನು 23ರಂದು ಪ್ರಕಟಿಸಲಾಗುತ್ತದೆ.

IAS/KAS Academy

❖ **ವಿಶ್ವದ ಅತಿದೊಡ್ಡ ಆಡಳಿತಾತ್ಮಕ ಮತ್ತು ಸಂಖ್ಯಾಶಾಸ್ತ್ರೀಯ ಕಾರ್ಯಕ್ಕೆ ವೇದಿಕೆ ಸಿದ್ಧಪಡಿಸಿರುವ ಕೇಂದ್ರ ಸರ್ಕಾರವು 2027ರ ಜನಗಣತಿ ನಡೆಸಲು ₹11,718.24 ಕೋಟಿಗಳ ಬಜೆಟ್‌ಗೆ ಅನುಮೋದನೆ ನೀಡಿದೆ.**

- ಮೊದಲ ಬಾರಿಗೆ ಡಿಜಿಟಲ್ ವಿಧಾನದಲ್ಲಿ ನಡೆಯಲಿರುವ ಜನಗಣತಿಗೆ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ ಕೇಂದ್ರ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.
- 2027ರ ಜನಗಣತಿಯು ದೇಶದಲ್ಲಿ 16ನೇ ಮತ್ತು ಸ್ವಾತಂತ್ರ್ಯದ ನಂತರದ 8ನೇ ಜನಗಣತಿಯಾಗಲಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.

❖ **ಏಕೀಕೃತ ವ್ಯವಸ್ಥೆಗೆ ಸಂಪುಟ ಒಪ್ಪಿಗೆ: ಉನ್ನತ ಶಿಕ್ಷಣ ಕ್ಷೇತ್ರ ನಿಯಂತ್ರಣಕ್ಕೆ 'ವಿಕಸಿತ ಭಾರತ್ ಶಿಕ್ಷಾ ಅಧಿಕ್ಷಣ್' (ವಿಬಿಎಸ್‌ಎ)**

**ಸಂದರ್ಭ: ಉನ್ನತ ಶಿಕ್ಷಣ ಕ್ಷೇತ್ರವನ್ನು ನಿಯಂತ್ರಿಸಲು ಈಗಿರುವ ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ), ಎಐಸಿಟಿಇ ಬದಲಾಯಿಸಿ ಏಕೀಕೃತ ವ್ಯವಸ್ಥೆ ರೂಪಿಸುವ ಮಸೂದೆಗೆ ಕೇಂದ್ರ ಸಚಿವ ಸಂಪುಟವು ಒಪ್ಪಿಗೆ ನೀಡಿದೆ.**

## ಎಲೆಕ್ಟ್ರಾನಿಕ್ ರೂಪದಲ್ಲಿ ಜಾತಿ ದತ್ತಾಂಶ ಸಂಗ್ರಹ

- ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಸಲಾಗುವುದು; 2026ರ ಏಪ್ರಿಲ್‌ನಿಂದ ಸೆಪ್ಟೆಂಬರ್ ವರೆಗೆ ಮನೆ ಪಟ್ಟಿ ಮತ್ತು ವಸತಿ ಗಣತಿ ಮತ್ತು 2027ರ ಫೆಬ್ರುವರಿಯಲ್ಲಿ ಜನಸಂಖ್ಯಾ ಗಣತಿ. (ಲಡಾಖ್, ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡ ರಾಜ್ಯಗಳಲ್ಲಿ ಜನಸಂಖ್ಯಾ ಗಣತಿಯು 2026ರ ಸೆಪ್ಟೆಂಬರ್‌ನಲ್ಲಿ ನಡೆಯಲಿದೆ)
- ಸುಮಾರು 30 ಲಕ್ಷ ಕ್ಷೇತ್ರ ಕಾರ್ಯಕರ್ತರು ಜನಗಣತಿಯಲ್ಲಿ ಭಾಗಿ
- ದತ್ತಾಂಶ ಸಂಗ್ರಹಣೆಗಾಗಿ ಮೊಬೈಲ್ ಅಪ್ಲಿಕೇಶನ್ ಮತ್ತು ಮೇಲ್ವಿಚಾರಣಾ ಉದ್ದೇಶಕ್ಕಾಗಿ ಕೇಂದ್ರೀಯ ಪೋರ್ಟಲ್ ಬಳಸಲಾಗುತ್ತದೆ.
- ಜನಗಣತಿಯನ್ನು ಯಶಸ್ವಿಯಾಗಿ ನಡೆಸಲು ಸ್ಥಳೀಯ ಮಟ್ಟದಲ್ಲಿ 18,600 ತಾಂತ್ರಿಕ ಮಾನವಶಕ್ತಿಯನ್ನು 550 ದಿನಗಳವರೆಗೆ ನಿಯೋಜಿಸಲಾಗುತ್ತದೆ. ಇದರಿಂದಾಗಿ, ಸರಿಸುಮಾರು 1.02 ಕೋಟಿ ಮಾನವ ದಿನಗಳ ಉದ್ಯೋಗ ಸೃಷ್ಟಿಯಾಗಲಿದೆ.
- ಜನಸಂಖ್ಯಾ ಎಣಿಕೆಯಲ್ಲಿ ಜಾತಿ ದತ್ತಾಂಶವನ್ನು ಎಲೆಕ್ಟ್ರಾನಿಕ್ ರೂಪದಲ್ಲಿ ಸಂಗ್ರಹಿಸಲಾಗುತ್ತದೆ.
- ಆಂಡ್ರಾಯ್ಡ್ ಮತ್ತು ಐಒಎಸ್ ಆವೃತ್ತಿಗಳಿಗೆ ಲಭ್ಯವಿರುವ ಮೊಬೈಲ್ ಅಪ್ಲಿಕೇಶನ್ ಬಳಸಿಕೊಂಡು ದತ್ತಾಂಶ ಸಂಗ್ರಹ
- ಸಂಪೂರ್ಣ ಜನಗಣತಿ ಪ್ರಕ್ರಿಯೆಯನ್ನು ನೈಜ ಸಮಯದಲ್ಲಿ ನಿರ್ವಹಿಸಲು ಮತ್ತು ಮೇಲ್ವಿಚಾರಣೆ ಮಾಡಲು 'ಜನಗಣತಿ ನಿರ್ವಹಣೆ ಮತ್ತು ಮೇಲ್ವಿಚಾರಣಾ ವ್ಯವಸ್ಥೆ (ಸಿಎಂಎಂಎಸ್)' ಎಂಬ ಪೋರ್ಟಲ್ ಅಭಿವೃದ್ಧಿ.
- ಸ್ವಯಂ-ಗಣತಿ ಮಾಡುವ ಆಯ್ಕೆಯನ್ನು ಸಾರ್ವಜನಿಕರಿಗೆ ಒದಗಿಸಲಾಗುವುದು.

- ಈ ಹಿಂದೆ ಭಾರತ ಉನ್ನತ ಶಿಕ್ಷಣ ಆಯೋಗ (ಎಚ್‌ಇಸಿಐ) ಎಂದು ನಾಮಕರಣ ಮಾಡಿದ್ದ ಪ್ರಸ್ತಾವಿತ ಮಸೂದೆಗೆ 'ವಿಕಸಿತ ಭಾರತ್ ಶಿಕ್ಷಾ ಅಧಿಕ್ಷಣ್' (ವಿಬಿಎಸ್‌ಎ) ಎಂದು ಹೆಸರಿಡಲು ನಿರ್ಧರಿಸಲಾಗಿದೆ.
- ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ)ಯಲ್ಲಿ ಉನ್ನತ ಶಿಕ್ಷಣ ನಿಯಂತ್ರಣವನ್ನು ಏಕೀಕೃತ ವ್ಯವಸ್ಥೆಗೆ ತರಲು ಪ್ರಸ್ತಾವಿಸಲಾಗಿತ್ತು. ವಿಶ್ವವಿದ್ಯಾಲಯದ ಅನುದಾನ ಆಯೋಗ (ಯುಜಿಸಿ) ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು (ಎಐಸಿಟಿಇ) ಹಾಗೂ ರಾಷ್ಟ್ರೀಯ ಶಿಕ್ಷಕರ ಶಿಕ್ಷಣ ಸಂಸ್ಥೆಯೂ(ಎನ್‌ಸಿಟಿಇ) ವಿಬಿಎಸ್ ಎನಲ್ಲಿ ವಿಲೀನವಾಗಲಿವೆ.
- 'ವಿಬಿಎಸ್‌ಎ ಮಸೂದೆಗೆ ಸಂಪುಟವು ಒಪ್ಪಿಗೆ ನೀಡಿದೆ' ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.
- ಯುಜಿಸಿಯು ತಾಂತ್ರಿಕೇತರ ಉನ್ನತ ಶಿಕ್ಷಣವನ್ನು ನೋಡಿಕೊಳ್ಳುತ್ತಿದೆ. ಎಐಸಿಟಿಇಯು ತಾಂತ್ರಿಕ ಶಿಕ್ಷಣದ ಮೇಲುಸ್ತುವಾರಿ ವಹಿಸಿದ್ದರೆ, ಎನ್‌ಸಿಟಿಯು ಶಿಕ್ಷಕರ ಶಿಕ್ಷಣದ ವಿಚಾರದ ಮೇಲೆ ನಿಗಾ ವಹಿಸಿದೆ.

- ಉದ್ದೇಶಿತ ಆಯೋಗವು ಉನ್ನತ ಶಿಕ್ಷಣದ ನಿಯಂತ್ರಣಕ್ಕೆ ಏಕೀಕೃತ ವ್ಯವಸ್ಥೆ ಹೊಂದಿರಲಿದೆ. ಆದರೆ, ವೈದ್ಯಕೀಯ ಹಾಗೂ ಕಾನೂನು ಶಿಕ್ಷಣ ಇದರ ವ್ಯಾಪ್ತಿಗೆ ಬರುವುದಿಲ್ಲ. ಈ ನೂತನ ವ್ಯವಸ್ಥೆಯು ನಿಯಂತ್ರಣ, ಮಾನ್ಯತೆ ಹಾಗೂ ವೃತ್ತಿಪರ ಮಾನದಂಡವನ್ನು ನಿಗದಿಪಡಿಸುವ ಗುರಿ ಹೊಂದಬೇಕು ಎಂದು ಶಿಫಾರಸಿನಲ್ಲಿ ತಿಳಿಸಲಾಗಿತ್ತು.

## ❖ ನಾಗರಿಕ ಪರಮಾಣು ಇಂಧನ ಕ್ಷೇತ್ರ; ಖಾಸಗಿ ಸಹಭಾಗಿತ್ವಕ್ಕೆ ಮುಕ್ತ

**ಸಂದರ್ಭ: 2047ರ ವೇಳೆಗೆ 100 ಗಿಗಾವ್ಯಾಟ್ ಅಣುಶಕ್ತಿ ಉತ್ಪಾದನೆ ಗುರಿ ತಲುಪುವ ನಿಟ್ಟಿನಲ್ಲಿ ನಾಗರಿಕ ಪರಮಾಣು ಇಂಧನ ಕ್ಷೇತ್ರವನ್ನು ಖಾಸಗಿ ಸಹಭಾಗಿತ್ವಕ್ಕೆ ಮುಕ್ತಗೊಳಿಸುವ ಮಸೂದೆಗೆ ಕೇಂದ್ರ ಸಚಿವ ಸಂಪುಟವು ಒಪ್ಪಿಗೆ ನೀಡಿದೆ.**

- ಪರಮಾಣು ಶಕ್ತಿಯ ಸುಸ್ಥಿರ ಬಳಕೆ ಹಾಗೂ ಪ್ರಗತಿ ನಿಟ್ಟಿನಲ್ಲಿ ಭಾರತ ಪರಿವರ್ತನೆ (ಶಾಂತಿ) ಮಸೂದೆಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಸಂಪುಟ ಸಭೆ ಒಪ್ಪಿಗೆ ನೀಡಿದೆ.
- ಕಳೆದ ಫೆಬ್ರುವರಿಯಲ್ಲಿ ಬಜೆಟ್ ಮಂಡಿಸಿದ್ದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಖಾಸಗಿ ಸಹಭಾಗಿತ್ವದಲ್ಲಿ ಪರಮಾಣು ಇಂಧನ ಕೇಂದ್ರ ಸ್ಥಾಪಿಸುವ ಯೋಜನೆ ಹೊಂದಿರುವುದಾಗಿ ಘೋಷಣೆ ಮಾಡಿದ್ದರು.
- ಸಣ್ಣ ಮಾಡ್ಯುಲರ್ ಪರಮಾಣು ಸ್ಥಾವರಗಳ ಅಭಿವೃದ್ಧಿ, ಸಂಶೋಧನೆಗಾಗಿ ₹ 20 ಸಾವಿರ ಕೋಟಿ ಮೊತ್ತದ ಯೋಜನೆಯನ್ನು ಈ ವೇಳೆ ಘೋಷಿಸಿದ್ದರು. ಖಾಸಗಿ ಸಹಭಾಗಿತ್ವದಲ್ಲಿ ದೇಶೀಯವಾಗಿ 2033ರ ವೇಳೆಗೆ ಇಂತಹ 5 ಸ್ಥಾವರಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದೂ ಅವರು ಹೇಳಿದ್ದರು.

## ❖ ವಿಮಾ ವಲಯ: ಎಫ್‌ಡಿಐ ಶೇ 100ಕ್ಕೆ ಹೆಚ್ಚಿಸುವ ಮಸೂದೆಗೆ ಸಂಪುಟ ಒಪ್ಪಿಗೆ

**ಸಂದರ್ಭ: ದೇಶದ ವಿಮಾ ವಲಯದಲ್ಲಿ ವಿದೇಶಿ ನೇರ ಬಂಡವಾಳ ಹೂಡಿಕೆಯ (ಎಫ್‌ಡಿಐ) ಪ್ರಮಾಣ ವನ್ನು ಶೇ 100ಕ್ಕೆ ಹೆಚ್ಚಿಸಲು ಅವಕಾಶ ಕಲ್ಪಿಸುವ ಮಸೂದೆಗೆ ಕೇಂದ್ರ ಸಚಿವ ಸಂಪುಟ ಶುಕ್ರವಾರ ಒಪ್ಪಿಗೆ ನೀಡಿದೆ ಎಂದು ಮೂಲಗಳು ತಿಳಿಸಿವೆ.**


- ಪ್ರಸ್ತುತ ನಡೆಯುತ್ತಿರುವ ಸಂಸತ್ತಿನ ಅಧಿವೇಶನದಲ್ಲಿ ಈ ಮಸೂದೆ ಮಂಡನೆ ಮಾಡುವ ಸಾಧ್ಯತೆ ಇದೆ. ಅಧಿವೇಶನವು ಡಿಸೆಂಬರ್ 19ರಂದು ಕೊನೆಗೊಳ್ಳಲಿದೆ.
- ವಿಮಾ ಕಾನೂನುಗಳ (ತಿದ್ದುಪಡಿ) ಮಸೂದೆ 2025, ವಿಮಾ ಕ್ಷೇತ್ರದ ಅಭಿವೃದ್ಧಿ ಮತ್ತು ವಹಿವಾಟನ್ನು ಸರಳಗೊಳಿಸುವ ಉದ್ದೇಶ ಹೊಂದಿದೆ. ಈ ಮಸೂದೆಯನ್ನು ಸೋಮವಾರ ಸಂಸತ್ತಿನಲ್ಲಿ ಮಂಡಿಸುವ ಸಾಧ್ಯತೆ ಇದೆ ಎಂದು ತಿಳಿಸಿವೆ.
- ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು, ಈ ವರ್ಷದ ಬಜೆಟ್ ಮಂಡನೆ ವೇಳೆ, ಹಣಕಾಸು ವಲಯದ ಸುಧಾರಣೆಗಳ ಭಾಗವಾಗಿ ಪ್ರಸ್ತುತ ವಿಮಾ ವಲಯದಲ್ಲಿರುವ ಎಫ್‌ಡಿಐ ಮಿತಿಯನ್ನು ಶೇ 74ರಿಂದ ಶೇ 100ಕ್ಕೆ ಹೆಚ್ಚಿಸುವ ಬಗ್ಗೆ ಪ್ರಸ್ತಾಪ ಮಾಡಿದ್ದರು. ಇಲ್ಲಿಯವರೆಗೆ ವಿಮಾ ವಲಯವು ₹82 ಸಾವಿರ ಕೋಟಿ ವಿದೇಶಿ ನೇರ ಹೂಡಿಕೆಯನ್ನು ಆಕರ್ಷಿಸಿದೆ.

Dr. Rajkumar's IAS Academy

- ವಿಮಾ ವಲಯದಲ್ಲಿ ಎಫ್‌ಡಿಐ ಅನ್ನು ಶೇ 100ಕ್ಕೆ ಹೆಚ್ಚಿಸುವುದು ಸೇರಿದಂತೆ 1938ರ ವಿಮಾ ಕಾಯ್ದೆಯ ವಿವಿಧ ನಿಬಂಧನೆಗಳನ್ನು ತಿದ್ದುಪಡಿ ಮಾಡಲು ಹಣಕಾಸು ಸಚಿವಾಲಯ ಪ್ರಸ್ತಾಪಿಸಿದೆ.
- ಈ ಪ್ರಕ್ರಿಯೆಯ ಭಾಗವಾಗಿ, ಜೀವ ವಿಮಾ ನಿಗಮ ಕಾಯ್ದೆ 1956 ಮತ್ತು ವಿಮಾ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ 1999 ಅನ್ನು ವಿಮಾ ಕಾಯ್ದೆ 1938ರ ಜೊತೆಗೆ ತಿದ್ದುಪಡಿ ಮಾಡಲಾಗುತ್ತಿದೆ.
- ಎಲ್‌ಐಸಿ ಕಾಯ್ದೆಗೆ ತರಲು ಉದ್ದೇಶಿಸಿರುವ ಬದಲಾವಣೆಗಳು, ಭಾರತೀಯ ಜೀವ ವಿಮಾ ನಿಗಮದ ಆಡಳಿತ ಮಂಡಳಿಗೆ ಕಾರ್ಯಾಚರಣೆ ತೀರ್ಮಾನಗಳನ್ನು ತೆಗೆದುಕೊಳ್ಳುವ ಅಧಿಕಾರ ನೀಡುವ ಪ್ರಸ್ತಾವ ಹೊಂದಿವೆ. ತಿದ್ದುಪಡಿಯು ಕಾನೂನಾಗಿ ಜಾರಿಗೆ ಬಂದರೆ ಶಾಖೆಗಳ ವಿಸ್ತರಣೆ, ನೇಮಕಾತಿಯಂತಹ ತೀರ್ಮಾನಗಳನ್ನು ಆಡಳಿತ ಮಂಡಳಿಯೇ ತೆಗೆದುಕೊಳ್ಳಲು ಸಾಧ್ಯವಾಗುತ್ತದೆ.
- ಪ್ರಸ್ತಾವಿತ ತಿದ್ದುಪಡಿಗಳು ವಿಮಾ ಪಾಲಿಸಿ ಹೊಂದಿರುವವರ ಹಿತಾಸಕ್ತಿ ರಕ್ಷಿಸಿ, ಅವರ ಹಣಕಾಸಿನ ಭದ್ರತೆಯನ್ನು ಹೆಚ್ಚಿಸಲಿದೆ. ಜೊತೆಗೆ ವಿಮಾ ವಲಯಕ್ಕೆ ಇನ್ನಷ್ಟು ಹೆಚ್ಚು ಕಂಪನಿಗಳು ಪ್ರವೇಶಿಸುವುದಕ್ಕೆ ನೆರವು ಒದಗಿಸುವ, ಆ ಮೂಲಕ ಆರ್ಥಿಕ ಬೆಳವಣಿಗೆ ಮತ್ತು ಉದ್ಯೋಗ ಸೃಷ್ಟಿಯನ್ನು ಉತ್ತೇಜಿಸುವ ಉದ್ದೇಶ ಹೊಂದಿವೆ.

**ಹಣಕಾಸು ಆಯೋಗದ 'ಆರೋಗ್ಯ' ಅನುದಾನ (₹ಕೋಟಿಗಳಲ್ಲಿ)**

| ವರ್ಷ | ಹಂಚಿಕೆ | ಬಿಡುಗಡೆ |
|---|---|---|
| 2021-22 | 551.53 | 551.53 |
| 2022-23 | 551.53 | 551.24 |
| 2023-24 | 579.11 | 395.02 |
| 2024-25 | 608.08 | 0 |
| 2025-2026 | 638.48 | 0 |
| ಒಟ್ಟು | 2,928.73 | 1,497.79 |




- **ಜೆಜೆಎಂ ಬಿಡುಗಡೆಗೆ ಬಾಕಿ ಎಷ್ಟು:** ಈ ಯೋಜನೆಯಡಿ ರಾಜ್ಯದಲ್ಲಿ ಈವರೆಗೆ ₹**36,357** ಕೋಟಿ ಖರ್ಚು ಮಾಡಲಾಗಿದೆ. ಕೇಂದ್ರ ಸರ್ಕಾರವು ತನ್ನ ಪಾಲು ₹**16,360** ಕೋಟಿ ಬಿಡುಗಡೆ ಮಾಡಬೇಕಿತ್ತು. ಆದರೆ, ಈ ವರೆಗೆ ಬಿಡುಗಡೆ ಮಾಡಿರುವುದು ₹**11,786** ಕೋಟಿ ಮಾತ್ರ. ಇದರಿಂದ ಯೋಜನೆಯ ಅನುಷ್ಠಾನಕ್ಕೆ ಹಿನ್ನಡೆಯಾಗಿದೆ ಎಂಬುದು ರಾಜ್ಯ ಸರ್ಕಾರದ ಆರೋಪ.

**ಯಾವುದಕ್ಕೆ ಎಷ್ಟು ಬರಬೇಕು**

- **ಗ್ರಾಮೀಣ ಕುಡಿಯುವ ನೀರು:** ಕೇಂದ್ರದ ಪಾಲು ₹**1,999** ಕೋಟಿ. ಬಿಡುಗಡೆ ₹**750** ಕೋಟಿ.
- **ಪ್ರಧಾನಮಂತ್ರಿ ಆವಾಸ್ ಯೋಜನೆ (ನಗರ):** ಕೇಂದ್ರದ ಪಾಲು ₹**400** ಕೋಟಿ. ಯಾವುದೇ ಮೊತ್ತ ಬಿಡುಗಡೆ ಇಲ್ಲ.
- **ಸ್ವಚ್ಛ ಭಾರತ (ನಗರ):** ಕೇಂದ್ರದ ಪಾಲು ₹**300** ಕೋಟಿ. ಈವರೆಗೆ ಅನುದಾನ ಬಿಡುಗಡೆ ಇಲ್ಲ.
- **ಶಾಲಾ ಶಿಕ್ಷಣ:** ₹**1,581** ಕೋಟಿ ಹಂಚಿಕೆ. ₹**755** ಕೋಟಿ ಬಿಡುಗಡೆ.
- **ಗ್ರಾಮ ಸಡಕ್ (ನಾಲ್ಕನೇ ಹಂತ):** ಅನುದಾನ ಶೂನ್ಯ

## ❖ ರಾಜ್ಯಕ್ಕೆ ಅನುದಾನ ಬರದ ಬರೆ: ಕೇಂದ್ರ ಸರ್ಕಾರದ ಪ್ರಾಯೋಜಕತ್ವದ ಯೋಜನೆಗಳಿಗೂ ಹಣದ ಕೊರತೆ

**ಸಂದರ್ಭ: ಕೇಂದ್ರ ಸರ್ಕಾರವು ಕರ್ನಾಟಕಕ್ಕೆ ಈ ವರ್ಷ ₹51,700 ಕೋಟಿ ತೆರಿಗೆ ಪಾಲು ಹಂಚಿಕೆ ಮಾಡಿದೆ. ಕಂತು ಕಂತುಗಳಲ್ಲಿ ರಾಜ್ಯದ ಪಾಲಿನ ಅನುದಾನ ಬಂದಿದೆ.**

- ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಈ ಸಾಲಿನಲ್ಲಿ ₹16,000 ಕೋಟಿ ನೀಡುವುದಾಗಿ ವಾಗ್ದಾನ ಮಾಡಿದೆ. ಆದರೆ, ಈ ವರೆಗೆ ₹7 ಸಾವಿರ ಕೋಟಿಯಷ್ಟೇ ನೀಡಿದೆ. ಇನ್ನೂ ₹9 ಸಾವಿರ ಕೋಟಿ ನೀಡಬೇಕಿದೆ. ಈ ಅನುದಾನ ಶೀಘ್ರ ಬಿಡುಗಡೆಗೆ ಆಗ್ರಹಿಸಿ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ಪತ್ರ ಬರೆದಿದೆ. ಜಲಜೀವನ್ ಮಿಷನ್ ಯೋಜನೆಯಲ್ಲೂ ಕೇಂದ್ರದ ಪಾಲು ₹4,574 ಕೋಟಿ ಬರಬೇಕಿದೆ.

### ಎರಡು ವರ್ಷದಿಂದ ಆರೋಗ್ಯ ಅನುದಾನ ಇಲ್ಲ

- ಕರ್ನಾಟಕ ರಾಜ್ಯಕ್ಕೆ 15ನೇ ಹಣಕಾಸು ಆಯೋಗ ಶಿಫಾರಸು ಮಾಡಿರುವ ಆರೋಗ್ಯ ಅನುದಾನವನ್ನು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಎರಡು ವರ್ಷಗಳಿಂದ ಬಿಡುಗಡೆಯೇ ಮಾಡಿಲ್ಲ.
- ಆಯೋಗವು 2021–22ರಿಂದ 2025–26ರ ಅವಧಿಗೆ ರಾಜ್ಯಕ್ಕೆ ₹2,928 ಕೋಟಿ ಹಂಚಿಕೆ ಮಾಡಿತ್ತು. ಇಲ್ಲಿಯವರೆಗೆ ₹1,497 ಕೋಟಿ ಬಿಡುಗಡೆ ಆಗಿದೆ. 2024–25, 2025–26ರಲ್ಲಿ ಅನುದಾನವೇ ಬಂದಿಲ್ಲ.

- ಕಳೆದ ಐದು ವರ್ಷಗಳಲ್ಲಿ ರಾಜ್ಯಕ್ಕೆ ಬಿಡುಗಡೆಯಾದ ಅನುದಾನವೆಷ್ಟು, ರಾಜ್ಯ ಖರ್ಚು ಮಾಡಿರುವುದೆಷ್ಟು ಎಂದು ದಕ್ಷಿಣ ಕನ್ನಡ ಸಂಸದ ಬ್ರಿಜೇಶ್ ಚೌಟ ಅವರು ಲೋಕಸಭೆಯಲ್ಲಿ ಶುಕ್ರವಾರ ಪ್ರಶ್ನೋತ್ತರ ಅವಧಿಯಲ್ಲಿ ಕೇಳಿದ್ದರು. ಇದಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆಯ ರಾಜ್ಯ ಸಚಿವ ಪ್ರತಾಪ್ ರಾವ್ ಜಾಧವ್ ನೀಡಿರುವ ಉತ್ತರದಲ್ಲಿ ಈ ಮಾಹಿತಿ ಇದೆ.

## ❖ 'ಪರಿಶಿಷ್ಟರಿಗೆ 3,200 ನ್ಯಾಯಬೆಲೆ ಅಂಗಡಿ'

**ಸಂದರ್ಭ: 'ಹೊಸ ಮೀಸಲಾತಿ ಅನುಸಾರ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದವರಿಗಾಗಿ 3,200 ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡಲಾಗಿದೆ ಎಂದು ಆಹಾರ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.**

- ರಾಜ್ಯದ ಗ್ರಾಮೀಣ ಭಾಗದಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ಆರಂಭಿಸುವ ಕುರಿತಂತೆ ಕಾಂಗ್ರೆಸ್‌ನ ಎಸ್.ಎನ್. ಸುಬ್ಬಾರೆಡ್ಡಿ ಅವರು ಸರ್ಕಾರದ ಸೆಳೆದರು. ಅದಕ್ಕೆ ಉತ್ತರಿಸಿದ ಮುನಿಯಪ್ಪ, 'ನಿಯಮದಂತೆ 3 ಕಿ.ಮೀ.ಗೊಂದು ನ್ಯಾಯಬೆಲೆ ಅಂಗಡಿ ತೆರೆಯ ಲಾಗುವುದು. ಒಂದು ವೇಳೆ ನ್ಯಾಯಬೆಲೆ ಅಂಗಡಿಗಳಿಲ್ಲದ ಕಡೆಗಳಲ್ಲಿ ಸಂಚಾರಿ ನ್ಯಾಯಬೆಲೆ ಅಂಗಡಿಗಳ ಮೂಲಕ ಪಡಿತರ ವಿತರಿಸಲಾಗುವುದು' ಎಂದರು.
- 'ಗುಡ್ಡಗಾಡು ಪ್ರದೇಶದಲ್ಲಿ ಕಡಿಮೆ ಪಡಿತರ ಚೀಟಿದಾರರಿದ್ದರೂ ಸಂಚಾರಿ ನ್ಯಾಯಬೆಲೆ ಅಂಗಡಿಗಳ ಮೂಲಕ ಪಡಿತರ ವಿತರಿಸುತ್ತೇವೆ. ಗ್ರಾಮಾಂತರ ಭಾಗದಲ್ಲಿ 500 ಮತ್ತು ನಗರ ಪ್ರದೇಶದಲ್ಲಿ 800 ಪಡಿತರ ಚೀಟಿಗೊಂದು ನ್ಯಾಯಬೆಲೆ ಅಂಗಡಿ ತೆರೆಯಲಾಗಿದೆ. ಇದೀಗ ಎಸ್‌ಸಿ, ಎಸ್‌ಟಿ ಸಮುದಾಯ ದವರಿಗಾಗಿ ಹೊಸದಾಗಿ 3,200 ನ್ಯಾಯ ಬೆಲೆ ಅಂಗಡಿ ತೆರೆಯಲು ಅನುಮತಿ ನೀಡಲಾಗಿದೆ' ಎಂದರು.

### 'ನೇಕಾರರ ಬಿಲ್ ಮೊತ್ತ ಮನ್ನಾ: ಸಿ.ಎಂ ಜೊತೆ ಚರ್ಚೆ'

- 'ವಿದ್ಯುತ್ ಮಗ್ಗಗಳಿಗೆ 10 ಎಚ್‌ಪಿವರೆಗೆ 2023ರ ನವೆಂಬರ್‌ನಿಂದ ಜಾರಿ ಮಾಡಿರುವ ಉಚಿತ ವಿದ್ಯುತ್ ಪೂರೈಕೆ ಯೋಜನೆಯನ್ನು 2023ರ ಏಪ್ರಿಲ್‌ನಿಂದಲೇ ಅನ್ವಯಗೊಳಿಸ ಬೇಕೆಂಬ ನೇಕಾರರ ಬೇಡಿಕೆಯನ್ನು ಮುಖ್ಯಮಂತ್ರಿ ಜೊತೆ ಚರ್ಚಿಸಿ ತೀರ್ಮಾನಿ ಸಲಾಗುವುದು' ಎಂದು ಜವಳಿ ಸಚಿವ ಶಿವಾನಂದ ಪಾಟೀಲ ಹೇಳಿದರು.
- ವಿಧಾನಸಭೆಯಲ್ಲಿ ಬಿಜೆಪಿಯ ಶಶಿಕಲಾ ಜೊಲ್ಲೆ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು. 'ನೇಕಾರರ ವಿದ್ಯುತ್ ಬಿಲ್ ಅಂದಾಜು ₹20 ಕೋಟಿಯಷ್ಟು ಬಾಕಿ ಇದೆ. ಅದನ್ನು ಮನ್ನಾ ಮಾಡುವುದ ರಿಂದ ಸರ್ಕಾರಕ್ಕೆ ಹೊರೆಯಾಗುವುದಿಲ್ಲ. ಈ ಕುರಿತು ತೀರ್ಮಾನ ಕೈಗೊಳ್ಳುವವರೆಗೆ ವಿದ್ಯುತ್ ಪೂರೈಕೆ ಕಂಪನಿಗಳು ನೇಕಾರ ಕೈಮಗ್ಗಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸದಂತೆ ನಿರ್ದೇಶನ ನೀಡ ಬೇಕು' ಎಂದು ಜೊಲ್ಲೆ ಆಗ್ರಹಿಸಿದರು. ಬಿಜೆಪಿಯ ಸಿದ್ದು ಸವದಿ, ಬಿ.ವೈ. ವಿಜಯೇಂದ್ರ, ಪ್ರಭು ಚವ್ಹಾಣ್ ದನಿಗೂಡಿಸಿದರು.
- 'ಚುನಾವಣಾ ಪ್ರಣಾಳಿಕೆಯಲ್ಲಿ ಭರವಸೆ ನೀಡಿದಂತೆ ಹತ್ತು ಎಚ್‌ಪಿ ವರೆಗಿನ ವಿದ್ಯುತ್ ಮಗ್ಗಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ. 2023ರ ನವೆಂಬರ್‌ನಿಂದ ಈ ಆದೇಶ ಜಾರಿಗೆ ಬಂದಿದ್ದು, ಅಂದಿನಿಂದ ಅನ್ವಯವಾಗುತ್ತಿದೆ. ನೇಕಾರರ ಬೇಡಿಕೆ ಯಂತೆ ಹತ್ತರಿಂದ 20 ಎಚ್‌ಪಿವರೆಗಿನ ಪ್ರತಿ ಯೂನಿಟ್‌ಗೆ ₹1.25 ರಿಯಾಯಿತಿ ದರದಲ್ಲಿ ವಿದ್ಯುತ್ ಸೌಲಭ್ಯ ನೀಡಲಾಗುತ್ತಿದೆ. ಈ ಯೋಜನೆಗಳಿಂದ ಸರ್ಕಾರಕ್ಕೆ ವಾರ್ಷಿಕ ಸುಮಾರು ₹130 ಕೋಟಿ ವೆಚ್ಚವಾಗುತ್ತಿದೆ' ಎಂದು ಸಚಿವರು ವಿವರಿಸಿದರು.
- 'ಅನೇಕ ನೇಕಾರರು ಉಚಿತ ವಿದ್ಯುತ್ ಯೋಜನೆ ಜಾರಿಗೆ ಬರುವವರೆಗೆ ವಿದ್ಯುತ್ ಬಿಲ್ ಪಾವತಿ ಮಾಡಿದ್ದಾರೆ. ಕೆಲವರು ಮಾತ್ರ ಬಾಕಿ ಉಳಿಸಿಕೊಂಡಿ ದ್ದಾರೆ. ಯಾವುದೇ ಯೋಜನೆ ಸರ್ಕಾರದ ಆದೇಶ ಹೊರಬಿದ್ದ ನಂತರ ಅನ್ವಯವಾಗುತ್ತದೆ. ಆದರೂ, ಆದೇಶ ಹೊರಬೀಳುವ ಹಿಂದಿನ ಅವಧಿಗೂ ಅನ್ವಯ ಮಾಡಬೇಕು ಎಂಬ ಬೇಡಿಕೆಗಳಿಗೆ ಸರ್ಕಾರ ಸಕಾರಾತ್ಮವಾಗಿ ಸ್ಪಂದಿಸಲಿದೆ' ಎಂದರು.

Dr. Rajkumar IAS/KAS Academy


## ಹು-ಧಾ ಪಾಲಿಕೆ ವಿಭಜನೆಗೆ ನಿಯೋಗ

- 'ಹುಬ್ಬಳ್ಳಿ- ಧಾರವಾಡ ಮಹಾನಗರಪಾಲಿಕೆಯನ್ನು ವಿಭಜಿಸಿ, ಪ್ರತ್ಯೇಕ ಧಾರವಾಡ ಮಹಾನಗರಪಾಲಿಕೆಯಾಗಿ ಮಾಡುವ ಪ್ರಸ್ತಾವವನ್ನು ರಾಜ್ಯಪಾಲರಿಗೆ ಸಲ್ಲಿಸಲಾಗಿದೆ. ಆದಷ್ಟು ಬೇಗ ಅನುಮೋದನೆ ನೀಡುವಂತೆ ಮನವಿ ಮಾಡಲು ರಾಜ್ಯಪಾಲರ ಬಳಿ ನಿಯೋಗ ಕೊಂಡೊಯ್ಯಲಾಗುವುದು' ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಹೇಳಿದರು.
- ವಿಧಾನಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್‌ನ ಪ್ರಸಾದ್ ಅಬ್ಬಯ್ಯ ಮಾತನಾಡಿ, 'ಧಾರವಾಡ ಮಹಾನಗರಪಾಲಿಕೆಯನ್ನಾಗಿ ಜನವರಿ ತಿಂಗಳಲ್ಲಿಯೇ ಅಧಿಸೂಚನೆ ಹೊರಡಿಸಿದ್ದರೂ ಈವರೆಗೂ ಕಾರ್ಯಗತ ಆಗಿಲ್ಲ. ಅನುಮೋದನೆಗಾಗಿ ರಾಜ್ಯಪಾಲರಿಗೆ ಸಲ್ಲಿಸಿದ ಕಡತ ಏಳು ತಿಂಗಳಿನಿಂದ ಅವರ ಬಳಿಯೇ ಇದೆ' ಎಂದು ಆಕ್ಷೇಪ ವ್ಯಕ್ತಪಡಿಸಿದರು.
- ಅದಕ್ಕೆ ಉತ್ತರಿಸಿದ ಸಚಿವರು, 'ಹುಬ್ಬಳ್ಳಿ- ಧಾರವಾಡ ಮಹಾನಗರಪಾಲಿಕೆಯನ್ನು ವಿಭಜಿಸಿ, ಪ್ರತ್ಯೇಕ ಧಾರವಾಡ ಮಹಾನಗರಪಾಲಿಕೆ ರಚಿಸಲು ಮತ್ತು ಉಳಿದ ಪ್ರದೇಶವನ್ನು ಹುಬ್ಬಳ್ಳಿ ಮಹಾನಗರಪಾಲಿಕೆ ಎಂದು ಮುಂದುವರಿಸಲು ಉದ್ದೇಶಿಸಿ, ಬಾಧಿತರಿಂದ ಆಕ್ಷೇಪಣೆ, ಸಲಹೆಗಳನ್ನು ಆಹ್ವಾನಿಸಿ 2025ರ ಜ. 21ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ. ಆಕ್ಷೇಪಣೆ, ಸಲಹೆಗಳ ಕುರಿತ ವರದಿಯನ್ನು ಪೌರಾಡಳಿತ ನಿರ್ದೇಶನಾಲಯದಿಂದ ಧಾರವಾಡ ಜಿಲ್ಲಾಧಿಕಾರಿಗೆ ಸಲ್ಲಿಸಲಾಗಿದ್ದು, ಆ ವರದಿ ಸಹಿತ ರಾಜ್ಯಪಾಲರ ಅನುಮೋದನೆ ಸಲ್ಲಿಸಲಾಗಿದೆ' ಎಂದರು.

## ❖ ಕೊಬ್ಬರಿ ಎಂಎಸ್‌ಪಿ ₹400 ಹೆಚ್ಚಳ

**ಸಂದರ್ಭ: 2026ರ ಹಂಗಾಮಿಗೆ ಕೊಬ್ಬರಿಯ ಕನಿಷ್ಠ ಬೆಂಬಲ ಬೆಲೆಗೆ (ಎಂಎಸ್‌ಪಿ) ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿ ಅನುಮೋದನೆ ನೀಡಿದೆ.**

- ಮಿಲ್ಲಿಂಗ್ (ಚಿಕ್ಕ ಚಿಕ್ಕ ತುಂಡು) ಕೊಬ್ಬರಿಯ ಎಂಎಸ್‌ಪಿಯನ್ನು ಕ್ವಿಂಟಲ್‌ಗೆ ₹445 ಹೆಚ್ಚಿಸಿ ₹12,027ಕ್ಕೆ ನಿಗದಿ ಪಡಿಸಲಾಗಿದೆ. ಉಂಡೆ ಕೊಬ್ಬರಿಯ ಎಂಎಸ್‌ಪಿಯನ್ನು ಕ್ವಿಂಟಲ್‌ಗೆ ₹400 ಹೆಚ್ಚಿಸಿ ₹12,500ಕ್ಕೆ ನಿಗದಿ ಮಾಡಲಾಗಿದೆ.
- ತೆಂಗಿನ ಬೆಳೆಗಾರರಿಗೆ ಉತ್ತಮ ಲಾಭ ಖಚಿತಪಡಿಸಲು ಮತ್ತು ತೆಂಗಿನ ಉತ್ಪನ್ನಗಳಿಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸಲು ಉತ್ಪಾದನೆ ಹೆಚ್ಚಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.
- ಕೃಷಿ ವೆಚ್ಚ ಮತ್ತು ಬೆಲೆಗಳ ಆಯೋಗದ ಶಿಫಾರಸಿನ ಮೇರೆಗೆ ಕೊಬ್ಬರಿಯ 'ನ್ಯಾಯಯುತ ಮತ್ತು ಸರಾಸರಿ ಗುಣಮಟ್ಟ'ಕ್ಕೆ ಎಂಎಸ್‌ಪಿ ನಿಗದಿಪಡಿಸಲಾಗಿದೆ. ಬೆಂಬಲ ಬೆಲೆ ಯೋಜನೆಯಡಿ ರಾಷ್ಟ್ರೀಯ ಕೃಷಿ ಸಹಕಾರಿ ಮಾರುಕಟ್ಟೆ ಒಕ್ಕೂಟ (ನಾಫೆಡ್) ಹಾಗೂ ರಾಷ್ಟ್ರೀಯ ಸಹಕಾರಿ ಗ್ರಾಹಕರ ಒಕ್ಕೂಟವು (ಎನ್‌ಸಿಸಿಎಫ್) ಕೇಂದ್ರ ನೋಡಲ್ ಏಜೆನ್ಸಿಗಳಾಗಿ ಕಾರ್ಯನಿರ್ವಹಿಸುವುದನ್ನು ಮುಂದು ವರಿಸುತ್ತವೆ ಎಂದು ವೈಷ್ಣವ್ ಹೇಳಿದರು.



### 'ಮನರೇಗಾ' ಮರುನಾಮಕರಣಕ್ಕೆ ಒಪ್ಪಿಗೆ

ಕೇಂದ್ರ ಸಚಿವ ಸಂಪುಟವು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯನ್ನು (ಮನರೇಗಾ) 'ಪೂಜ್ಯ ಬಾಪು ಗ್ರಾಮೀಣ ರೋಜಗಾರ್ ಯೋಜನೆ' (ಪಿಬಿಜಿಆರ್‌ವೈ) ಎಂದು ಮರು ನಾಮಕರಣ ಮಾಡಲು ಶುಕ್ರವಾರ ಅನುಮೋದನೆ ನೀಡಿದೆ.

ಗ್ರಾಮೀಣ ಭಾಗದ ಬಡಜನರಿಗೆ ವರ್ಷದಲ್ಲಿ 125 ದಿನಗಳು ಕೆಲಸವನ್ನು ಖಾತರಿಪಡಿಸಲು ಸರ್ಕಾರ 'ಪೂಜ್ಯ ಬಾಪು ಗ್ರಾಮೀಣ ರೋಜಗಾರ್ ಖಾತರಿ' ಮಸೂದೆಯನ್ನು ತರಲಿದೆ. ಕನಿಷ್ಠ ವೇತನವನ್ನು ದಿನಕ್ಕೆ ₹240ಕ್ಕೆ ಪರಿಷ್ಕರಿಸುವ ಪ್ರಸ್ತಾವವನ್ನೂ ಇದು ಒಳಗೊಂಡಿದೆ. ಈ ಯೋಜನೆಗಾಗಿ ಸರ್ಕಾರ ₹1.51 ಲಕ್ಷ ಕೋಟಿ ಹಂಚಿಕೆ ಮಾಡಲಿದೆ ಎಂದು ಮೂಲಗಳು ತಿಳಿಸಿವೆ. ಈ ಯೋಜನೆಯನ್ನು 2005ರಲ್ಲಿ 'ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ' ಎಂದು ಪರಿಚಯಿಸಲಾಯಿತು. ನಂತರ 2009ರಲ್ಲಿ 'ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ' ಎಂದು ಮರು ನಾಮಕರಣ ಮಾಡಲಾಗಿತ್ತು.

- 2014ರಿಂದ ಕೇಂದ್ರ ಸರ್ಕಾರವು ಮಿಲ್ಲಿಂಗ್ ಕೊಬ್ಬರಿಯ ಎಂಎಸ್‌ಪಿಯನ್ನು ಗಣನೀಯವಾಗಿ ಹೆಚ್ಚಿಸಿದೆ. 2014ರ ಮಾರುಕಟ್ಟೆ ಋತುವಿನಲ್ಲಿ ಕ್ವಿಂಟಲ್‌ಗೆ ಎಂಎಸ್‌ಪಿ ₹5,250 ಇತ್ತು. ದಶಕದಲ್ಲಿ ಬೆಂಬಲ ಬೆಲೆ ಶೇ 129ರಷ್ಟು ಜಾಸ್ತಿ ಆಗಿದೆ. ಉಂಡೆ ಕೊಬ್ಬರಿಯ ಬೆಲೆಯು ಕ್ವಿಂಟಲ್‌ಗೆ ₹5,500ರಿಂದ ₹12,500ಕ್ಕೆ ಏರಿಕೆಯಾಗಿದ್ದು, ಶೇ 127ರಷ್ಟು ಹೆಚ್ಚಳ ವಾಗಿದೆ ಎಂದು ಮಾಹಿತಿ ನೀಡಿದರು.

Dr. Rajkumar IAS Academy

- ಬೆಳೆಗಾರರಿಗೆ ಲಾಭದಾಯಕ ಬೆಲೆ ಒದಗಿಸುವ ಸಲುವಾಗಿ ಸರ್ಕಾರವು 2018-19ರ ಬಜೆಟ್‌ನಲ್ಲಿ, ಎಲ್ಲ ಬೆಳೆಗಳ ಎಂಎಸ್‌ಪಿಯನ್ನು ಅಖಿಲ ಭಾರತ ಸರಾಸರಿ ಉತ್ಪಾದನಾ ವೆಚ್ಚದ ಕನಿಷ್ಠ 1.5 ಪಟ್ಟು ಮಟ್ಟದಲ್ಲಿ ನಿಗದಿಪಡಿ ಸಲಾಗುವುದು ಎಂದು ಘೋಷಿಸಿತ್ತು ಎಂದು ಅವರು ನೆನಪಿಸಿದರು.
- ದೇಶದಲ್ಲಿ ಕೊಬ್ಬರಿ ಮಾರುಕಟ್ಟೆ ಋತುವು ಸಾಮಾನ್ಯವಾಗಿ ಜನವರಿ ಯಿಂದ ಏಪ್ರಿಲ್‌ವರೆಗೆ ಇರುತ್ತದೆ. ಕರ್ನಾಟಕ, ತಮಿಳುನಾಡು ಮತ್ತು ಕೇರಳದಲ್ಲಿ ಅಧಿಕ ಪ್ರಮಾಣದಲ್ಲಿ ಕೊಬ್ಬರಿ ಉತ್ಪಾದನೆ ಆಗುತ್ತದೆ.

## ❖ ಎಫ್‌ಪಿಒ: 5 ವರ್ಷ ವಿಸ್ತರಣೆ: ರೈತ ಉತ್ಪಾದಕ ಸಂಸ್ಥೆಗಳ ಹಣಕಾಸಿನ ನೆರವಿಗೆ ಇರುವ ಅಡೆತಡೆ ಪರಿಹರಿಸಲು ಕ್ರಮ

**ಸಂದರ್ಭ: ಕೆಲವು ಎಫ್‌ಪಿಒಗಳು ಸರ್ಕಾರದ ಪ್ರಯೋಜನಗಳನ್ನು ಪಡೆಯಲು ಕಾಗದದ ಮೇಲೆ ಮಾತ್ರ ಅಸ್ತಿತ್ವದಲ್ಲಿದ್ದು, ನೈಜ ರೈತರ ಭಾಗವಹಿಸುವಿಕೆ ಇಲ್ಲದೆ ಕೇವಲ 3ರಿಂದ 4 ಜನರನ್ನು ಒಳಗೊಂಡಿವೆ ದೇವೇಶ್ ಚತುರ್ವೇದಿ, ಕೇಂದ್ರ ಕೃಷಿ ಸಚಿವಾಲಯದ ಕಾರ್ಯದರ್ಶಿ.**

- 'ತನ್ನ ಪ್ರಾಯೋಜಕತ್ವದ ರೈತ ಉತ್ಪಾದಕ ಸಂಸ್ಥೆಗಳ (ಎಫ್‌ಪಿಒ) ಕಾರ್ಯಕ್ರಮವನ್ನು ಮತ್ತೆ ಐದು ವರ್ಷ ಕೇಂದ್ರ ಸರ್ಕಾರ ವಿಸ್ತರಿಸಲಿದೆ' ಎಂದು ಕೇಂದ್ರ ಕೃಷಿ ಸಚಿವಾಲಯದ ಕಾರ್ಯದರ್ಶಿ ದೇವೇಶ್ ಚತುರ್ವೇದಿ ಹೇಳಿದ್ದಾರೆ.
- ಸರ್ಕಾರದ ನಿಯಮಗಳ ಪಾಲನೆ ಮತ್ತು ಹಣಕಾಸಿನ ಅಡೆತಡೆಗಳನ್ನು ಪರಿಹರಿಸಲು 2026-31ರವರೆಗೆ ಈ ವಿಸ್ತರಣೆ ಮಾಡಲಾಗುತ್ತಿದೆ ಎಂದು ಶುಕ್ರವಾರ ಹೇಳಿದ್ದಾರೆ.
- ದೇಶದಲ್ಲಿ 10 ಸಾವಿರ ರೈತ ಉತ್ಪಾದಕ ಸಂಸ್ಥೆಗಳ ರಚನೆಗೆ ಕೇಂದ್ರ ಸರ್ಕಾರವು 2020ರ ಫೆಬ್ರುವರಿಯಲ್ಲಿ ಚಾಲನೆ ನೀಡಿತ್ತು. ಈಗಾಗಲೇ 10 ಸಾವಿರ ಎಫ್‌ಪಿಒ ನೋಂದಣಿ ಆಗಿದ್ದು, ಈ ಪೈಕಿ ಹಲವು ಎಫ್‌ಪಿಒ ಕಳೆದ ಎರಡು ವರ್ಷದಲ್ಲಿ ರಚನೆ ಆಗಿವೆ. ಹೀಗಾಗಿ, ಈ ಸಂಘಗಳ ಸಶಕ್ತಗೊಳಿಸುವ ಅಗತ್ಯವಿದೆ ಎಂದು ಹೇಳಿದ್ದಾರೆ.
- ರೈತರಿಗೆ ಹೆಚ್ಚಿನ ಪ್ರತಿಫಲ ನೀಡಲು ಸಾಧ್ಯವಾಗುವ ರೀತಿಯಲ್ಲಿ ಎಫ್‌ಪಿಒ ರೂಪಿಸಲಾಗಿದೆ ಎಂದು ತಿಳಿಸಿದ್ದಾರೆ.
- ಕಂಪನಿ ಕಾಯ್ದೆ ಅಡಿಯಲ್ಲಿನ ಮಾನದಂಡಗಳನ್ನು ಪಾಲಿಸುವುದೇ ಎಫ್‌ಪಿಒಗೆ ದೊಡ್ಡ ಸವಾಲಾಗಿದೆ. 3ರಿಂದ 5 ವರ್ಷದವರೆಗೆ ದಂಡದಿಂದ ವಿನಾಯಿತಿ ನೀಡುವಂತೆ ಸಂಸದೀಯ ವ್ಯವಹಾರ ಸಚಿವಾಲಯಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ.
- 2024–25ರ ಆರ್ಥಿಕ ವರ್ಷದಲ್ಲಿ ಎಫ್‌ಪಿಒ ವಾರ್ಷಿಕ ವಹಿವಾಟು ₹9 ಸಾವಿರ ಕೋಟಿ ಆಗಿದೆ ಎಂದ ಅವರು, ಒಟ್ಟು ವ್ಯವಹಾರ ₹10 ಸಾವಿರ ಕೋಟಿ ದಾಟುವ ಅಂದಾಜಿದೆ. ದೇಶದ 52 ಲಕ್ಷ ರೈತರಿಗೆ ಎಫ್‌ಪಿಒದಿಂದ ಅನುಕೂಲವಾಗಿದೆ ಎಂದು ಹೇಳಿದ್ದಾರೆ.
- ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಲ್ಲಿ ಪ್ರತ್ಯೇಕವಾಗಿ ನೋಂದಾಯಿ ಸಲಾದ 40 ಸಾವಿರದಿಂದ 50 ಸಾವಿರ ಎಫ್‌ಪಿಒಗಳನ್ನು ಸೇರಿಸಿದರೆ, ಒಟ್ಟು ಎಫ್‌ಪಿಒಗಳ ಸಂಖ್ಯೆಯು ಇನ್ನಷ್ಟು ಹೆಚ್ಚಳವಾಗುತ್ತದೆ.
- ಪ್ರಸ್ತುತ, ದೊಡ್ಡ ಗಾತ್ರದ ವಹಿವಾಟು ನಡೆಸಲು ಎಫ್‌ಪಿಒ ಮಿತಿ ₹30 ಲಕ್ಷದಷ್ಟಿದ್ದು, ಇದು ಸಾಕಾಗುವುದಿಲ್ಲ. ಬೆಳೆ ಖರೀದಿ ವೇಳೆ ಅಥವಾ ರೈತರಿಗೆ ಮುಂಗಡ ಪಾವತಿ ಮಾಡುವಾಗ ಇದು ಕನಿಷ್ಠ ₹50 ಲಕ್ಷದಿಂದ ₹1 ಕೋಟಿ ಆಗಿರಬೇಕು ಎಂದು ಹೇಳಿದ್ದಾರೆ.
- ಸರ್ಕಾರವು ಎಫ್‌ಪಿಒಗಳಿಗೆ ಸಾಲದ ಗ್ಯಾರಂಟಿ ಅಥವಾ ಹಣಕಾಸಿನ ನೆರವು ಸೌಲಭ್ಯಗಳನ್ನು ವಿಸ್ತರಿಸಲು ಪ್ರಯತ್ನಿಸುತ್ತಿದೆ ಎಂದಿದ್ದಾರೆ.
- **ಏನಿದು ಎಫ್‌ಪಿಒ:** ಸಾಮೂಹಿಕ ಕೃಷಿಯನ್ನು ಬೆಂಬಲಿಸುವುದು ಮತ್ತು ಉತ್ತೇಜಿಸುವುದು ಎಫ್‌ಪಿಒ ರಚನೆಯ ಹಿಂದಿನ ಉದ್ದೇಶ. ಈ ಸಂಸ್ಥೆಗಳು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ತಂತ್ರಜ್ಞಾನ, ಸಾಲ, ಮಾರುಕಟ್ಟೆಗಳು ಮತ್ತು ಕೃಷಿಗೆ ಸಂಬಂಧಿತ ವಿಷಯಗಳ ಬಗ್ಗೆ ಮಾಹಿತಿಯನ್ನು ಒದಗಿಸುವ ಮೂಲಕ ತಮ್ಮ ಆದಾಯವನ್ನು ಸುಧಾರಿಸಲು ಸಹಾಯ ಮಾಡುತ್ತವೆ. ರೈತ ಉತ್ಪಾದಕ ಸಂಸ್ಥೆಗಳ ಮೇಳಗಳು

Dr. Rajkumar IAS/KAS Academy

ರೈತರಿಗೆ ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆಗೆ ತಲುಪಿಸಲು, ಹೊಸ ತಂತ್ರಜ್ಞಾನಗಳನ್ನು ಅಳವಡಿಸಲು, ಪರಸ್ಪರ ಅನುಭವಗ ಳನ್ನು ಹಂಚಿಕೊಳ್ಳಲು ವೇದಿಕೆಗಳಾಗಿವೆ.

## ❖ ಅಂಚೆ ಇಲಾಖೆ ಮೂಲಕ ಎಂ.ಎಫ್‌ನಲ್ಲಿ ಹೂಡಿಕೆ

**ಸಂದರ್ಭ: ಹೂಡಿಕೆದಾರರಿಗೆ ಅಂಚೆ ಇಲಾಖೆ ಮೂಲಕವೂ ಮ್ಯೂಚುವಲ್ ಫಂಡ್‌ನಲ್ಲಿ (ಎಂ.ಎಫ್) ಹೂಡಿಕೆಗೆ ಅನುಕೂಲ ಕಲ್ಪಿಸಲು ಮುಂಬೈ ಷೇರು ವಿನಿಮಯ ಕೇಂದ್ರವು (ಬಿಎಸ್‌ಇ) ನಿರ್ಧರಿಸಿದ್ದು, ಅಂಚೆ ಇಲಾಖೆ ಜೊತೆ ಪಾಲುದಾರಿಕೆ ಮಾಡಿಕೊಂಡಿದೆ.**

- ಈ ಪಾಲುದಾರಿಕೆಯ ಭಾಗವಾಗಿ ಅಂಚೆ ಇಲಾಖೆಯ ಆಯ್ದ ನೌಕರರು ಮತ್ತು ಏಜೆಂಟ್‌ಗಳಿಗೆ ತರಬೇತಿ ನೀಡಿ, ಅಧಿಕೃತ ಮ್ಯೂಚುವಲ್ ಫಂಡ್ ವಿತರಕರಾಗಿ ನೇಮಕ ಮಾಡಲಾಗುತ್ತದೆ.
- ಅಂಚೆ ಇಲಾಖೆಯ ಬೃಹತ್ ಜಾಲವನ್ನು ಬಳಸಿಕೊಂಡು ಪ್ರಮುಖವಾಗಿ ಗ್ರಾಮೀಣ ಮತ್ತು ಅರೆನಗರ ಪ್ರದೇಶದಲ್ಲಿನ ಜನರು ಆರ್ಥಿಕ ಪಾಲ್ಗೊಳ್ಳುವಿ ಕೆಯಲ್ಲಿ ಹೆಚ್ಚಿಸುವ ಉದ್ದೇಶವನ್ನು ಈ ಪಾಲುದಾರಿಕೆ ಹೊಂದಿದೆ. ದೇಶದ ಅತಿದೊಡ್ಡ ಆನ್‌ಲೈನ್ ಮ್ಯೂಚುವಲ್ ಫಂಡ್ ವಿತರಣೆಯ ವ್ಯವಸ್ಥೆಯಾದ ಮುಂಬೈ ಷೇರು ವಿನಿಮಯ ಕೇಂದ್ರದ ಸ್ಟಾರ್ ಎಂಎಫ್ ವೇದಿಕೆಯನ್ನು ಬಳಸಿಕೊಂಡು ಈ ಸೇವೆ ನೀಡಲಿದೆ ಎಂದು ಬಿಎಸ್‌ಇ ತಿಳಿಸಿದೆ.
- ದೇಶದಲ್ಲಿ ವಿನಿಮಯ ಆಧಾರಿತ ವಹಿವಾಟುಗಳಲ್ಲಿ ಈ ವೇದಿಕೆಯು ಶೇ 85ಕ್ಕೂ ಹೆಚ್ಚು ಖಾತೆಗಳನ್ನು ನಿರ್ವಹಣೆ ಮಾಡುತ್ತದೆ. ಪ್ರತಿ ತಿಂಗಳು 7 ಕೋಟಿಗೂ ಹೆಚ್ಚು ವಹಿವಾಟು ನಡೆಸುತ್ತದೆ ಎಂದು ತಿಳಿಸಿದೆ.
- 'ಈ ಪಾಲುದಾರಿಕೆಯಿಂದ ಗ್ರಾಹಕರಿಗೆ ಆಧುನಿಕ ಹೂಡಿಕೆಯ ಆಯ್ಕೆಯನ್ನು ಅಂಚೆ ಇಲಾಖೆ ಒದಗಿಸಲಿದೆ. ಟಯರ್-2 ಮತ್ತು ಟಯರ್-3 ನಗರಗಳಲ್ಲಿ ಮ್ಯೂಚುವಲ್ ಫಂಡ್ ಉದ್ಯಮವು ವೇಗ ಪಡೆದುಕೊಳ್ಳ ಲಿದ್ದು, ಹೂಡಿಕೆದಾರರ ವಿಶ್ವಾಸವನ್ನು ಹೆಚ್ಚಿಸುವ ನಿರೀಕ್ಷೆ ಇದೆ' ಎಂದು ಅಂಚೆ ಇಲಾಖೆಯ ಪ್ರಧಾನ ವ್ಯವಸ್ಥಾಪಕ ನಿರ್ದೇಶಕಿ (ಸಿಸಿಎಸ್ ಮತ್ತು ಆರ್‌ಬಿ) ಮನೀಷಾ ಬನ್ಸಾಲ್ ಬಾದಲ್ ಹೇಳಿದ್ದಾರೆ.

## ❖ ಭಾರತದ ರಫ್ತಿಗೆ ಮೆಕ್ಸಿಕೊ ಸುಂಕ ಪೆಟ್ಟು: ಎಲೆಕ್ಟ್ರಾನಿಕ್ಸ್, ಲೋಹ, ವಾಹನ, ಜವಳಿ ಉದ್ಯಮದ ಮೇಲೆ ಪರಿಣಾಮ

**ಸಂದರ್ಭ: ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಳ್ಳದ ದೇಶಗಳಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಮೆಕ್ಸಿಕೊ ಸುಂಕ ಹೆಚ್ಚಳ ಮಾಡಿರುವುದು, ಭಾರತದ ಎಲೆಕ್ಟ್ರಾನಿಕ್ಸ್, ಲೋಹ, ವಾಹನಗಳ ಬಿಡಿಭಾಗಗಳು, ರಾಸಾಯನಿಕ ರಫ್ತಿನ ಮೇಲೆ ಭಾರಿ ಹೊಡೆತ ಬೀಳಲಿದೆ ಎಂದು ಮಾರುಕಟ್ಟೆ ತಜ್ಞರು ವಿಶ್ಲೇಷಿಸಿದ್ದಾರೆ.**

- 2026ರ ಜನವರಿ 1ರಿಂದ ಪರಿಷ್ಕೃತ ಸುಂಕ ಜಾರಿಗೆ ಬರಲಿದೆ. ಕೆಲವು ಸರಕುಗಳಿಗೆ ಕನಿಷ್ಠ ಶೇ 5ರಿಂದ ಗರಿಷ್ಠ ಶೇ 50ರವರೆಗೆ ಸುಂಕ ಹೆಚ್ಚಿಸಲಾಗಿದೆ.
- ಭಾರತದಿಂದ ಮೆಕ್ಸಿಕೊಕ್ಕೆ ರಫ್ತಾಗುವ ಸರಕುಗಳಲ್ಲಿ ವಾಹನಗಳು ಮತ್ತು ವಾಹನಗಳ ಬಿಡಿಭಾಗಗಳ ಪಾಲು ಗರಿಷ್ಠ ಮಟ್ಟದಲ್ಲಿದೆ. ಆಮದು ಸುಂಕ ಹೆಚ್ಚಳವು ಈ ಕ್ಷೇತ್ರದ ಮೇಲೆ ದೊಡ್ಡ ಮಟ್ಟದಲ್ಲಿ ಪರಿಣಾಮ ಬೀರಲಿದೆ ಎಂದು ಜಾಗತಿಕ ವ್ಯಾಪಾರ ಸಂಶೋಧನಾ ಉಪಕ್ರಮ (ಜಿಟಿಆರ್‌ಐ) ಹೇಳಿದೆ.
- ಭಾರತದಿಂದ ಆಮದು ಮಾಡಿ ಕೊಳ್ಳುವ ಪ್ರಯಾಣಿಕ ವಾಹನಗಳಿಗೆ ಮೆಕ್ಸಿಕೊ ಸದ್ಯ ಶೇ 20ರಷ್ಟು ಸುಂಕ ವಿಧಿಸುತ್ತಿದೆ. 2026ರ ಜನವರಿಯಿಂದ ಇದು ಶೇ 35ಕ್ಕೆ ಏರಿಕೆಯಾಗಲಿದೆ. ಕಳೆದ ಹಣಕಾಸು ವರ್ಷದಲ್ಲಿ ಭಾರತವು 938.35 ದಶಲಕ್ಷ ಡಾಲರ್ ಮೊತ್ತದ (₹8,500 ಕೋಟಿ ) ವಾಹನಗಳನ್ನು ಮತ್ತು 507.26 ದಶಲಕ್ಷ ಡಾಲರ್ (₹4,595 ಕೋಟಿ) ಮೊತ್ತದ ವಾಹನಗಳ ಬಿಡಿಭಾಗಗಳನ್ನು ಮೆಕ್ಸಿಕೊಕ್ಕೆ ರಫ್ತು ಮಾಡಿತ್ತು.

**ಮೆಕ್ಸಿಕೊ ವಿಧಿಸಿರುವ ಆಮದು ಸುಂಕ** (ಶೇಕಡವಾರು)

| ಸರಕು | ಈಗಿನ ದರ | ಪರಿಷ್ಕೃತ ದರ |
|---|---|---|
| ದ್ವಿಚಕ್ರ ವಾಹನ | 20 | 35 |
| ಸ್ಮಾರ್ಟ್‌ಫೋನ್ | 0 | 35 |
| ಅಲುಮಿನಿಯಂ | 10 | 35 |
| ಕಬ್ಬಿಣ, ಉಕ್ಕು | 15 | 35 |
| ಜವಳಿ | 15 | 35 |
| ಕಾಫಿ, ಟೀ | 5 | 15 |

Dr Rajkumar IAS/KAS Academy

- ಭಾರತದ ಜವಳಿ, ಪ್ಲಾಸ್ಟಿಕ್, ಸಾವಯವ ರಾಸಾಯನಿಕಗಳು, ಎಲೆಕ್ಟ್ರಾನಿಕ್ಸ್, ಔಷಧ, ಎಲೆಕ್ಟ್ರಿಕ್ ವಸ್ತುಗಳ ರಫ್ತಿನ ಮೇಲೆ ಮೆಕ್ಸಿಕೊದ ಆಮದು ಸುಂಕ ಹೆಚ್ಚಳವು ಪರಿಣಾಮ ಬೀರಲಿದೆ ಎಂದು ಭಾರತೀಯ ರಫ್ತುದಾರರ ಒಕ್ಕೂಟದ (ಎಫ್ಐಇಒ) ಪ್ರಧಾನ ನಿರ್ದೇಶಕ ಅಜಯ್ ಶಾಹಿ ಅಭಿಪ್ರಾಯಪಟ್ಟಿದ್ದಾರೆ.
- ಭಾರತವು ಕಳೆದ ಹಣಕಾಸು ವರ್ಷದಲ್ಲಿ ಮೆಕ್ಸಿಕೊಕ್ಕೆ 284.53 ದಶಲಕ್ಷ ಡಾಲರ್ ಮೊತ್ತದ (₹2,577 ಕೋಟಿ) ಸ್ಮಾರ್ಟ್‌ಫೋನ್‌ಗಳನ್ನು ರಫ್ತು ಮಾಡಿತ್ತು. ಜನವರಿಯಿಂದ ಸ್ಮಾರ್ಟ್‌ಫೋನ್ ಆಮದು ಸುಂಕವು ಶೇ 35ಕ್ಕೆ ಏರಿಕೆಯಾಗಲಿದೆ. ಇದು ಭಾರತದ ಸ್ಮಾರ್ಟ್‌ಫೋನ್ ತಯಾರಿಕಾ ಕಂಪನಿಗಳಿಗೆ ಪೆಟ್ಟು ನೀಡಲಿದೆ. ಭಾರತದಿಂದ ಕೈಗಾರಿಕಾ ಯಂತ್ರೋಪಕರಣಗಳನ್ನು ಮೆಕ್ಸಿಕೊ ಆಮದು ಮಾಡಿಕೊಳ್ಳುತ್ತಿದ್ದು, ಈ ಉದ್ಯಮದ ಮೇಲೂ ಶೇ 35ರಷ್ಟು ಸುಂಕ ಹೆಚ್ಚಳವು ಬರೆ ಎಳೆಯಲಿದೆ ಎಂದು ಮಾರುಕಟ್ಟೆ ತಜ್ಞರು ವಿಶ್ಲೇಷಿಸಿದ್ದಾರೆ.

## ❖ ಚಿಲ್ಲರೆ ಹಣದುಬ್ಬರ ಹೆಚ್ಚಳ

**ಸಂದರ್ಭ: ಆಹಾರ ಪದಾರ್ಥಗಳ ಬೆಲೆಯಲ್ಲಿನ ಹೆಚ್ಚಳದಿಂದ ಚಿಲ್ಲರೆ ಹಣದುಬ್ಬರವು ನವೆಂಬರ್ ತಿಂಗಳಿನಲ್ಲಿ ಶೇ 0.71ಕ್ಕೆ ಏರಿಕೆಯಾಗಿದೆ ಎಂದು ರಾಷ್ಟ್ರೀಯ ಸಾಂಖ್ಯಿಕ ಕಚೇರಿ (ಎನ್‌ಎಸ್‌ಒ) ತಿಳಿಸಿದೆ.**

- ಗ್ರಾಹಕ ಬೆಲೆ ಸೂಚ್ಯಂಕ (ಸಿಪಿಐ) ಆಧಾರಿತ ಚಿಲ್ಲರೆ ಹಣದುಬ್ಬರವು ಅಕ್ಟೋಬರ್‌ನಲ್ಲಿ ಶೇ 0.25ಕ್ಕೆ ಇಳಿಕೆಯಾಗಿತ್ತು. ಜಿಎಸ್‌ಟಿ ದರ ಪರಿಷ್ಕರಣೆಯು ಇಳಿಕೆಗೆ ನೆರವಾಗಿತ್ತು. ಹಣದುಬ್ಬರವು ಸತತ ಎರಡನೇ ತಿಂಗಳೂ ಶೇ 1ರೊಳಗೆ ಇದೆ.
- ಆಹಾರ ಪದಾರ್ಥಗಳ ಹಣದುಬ್ಬರವು ನವೆಂಬರ್‌ನಲ್ಲಿ ಶೇ 3.91ರಷ್ಟಿದೆ. ತರಕಾರಿಗಳು, ಮೊಟ್ಟೆ, ಮಾಂಸ ಮತ್ತು ಮೀನು, ಮಸಾಲೆ ಪದಾರ್ಥಗಳು, ಇಂಧನ ಬೆಲೆಯಲ್ಲಿನ ಹೆಚ್ಚಳವೇ ಹಣದುಬ್ಬರ ಏರಿಕೆಗೆ ಕಾರಣ ಎಂದು ತಿಳಿಸಿದೆ.

## ❖ ನಿವೃತ್ತಿ ಹಿಂಪಡೆದ ವಿನೇಶ್: ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ಪದಕ ಗೆಲ್ಲುವ ಗುರಿ

**ಸಂದರ್ಭ: 2028ರ ಲಾಸ್ ಏಂಜಲೀಸ್ ಒಲಿಂಪಿಕ್ ಕ್ರೀಡೆಗಳಲ್ಲಿ ಪದಕಕ್ಕಾಗಿ ಮತ್ತೊಂದು ಪ್ರಯತ್ನ ನಡೆಸಲು ತಾವು ನಿವೃತ್ತಿಯಿಂದ ಹೊರಬರುವುದಾಗಿ ಭಾರತದ ಸ್ಟಾರ್ ಕುಸ್ತಿಪಟು ವಿನೇಶ್ ಫೋಗಟ್ ಅವರು ಶುಕ್ರವಾರ ಪ್ರಕಟಿಸಿದ್ದಾರೆ. 'ನನ್ನೊಳಗಿನ ಕಿಚ್ಚು ಇನ್ನೂ ಆರಿಲ್ಲ. ದಣಿವು ಮತ್ತು ಗದ್ದಲದಲ್ಲಿ ಅದು ಹುದುಗಿಹೋಗಿತ್ತು' ಎಂದು ಹೇಳಿದ್ದಾರೆ.**

- 2024ರ ಪ್ಯಾರಿಸ್ ಒಲಿಂಪಿಕ್ಸ್‌ನ 50 ಕೆ.ಜಿ. ವಿಭಾಗದ ಸ್ಪರ್ಧೆಗೆ ಮೊದಲು ನಿಗದಿಗಿಂತ 100 ಗ್ರಾಂ ಹೆಚ್ಚುವರಿ ತೂಕ ಇದ್ದ ಕಾರಣ ಅವರನ್ನು ಚಿನ್ನದ ಪದಕದ ಸ್ಪರ್ಧೆಯ ವೇಳೆ ಅನರ್ಹಗೊಳಿಸಲಾ ಗಿತ್ತು. 31 ವರ್ಷ ವಯಸ್ಸಿನ ವಿನೇಶ್ ತೀವ್ರ ನಿರಾಸೆಗೆ ಒಳಗಾಗಿ, ಕೆಲವೇ ದಿನಗಳ ನಂತರ ನಿವೃತ್ತಿ ಪ್ರಕಟಿಸಿದ್ದರು.
- ತಮಗೆ ಜಂಟಿಯಾಗಿ ಬೆಳ್ಳಿ ಪದಕ ನೀಡುವಂತೆ ವಿನೇಶ್ ಅವರು ಕ್ರೀಡಾ ನ್ಯಾಯಮಂಡಳಿಗೆ (ಸಿಎಎಸ್) ಮೊರೆಹೋಗಿದ್ದರು. ಆದರೆ ಸಿಎಎಸ್ ಇದಕ್ಕೆ ಒಪ್ಪಿರಲಿಲ್ಲ. ಇದರ ಬೆನ್ನಲ್ಲೇ ವಿನೇಶ್ ಅವರು ಕುಸ್ತಿಗೆ ವಿದಾಯ ಹೇಳಿದ್ದರು. ರಾಜಕೀಯಕ್ಕೆ ಸೇರ್ಪಡೆ ಗೊಂಡ ಅವರು ಹರಿಯಾಣದ ಜುಲಾನಾ ಕ್ಷೇತ್ರದಿಂದ ಕಾಂಗ್ರೆಸ್‌ನಿಂದ ಸ್ಪರ್ಧಿಸಿ ಶಾಸಕಿಯಾಗಿದ್ದರು.
- 'ನಿಮ್ಮ ಪಾಲಿಗೆ ಪ್ಯಾರಿಸ್ ಕೂಟ ಕೊನೆಯೇ ಎಂದು ಜನ ಕೇಳುತ್ತಲೇ ಬಂದಿದ್ದರು. ನನ್ನ ಬಳಿ ಉತ್ತರವಿರಲಿಲ್ಲ. ನಾನು ಒತ್ತಡ, ನಿರೀಕ್ಷೆಯ ಭಾರ ಮತ್ತು ನನ್ನದೇ ಮಹತ್ವಾಕಾಂಕ್ಷೆಯ ಪರಿಣಾಮ ಮ್ಯಾಟ್ ತೊರೆಯಬೇಕಾಯಿತು. ವರ್ಷಗಳಲ್ಲಿ ಮೊದಲ ಬಾರಿ ಈಗ ನಿರಾಳಭಾವ ಮೂಡಿದೆ' ಎಂದು ವಿನೇಶ್ ಅವರು ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.
- ಸೋಮವೀರ್ ರಾಠಿ ಅವರನ್ನು ವಿವಾಹವಾಗಿರುವ ವಿನೇಶ್ ಜುಲೈನಲ್ಲಿ ಗಂಡುಮಗುವಿಗೆ ತಾಯಿಯಾಗಿದ್ದರು.

- ‘ಹೊಸ ಸ್ಫೂರ್ತಿಯೊಡನೆ ಲಾಸ್ ಏಂಜಲೀಸ್ 28 ಕ್ರೀಡೆಗಳಿಗೆ ಹೊಸದಾಗಿ ಪಯಣ ಆರಂಭಿಸುವುದಾಗಿ ವಿನೇಶ್ ತಿಳಿಸಿದ್ದಾರೆ.
- ‘ಅಂಜಿಕೆಯಿಲ್ಲದ ಹೃದಯ, ಬತ್ತದ ಸ್ಫೂರ್ತಿಯೊಡನೆ ಲಾಸ್ ಏಂಜಲೀಸ್ 2028ರತ್ತ ಹೆಜ್ಜೆಯಿಡುತ್ತಿದ್ದೇನೆ. ಈ ಬಾರಿ ನಾನೊಬ್ಬಳೇ ಇಲ್ಲ, ನನ್ನ ಮಗನೂ ನನ್ನ ಜೊತೆಯಲ್ಲಿದ್ದಾನೆ. ಲಾಸ್ ಏಂಜಲೀಸ್ ಹಾದಿಯಲ್ಲಿ ನನ್ನ ಅತಿ ದೊಡ್ಡ ಪ್ರೇರಣೆ ಮತ್ತು ನನ್ನ ಪುಟ್ಟ ಚಿಯರ್‌ಲೀಡರ್ ಇದ್ದಾನೆ’ ಎಂದು ಹೇಳಿದ್ದಾರೆ.
- ಒಲಿಂಪಿಕ್ ಸ್ಪರ್ಧೆಯೊಂದರ ಚಿನ್ನದ ಪದಕದ ಸ್ಪರ್ಧೆಗೆ ಅರ್ಹತೆ ಪಡೆದ ಭಾರತದ ಮೊದಲ ಮಹಿಳಾ ಕುಸ್ತಿಪಟು ಎಂಬ ಶ್ರೇಯ ಈಗಾಗಲೇ ಅವರದಾಗಿದೆ. ಮೂರು ಬಾರಿಯ ಒಲಿಂಪಿಯನ್ ಆಗಿರುವ ವಿನೇಶ್, ಏಷ್ಯನ್ ಕ್ರೀಡೆ ಮತ್ತು ಕಾಮನ್ವೆಲ್ತ್ ಕ್ರೀಡೆಗಳಲ್ಲಿ ಚಿನ್ನದ ಪದಕಗಳನ್ನು ಗೆದ್ದಿದ್ದಾರೆ.

## ❖ ಮೆಸ್ಸಿ ಭಾರತ ಪ್ರವಾಸ ಇಂದಿನಿಂದ

**ಸಂದರ್ಭ: ಫುಟ್‌ಬಾಲ್ ದಿಗ್ಗಜ, ಅರ್ಜೆಂಟೀನಾದ ಲಯೊನೆಲ್ ಮೆಸ್ಸಿ ಅವರ ಮೂರು ದಿನಗಳ ಭಾರತ ಪ್ರವಾಸ ಆರಂಭವಾಗಲಿದೆ.**

- ‘ಗೋಟ್ (GOAT - Greatest Of All Time) ಟೂರ್ ಆಫ್ ಇಂಡಿಯಾ 2025’ ಕಾರ್ಯಕ್ರಮದ ಅಂಗವಾಗಿ ಮೆಸ್ಸಿ ಭಾರತಕ್ಕೆ ಭೇಟಿ ನೀಡುತ್ತಿದ್ದಾರೆ. ಈ ಪ್ರವಾಸದಲ್ಲಿ ಅವರು ನಾಲ್ಕು ನಗರಗಳಿಗೆ (ಕೋಲ್ಕತ್ತ, ಅಹಮದಾಬಾದ್, ಮುಂಬೈ ಮತ್ತು ನವದೆಹಲಿ) ಭೇಟಿ ನೀಡುವರು. ಸೋಮವಾರ ಪ್ರಧಾನಿ ನರೇಂದ್ರ ಮೋದಿ ಜೊತೆಗಿನ ಭೇಟಿ ಯೊಂದಿಗೆ 38 ವರ್ಷದ ಸೂಪರ್ ಸ್ಟಾರ್ ಆಟಗಾರನ ಭಾರತ ಪ್ರವಾಸ ಮುಕ್ತಾಯವಾಗಲಿದೆ.
- ಕೋಲ್ಕತ್ತದಲ್ಲಿ ನಿರ್ಮಿಸಲಾಗಿರುವ ತಮ್ಮ 70 ಅಡಿ ಎತ್ತರದ ಪ್ರತಿಮೆಯನ್ನು ಶನಿವಾರ ಬೆಳಿಗ್ಗೆ ಮೆಸ್ಸಿ ಅವರು ವರ್ಚುವಲ್ ಆಗಿ ಅನಾವರಣ ಮಾಡುವರು. ಭದ್ರತಾ ಕಾರಣದಿಂದಾಗಿ ಅವರು ಖುದ್ದಾಗಿ ಹಾಜರಾಗುತ್ತಿಲ್ಲ.
- ಮೆಸ್ಸಿ ಅವರು ಕೋಲ್ಕತ್ತದಲ್ಲಿ ಬಾಲಿವುಡ್ ನಟ ಶಾರುಕ್ ಖಾನ್ ಮತ್ತು ಭಾರತ ಕ್ರಿಕೆಟ್ ತಂಡದ ಮಾಜಿ ನಾಯಕ ಸೌರವ್ ಗಂಗೂಲಿ ಅವರನ್ನು ಭೇಟಿಯಾಗಲಿದ್ದಾರೆ. ಬಳಿಕ ವಿವೇಕಾನಂದ ಯುವ ಭಾರತಿ ಕ್ರೀಡಾಂಗಣದಲ್ಲಿ ಅವರು ಪ್ರದರ್ಶನ ಪಂದ್ಯವನ್ನು ಆಡಲಿದ್ದಾರೆ.

**------------------------------------------ಶುಭವಂದನೆಗಳು----------------------------------------**

Dr. Rajkumar IAS/KAS Academy